ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

46

ಫೆಬ್ರವರಿ 6 ಶುಕ್ರವಾರ 2026

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್. ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ ಜಾಹೀರಾತಿಗಾಗಿ–ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

ಸಂಪುಟ: 46 | ಸಂಚಿಕೆ: 288 | ಪುಟಗಳು: 12

ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, website: www.mysurumithra.com

₹4



ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ


ಫೆಬ್ರವರಿ 6 ಶುಕ್ರವಾರ 2026

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್.ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ ಜಾಹೀರಾತಿಗಾಗಿ–ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

46

ಸಂಪುಟ: 46 | ಸಂಚಿಕೆ: 288 | ಪುಟಗಳು: 12
ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, website: www.mysurumithra.com

₹4



ಸ್ಥಳೀಯ ಸಂಸ್ಥೆಗಳ ಚುನಾವಣೆಯಲ್ಲಿ ಬ್ಯಾಲೆಟ್ ಬಳಕೆ

• ಸಂಪುಟ ಸಭೆ ತೀರ್ಮಾನ • ಏಪ್ರಿಲ್–ಮೇನಲ್ಲಿ ಸ್ಥಳೀಯ ಸಂಸ್ಥೆಗಳಿಗೆ ಚುನಾವಣೆ

ಬೆಂಗಳೂರು, ಫೆ.5– ಇದೇ ಫೆಬ್ರವರಿ–ಮಾರ್ಚ್‌ನಲ್ಲಿ ಕರ್ನಾಟಕದ ಬಹುತೇಕ ಗ್ರಾಮ ಪಂಚಾಯಿತಿಗಳ ಅಧಿಕಾರಾವಧಿ ಅಂತ್ಯಗೊಳ್ಳಲಿದೆ. ಹಾಗಾಗಿ ಸರ್ಕಾರ ಚುನಾವಣೆ ನಡೆಯುವವರೆಗೂ ಆಡಳಿತಾಧಿಕಾರಿಗಳ ನೇಮಕಕ್ಕೆ ಈಗಾಗಲೇ ಆದೇಶ ಹೊರಡಿಸಿದೆ.

ಈ ಮಧ್ಯೆ ಬರುವ ಏಪ್ರಿಲ್–ಮೇ ತಿಂಗಳಲ್ಲಿ ಗ್ರಾಮ ಪಂಚಾಯ್ತಿ ಚುನಾವಣೆ ನಡೆಸಲು ಸರ್ಕಾರ ಸಿದ್ಧತೆ ನಡೆಸಿದ್ದು, ಈ ಸಂಬಂಧ ಜಿಲ್ಲಾಧಿಕಾರಿಗಳಿಗೆ ಪೂರ್ವಸಿದ್ಧತೆ ಮಾಡಿಕೊಳ್ಳುವಂತೆ ನಿರ್ದೇಶನ ನೀಡಿದೆ. ಈ ಎಲ್ಲಾ



ಬೆಳವಣಿಗೆಗಳ ನಡುವೆ ಮುಂಬರುವ ಗ್ರಾಮ ಪಂಚಾಯಿತಿ ಚುನಾವಣೆಯಲ್ಲಿ ಬ್ಯಾಲೆಟ್ ಪೇಪರ್ ಬಳಕೆಗೆ ಇಂದಿನ ಸಚಿವ ಸಂಪುಟ ಸಭೆಯಲ್ಲಿ ನಿರ್ಧರಿಸಲಾಗಿದೆ.

ಇಂದು ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದಲ್ಲಿ ನಡೆದ ಸಚಿವ ಸಂಪುಟ ಸಭೆಯಲ್ಲಿ ಬ್ಯಾಲೆಟ್ ಪೇಪರ್ ಬಳಕೆಗೆ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ತಿದ್ದುಪಡಿ) ವಿಧೇಯಕ 2026ಕ್ಕೆ ಅನುಮೋದನೆ ದೊರೆತಿದೆ. ಇದರೊಂದಿಗೆ ಸ್ಥಳೀಯ ಸಂಸ್ಥೆಗಳಾದ ಜಿಲ್ಲಾ, ತಾಲೂಕು, ಪಟ್ಟಣ ಹಾಗೂ ಗ್ರಾಮ ಪಂಚಾಯಿತಿ ಚುನಾವಣೆಗಳಲ್ಲೂ ಬ್ಯಾಲೆಟ್ ಪೇಪರ್ ಬಳಕೆಗೆ ತೀರ್ಮಾನಿಸಲಾಗಿದೆ.

ಮತಗಳ್ಳತನದ ಪ್ರಕರಣಗಳು ಬಯಲಾದ ಬಳಿಕ ಜನಸಾಮಾನ್ಯರಲ್ಲಿ ಇವಿಎಂ ಮೇಲಿನ ವಿಶ್ವಾಸಾರ್ಹತೆ ಕಡಿಮೆಯಾಗಿದೆ. ಮತಗಳ್ಳತನಕ್ಕೆ ಸಂಬಂಧಿಸಿದಂತೆ ಹಲವಾರು ದೂರುಗಳು ಬಂದಿವೆ. ಹಾಗಾಗಿ ಸಚಿವ ಸಂಪುಟವು ಸ್ಥಳೀಯ ಸಂಸ್ಥೆಗಳ ಚುನಾವಣೆಗಳನ್ನು ಇವಿಎಂ ಬದಲು ಬ್ಯಾಲೆಟ್ ಪೇಪರ್ ಮೂಲಕ ನಡೆಸುವಂತೆ ಚುನಾವಣೆ ಆಯೋಗಕ್ಕೆ ತಿಳಿಸಲು ನಿರ್ಧರಿಸಲಾಗಿದೆ. ಈಗಾಗಲೇ ಗ್ರೇಟರ್ ಬೆಂಗಳೂರು (ಜಿಬಿಎ) ಚುನಾವಣೆಯನ್ನು ಬ್ಯಾಲೆಟ್ ಪೇಪರ್ ಮೂಲಕವೇ ನಡೆಸಲು ನಿರ್ಣಯಿಸಿದ್ದು, ಈ ಬಗ್ಗೆ ರಾಜ್ಯ ಚುನಾವಣೆ ಆಯೋಗವೂ

■ 10ನೇ ಪುಟಕ್ಕೆ

ಮಾನವ–ವನ್ಯಜೀವಿ ಸಂಘರ್ಷ ತಡೆಗೆ ನಾಗರಹೊಳೆ ಭಾಗದಲ್ಲಿ ರೈಲ್ವೆ ಬ್ಯಾರಿಕೇಡ್ ಅಳವಡಿಕೆ

11.65 ಕೋಟಿ ವೆಚ್ಚದ ಕಾಮಗಾರಿಗೆ ಅನುಮೋದನೆ

ಬೆಂಗಳೂರು, ಫೆ.5(ಕೆಎಂಶಿ)–ಮಾನವ–ವನ್ಯಜೀವಿ ಸಂಘರ್ಷ ತಡೆಗೆ ನಾಗರಹೊಳೆ ಹುಲಿ ಸಂರಕ್ಷಿತ ಪ್ರದೇಶ ವ್ಯಾಪ್ತಿಯಲ್ಲಿ ರೈಲ್ವೆ ಬ್ಯಾರಿಕೇಡ್



ಅಳವಡಿಕೆಗೆ ರಾಜ್ಯ ಸಚಿವ ಸಂಪುಟ ಇಂದಿಲ್ಲಿ ಅನುಮೋದನೆ ನೀಡಿದೆ. ಬ್ಯಾರಿಕೇಡ್ ನಿರ್ಮಾಣ ಕಾಮಗಾರಿಯನ್ನು 11.65 ಕೋಟಿ ರೂ. ವೆಚ್ಚದಲ್ಲಿ ಕೈಗೆತ್ತಿಕೊಳ್ಳಲು ಅರಣ್ಯ ಇಲಾಖೆಗೆ ಅವಕಾಶ ನೀಡಿದೆ.

ಕೃತಕ ಬುದ್ಧಿಮತ್ತೆ ಚಾಲಿತ ಸೋಷಿಯಲ್ ಮಿಡಿಯಾ ಅನಾಲಿಟಿಕ್ಸ್ ಸಲ್ಯೂಷನ್ ತಂತ್ರಾಂಶ ಅಳವಡಿಕೆಗೆ 67.20 ಕೋಟಿ ರೂ. ಬಿಡುಗಡೆ ಮಾಡಲಾಗಿದೆ.


ಕೊಲ್ಲೂರು ಮೂಕಾಂಬಿಕಾ ದೇವಾಲಯದಲ್ಲಿ ನೂತನ ಅತಿಥಿಗೃಹ ನಿರ್ಮಾಣ ಕಾಮಗಾರಿಯನ್ನು 16 ಕೋಟಿ ರೂ. ಅಂದಾಜು ಮೊತ್ತದಲ್ಲಿ ಕೈಗೊಳ್ಳಲು ಆಡಳಿತಾತ್ಮಕ ಅನುಮೋದನೆ ನೀಡಿದೆ.

ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಶಾಲೆಗಳಲ್ಲಿ ಕಂಪ್ಯೂಟರ್ ಲ್ಯಾಬ್ ಸ್ಥಾಪನೆಗೆ 37.80 ಕೋಟಿ ರೂ. ಬಿಡುಗಡೆ ಮಾಡಲಾಗಿದೆ.

ಮೈಕ್ರೋ ಫೈನಾನ್ಸ್ ಸಂಸ್ಥೆಗಳಿಂದ ಸಾಲ ಪಡೆದು, ತೀರಿಸಲಾಗದೆ, ಬಲವಂತದ ವಸೂಲಿ ಕ್ರಮಗಳಿಂದ ನೊಂದು ಆತ್ಮಹತ್ಯೆ ಮಾಡಿಕೊಂಡ ಕುಟುಂಬಗಳಿಗೆ ಪರಿಹಾರ ಯೋಜನೆಗೆ ಅನುಮೋದನೆ ನೀಡಿದೆ.

ಗ್ರೇಟರ್ ಬೆಂಗಳೂರು ಪ್ರಾಧಿಕಾರ ವ್ಯಾಪ್ತಿಯ ಐದು ನಗರಪಾಲಿಕೆಗಳಲ್ಲಿ ಸಾರಥಿ ಯೋಜನೆಯಡಿ ಆಟೋರಿಕ್ಷಾ ಇಲ್ಲವೇ ಕಾರು ಖರೀದಿಗೆ 19.18 ಕೋಟಿ ರೂ. ಹಾಗೂ ಇ–ವೆಂಡಿಂಗ್ ಯೋಜನೆಯಡಿ ವಾಹನಗಳನ್ನು ಖರೀದಿಸಲು 48.84 ಕೋಟಿ ರೂ. ಸಹಾಯಧನ ನೀಡಲು ಸಮ್ಮತಿಸಿದೆ.

ಹಿಂದಿನ ತಪ್ಪುಗಳ ಸರಿಪಡಿಸಲೇ ನಮ್ಮ ಶಕ್ತಿಯ ಮಹತ್ವದ ಭಾಗ ವ್ಯಯವಾಗುತ್ತಿದೆ



• ಕಾಂಗ್ರೆಸ್ ಆಳ್ವಿಕೆಯನ್ನ ಪರೋಕ್ಷವಾಗಿ ಜರಿದ ಪ್ರಧಾನಿ ಮೋದಿ • ರಾಜ್ಯಸಭೆಯಲ್ಲಿ ಗದ್ದಲದ ನಡುವೆಯೇ ಭಾಷಣ; ಅಂದು 12ನೇ ಸ್ಥಾನದಲ್ಲಿದ್ದ ಭಾರತವನ್ನು 3ನೇ ಸ್ಥಾನಕ್ಕೆ ತಂದಿದ್ದೇವೆ

ನವದೆಹಲಿ: ನಮ್ಮ ಶಕ್ತಿಯ ಮಹತ್ವದ ಭಾಗವು ಹಿಂದಿನ ತಪ್ಪುಗಳನ್ನು ಸರಿಪಡಿಸಲು ವ್ಯಯವಾಗುತ್ತಿದೆ. ಆ ಅವಧಿಯಲ್ಲಿ ಭಾರತದ ಬಗ್ಗೆ ಸೃಷ್ಟಿಯಾದ ಚಿತ್ರಣವನ್ನು ಅಳಿಸಲು ಹೆಚ್ಚಿನ ಪ್ರಯತ್ನ ಬೇಕಾಗುತ್ತದೆ ಎಂದು ಪ್ರಧಾನಿ ನರೇಂದ್ರ ಮೋದಿ ಗುರುವಾರ ರಾಜ್ಯಸಭೆಯಲ್ಲಿ ಗುಡುಗಿದ್ದಾರೆ.

ಇಂದು ರಾಜ್ಯಸಭೆಯಲ್ಲಿ ಪ್ರತಿಪಕ್ಷಗಳ ತೀವ್ರ ಗದ್ದಲ ಹಾಗೂ ಕೋಲಾಹಲದ ನಡುವೆಯೇ ರಾಷ್ಟ್ರಪತಿಗಳ ಭಾಷಣದ ಮೇಲಿನ ವಂದನಾ ನಿರ್ಣಯದ ಚರ್ಚೆಗೆ

■ 10ನೇ ಪುಟಕ್ಕೆ

ಕೆಲ ಕಾಂಗ್ರೆಸ್ ಸದಸ್ಯರ ಅನುಚಿತ ಕೃತ್ಯದ ಮಾಹಿತಿ ಹಿನ್ನೆಲೆಯಲ್ಲಿ ನಾನೇ ಮೋದಿಗೆ ಬರಬೇಡಿ ಅಂದಿದ್ದೆ...

ಮೋದಿ ಭಾಷಣ ರದ್ದಿಗೆ ಸ್ಪೀಕರ್ ಓಂ ಬಿರ್ಲಾ ಸ್ಫೋಟಕ ಸ್ಪಷ್ಟನೆ

ನವದೆಹಲಿ: ಕಾಂಗ್ರೆಸ್ ಪಕ್ಷದ ಕೆಲವು ಸದಸ್ಯರು ಪ್ರಧಾನಿ ನರೇಂದ್ರ ಮೋದಿಯವರ ವಿರುದ್ಧ ಅನಿರೀಕ್ಷಿತ ಕೃತ್ಯ ನಡೆಸಲು ಯೋಜಿಸುತ್ತಿದ್ದಾರೆ ಎಂಬ ಸ್ಪಷ್ಟ ಮಾಹಿತಿ ಇದ್ದ ಕಾರಣದಿಂದ ನಾನೇ ಸದನಕ್ಕೆ ಭಾರದಂತೆ ಮೋದಿ ಅವರಿಗೆ ಸಲಹೆ ನೀಡಿದ್ದಾಗಿ ಗುರುವಾರ ಲೋಕಸಭಾ ಸ್ಪೀಕರ್ ಓಂ ಬಿರ್ಲಾ ತಿಳಿಸಿದ್ದಾರೆ.

ಸಂಪ್ರದಾಯದಂತೆ ಲೋಕಸಭೆಯಲ್ಲಿ ರಾಷ್ಟ್ರಪತಿಗಳ ಭಾಷಣದ ವಂದನಾ ನಿರ್ಣಯದ ಚರ್ಚೆಯಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರು ಭಾಗವಹಿಸಬೇಕಿತ್ತು. ಆದರೆ ಕಾಂಗ್ರೆಸ್‌ನ ಕೆಲ ಸಂಸದರು ಮೋದಿ ಅವರ ಆಸೀನದ ಬಳಿ ಅನಿರೀಕ್ಷಿತ ಕೃತ್ಯ ಎಸಗಲು ಯೋಜನೆ ರೂಪಿಸಿದ್ದರು ಎಂಬ ಮಾಹಿತಿ ನನಗೆ ಲಭಿಸಿತ್ತು. ಹೀಗಾಗಿ ನಾನೇ ಅವರಿಗೆ ಸದನಕ್ಕೆ ಹಾಜರಾಗದಂತೆ ಸಲಹೆ ನೀಡಿದ್ದಾಗಿ ಅಚ್ಚರಿ ಹೇಳಿಕೆ ನೀಡಿದ್ದಾರೆ.

ಬುಧವಾರ ಪ್ರಧಾನಿ ನರೇಂದ್ರ ಮೋದಿ ಭಾಷಣಕ್ಕೂ ಮುನ್ನ ಕೆಳಮನೆಯ ಕಲಾಪ ಮುಂದೂಡಿಕೆಗೆ ಕಾರಣವಾದ ಗದ್ದಲದ ಬಗ್ಗೆ ವಿಷಾದ ವ್ಯಕ್ತಪಡಿಸಿರುವ ಸ್ಪೀಕರ್, ಲೋಕಸಭೆ ಕಲಾಪಕ್ಕೆ ಹಾಜರಾಗದಿದ್ದಕ್ಕಾಗಿ ಪ್ರಧಾನಿ ಮೋದಿಯವರಿಗೆ ಧನ್ಯವಾದ ಹೇಳಿದ್ದಾರೆ. ಅಂತಹ ಘಟನೆ ನಡೆದಿದ್ದರೆ, ಅದು ದೇಶದ ಪ್ರಜಾಪ್ರಭುತ್ವ ಪರಂಪರೆಗೆ ಕಪ್ಪು ಚುಕ್ಕೆಯಾಗುತ್ತಿತ್ತು. ಅದನ್ನು ತಪ್ಪಿಸುವ ಸಲುವಾಗಿಯೇ ನಾನು ಈ ನಿರ್ಧಾರಕ್ಕೆ

■ 10ನೇ ಪುಟಕ್ಕೆ

ಅಕ್ರಮ ವಲಸಿಗರ ಪತ್ತೆಗೆ ಸರ್ಕಾರ ವಿಶೇಷ ಕಾರ್ಯಾಚರಣೆ

ಬೆಂಗಳೂರು, ಫೆ5(ಕೆಎಂಶಿ)– ಕರ್ನಾಟಕದಲ್ಲಿನ ಅಕ್ರಮ ವಲಸಿಗರ ಪತ್ತೆಗೆ ಸರ್ಕಾರ ವಿಶೇಷ ಕಾರ್ಯಾಚರಣೆ ಆರಂಭಿಸಿದೆ ಎಂದು ಗೃಹ ಸಚಿವ ಡಾ.ಜಿ.ಪರಮೇಶ್ವರ್ ಇಂದಿಲ್ಲಿ ತಿಳಿಸಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬಾಂಗ್ಲಾದೇಶ ಮತ್ತು ಇತರ ದೇಶಗಳಿಂದ ಅನಧಿಕೃತವಾಗಿ ಕರ್ನಾಟಕದಲ್ಲಿ ನೆಲೆಸಿರುವ ವಿದೇಶಿಯರನ್ನು ಗುರುತಿಸುವುದು ವಿಶೇಷ



ಕಾರ್ಯಾಚರಣೆಯ ಮುಖ್ಯ ಉದ್ದೇಶವಾಗಿದೆ ಎಂದರು. ಹೈಕೋರ್ಟ್ ಸೂಚನೆ ನಂತರ ರಾಜ್ಯ ಸರ್ಕಾರ ಈ ಕ್ರಮಕ್ಕೆ ಮುಂದಾಗಿದ್ದು, ಸಂಬಂಧಪಟ್ಟ ಇಲಾಖೆಗಳಿಗೆ ನಿರ್ದೇಶನ ನೀಡಲಾಗಿದೆ. ಈ ಹಿಂದೆ ಸುಮಾರು 370 ಮಂದಿ ಅಕ್ರಮ ನೆಲೆಸಿಗರನ್ನು ಪತ್ತೆ ಗಡಿಪಾರು ಮಾಡಲಾಗಿದೆ. ಎಫ್‌ಆರ್‌ಓ (ವಿದೇಶಿಯರ ಪ್ರಾದೇಶಿಕ ನೋಂದಣಿ ಕಚೇರಿ) ದಾಖಲೆಗಳಲ್ಲಿ ದೊಡ್ಡ ಸಂಖ್ಯೆಯಲ್ಲಿ ಅನಧಿಕೃತ ವಲಸಿಗರು ಕಂಡು ಬಂದಿದ್ದು, ಸರ್ಕಾರ ವಿಶೇಷ ಕಾರ್ಯಾಚರಣೆ ಮೂಲಕ ಪತ್ತೆಹಚ್ಚಲು ಮುಂದಾಗಿದೆ ಎಂದರು.

ಮಾ.6ಕ್ಕೆ ರಾಜ್ಯ ಬಜೆಟ್ ಮಂಡನೆ

ಸಿದ್ಧತೆ ಆರಂಭಿಸಿದ ಸಿಎಂ ಸಿದ್ದರಾಮಯ್ಯ

ಬೆಂಗಳೂರು, ಫೆ.5(ಕೆಎಂಶಿ)– ಹಣಕಾಸು ಇಲಾಖೆ ಹೊಂದಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ಮಾರ್ಚ್



6ರಂದು 2026–27ನೇ ಸಾಲಿನ ರಾಜ್ಯ ಮುಂಗಡ ಪತ್ರ ಮಂಡಿಸಲು ತಯಾರಿ ನಡೆಸಿದ್ದಾರೆ.

ಅಧಿಕಾರ ಹಸ್ತಾಂತರ ವಿಚಾರ ಇನ್ನೂ ಇತ್ಯರ್ಥಗೊಳ್ಳದ ಈ ಸಂದರ್ಭದಲ್ಲಿ ಮುಖ್ಯಮಂತ್ರಿ ದಾಖಲೆಯ 18ನೇ ಬಜೆಟ್ ಮಂಡನೆ ಸಿದ್ಧತೆಯಲ್ಲಿದ್ದಾರೆ.

ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅಧಿಕಾರದ ಚುಕ್ಕಾಣಿ ಹಿಡಿಯಲು ತೆರೆಮರೆಯಲ್ಲಿ ಭಾರೀ ಕಸರತ್ತು ನಡೆಸಿರುವ ಬೆನ್ನಲ್ಲೇ ಸಿದ್ದರಾಮಯ್ಯ ಇದಾವುದಕ್ಕೂ ತಲೆ ಕೆಡಿಸಿಕೊಳ್ಳದೆ, ಮುಂಗಡಪತ್ರ ತಯಾರಿಯಲ್ಲಿ ತೊಡಗಿದ್ದಾರೆ.

ವಿಧಾನಮಂಡಲದ ವಿಶೇಷ ಅಧಿವೇಶನ ಮುಗಿಯುತ್ತಿದ್ದಂತೆ ಮುಖ್ಯಮಂತ್ರಿ ಇಂದು ಶಕ್ತಿಭವನದಲ್ಲಿ ಉನ್ನತ ಶಿಕ್ಷಣ, ಅರಣ್ಯ ಸೇರಿದಂತೆ 10 ಇಲಾಖೆಗಳ ಮುಖ್ಯಸ್ಥರು ಮತ್ತು ಅಧಿಕಾರಿಗಳೊಂದಿಗೆ ಸಮಾಲೋಚನೆ ನಡೆಸಿದರು.

ಕಳೆದ ಸೋಮವಾರದಿಂದಲೇ 10 ದಿನ ಸುದೀರ್ಘವಾಗಿ ವಿವಿಧ ಇಲಾಖೆ ಮತ್ತು ಸಂಘ ಸಂಸ್ಥೆಗಳೊಂದಿಗೆ ಮುಂಗಡಪತ್ರ ಕುರಿತು ಪೂರ್ವಭಾವಿ ಸಭೆ ನಡೆಸಲು ಮುಖ್ಯಮಂತ್ರಿ ಕಾರ್ಯಾಲಯ ವೇಳಾಪಟ್ಟಿ ಪ್ರಕಟಿಸಿತ್ತು.

ಆದರೆ, ವಿಶೇಷ ಅಧಿವೇಶನ ಪೂರ್ವ ನಿಗದಿಗಿಂತ ಮೂರು ದಿನ ವಿಸ್ತರಣೆಗೊಂಡಿದ್ದರಿಂದ ಬಜೆಟ್ ತಯಾರಿ ಪ್ರಕ್ರಿಯೆ ಇಂದಿನಿಂದ ಆರಂಭವಾಯಿತು.

ರಾಜ್ಯಪಾಲರ ಸಹಿ ನಕಲು ಮಾಡಿ ವಂಚನೆ: ಪ್ರಕರಣ ದಾಖಲು

ಬೆಂಗಳೂರು, ಫೆ.5– ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ಅವರ ಸಹಿಯನ್ನು ನಕಲು ಮಾಡಿ, ವಂಚಿಸುತ್ತಿದ್ದ ನಕಲಿ ಐಪಿಎಸ್, ಐಎಎಸ್ ಅಧಿಕಾರಿ ಎಚ್.ಎನ್. ಸುಜಯೇಂದ್ರ(45) ಎಂಬಾತನ ವಿರುದ್ಧ ವಿಜಯನಗರ ಠಾಣೆ ಪೊಲೀಸರು ತನಿಖೆ ನಡೆಸುತ್ತಿದ್ದಾರೆ. ರಾಜ್ಯಪಾಲರ ವಿಶೇಷ ಕಾರ್ಯದರ್ಶಿ ಪ್ರದೀಪ್ ನೀಡಿದ ದೂರಿನನ್ವಯ ಸುಜಯೇಂದ್ರ ವಿರುದ್ಧ ಪ್ರಕರಣ ದಾಖಲಿಸಿ ತನಿಖೆ ಕೈಗೆತ್ತಿಕೊಂಡಿದ್ದಾರೆ.

ರಾಜ್ಯಪಾಲರ ಹೆಸರಿನ ಲೆಟರ್‌ಹೆಡ್ ಬಳಸಿರುವ ಸುಜಯೇಂದ್ರ, ರಾಜ್ಯಪಾಲರ ಸಹಿ ನಕಲು ಮಾಡಿ ವೆಲ್ಲೂರ್

■ 10ನೇ ಪುಟಕ್ಕೆ

ನಕ್ಕರೆ ಅದೇ ಸ್ವರ್ಗ

ಹೆಂಡ್ತಿ : ರೀ ಲೈಸೆನ್ಸ್ ಇಲ್ಲ ಅಂತ ದಂಡ ಹಾಕಿದ್ರು

ಗಂಡ : ಹೌದಾ ಆದ್ರೆ ನಿನ್ನ ಹತ್ರಾ ಲೈಸೆನ್ಸ್ ಇತ್ತಲ್ಲ...

ಹೆಂಡ್ತಿ : ಹೂಂ!! ಇತ್ತು ಆದ್ರೆ ಅದರಲ್ಲಿ ನನ್ನ ಫೋಟೋ ಚೆನ್ನಾಗಿರಲಿಲ್ಲ. ಅದಕ್ಕೆ ತೋರಿಸಲಿಲ್ಲ.

ಮೈಸೂರು ಮಿತ್ರ

ಶುಕ್ರವಾರ, ಫೆಬ್ರವರಿ 6, 2026

ಸತ್ಯೇನೋತ್ತಭಿತಾ ಭೂಮಿಃ ನ ಹಿ ಸತ್ಯಾತ್ಪರೋ ಧರ್ಮಃ

(ಭೂಮಿಯು ಸತ್ಯದ ಮೇಲೆ ನಿಂತಿದೆ, ಸತ್ಯಕ್ಕಿಂತ ಮಿಗಿಲಾದ ಧರ್ಮವಿಲ್ಲ)

ಸಂಪಾದಕ: ಎಂ.ಗೋವಿಂದೇಗೌಡ M.A.

ಅಮೃತ ವಾಹಿನಿ..........

ಮನಸ್ಸಿನಲ್ಲಿ ಇರುವ ನೋವುಗಳು ವಾಸಿಯಾಗುವುದಕ್ಕೆ ಬೇಕಾಗಿರುವುದು ಎರಡೇ ಎರಡು ಔಷಧ. ಒಂದು ಕಾಲ, ಇನ್ನೊಂದು ಮೌನ.

ವೇದ ಸುಳ್ಳಾದರೂ ಗಾದೆ ಸುಳ್ಳಾಗದು { ಹೊಟ್ಟೆಗೆ ಹಿಟ್ಟು ಇಲ್ಲದಿದ್ರು, ಜುಟ್ಟಿಗೆ ಮಲ್ಲಿಗೆ ಹೂವು

ನಿಮ್ಮ ಪತ್ರಗಳು

ಎಪಿಎಂಸಿ ರಸ್ತೆಯಲ್ಲಿ ಕಸದ ರಾಶಿ



ಮಾನ್ಯರೇ,

ಇದು ಮೈಸೂರು ಪ್ರಾಂತ್ಯದ ಶ್ರದ್ಧಾ ಭಕ್ತಿಯ ಸ್ಥಳ ಉತ್ತನಹಳ್ಳಿ ಗ್ರಾಮಕ್ಕೆ ನಂಜನಗೂಡು ರಸ್ತೆಯಿಂದ ಎಪಿಎಂಸಿ ಹಿಂಭಾಗದಿಂದ ಹೋಗುವ ರಸ್ತೆಯ ದುಸ್ಥಿತಿ. ಹೈವೇಯಿಂದ ನೂರು ಮೀಟರ್ ಹೋಗುತ್ತಿದ್ದಂತೆ ಬಹಳಷ್ಟು ದೂರದವರೆಗೆ ಎಡ ಭಾಗದಲ್ಲಿ ಕಸದ ರಾಶಿಯೇ ಬಿದ್ದಿದೆ. ಅರಮನೆಗೆ ಕೇವಲ ಐದು ಕಿಲೋಮೀಟರ್ ದೂರದಲ್ಲಿರುವ ಈ ಸ್ಥಳ ಸ್ವಚ್ಛ ನಗರಕ್ಕೆ ಕಪ್ಪು ಚುಕ್ಕೆ ಆಗಿದೆ. ಇಲ್ಲಿ ಕಸ ಹಾಕುವ ಜನರು ಸಹ ಯೋಚಿಸಬೇಕಾಗಿದೆ. ಸಂಬಂಧಪಟ್ಟ ಅಧಿಕಾರಿಗಳು ಕೂಡ ತಕ್ಷಣ ಕ್ರಮ ಕೈಗೊಂಡು ಚಾಮುಂಡಿಬೆಟ್ಟಕ್ಕೆ ಹೊಂದಿಕೊಂಡಂತೆ ಇರುವ ಈ ಸ್ಥಳದ ಸ್ವಚ್ಛತೆ ಕಾಪಾಡಬೇಕೆಂದು ಕೋರುತ್ತೇನೆ.

– ಜಗದೀಶ ಬಿ ಹೊಸೂರು, ಜೆಎಸ್ಎಸ್ ನಗರ, ಮೈಸೂರು.

ಮಕ್ಕಳಲ್ಲಿ ಸ್ವಯಂಪ್ರೇರಿತ ಓದು ಅವಶ್ಯಕ

ಮಾನ್ಯರೆ,

ಎಸ್ಎಸ್ಎಲ್‌ಸಿ ಹಾಗೂ ಪಿಯುಸಿ ಪರೀಕ್ಷೆಗಳು ಸಮೀಪಿಸುತ್ತಿವೆ. ಮಕ್ಕಳು ಚೆನ್ನಾಗಿ ಓದಿ ಒಳ್ಳೆಯ ಅಂಕಗಳನ್ನು ಪಡೆಯುವ ಅವಶ್ಯಕತೆ ಇದೆ. ಅದಕ್ಕೆ ಪೂರಕವಾಗಿ ಸಂಜೆ 7 ರಿಂದ ರಾತ್ರಿ 9 ರವರೆಗೆ ಎಲ್ಲಾ ಮನೆಗಳಲ್ಲೂ ಟಿವಿ ಮತ್ತು ಮೊಬೈಲ್ ಆಫ್ ಮಾಡಬೇಕು. ಹೀಗೆ ಗ್ರಾಮಗಳಲ್ಲಿ ಡಂಗುರ ಸಾರಲು ಪಿಡಿಓಗಳು ಕ್ರಮ ಕೈಗೊಳ್ಳಬೇಕು ಎಂದು ಗದಗ ಡಿಡಿಪಿಐ ಆದೇಶ ಹೊರಡಿಸಿರುವುದು ಸ್ವಾಗತಾರ್ಹವಾಗಿದೆ.

ಮಕ್ಕಳಲ್ಲಿ ಓದುವ ಹವ್ಯಾಸ ಬೆಳೆಸಬೇಕಾದರೆ ಅದರಲ್ಲಿ ಪೋಷಕರ ಪಾತ್ರ ಅತ್ಯಂತ ಮಹತ್ವದ್ದು. ಪೋಷಕರು ಕೂಡ ಮಕ್ಕಳಲ್ಲಿ ಪುಸ್ತಕ ಪ್ರೇಮ ಬೆಳೆಸಲು ಪೂರಕವಾಗಿ ಸ್ಪಂದಿಸಬೇಕು. ಮಕ್ಕಳ ಉತ್ತಮವಾದ ಓದಿಗೆ ಎಲ್ಲಾ ರೀತಿಯ ಅನುಕೂಲಕರ ವಾತಾವರಣ ಕಲ್ಪಿಸಿಕೊಡುವುದು ಪ್ರತಿಯೊಬ್ಬ ಪೋಷಕರ ಆದ್ಯ ಕರ್ತವ್ಯ. ಟಿವಿ ಹಾಗೂ ಸ್ಮಾರ್ಟ್ ಫೋನ್‌ಗಳು ಮಕ್ಕಳ ಮನಸ್ಸನ್ನು ಸೆಳೆಯುವುದು ಸಹಜ. ಮಕ್ಕಳ ವಯಸ್ಸನ್ನು ತೆಗೆದುಕೊಂಡಾಗ ಪುಸ್ತಕದ ಮೇಲೆ ಮನಸ್ಸಿನ ಏಕಾಗ್ರತೆ ತುಸು ಕಷ್ಟವೇ. ಆದರೆ ಅವುಗಳ ವೀಕ್ಷಣೆಯಲ್ಲಿ ತೊಡಗುವ ಸಮಯಕ್ಕೆ ಮಿತಿ ಹೇರುವುದು ಅವಶ್ಯಕ. ಮಕ್ಕಳಿಗೆ ಓದು ಎಂಬುದು ಬಲವಂತದ ಪ್ರಕ್ರಿಯೆ ಆಗಬಾರದು. ಬದಲಾಗಿ ಪಠ್ಯಪುಸ್ತಕಗಳನ್ನು ಸ್ವಯಂ ಪ್ರೇರಣೆಯಿಂದ ಓದಿ ಖುಷಿಪಡುವ ಅಭ್ಯಾಸವನ್ನು ಪ್ರತಿಯೊಬ್ಬ ವಿದ್ಯಾರ್ಥಿಯು ರೂಢಿಸಿಕೊಂಡು ಫಲಿತಾಂಶದಲ್ಲಿ ಉತ್ತಮ ಸಾಧನೆ ಮಾಡುವುದು ಅವಶ್ಯಕ.

–ಹರಳಹಳ್ಳಿ ಪುಟ್ಟರಾಜು, ಪಾಂಡವಪುರ.

ಕೇರಳ ರಾಜ್ಯದಲ್ಲಿ ಪದವಿವರೆಗೆ ಉಚಿತ ಶಿಕ್ಷಣ

ಮಾನ್ಯರೆ,

ಪದವಿ ಹಂತದವರೆಗೆ ಉಚಿತ ಶಿಕ್ಷಣ (ಮೈಸೂರು ಮಿತ್ರ ಫೆಬ್ರವರಿ 3) ಎಂಬ ಸುದ್ದಿ ಓದಿ ಹರ್ಷವಾಯಿತು. ದೇಶದ ಪ್ರಗತಿ ಆಗಬೇಕಾದರೆ ಶಿಕ್ಷಣ ಕ್ಷೇತ್ರ ಅಭಿವೃದ್ಧಿ ಬಹು ಮುಖ್ಯ. ಈ ನಿಟ್ಟಿನಲ್ಲಿ ಕೇರಳ ರಾಜ್ಯ ಪದವಿವರೆಗೆ ಉಚಿತ ಶಿಕ್ಷಣ ಯೋಜನೆಯನ್ನು ಜಾರಿಗೆ ತರುವುದಾಗಿ ಬಜೆಟ್‌ನಲ್ಲಿ ಘೋಷಿಸಿದೆ. ಅಷ್ಟೇ ಅಲ್ಲದೆ 12ನೇ ತರಗತಿವರೆಗಿನ ವಿದ್ಯಾರ್ಥಿಗಳಿಗೆ ಉಚಿತ ಬಸ್ ಪ್ರಯಾಣ, ಅಪಘಾತ ವಿಮೆ ಮುಂತಾದ ಯೋಜನೆಗಳನ್ನೂ ಜಾರಿಗೊಳಿಸುತ್ತಿದೆ.

ಪಕ್ಷಬೇಧ ಮರೆತು ಕೇರಳ ರಾಜ್ಯದ ಪ್ರಗತಿಪರ ನಡೆಯನ್ನು ಎಲ್ಲರೂ ಅಭಿನಂದಿಸಬೇಕು. ಅಲ್ಲದೆ ಎಲ್ಲಾ ರಾಜ್ಯ ಸರ್ಕಾರಗಳೂ ಈ ರೀತಿ ಶಿಕ್ಷಣಕ್ಕೆ ಒತ್ತು ನೀಡುವ ಯೋಜನೆಗಳನ್ನು ಜಾರಿಗೊಳಿಸಬೇಕು.

–ಲಕ್ಷ್ಮಣ್ ಗೋರ್ಲಕಟ್ಟೆ, ಬೋಗಾದಿ ಮೈಸೂರು

ಪೊಲೀಸ್ ಆಯುಕ್ತರ ಗಮನಕ್ಕೆ!

ಮಾನ್ಯರೆ,

ಪೊಲೀಸ್ ಅಧಿಕಾರಿಗಳು ಸಂಚರಿಸುವ ಈ ಸರಕಾರಿ ವಾಹನ 04.02.2026 ರ ಬುಧವಾರ ಮಧ್ಯಾಹ್ನ 12:30 ರ ಸಮಯದಲ್ಲಿ ಮೈಸೂರಿನ ಕಾಂತರಾಜ್ ಅರಸ್ ರಸ್ತೆಯ ಅಕ್ಷಯ ಭಂಡಾರ ಬಳಿ ನಿಂತಿತ್ತು. ಈ ವಾಹನದ ಹಿಂಭಾಗ ನಂಬರ್ ಪ್ಲೇಟ್ ಇರಲಿಲ್ಲ.

ಯಾವುದೇ ವಾಹನದ ನಂಬರ್ ಪ್ಲೇಟ್ ವಿರೂಪಗೊಂಡಿದ್ದರೆ ಅದು ದಂಡನಾರ್ಹ ಅಪರಾಧ. ನಂಬರ್ ಪ್ಲೇಟಿನಲ್ಲಿರುವ ನಂಬರನ್ನು ಮರೆ ಮಾಚಿದ್ದರೆ ಅದು ಭಾರತೀಯ ನಾಗರಿಕ ಸಂಹಿತೆ 2023 ರ ಸೆಕ್ಷನ್ 318(ಐಪಿಸಿ ಸೆಕ್ಷನ್ 420) ಪ್ರಕಾರ ವಂಚನೆಯೇ ಸರಿ.ಅಂತಹವರ ವಿರುದ್ಧ ವಂಚನೆಯ ಪ್ರಕರಣಗಳನ್ನು ಮೈಸೂರಿನ ಪೊಲೀಸರು ಈಗಾಗಲೇ ದಾಖಲಿಸಿದ್ದಾರೆ.

ಸಂಚಾರ ನಿಯಮ ಉಲ್ಲಂಘಿಸುವವರ ವಿರುದ್ಧ ಪ್ರಕರಣ ದಾಖಲಿಸಬೇಕಾದ ಪೊಲೀಸ್ ಅಧಿಕಾರಿಗಳೇ ಸಂಚರಿಸುವ ವಾಹನದಲ್ಲಿ ನಂಬರ್ ಪ್ಲೇಟ್ ನಾಪತ್ತೆಯಾಗಿದ್ದರೆ ಅಂತಹ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳುವವರಾರು?

ನಂಬರ್ ಪ್ಲೇಟ್ ಬಿಚ್ಚಿಟ್ಟು, ಬಚ್ಚಿಟ್ಟು ಸಂಚರಿಸುವ ಇಂತಹ ವಾಹನಗಳು ಅಪಘಾತ ಎಸಗಿ ಪ್ರಾಣ ಹಾನಿ ಉಂಟಾದರೆ ಇಂತಹ ವಾಹನಗಳನ್ನು ಪತ್ತೆ ಹಚ್ಚುವುದು ಹೇಗೆ? ನಂಬರ್ ಪ್ಲೇಟ್ ಇಲ್ಲದ ಇಂತಹ ವಾಹನಗಳಲ್ಲಿ ಸಂಚರಿಸುವ ಅಧಿಕಾರಿಗಳು ಕಾನೂನು ಬಾಹಿರ ಕೃತ್ಯ ಎಸಗಿದರೆ ಅಂತಹವರನ್ನು ಪತ್ತೆ ಹಚ್ಚುವುದು ಹೇಗೆ?

ಈ ಕೂಡಲೇ ಮೈಸೂರಿನ ಪೊಲೀಸ್ ಆಯುಕ್ತರು ನಂಬರ್ ಪ್ಲೇಟ್ ಇಲ್ಲದ ಈ ಸರಕಾರಿ ವಾಹನವನ್ನು ಜಪ್ತಿ ಮಾಡಿ ಈ ವಾಹನವನ್ನು ಬಳಸುತ್ತಿದ್ದ ಪೊಲೀಸ್ ಅಧಿಕಾರಿ ಹಾಗೂ ಸಿಬ್ಬಂಧಿಯ ವಿರುದ್ಧ ಭಾರತೀಯ ನಾಗರಿಕ ಸಂಹಿತೆ 2023 ರ ಅನ್ವಯ ಪ್ರಕರಣ ದಾಖಲಿಸಿ ಕಾನೂನಿನ ಮುಂದೆ ಎಲ್ಲರೂ ಸಮಾನರು ಎಂಬುದರ ಜೊತೆಗೆ ಕಾನೂನಿಗಿಂತ ಯಾರೂ ಮೇಲಲ್ಲ ಎಂಬುದನ್ನೂ ಸಾರಿ ಹೇಳಬೇಕಿದೆ.

–ಪಿ.ಜೆ.ರಾಘವೇಂದ್ರ, ನ್ಯಾಯವಾದಿ, ಮೈಸೂರು



ಸದ್ಗುರು
ಸಂಸ್ಥಾಪಕರು,
ಇಶಾ ಫೌಂಡೇಷನ್

ಅನುಭಾವದ ಚಿಂತನೆಗಳು

ಧ್ಯಾನಕ್ಕೆ ಪ್ರಶಸ್ತ ವಾತಾವರಣ ಸೃಷ್ಟಿಸುವಲ್ಲಿ ಮರಗಳು ಸಹಕಾರಿಯೇ?

ಸಸ್ಯಜೀವಗಳು ನಿಮ್ಮ ಭಾವನೆ ಮತ್ತು ಆಲೋಚನೆಗಳಿಗೆ ಬಹಳ ಸೂಕ್ಷ್ಮ ಸಂವೇದನೆಗಳನ್ನು ಹೊಂದಿವೆ. ವಿಶೇಷವಾಗಿ ಕೆಲವು ವಿಧದ ಸಸ್ಯಗಳು. ಸಾಮಾನ್ಯವಾಗಿ ಫೈಕಸ್ ಜಾತಿಯ ಸಸ್ಯಗಳು, ಉದಾಹರಣೆಗೆ ಆಲದಮರ, ಅರಳಿ ಮರ ಮತ್ತದೇ ಕುಟುಂಬಕ್ಕೆ ಸೇರಿದ ಮರಗಳು ತುಂಬ ಸೂಕ್ಷ್ಮಗ್ರಾಹಿಗಳಾಗಿವೆ. ಇದೇ ಕಾರಣಕ್ಕಾಗಿ ಭಾರತದಲ್ಲಿ ಯಾವಾಗಲೂ ಅವುಗಳನ್ನು ಧ್ಯಾನದ ಉದ್ದೇಶಕ್ಕಾಗಿ ಆರಿಸಿಕೊಳ್ಳಲಾಗುತ್ತದೆ. ಏಕೆಂದರೆ ನೀವು ನಿಮ್ಮ ಸಾಧನೆಯನ್ನು ಆ ಮರದ ಕೆಳಗೆ ಮಾಡಿದರೆ, ಅದೆಂತಹ ವಾತಾವರಣವನ್ನು ಸೃಷ್ಟಿಸುತ್ತದೆಂದರೆ, ತನ್ನಷ್ಟಕ್ಕೆ ತಾನೆ ಅದೊಂದು ಧ್ಯಾನ ಕೇಂದ್ರದಂತಾಗುತ್ತದೆ.


ನೀವು ಅಗತ್ಯವಾದ ಶಕ್ತಿಯನ್ನು ಉಂಟು ಮಾಡಿದರೆ, ಸಸ್ಯಗಳು ಅದಕ್ಕೆ ಬಹಳ ಸೂಕ್ಷ್ಮವಾಗಿ ಪ್ರತಿಕ್ರಿಯಿಸುತ್ತವೆ. ಧ್ಯಾನಲಿಂಗವನ್ನು ಪ್ರತಿಷ್ಠಾಪಿಸುವ ನಿಟ್ಟಿನಲ್ಲಿ ನಾವು ಕೆಲಸ ಮಾಡುತ್ತಿದ್ದಸಮಯದಲ್ಲಿ ನಾನು ಕಂಡಿದ್ದೇನೆಂದರೆ, ಹೇಗೋ ಏನೋ ಕೆಲವು ಸಸ್ಯಗಳು ಸಂಪೂರ್ಣ ಪ್ರಕ್ರಿಯೆಗೆ ಸ್ಪಂದಿಸುತ್ತಿದ್ದವು ಹಾಗೂ ಸಹಕರಿಸುತ್ತಿದ್ದವು. ಅದು ನಿಜಕ್ಕೂ ಅದ್ಭುತವಾಗಿತ್ತು. ನಿಮ್ಮ ಹತ್ತಿರದಲ್ಲಿ ಬಹಳಷ್ಟು ಮರಗಳಿದ್ದು ಮತ್ತು ಅಲ್ಲಿ ಬಹಳಷ್ಟು ಧ್ಯಾನವು ನಡೆಯುತ್ತಿದ್ದರೆ, ಆ ಸ್ಥಳದಲ್ಲಿ ಧ್ಯಾನದ ಗುಣಮಟ್ಟವನ್ನು ಕಾಯ್ದುಕೊಳ್ಳುವುದು ತುಂಬ ಸುಲಭವಾಗುತ್ತದೆ. ಏಕೆಂದರೆ, ಗಿಡಮರಗಳು ಆ ಗುಣವನ್ನು ಬಹಳ ಸಲೀಸಾಗಿ ಹಿಡಿದಿಟ್ಟುಕೊಳ್ಳುತ್ತವೆ. ಇಂದಿಗೂ ತುಂಬ ಶಕ್ತಿಯನ್ನು ಹೊಂದಿವೆಯೆಂದು ಹೇಳಲಾಗುವ ಕೆಲವು ಮರಗಳಿವೆ.

ಸಂಪಿಗೆ

ಈ ರೀತಿಯ ಬಹಳಷ್ಟು ದಂತ ಕಥೆಗಳಿವೆ. ಗೌತಮ ಬುದ್ಧ ನಡೆದಲ್ಲೆಲ್ಲಾ, ಮರಗಳು ತಮ್ಮ ಋತುವಿಂದಾಚೆಗೆ ಹೂ ಬಿಡುತ್ತಿದ್ದವು ಎಂದು ಹೇಳಲಾಗುತ್ತದೆ. ಅದು ಕೇವಲ ಒಂದು ಕಾವ್ಯಾತ್ಮಕ ಅಭಿವ್ಯಕ್ತಿಯಾಗಿರಬಹುದು. ಆದರೆ ಅದು ಸತ್ಯವಾಗಿರಲು ಸಹ ಬಹಳಷ್ಟು ಸಾಧ್ಯತೆಗಳಿವೆ.

ದಕ್ಷಿಣ ಭಾರತದ ಕರ್ನಾಟಕದಲ್ಲಿನ ಬಿಳಿಗಿರಿರಂಗನ ಬೆಟ್ಟದಲ್ಲಿ ದೊಡ್ಡ ಸಂಪಿಗೆ ಎಂದು ಕರೆಯಲಾಗುವ ಒಂದು ಮರವಿದೆ. ಅದು ಕೆಲವು ಸಾವಿರ ವರ್ಷಗಳಷ್ಟು ಹಳೆಯದೆಂದು ಹೇಳಲಾಗುವ ಒಂದು ಬಹು ದೊಡ್ಡಸಂಪಿಗೆ ಮರ. ಈ ಮರವನ್ನು ಅಗಸ್ತ್ಯ ಮುನಿಗಳು ನೆಟ್ಟಿದ್ದರು ಎಂದು ಹೇಳಲಾಗುತ್ತದೆ ಮತ್ತು ಅದರ ಬಗ್ಗೆ ಬಹಳಷ್ಟು ಕಥೆಗಳಿವೆ. ಸಾಮಾನ್ಯವಾಗಿ ಈ ಮರದ ಆಯುಷ್ಯ ಕೆಲವು ಶತಮಾನಗಳಷ್ಟಿರಬಹುದು. ಆದರೆ ಇದೊಂದು ಮರ ಬಹಳ ಕಾಲದವರೆಗೆ ಜೀವಂತವಾಗಿದೆ. ಅದು ಗಂಟಾಗಿರುವ ರೀತಿ ಮತ್ತು ಅಷ್ಟು ದೊಡ್ಡದಾಗಿ ಹಾಗೂ ಬೃಹತ್ತಾಗಿ ಬೆಳೆದಿರುವ ರೀತಿ, ಬಹುಶಃ ನೀವಿಂತಹ ಸಂಪಿಗೆ ಮರವನ್ನೆಂದಿಗೂ ನೋಡುವುದಿಲ್ಲ.

ಈ ಸಂಸ್ಕೃತಿಯಲ್ಲಿ, ಮರಗಳನ್ನು ಸಾವಿರಾರು ವರ್ಷಗಳ ಕಾಲ ಸಂರಕ್ಷಿಸುವ ಸಂಪ್ರದಾಯವಿತ್ತು ಹಾಗೂ ಅವುಗಳನ್ನು ಜೀವ ಮತ್ತು ಬುದ್ಧಿವಂತಿಕೆಯ ಮೂರ್ತ ರೂಪವಾಗಿ ನೋಡಲಾಗುತ್ತಿತ್ತು. ಇಂದು ಆ ಯಾವುದೇ ಅಂಶಗಳನ್ನು ಬಹಳವಾಗಿ ಉಳಿಸಿಕೊಳ್ಳಲಾಗಿಲ್ಲ ಮತ್ತು ಅವು ಹೆಚ್ಚಾಗಿ



> “ ಪರಿಸರ ಜಾಗೃತಿಯ ಬಗ್ಗೆ ಜನಗಳು ಇಂದು ಮಾತನಾಡುತ್ತಿರುವುದು ಬೇರೆ ಜೀವಿಗಳ ಮೇಲಿನ ಅಗಾಧವಾದ ಪ್ರೀತಿಯಿಂದಲ್ಲ. ಆದರೆ ನನ್ನ ಜೀವವು ಅಪಾಯದಲ್ಲಿದೆ. ಹೀಗೇ ಮುಂದುವರೆದರೆ ನಾನು ಮತ್ತು ನನ್ನ ಮಕ್ಕಳು ಬದುಕುಳಿಯುವುದಿಲ್ಲ. ಇದರ ಬಗ್ಗೆ ನಾವೇನನ್ನಾದರೂ ಮಾಡಬೇಕು? ಎಂಬುದನ್ನವರು ಮನಗಾಣಲು ಶುರು ಮಾಡಿದ್ದಾರೆ. ನಿಮ್ಮ ಅಸ್ತಿತ್ವವು ಅಪಾಯದಲ್ಲಿದೆ ಎನ್ನುವುದನ್ನು ಯಾರೋ ಒಬ್ಬರು ನಿಮಗೆ ನೆನಪಿಸಿದ್ದಾರೆ. ಈ ರೀತಿಯಾಗಿ ನಾವು ನಮ್ಮ ಸುತ್ತಲಿರುವ ಬೇರೆ ಜೀವಗಳನ್ನು ಸಂರಕ್ಷಿಸಲು ಮುಂದಾಗಿರುವುದು ದುರದೃಷ್ಟಕರವಾಗಿದೆ.

ಕಳೆದೇ ಹೋಗಿವೆ. ಆದರೆ, ಮನುಷ್ಯರು ಮರಗಳಿಂದ ಬಹಳಷ್ಟು ವಿಷಯಗಳನ್ನು ಅರಿತುಕೊಳ್ಳುವಸಲುವಾಗಿ ಅವುಗಳತ್ತ ನೋಡುತ್ತಿದ್ದ ಸಂಪ್ರದಾಯವಿತ್ತು.

ಪರಿಸರ ಮತ್ತು ನೀವು

ನಾನು ಆರ್ಥಿಕ ಶೃಂಗಸಭೆಗಾಗಿ ಯುರೋಪ್‌ನಲ್ಲಿದ್ದೆ ಮತ್ತು ಬಹಳ ಪ್ರಸಿದ್ಧವಾದ ಪ್ರೊಫೆಸರ್ ಒಬ್ಬರು ನನ್ನ ಬಳಿಗೆ ಬಂದು ಓಹ್, ನೀವು ಮರಗಳನ್ನು ನೆಡುವ ಅದ್ಭುತವಾದ ವ್ಯಕ್ತಿಯಲ್ಲವೆ? ಎಂದು ಕೇಳಿದರು. ಅದಕ್ಕೆ ನಾನು, ಇಲ್ಲ, ನಾನು ಮರಗಳನ್ನು ನೆಡುವವನಲ್ಲ ಎಂದೆ. ಅವರು ಪುನಃ, ಇಲ್ಲ, ಇಲ್ಲ, ನೀವು ಲಕ್ಷಗಟ್ಟಲೆ ಮರಗಳನ್ನು ನೆಟ್ಟಿದ್ದೀರ ಎಂದರು. ಅದಕ್ಕೆ ನಾನು ಹೌದು, ಆದರೆ ನಾನು ಮರಗಳನ್ನು ನೆಡುವವನಲ್ಲ ಎಂದೆ. ಹಾಗಾದರೆ ನೀವೇನು ಮಾಡುತ್ತೀರಿ? ಎಂದವರು ಕೇಳಿದರು. ಅದಕ್ಕೆ ನಾನು ನನ್ನ ಕೆಲಸ ಮನುಷ್ಯರನ್ನು ಅರಳುವಂತೆ ಮಾಡುವುದು ಎಂದು ಹೇಳಿದೆ. ಮನುಷ್ಯರು ಅವರು ಜೀವಿಸುತ್ತಿರುವ ಪರಿಸರದೊಂದಿಗೆ ಹೆಚ್ಚಿನ ಮಟ್ಟದ ತಿಳುವಳಿಕೆ, ಅರಿವು ಮತ್ತು ತೊಡಗಿಸಿಕೊಳ್ಳುವಿಕೆಗೆ ತೆರೆದುಕೊಂಡರೆ, ಪರಿಸರ ಹಾಗೂ ನಾವು ಎನ್ನುವುದು ಎರಡು ಪದಗಳಾಗಿ ಉಳಿಯುವುದಿಲ್ಲ. ಅವೆರಡೂ ನಾವಾಗುತ್ತೇವೆ. ಬಹಳ ಸರಳವಾಗಿ ಹೇಳಬೇಕೆಂದರೆ, ನೀವು ಉಸಿರಾಡುತ್ತಿರುವಾಗ, ನೀವು ಹೊರಬಿಡುವುದನ್ನು ಮರಗಳು ಒಳಗೆಳೆದುಕೊಳ್ಳುತ್ತಿವೆ. ಮರಗಳು ಹೊರಬಿಡುತ್ತಿರುವುದನ್ನು ನಾವು ಒಳಗೆಳೆದುಕೊಳ್ಳುತ್ತಿದ್ದೇವೆ. ಕೇವಲ ಅರ್ಧದಷ್ಟು ಶ್ವಾಸಕೋಶದ ಉಪಕರಣವು ನಿಮ್ಮ ಎದೆಯಲ್ಲಿದೆ. ಉಳಿದರ್ಧ ಭಾಗವು ಮರದ ಮೇಲೆನೇತಾಡುತ್ತಿದೆ. ಆ ಅರ್ಧ ಭಾಗವನ್ನು ನೀವು ಕಡೆಗಣಿಸಿದರೆ, ನಮ್ಮ ಅರ್ಧ ಭಾಗವು ಸ್ವತಃ ಅಸ್ತಿತ್ವದಲ್ಲಿರುವುದಿಲ್ಲ.

ಸದ್ಯದಲ್ಲಿ, ಪರಿಸರದ ಕಾಳಜಿಯನ್ನು ನಾವು ನೆರವೇರಿಸಬೇಕಾದ ಒಂದು ಜವಾಬ್ದಾರಿಯಂತೆ ನೋಡುತ್ತಿದ್ದೇವೆ. ಅದು ನಮ್ಮ ಜವಾಬ್ದಾರಿಯಲ್ಲ, ಅದು ನಮ್ಮ ಜೀವ. ನಾವು ಮಾತ್ರ ಜೀವ, ಮತ್ತೆಲ್ಲವೂ ಸಹ ಜೀವವಲ್ಲವೆಂದು ನಾವು ನಂಬಿದ್ದೇವೆ. ಇದಕ್ಕೆ ಕಾರಣ, ನಮ್ಮಿಡೀ ಜೀವನದ ಅನುಭವವು ದೈಹಿಕ ಸಂವೇದನೆಗಳಿಗೆ ಮಾತ್ರ ಸೀಮಿತವಾಗಿದೆ. ಬಹಳಷ್ಟು ಜನರು ಜೀವವೆಂದು ತಿಳಿದಿರುವುದು ಅವರ ದೇಹವನ್ನು ಮಾತ್ರ, ಆದ್ದರಿಂದ ಅವರು ತಾವು ಮಾತ್ರ ಜೀವ, ಬೇರಾವುದೂ ಜೀವವಲ್ಲವೆಂದು ಯೋಚಿಸುತ್ತಾರೆ. ಆಧ್ಯಾತ್ಮಿಕ ಅರಿವು ನಿಮ್ಮಲ್ಲಿದ್ದರೆ, ಎಲ್ಲವೂ ನಿಮ್ಮಂತೆಯೇ ಒಂದು ಜೀವವೆಂದು ಸಹಜವಾಗಿಯೇ ನಿಮಗೆ ತಿಳಿಯುತ್ತದೆ. ಪರಿಸರವನ್ನು ಸಂರಕ್ಷಿಸಲು ಯಾರೂ ಕೂಡ ನಿಮಗೆ ಹೇಳಬೇಕಾಗುವುದಿಲ್ಲ. ಪರಿಸರ ಜಾಗೃತಿಯ ಬಗ್ಗೆ ಜನಗಳು ಇಂದು ಮಾತನಾಡುತ್ತಿರುವುದು ಬೇರೆ ಜೀವಿಗಳ ಮೇಲಿನ ಅಗಾಧವಾದ ಪ್ರೀತಿಯಿಂದಲ್ಲ. ಆದರೆ ನನ್ನ ಜೀವವು ಅಪಾಯದಲ್ಲಿದೆ. ಹೀಗೇ ಮುಂದುವರೆದರೆ ನಾನು ಮತ್ತು ನನ್ನ ಮಕ್ಕಳು ಬದುಕುಳಿಯುವುದಿಲ್ಲ. ಇದರ ಬಗ್ಗೆ ನಾವೇನನ್ನಾದರೂ ಮಾಡಬೇಕು? ಎಂಬುದನ್ನವರು ಮನಗಾಣಲು ಶುರು ಮಾಡಿದ್ದಾರೆ. ನಿಮ್ಮ ಅಸ್ತಿತ್ವವು ಅಪಾಯದಲ್ಲಿದೆ ಎನ್ನುವುದನ್ನು ಯಾರೋ ಒಬ್ಬರು ನಿಮಗೆ ನೆನಪಿಸಿದ್ದಾರೆ. ಈ ರೀತಿಯಾಗಿ ನಾವು ನಮ್ಮ ಸುತ್ತಲಿರುವ ಬೇರೆ ಜೀವಗಳನ್ನು ಸಂರಕ್ಷಿಸಲು ಮುಂದಾಗಿರುವುದು ದುರದೃಷ್ಟಕರವಾಗಿದೆ.

ನಮ್ಮ ಜೀವಗಳು ಒಂದಕ್ಕೊಂದು ಪರಸ್ಪರ ಬೇರೆಯಾಗಿಲ್ಲ. ನಮ್ಮ ಜೀವನವು ಹಾಸುಹೊಕ್ಕಾಗಿ ಬೆಸೆದುಕೊಂಡಿರುವಂತಹ ಒಂದು ಬದುಕಾಗಿದೆ. ಇಂದು ಹುಳು ಹುಪ್ಪಟೆಗಳು ಎಷ್ಟು ಆರೋಗ್ಯವಾಗಿವೆ ಎಂಬುದು ನಾಳೆ ನಾವೆಷ್ಟು ಆರೋಗ್ಯವಾಗಿರುತ್ತೇವೆ ಎನ್ನುವುದನ್ನು ನಿರ್ಧರಿಸುತ್ತದೆ. ಮೂಲಭೂತವಾಗಿ ಆಧ್ಯಾತ್ಮಿಕತೆ ಎನ್ನುವುದು. ಎಲ್ಲವನ್ನೂ ಒಳಗೂಡಿಸಿಕೊಂಡಂತಹ ಒಂದು ಅನುಭವ. ಒಮ್ಮೆ ಒಳಗೂಡಿಸಿಕೊಳ್ಳುವಿಕೆಯ ಅನುಭವವು ಉಂಟಾದಾಗ, ನಿಮ್ಮ ಸುತ್ತಲಿನ ಎಲ್ಲದರ ಬಗ್ಗೆ ಕಾಳಜಿ ಹೊಂದುವುದು ಮತ್ತು ಸಂರಕ್ಷಿಸುವುದು ಬಹಳ ಸಹಜ, ಏಕೆಂದರೆ, ಯಾರೊಬ್ಬರಾದರೂ ಅವರ ಆಂತರ್ಯವನ್ನು ಗಮನಿಸಿದರೆ, ಅಂತರ್ಮುಖಿಯಾದರೆ, ಸ್ವಾಭಾವಿಕವಾಗಿಯೇ, ಅವರ ಒಳಗೆ ಮತ್ತು ಹೊರಗಿರುವ ಅಸ್ತಿತ್ವವು ಪ್ರತ್ಯಕ್ಷವಾದುದಲ್ಲ ಎನ್ನುವುದನ್ನು ಅರಿತುಕೊಳ್ಳುತ್ತಾರೆ.

ಅಬಕಾರಿ ನಿಯಮ ಧಿಕ್ಕರಿಸಿ ಮದ್ಯ ಮಾರಾಟ

ವಾಯ್ಸ್ ಆಫ್ ಪೀಪಲ್ ಸಂಘಟನೆ ಕ್ರಮಕ್ಕೆ ಆಗ್ರಹ

ಮೈಸೂರು, ಫೆ.5(ಎಂಟಿವೈ)– ಪರವಾನಗಿ ಪಡೆದು ಮದ್ಯ ಮಾರಾಟ ಮಾಡುತ್ತಿರುವ ವರ್ತಕರು ಅಬಕಾರಿ ನಿಯಮ ಉಲ್ಲಂಘಿಸುತ್ತಿದ್ದರೂ ಯಾವುದೇ ಕ್ರಮ ಕೈಗೊಳ್ಳದೆ ವಸೂಲಿ ದಂಧೆ ನಡೆಸಲಾಗುತ್ತಿದೆ ಎಂದು ವಾಯ್ಸ್ ಆಫ್ ಪೀಪಲ್ ಸಂಘಟನೆ ಸಂಸ್ಥಾಪಕ ಅಧ್ಯಕ್ಷ ಎ.ವಸಂತ್ ರಾವ್ ಚವಾಣ್ ಆರೋಪಿಸಿದ್ದಾರೆ.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಮದ್ಯ ಮಾರಾಟಗಾರರು ನಿಯಮ ಉಲ್ಲಂಘಿಸುತ್ತ ಮದ್ಯ ಮಾರಾಟ ಮಾಡುವ ಮೂಲಕ ಹೆಚ್ಚಿನ ಜನರು ಕುಡಿತಕ್ಕೆ ದಾಸರಾಗುವಂತೆ ಮಾಡುತ್ತಿದ್ದಾರೆ. ಇದು ಗೊತ್ತಿದ್ದರೂ ಅಬಕಾರಿ ಇಲಾಖೆ ಅಧಿಕಾರಿಗಳು ಸುಮ್ಮನಿದ್ದಾರೆ. ಅಬಕಾರಿ ಇಲಾಖೆಯಲ್ಲಿ ಭ್ರಷ್ಟಾಚಾರ, ಹೊಸ ಸನ್ನದು ನೀಡುವಿಕೆ, ಇ– ಹರಾಜಿನಿಂದ ಸುಲಿಗೆ ನಡೆಯುತ್ತಿದೆ. ಸಿಎಲ್ ಎರಡು ಪರವಾನಗಿ ಪಡೆದವರು ಬೆಳಗ್ಗೆ 7 ಗಂಟೆಗೆ ಮದ್ಯದ ಅಂಗಡಿ ತೆರೆದು ರಾತ್ರಿ 11.30ರವರೆಗೂ ವ್ಯಾಪಾರ ನಡೆಸುತ್ತಾರೆ. ಮದ್ಯಪಾನಿಗಳಿಗೆ ಅಲ್ಲಿಯೇ ಅಡುಗೆ ತಯಾರಿಸಿ ಸರಬರಾಜು ಮಾಡುತ್ತಾರೆ. ಇದರಿಂದ ಮದ್ಯ ಸೇವನೆಗೆ ಪ್ರೇರಣೆ ನೀಡಿ ದಂತಾಗುತ್ತಿದೆ. ಈ ಹಿನ್ನೆಲೆಯಲ್ಲಿ ನಿಗದಿತ ಪ್ರಮಾಣದ ಮದ್ಯ ಪೂರೈಕೆಗೆ ಕ್ರಮ ಕೈಗೊಳ್ಳಬೇಕು ಎಂದು ಮನವಿ ಮಾಡಿದರು.

ಸಿಎಲ್4 ಲೈಸೆನ್ಸ್‌ಗಳ ಪಡೆದ ಮದ್ಯ ಮಾರಾಟಗಾರರು ವಿಚಿತ್ರವಾಗಿ ವಹಿವಾಟು ನಡೆಸುತ್ತಿದ್ದಾರೆ. ಕ್ಲಬ್ ನಿಯಮ ಪಾಲಿಸುವುದಿಲ್ಲ ಸಿಎಲ್–7ರ ಬೋರ್ಡಿಂಗ್ ಹಾಗೂ ಲಾಡ್ಜಿಂಗ್ ಆಗಿದ್ದರೂ, ಪ್ರವಾಸೋದ್ಯಮ ಹಿತದೃಷ್ಟಿಯಿಂದ ಈ ಪರವಾನಗಿ ನೀಡಲಾಗಿದೆ. ಮದ್ಯವನ್ನು ಕೊಠಡಿಗೆ ಮಾತ್ರ ಸರಬರಾಜು ಮಾಡಬೇಕು ಎಂಬ ನಿಯಮವಿದ್ದರೂ ಬೋರ್ಡಿಂಗ್‌ಗೆ ಬಂದವರಿಗೂ ಮದ್ಯ ನೀಡುತ್ತಾರೆ. ಡಾಬಾ, ಹೋಟೆಲ್‌ಗಳಲ್ಲಿ ಮದ್ಯ ಸೇವನೆಗೆ ಅವಕಾಶವಿಲ್ಲದಿದ್ದರೂ ಎಗ್ಗಿಲ್ಲದೆ ಮದ್ಯ ಸೇವನೆಗೆ ಅವಕಾಶ ನೀಡಲಾಗಿದೆ. ನಿಯಮ ಉಲ್ಲಂಘನೆ ವಿರುದ್ಧ ಅಧಿಕಾರಿಗಳು ಕ್ರಮ ಕೈಗೊಳ್ಳದಿರಲು ಭ್ರಷ್ಟಾಚಾರ ಕಾರಣವಾಗಿದೆ ಎಂದರು. ಸುದ್ದಿಗೋಷ್ಠಿಯಲ್ಲಿ ಸಂಘಟನೆ ಪದಾಧಿಕಾರಿಗಳಾದ ಪ್ರದೀಪ್ ಬಿಡ್ಡನ್, ರಾಕೇಶ್, ಮಧು, ವೇಣು ಇದ್ದರು.

ಕರವೇ ಪ್ರವೀಣ್‌ಶೆಟ್ಟಿ ಬಣಕ್ಕೆ ಪದಾಧಿಕಾರಿಗಳ ನೇಮಕ

ಮೈಸೂರು,ಫೆ.5(ಎಂಟಿವೈ)–ನಾಡು, ನುಡಿ, ಭಾಷೆ, ನೆಲ, ಜಲಕ್ಕೆ ಸಂಬಂಧಿಸಿದಂತೆ ರಾಜ್ಯದ ಎಲ್ಲಾ ಜಿಲ್ಲೆಗಳಲ್ಲೂ ಪರಿಣಾಮಕಾರಿಯಾಗಿ ಹೋರಾಟ ರೂಪಿಸಲು ಕರ್ನಾಟಕ ರಕ್ಷಣಾ ವೇದಿಕೆ ಪ್ರವೀಣ್ ಶೆಟ್ಟಿ ಬಣಕ್ಕೆ ನೂತನವಾಗಿ ಕೆಲ ಪದಾಧಿಕಾರಿಗಳನ್ನು ನೇಮಕ ಮಾಡಲಾಗಿದೆ ಎಂದು ಸಂಘಟನೆ ರಾಜ್ಯ ಉಪಾಧ್ಯಕ್ಷ ಜಿ.ಉಮೇಶ್‌ಗೌಡ ತಿಳಿಸಿದ್ದಾರೆ.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸಂಘಟನೆಗೆ ಜಿಲ್ಲಾ ಉಪಾಧ್ಯಕ್ಷರನ್ನಾಗಿ ಧನರಾಜ್, ಕಾನೂನು ಘಟಕದ ಅಧ್ಯಕ್ಷರನ್ನಾಗಿ ಸುದೀಶ್, ಪಿರಿಯಾಪಟ್ಟಣ ತಾಲೂಕು ಅಧ್ಯಕ್ಷರನ್ನಾಗಿ ಕೊಪ್ಪ ಗ್ರಾಮದ ಶೇಖ್ ಅಸ್ಲಾಂ ನೇಮಕಗೊಂಡಿದ್ದಾರೆ. ಮುಂದಿನ ದಿನಗಳಲ್ಲಿ ಜಿಲ್ಲೆಯಲ್ಲಿ ರಾಜ್ಯದ ಪರ, ಕನ್ನಡಿಗರ ಪರ ಹೋರಾಟ ಮಾಡಲಿದ್ದಾರೆ ಎಂದರು.

ಇಂದಿನಿಂದ ಮೈಸೂರು ಸಂತೆ

ಮೈಸೂರು: ಮೈಸೂರಿನ ಮಹಾರಾಜ ಕಾಲೇಜು ಮೈದಾನದಲ್ಲಿ ಫೆ.6, 7 ಮತ್ತು 8ರಂದು ಮೈಸೂರು ಸಂತೆಯನ್ನು ಆಯೋಜಿಸಲಾಗಿದೆ. ಪ್ರತಿದಿನ ಬೆಳಗ್ಗೆ 11ರಿಂದ ರಾತ್ರಿ 10ರವರೆಗೆ ಸಾರ್ವಜನಿಕರಿಗೆ ಮುಕ್ತವಾಗಿದೆ. ಫೆ.6ರಂದು ಸಂಜೆ 5.30ಕ್ಕೆ ಕಾರ್ಯಕ್ರಮ ಉದ್ಘಾಟನೆಗೊಳ್ಳಲಿದೆ. ಆರ್ಗ್ಯಾನಿಕ್ ಮಂಡ್ಯ ಸಂಸ್ಥಾಪಕ ಮಧು ಚಂದನ್, ಬಿಗ್‌ಬಾಸ್ ಸ್ಪರ್ಧಿ, ನಟಿ ಮಿಸ್ ಜಾನ್ವಿ, ಮೈಸೂರು ವಿವಿ ಕುಲಪತಿ ಪ್ರೊ.ಎನ್.ಕೆ. ಲೋಕನಾಥ್, ಆರ್.ವಿ ವಿವಿ ಕುಲಪತಿ ಪ್ರೊ. ಉನಿಯಾಲ್, ಗ್ಲೋಬಲ್ ಎಜುಕೇಷನ್ ಟ್ರಸ್ಟ್ ಅಧ್ಯಕ್ಷ ಡಾ.ಜಯಚಂದ್ರರಾಜು, ಪಾಲಿಕೆ ಉಪಆಯುಕ್ತ ಜಿ.ಎಸ್.ಸೋಮಶೇಖರ್, ಲಕ್ಷ್ಮಿಪುರಂ ಠಾಣೆ ಇನ್‌ಸ್ಪೆಕ್ಟರ್ ಬಿ.ಎಸ್.ರವಿಶಂಕರ್ ಭಾಗವಹಿಸಲಿದ್ದಾರೆ.


ದೇವರಾಜ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರಾಗಿ ಡಿ.ನಾಗಭೂಷಣ್ ಪದಗ್ರಹಣ

ಸರ್ಕಾರದ ಕಾರ್ಯಕ್ರಮಗಳ ಮನೆ ಮನೆಗೆ ತಲುಪಿಸಿ: ಕಾರ್ಯಕರ್ತರಿಗೆ ಚಾಮರಾಜ ಕ್ಷೇತ್ರದ ಶಾಸಕ ಕೆ.ಹರೀಶ್‌ಗೌಡ ಸಲಹೆ

ಮೈಸೂರು,ಫೆ.5(ಎಂಕೆ)–ಗೆದ್ದೇ ಗೆಲ್ಲುತ್ತೇವೆ ಎಂದು ಮೈ ಮರೆಯದೆ ರಾಜ್ಯ ಸರ್ಕಾರದ ಕಾರ್ಯಕ್ರಮಗಳನ್ನು ಮನೆ ಮನೆಗೆ ತಲುಪಿಸಿ, ಕ್ಷೇತ್ರದ ಅಭಿವೃದ್ಧಿ ಕಾರ್ಯಗಳ ಬಗ್ಗೆ ತಿಳಿಸುವ ಕೆಲಸ ಮಾಡುವಂತೆ ಚಾಮರಾಜ ವಿಧಾನಸಭಾ ಕ್ಷೇತ್ರದ ಶಾಸಕ ಕೆ.ಹರೀಶ್‌ಗೌಡ, ಕಾಂಗ್ರೆಸ್ ಕಾರ್ಯಕರ್ತರಿಗೆ ಕರೆ ನೀಡಿದರು.

ಮೈಸೂರಿನ ಜೆಎಲ್‌ಬಿ ರಸ್ತೆಯಲ್ಲಿರುವ ಕಾಂಗ್ರೆಸ್ ಭವನದಲ್ಲಿ ಮೈಸೂರು ನಗರ (ಜಿಲ್ಲಾ) ಕಾಂಗ್ರೆಸ್ ಸಮಿತಿ ವತಿಯಿಂದ ಆಯೋಜಿಸಿದ್ದ ಚಾಮರಾಜ ಕ್ಷೇತ್ರದ ದೇವರಾಜ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಡಿ.ನಾಗಭೂಷಣ್ ಪದ ಗ್ರಹಣ ಸಮಾರಂಭದಲ್ಲಿ ಮಾತನಾಡಿದ ಅವರು, ಈ ವರ್ಷವೇ ನಗರಪಾಲಿಕೆ ಚುನಾವಣೆ ನಡೆಯಲಿದ್ದು, ಕಾರ್ಯಕರ್ತರು ಸಂಘಟನೆಯಲ್ಲಿ ತೊಡಗಿಸಿಕೊಳ್ಳುವಂತೆ ಸೂಚಿಸಿದರು.

ಚಾಮರಾಜ ವಿಧಾನ ಸಭಾ ಕ್ಷೇತ್ರದಲ್ಲಿ ಹಾಲಿ ಶಾಸಕರ ವಿರುದ್ಧ ಗೆದ್ದಿರುವುದು ಸುಲಭದ ಮಾತಲ್ಲ. ಗೆಲುವಿಗೆ ಕ್ಷೇತ್ರದ ಎಲ್ಲಾ ಕಾರ್ಯಕರ್ತರ ಪರಿಶ್ರಮ ಇದೆ. ಮುಂಬರುವ ನಗರಪಾಲಿಕೆ ಚುನಾವಣೆಯಲ್ಲಿ ಹೆಚ್ಚು ಸ್ಥಾನಗಳಿಸಲೇ ಬೇಕಾಗಿದೆ.



ಮೈಸೂರಿನ ಕಾಂಗ್ರೆಸ್ ಭವನದಲ್ಲಿ ದೇವರಾಜ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಡಿ.ನಾಗಭೂಷಣ್ ಪದಗ್ರಹಣ ಸಮಾರಂಭ ನಡೆಯಿತು.

ಮುಂದಿನ ವಿಧಾನಸಭಾ ಚುನಾವಣೆಯಲ್ಲಿ ಮತ್ತೆ ಕ್ಷೇತ್ರದಲ್ಲಿ ಕಾಂಗ್ರೆಸ್ ಉಳಿಯಬೇಕಾದರೆ ಇಂದಿನಿಂದಲೇ ಕೆಲಸ ಮಾಡಬೇಕು. ಆಕ್ಟಿವ್ ಇಲ್ಲದ ವಾರ್ಡ್ ಅಧ್ಯಕ್ಷರನ್ನು ಆಕ್ಟಿವ್ ಮಾಡಿ, ಇಲ್ಲವೇ ಹೊಸಬರಿಗೆ ಅವಕಾಶ ಕೊಟ್ಟಾದರೂ ಜನಪರ ಕೆಲಸಗಳ ಮೂಲಕ ಪಕ್ಷ ಸಂಘಟನೆಯಾಗಬೇಕು ಎಂದು ತಿಳಿಸಿದರು.

ಈಗಾಗಲೇ ಚಾಮರಾಜ ಕ್ಷೇತ್ರದಲ್ಲಿ 1,500 ಕೋಟಿ ರೂ.ವೆಚ್ಚದ ಕಾಮಗಾರಿಗಳು ನಡೆಯುತ್ತಿವೆ. ಮಹಾರಾಣಿ ಮತ್ತು ಮೆಡಿಕಲ್ ಕಾಲೇಜಿಗೆ ಸುಮಾರು 200 ಕೋಟಿ ರೂ.ವೆಚ್ಚದಲ್ಲಿ ಮೂಲ ಸೌಕರ್ಯ ಒದಗಿಸುವ ಕೆಲಸ ಮಾಡಲಾಗಿದೆ. ಗ್ಯಾರಂಟಿ ಯೋಜನೆಗಳಿಂದ ಸಾಕಷ್ಟು ಜನರಿಗೆ ಅನುಕೂಲವಾಗಿದ್ದು, ಇದೆಲ್ಲವೂ ಪ್ರತಿಯೊಬ್ಬ ಮತದಾರರ ಮನಕ್ಕೆ ಮುಟ್ಟಬೇಕಿದೆ ಎಂದು ತಿಳಿಸಿದರು.

ತಂತ್ರಕ್ಕೆ ಪ್ರತಿತಂತ್ರ: ಮಾಜಿ ಶಾಸಕ ನಂಜುಂಡಸ್ವಾಮಿ ಮಾತನಾಡಿ, ರಾಜಕೀಯದಲ್ಲಿ ತಂತ್ರಕ್ಕೆ ಪ್ರತಿತಂತ್ರ ಹೂಡಿದರಷ್ಟೇ ಗೆಲ್ಲಲು, ಮುಂದೆ ಬರಲು ಸಾಧ್ಯ. ಹಾಗೆ ಮಾಡದಿರುವುದಕ್ಕೆ ಎಂ.ಕೆ.ಸೋಮಶೇಖರ್ ಮತ್ತು ನಾನು ಮಾಜಿ ಶಾಸಕರಾಗಿದ್ದೇವೆ. 2028ರ ಚುನಾವಣೆಗೆ ಇನ್ನೂ ಎರಡು ವರ್ಷವಿದ್ದು, ಬಿಜೆಪಿ–ಜೆಡಿಎಸ್‌ನಲ್ಲಿ ಅಭ್ಯರ್ಥಿ ಗೊಂದಲ ಶುರುವಾಗಿದೆ. ಇದರ ನಡುವೆ ಕಾಂಗ್ರೆಸ್ ಕಾರ್ಯಕರ್ತರು ಪಕ್ಷದ ಅಭ್ಯರ್ಥಿ ಗೆಲುವಿಗಾಗಿ ಕೆಲಸ ಮಾಡಬೇಕು ಎಂದು ತಿಳಿಸಿದರು.

ಇದಕ್ಕೂ ಮುನ್ನ ಕಾಂಗ್ರೆಸ್ ಭಾವುಟ ನೀಡುವ ಮೂಲಕ ದೇವರಾಜ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಡಿ.ನಾಗಭೂಷಣ್ ಅವರನ್ನು ಅಭಿನಂದಿಸಲಾಯಿತು. ಮಾಜಿ ಶಾಸಕ ಎಂ.ಕೆ.ಸೋಮಶೇಖರ್, ಕೆಪಿಸಿಸಿ ಪ್ರಧಾನ ಕಾರ್ಯದರ್ಶಿ ಎಸ್.ಸಿ.ಬಸವರಾಜು, ನಗರಾಧ್ಯಕ್ಷ ಆರ್.ಮೂರ್ತಿ, ಕರ್ನಾಟಕ ವಸ್ತುಪ್ರದರ್ಶನ ಪ್ರಾಧಿಕಾರದ ಅಧ್ಯಕ್ಷ ಅಯೂಬ್ ಖಾನ್, ಮಾಜಿ ಮೇಯರ್‌ಗಳಾದ ಚಿಕ್ಕಣ್ಣ, ಬಿ.ಕೆ.ಪ್ರಕಾಶ್, ಶಿವಮಾದು, ಪುಷ್ಪವಲ್ಲಿ, ಮೋದಾಮಣಿ, ನಗರ ಪ್ರಧಾನ ಕಾರ್ಯದರ್ಶಿಗಳಾದ ಶಿವಣ್ಣ, ಈಶ್ವರ ಚಕ್ಕಡಿ, ಹಿಂದುಳಿದ ವರ್ಗಗಳ ನಗರಾಧ್ಯಕ್ಷ ಎನ್.ಆರ್.ನಾಗೇಶ್, ಮುಖಂಡರಾದ ಎನ್.ಭಾಸ್ಕರ್, ಸುಶೀಲಾ ಮರಿಗೌಡ, ಚಂದ್ರಕಲಾ, ಮಲ್ಲಿಗೆ ವೀರೇಶ್, ಹರೀಶ್, ರವಿ, ಅಶೋಕ್, ಮಾಧ್ಯಮ ವಕ್ತಾರ ಮಹೇಶ್ ಮತ್ತಿತರರು ಇದ್ದರು.

Printed by T.S. Gopinath, Published by M. Govinde Gowda on behalf of Academy Newspapers Private Limited, 15-C Industrial 'A' Layout, Bannimantap, Mysore-570 015 and Printed at Academy Newspapers Private Limited, 15-C Industrial 'A' Layout, Bannimantap, Mysore-570 015 and Published at 15-C Industrial 'A' Layout, Bannimantap, Mysore-570 015, Editor: M. Govinde Gowda Ph: 2496520 / 2496521 / 2496526 / 2496527 / 2496528. Fax: 0821-2496525. CITY OFFICES: Visveswaraya Building, III Floor, K.R. CIRCLE, MYSORE-570 001, Ph: 2431774 and No. 114, D. DEVARAJ URS ROAD (Opposite Big Bus), MYSORE-570 001. Ph: 2428695. RNI Reg. No. 36581 / 1980 E-mail address: news@mysurumithra.com For advertisements: ad@mysurumithra.com

ಮೈಸೂರಿನ ಇಬ್ಬರು ಅಧಿಕಾರಿಗಳ ಮನೆ, ಸಂಬಂಧಿಕರ ಮನೆ, ಕಚೇರಿ ಮೇಲೆ ಲೋಕಾಯುಕ್ತರ ದಾಳಿ

●ಏಳು ಸ್ಥಳಗಳಲ್ಲಿ ಏಕ ಕಾಲಕ್ಕೆ ನಡೆದ ಕಾರ್ಯಾಚರಣೆ ●ಒಬ್ಬ ಅಧಿಕಾರಿ ಮನೆಯಲ್ಲಿ ನಗದು, ಚಿನ್ನಾಭರಣ ವಶಕ್ಕೆ ●ಮತ್ತೊಬ್ಬ ಅಧಿಕಾರಿ ಮನೆಯಲ್ಲಿ ಅರ್ಧ ಕೆ.ಜಿ. ಚಿನ್ನ, ನಗದು ಪತ್ತೆ




ಜೂನಿಯರ್ ಇಂಜಿನಿಯರ್ ಕೆ.ಆರ್.ಚಂದ್ರಶೇಖರ್ ಅವರ ಮನೆ ಮತ್ತು ಪತ್ತೆಯಾದ ಚಿನ್ನಾಭರಣ ಇನ್ನಿತರ ವಸ್ತುಗಳು.




ಚೆಸ್ಕಾಂ ಇಂಜಿನಿಯರ್ ಅಲ್ತಾಫ್ ಹುಸೇನ್ ಅವರ ಮನೆ ಮತ್ತು ಪತ್ತೆಯಾದ ಚಿನ್ನಾಭರಣ ಇನ್ನಿತರ ವಸ್ತುಗಳು.

ಲೋಕಾಯುಕ್ತ ದಾಳಿ ವೇಳೆ ಪತ್ತೆಯಾದ ಆಸ್ತಿ ವಿವರ

ಮೈಸೂರು ನಗರ ಪಾಲಿಕೆಯ ಜೂನಿಯರ್ ಇಂಜಿನಿಯರ್ ಕೆ.ಆರ್.ಚಂದ್ರಶೇಖರ್

●ನಾಲ್ಕು ಸ್ಥಳಗಳಲ್ಲಿ ಶೋಧ ●55 ಲಕ್ಷ ಮೌಲ್ಯದ 2 ನಿವೇಶನಗಳು, 82 ಲಕ್ಷ ಮೌಲ್ಯದ ಒಂದು ಮನೆ ಸೇರಿ 1.37 ಕೋಟಿ ಮೌಲ್ಯದ ಸ್ಥಿರಾಸ್ತಿ. ●62,00,400 ರೂ. ನಗದು, 2,02,39,900 ಮೌಲ್ಯದ ಚಿನ್ನಾಭರಣ ಹಾಗೂ 10.70 ಲಕ್ಷದ ವಾಹನಗಳು ಸೇರಿ ಒಟ್ಟು 2,75,10,300 ರೂ. ಚರಾಸ್ತಿ. ●ಒಟ್ಟು ಪತ್ತೆಯಾಗಿದ್ದು 2,54,10,300 ರೂ. ಆಸ್ತಿಪಾಸ್ತಿ. ಇದು ಡಿಎ ಮೌಲ್ಯದ ಶೇ.160.82ರಷ್ಟಿದೆ.

ಚೆಸ್ಕಾಂನ ಡೆಪ್ಯೂಟಿ ಎಲೆಕ್ಟ್ರಿಕಲ್ ಇಂಜಿನಿಯರ್ ಅಲ್ತಾಫ್ ಹುಸೇನ್ ಜಕಾರ್ತಿ

●ಮೂರು ಸ್ಥಳದಲ್ಲಿ ಶೋಧನೆ ●1,03,10,000 ರೂ. ಮೌಲ್ಯದ 4 ನಿವೇಶನಗಳು ಮತ್ತು 1.31 ಕೋಟಿ ಮೌಲ್ಯದ ಒಂದು ಮನೆ ಸೇರಿ ಒಟ್ಟು 2.34,10,000 ಮೌಲ್ಯದ ಸ್ಥಿರಾಸ್ತಿ. ●1,45,340 ನಗದು, 75,46,800 ಮೌಲ್ಯದ ಚಿನ್ನಾಭರಣ, 19.55 ಲಕ್ಷ ಮೌಲ್ಯದ ವಾಹನಗಳು ಮತ್ತು 13,33,689 ಮೌಲ್ಯದ ಚರಾಸ್ತಿ. ●ಒಟ್ಟು ಆಸ್ತಿಪಾಸ್ತಿ ಮೌಲ್ಯ 2,41,77,849 ರೂ. ಇದು ಡಿಎ ಮೌಲ್ಯಕ್ಕಿಂತ ಶೇ.130.69ರಷ್ಟಿದೆ.

ಮೈಸೂರು, ಫೆ.5(ಬಿಎಲ್‌ಯು)– ಮೈಸೂರಿನ ಇಬ್ಬರು ಅಧಿಕಾರಿಗಳಿಗೆ ಲೋಕಾಯುಕ್ತ ಪೊಲೀಸರು ಬೆಳ್ಳಂಬೆಳಿಗ್ಗೆ ಶಾಕ್ ನೀಡಿದ್ದಾರೆ. ಲೋಕಾಯುಕ್ತ ಅಧಿಕಾರಿಗಳ ಏಳು ತಂಡ ಮೈಸೂರಿನ ಹಲವಡೆ ಏಕ ಕಾಲಕ್ಕೆ ದಿಢೀರ್ ದಾಳಿ ಮಾಡಿ ನಗದು, ಆಸ್ತಿ–ಪಾಸ್ತಿ ಸಂಬಂಧ ದಾಖಲಾತಿಗಳನ್ನು ಜಾಲಾಡಿದ್ದಾರೆ.

ಮೈಸೂರು ನಗರ ಪಾಲಿಕೆಯ ಜೂನಿಯರ್ ಇಂಜಿನಿಯರ್ ಕೆ.ಆರ್. ಚಂದ್ರಶೇಖರ್ ಹಾಗೂ ಚೆಸ್ಕಾಂನ ಡೆಪ್ಯುಟಿ ಎಲೆಕ್ಟ್ರಿಕಲ್ ಇಂಜಿನಿಯರ್ ಅಲ್ತಾಫ್ ಹುಸೇನ್ ಜಕಾರ್ತಿ ಮನೆ, ಕಚೇರಿಗಳ ಮೇಲೆ ದಾಳಿ ನಡೆಸಿದರು.

ಚಂದ್ರಶೇಖರ್ ಅವರು ಮೈಸೂರು ನಗರ ಪಾಲಿಕೆಯಲ್ಲಿ ಜೂನಿಯರ್ ಇಂಜಿನಿಯರ್ ಆಗಿ ಕರ್ತವ್ಯ ನಿರ್ವಹಿಸುತ್ತಿದ್ದರು. ಇದರ ಜೊತೆಗೆ ಹೆಚ್ಚುವರಿ ಹೊಣೆಯಾಗಿ ತಿ.ನರಸೀಪುರ ಪುರಸಭೆ ಪ್ರಭಾರ ಜೆಇಯಾಗಿಯೂ ಕೆಲಸ ಮಾಡುತ್ತಿದ್ದರು.

ಅವರು ಅಕ್ರಮ ಹಣ, ಆಸ್ತಿ ಹೊಂದಿದ್ದಾರೆಂಬ ಆರೋಪದ ಮೇರೆಗೆ ಮೈಸೂರು ಲೋಕಾಯುಕ್ತ ಪೊಲೀಸರು ವಿಜಯನಗರದ ಅವರ ನಿವಾಸ, ಕೆ.ಜಿ.ಕೊಪ್ಪಲಿನ ಸಂಬಂಧಿಕರ ಮನೆ ಹಾಗೂ ತಿ.ನರಸೀಪುರದ ಕಚೇರಿ ಸೇರಿ ನಾಲ್ಕು ಕಡೆ ದಾಳಿ ನಡೆಸಿದರು.

ಚಂದ್ರಶೇಖರ್ ಅವರ ಮನೆಯಲ್ಲಿ ನಗದು ಹಾಗೂ ಲಕ್ಷಾಂತರ ಮೌಲ್ಯದ ಚಿನ್ನಾಭರಣ ಪತ್ತೆಯಾಗಿದೆ ಎಂದು ಲೋಕಾಯುಕ್ತ ಮೂಲಗಳು ತಿಳಿಸಿವೆ.

ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮ (ಚೆಸ್ಕಾಂ) ಡೆಪ್ಯುಟಿ ಎಲೆಕ್ಟ್ರಿಕಲ್ ಇಂಜಿನಿಯರ್ ಅಲ್ತಾಫ್ ಹುಸೇನ್ ಜಕಾರ್ತಿ ಅವರ ಮೈಸೂರಿನ ಎನ್.ಆರ್. ಮೊಹಲ್ಲಾದ ಮನೆ, ಸಂಬಂಧಿಕರ ಮನೆ ಹಾಗೂ ಕಚೇರಿ ಮೇಲೆ ದಾಳಿ ಮಾಡಿದ್ದಾರೆ.

ಅಲ್ತಾಫ್ ಹುಸೇನ್ ಅವರ ಮನೆಯಲ್ಲಿ ಸುಮಾರು ಅರ್ಧ ಕೆ.ಜಿ.ಚಿನ್ನಾಭರಣ ಹಾಗೂ ನಗದು ಪತ್ತೆಯಾಗಿದೆ ಎನ್ನಲಾಗಿದೆ.

ಲೋಕಾಯುಕ್ತ ಪೊಲೀಸರ ವಿವಿಧ ತಂಡಗಳು ಇಬ್ಬರು ಅಧಿಕಾರಿಗಳ ಮನೆ, ಸಂಬಂಧಿಕರ ಮನೆ ಹಾಗೂ ಕಚೇರಿ ಮೇಲೆ ಏಕ ಕಾಲಕ್ಕೆ ದಾಳಿ ಮಾಡಿದರು.

ಇಂದು ಮುಂಜಾನೆ ಆರಂಭವಾದ ಪರಿಶೀಲನಾ ಕಾರ್ಯ ಸಂಜೆವರೆಗೆ ನಿರಂತರವಾಗಿ ನಡೆಯಿತು. ಈ ವೇಳೆ ಭ್ರಷ್ಟ ಅಧಿಕಾರಿಗಳು ಅಕ್ರಮವಾಗಿ ಸಂಪಾದಿಸಿರುವ ಆಸ್ತಿ–ಪಾಸ್ತಿಗಳನ್ನು ಲೋಕಾಯುಕ್ತರು ಪತ್ತೆ ಮಾಡಿದ್ದು, ಎಲ್ಲವನ್ನು ದಾಖಲಿಸಿದ್ದಾರೆ.

ಆರ್‌ಸಿಬಿ 2ನೇ ಬಾರಿಗೆ ಚಾಂಪಿಯನ್

4ನೇ ಬಾರಿಯೂ ರನ್ನರ್ ಅಪ್ ಸ್ಥಾನಕ್ಕೆ ತೃಪ್ತಿಪಟ್ಟ ಡೆಲ್ಲಿ ಕ್ಯಾಪಿಟಲ್ಸ್



ಟ್ರೋಫಿಯೊಂದಿಗೆ ಆರ್‌ಸಿಬಿ ಆಟಗಾರ್ತಿಯರ ಸಂಭ್ರಮ

ವಡೋದರ, ಫೆ.5– ರಾಯಲ್ ಚಾಲೆಂಜರ್ಸ್ ಬೆಂಗಳೂರು ಮಹಿಳಾ ಪ್ರೀಮಿಯರ್ ಲೀಗ್ ಚಾಂಪಿಯನ್ ಆಗಿ ಹೊರ ಹೊಮ್ಮಿದೆ

ಇಲ್ಲಿನ ಕೊಂಟಬಿ ಬಿಸಿಎ ಕ್ರೀಡಾಂಗಣದಲ್ಲಿ ಗುರುವಾರ ರಾತ್ರಿ ನಡೆದ 4ನೇ ಆವೃತ್ತಿಯ ಮಹಿಳಾ ಪ್ರೀಮಿಯರ್ ಲೀಗ್ ಫೈನಲ್ ಪಂದ್ಯದಲ್ಲಿ ಡೆಲ್ಲಿ ವಿರುದ್ಧ 6 ವಿಕೆಟ್‌ಗಳ ಭರ್ಜರಿ ಜಯ ದಾಖಲಿಸಿದ ಸ್ಮೃತಿ ಮಂದಾನ ಪಡೆ ಆಕರ್ಷಕ ಟ್ರೋಫಿ ಹಾಗೂ 6 ಕೋಟಿ ರೂ. ನಗದು ಬಹುಮಾನದೊಂದಿಗೆ 2ನೇ (2024, 2026) ಬಾರಿಗೆ ಚಾಂಪಿಯನ್ ಪಟ್ಟ ಅಲಂಕರಿಸಿದರೆ, ಸತತ 4ನೇ ಬಾರಿ ಫೈನಲ್ ತಲುಪಿದ್ದ ಡೆಲ್ಲಿ ತಂಡದ ಟ್ರೋಫಿ ಗೆಲ್ಲುವ ಕನಸು ನನಸಾಗಿಯೇ ಉಳಿಯಿತು. ಆ ಮೂಲಕ ಡೆಲ್ಲಿ ಕ್ಯಾಪಿಟಲ್ಸ್ ಆಕರ್ಷಕ ಟ್ರೋಫಿ ಹಾಗೂ 3 ಕೋಟಿ ನಗದು ಬಹುಮಾನದೊಂದಿಗೆ ರನ್ನರ್ ಅಪ್ ಸ್ಥಾನಕ್ಕೆ ತೃಪ್ತಿಪಟ್ಟುಕೊಂಡಿತು.

ಟಾಸ್ ಸೋತು ಮೊದಲು ಬ್ಯಾಟ್ ಮಾಡಿದ ಡೆಲ್ಲಿ ಕ್ಯಾಪಿಟಲ್ಸ್ ನಿಗದಿತ 20 ಓವರ್‌ಗಳಲ್ಲಿ 4 ವಿಕೆಟ್ ನಷ್ಟಕ್ಕೆ 203 ರನ್ ಗಳಿಸಿತು. ಬೃಹತ್ ಗುರಿ ಬೆನ್ನತ್ತಿದ ರಾಯಲ್ ಚಾಲೆಂಜರ್ಸ್ ಬೆಂಗಳೂರು ಇನ್ನೂ 2 ಎಸೆತ ಬಾಕಿ ಇರುವಂತೆಯೇ 4 ವಿಕೆಟ್ ಕಳೆದುಕೊಂಡು ಗುರಿ ತಲುಪಿತು.

ಆರ್‌ಸಿಬಿ ಆರಂಭ ಉತ್ತಮವಾಗಿರಲಿಲ್ಲ. ತಂಡದ ಪರ ಇನ್ನಿಂಗ್ಸ್ ಆರಂಭಿಸಿದ ಗ್ರೇಸ್ ಹ್ಯಾರಿಸ್ ಕೇವಲ 9 ರನ್ ಗಳಿಸಿ ವಿಕೆಟ್ ಒಪ್ಪಿಸಿದರು. ಈ ವೇಳೆ 2ನೇ ವಿಕೆಟ್ ಜೊತೆಯಾದ ನಾಯಕಿ ಸ್ಮೃತಿ ಮಂದಾನ ಮತ್ತು ಜಾರ್ಜಿಯಾ ವೂಲ್ ದಾಖಲೆಯ 163 ರನ್ ಜೊತೆಯಾಟವಾಡುವ ಮೂಲಕ ಪಂದ್ಯದ ಗತಿಯನ್ನೇ ಬದಲಿಸಿದರು. ಹಠಕ್ಕೆ ಬಿದ್ದವರಂತೆ ಬ್ಯಾಟ್ ಬೀಸಿದ ಇವರಿಬ್ಬರು ತಂಡದ ಮೊತ್ತವನ್ನು 5.5 ಓವರ್‌ಗಳಲ್ಲಿ 50 ರನ್, 10 ಓವರ್‌ಗಳಲ್ಲಿ ಭರ್ತಿ 100 ರನ್, 14 ಓವರ್‌ಗಳಲ್ಲಿ 150 ರನ್ ಕಲೆ ಹಾಕಿತು.

ಅಲ್ಲದೇ ಪಂದ್ಯದಲ್ಲಿ ಭರ್ಜರಿ ಆಟವಾಡಿದ ಸ್ಮೃತಿ ಮಂದಾನ 23 ಎಸೆತಗಳಲ್ಲಿ ಹಾಗೂ ಜಾರ್ಜಿಯಾ ವಾಲ್ 37 ಎಸೆತಗಳಲ್ಲಿ ಅರ್ಧಶತಕ ಪೂರೈಸಿದರು. ಈ ವೇಳೆ 54 ಎಸೆತಗಳಲ್ಲಿ 14 ಬೌಂಡರಿ ಒಳಗೊಂಡ 79 ರನ್ ಗಳಿಸಿ ಜಾರ್ಜಿಯಾ ವಾಲ್ ವಿಕೆಟ್ ಒಪ್ಪಿಸಿದರೇ, ನಾಯಕಿ ಸ್ಮೃತಿ ಮಂದಾನ 41 ಎಸೆತಗಳಲ್ಲಿ 12 ಬೌಂಡರಿ, 3 ಸಿಕ್ಸರ್ ಒಳಗೊಂಡ 87 ರನ್ ಗಳಿಸಿ ನಿರ್ಗಮಿಸಿದರು. ನಂತರ ಬಂದ ರಿಚಾ ಘೋಷ್ 6 ಗಳಿಸಿ ಔಟಾದರು. ಅಂತಿಮವಾಗಿ ನಾಡಿನ್ ಡಿ ಕ್ಲಾರ್ಕ್ 7 ಮತ್ತು ರಾಧಾ ಯಾದವ್ 12 ರನ್ ಗಳಿಸಿದರು. ಡೆಲ್ಲಿ ಪರ ಚಿನೆಲ್ಲೆ ಹೆನ್ರಿ 2, ನಂದಿನಿ ಶರ್ಮಾ, ಮಿನ್ನು ಮಣಿ ತಲಾ ಒಂದೊಂದು ವಿಕೆಟ್ ಪಡೆದರು. ಮೊದಲು ಬ್ಯಾಟಿಂಗ್ ಮಾಡಿದ ಡೆಲ್ಲಿ ಕ್ಯಾಪಿಟಲ್ಸ್ ಪರ ಲಿಝೆಲ್ ಲೀ 37 ಮತ್ತು ಶೆಫಾಲಿ ವರ್ಮಾ 20 ಲಾರಾ ವೋಲ್ವಾರ್ಡ್ತ್ 44, ಜೆಮಿಮಾ ರೋಡ್ರಿಗ್ಸ್ 57 ಮತ್ತು ಚಿನೆಲ್ ಹೆನ್ರಿ ಅಜೇಯ 35 ಅವರ ಉತ್ತಮ ಆಟದಿಂದಾಗಿ ತಂಡದ ಮೊತ್ತ 200ರ ಗಡಿ ದಾಟಿತು. ಆರ್‌ಸಿಬಿ ಪರ ಸಯಾಲಿ ಸತ್ವರೆ, ನಾಡಿನ್ ಡಿ ಕ್ಲರ್ಕ್ ಹಾಗೂ ಅರುಂಧತಿ ರೆಡ್ಡಿ ತಲಾ ಒಂದೊಂದು ವಿಕೆಟ್ ಉರುಳಿಸಿದರು. ಸ್ಮೃತಿ ಮಂದಾನ ಪಂದ್ಯಶ್ರೇಷ್ಠ ಪ್ರಶಸ್ತಿಗೆ ಭಾಜನರಾದರು.



ಸ್ಮೃತಿ ಮಂದಾನ ಮತ್ತು ಜಾರ್ಜಿಯಾ ವೂಲ್ ಜೊತೆಯಾಟ

ಹಾಸನ ಮೆಗಾ ಡೇರಿಗೆ ಕೇಂದ್ರದಿಂದ 150 ಕೋಟಿ ನೆರವು

ಹೆಚ್.ಡಿ.ಕುಮಾರಸ್ವಾಮಿ ಮಾಹಿತಿ



ನವದೆಹಲಿ: ಹಾಸನ ಮೆಗಾ ಡೇರಿ ವಿಸ್ತರಣಾ ಯೋಜನೆಗೆ ರಾಷ್ಟ್ರೀಯ ಡೇರಿ ಅಭಿವೃದ್ಧಿ ಮಂಡಳಿ ಮೂಲಕ 150 ಕೋಟಿ ಸಾಲ ಸೌಲಭ್ಯ ಕೊಡಿಸಲು ಕೇಂದ್ರ ಸರ್ಕಾರ ಸಮ್ಮತಿಸಿದೆ.

ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಅವರು ಈ ಮಾಹಿತಿ ಹಂಚಿಕೊಂಡಿದ್ದು, ಹಾಸನ ಹಾಲು ಒಕ್ಕೂಟದ ಅಧ್ಯಕ್ಷ ಹೆಚ್.ಡಿ. ರೇವಣ್ಣ ಅವರೊಂದಿಗೆ ಕೇಂದ್ರದ ಮೀನುಗಾರಿಕೆ, ಹೈನುಗಾರಿಕೆ ಮತ್ತು ಪಶುಸಂಗೋಪನಾ ಸಚಿವ ರಾಜೀವ್ ರಂಜನ್ ಸಿಂಗ್ (ಲಲನ್ ಸಿಂಗ್) ಅವರನ್ನು ಗುರುವಾರ ಇಲ್ಲಿ ಭೇಟಿಯಾಗಿ ವಿನಂತಿ ಮಾಡಲಾಗಿ ಸಚಿವರು, ಸಾಲ ಮಂಜೂರು ಮಾಡಲು ಒಪ್ಪಿಗೆ ನೀಡಿದ್ದಾಗಿ ತಿಳಿಸಿದ್ದಾರೆ.

ಹಾಸನ ಹಾಲು ಒಕ್ಕೂಟವು ಲಾಭದ ದಾರಿಯಲ್ಲಿ ನಡೆಯುತ್ತಿರುವ ಸಹಕಾರ ಒಕ್ಕೂಟವಾಗಿದೆ. ಹಾಸನ, ಚಿಕ್ಕಮಗಳೂರು ಹಾಗೂ ಕೊಡಗು ಜಿಲ್ಲೆಗಳ ಹಾಲು ಉತ್ಪಾದಕರಿಗೆ ಅತಿದೊಡ್ಡ ಆಸರೆಯಾಗಿದೆ. 1977ರಲ್ಲಿ ಆರಂಭವಾದ ಈ ಒಕ್ಕೂಟವು ಪ್ರತೀ ದಿನ 14.5 ಲಕ್ಷದಿಂದ 15 ಲಕ್ಷ ಲೀಟರ್‌ನಷ್ಟು ಹಾಲು ಸಂಗ್ರಹ ಮಾಡುತ್ತದೆ. ಸುಮಾರು ಒಂದು ಲಕ್ಷಕ್ಕೂ ಅಧಿಕ ಹಾಲು ಉತ್ಪಾದಕರಿಗೆ ಜೀವನೋಪಾಯ ಒದಗಿಸಿದೆ.

ನಿತ್ಯವೂ ಸಂಗ್ರಹ ಆಗುತ್ತಿರುವ ಹಾಲನ್ನು ಸಂಸ್ಕರಿಸಿ ಪ್ಯಾಕೆಟ್‌ಗಳಲ್ಲಿ ತುಂಬಿ ಮಾರಾಟ ಮಾಡುತ್ತಿದೆ ಹಾಗೂ ಅನೇಕ ಉಪ ಉತ್ಪನ್ನಗಳ ತಯಾರಿಸಿ ಲಾಭದ ಹಾದಿಯಲ್ಲಿ ಮುಂದೆ ಸಾಗುತ್ತಿದೆ. ಈಗ ಹಾಲು ಸಂಗ್ರಹಣೆಯ ಪ್ರಮಾಣ ಹೆಚ್ಚಾಗುತ್ತದೆ ಹಾಗೂ ಗ್ರಾಮೀಣ ಭಾಗದಲ್ಲಿ ಜೀವನೋಪಾಯ ವೃದ್ಧಿ ಮಾಡಬೇಕಿದೆ. ಈ ಹಿನ್ನೆಲೆಯಲ್ಲಿ ಹಾಸನ ಮೆಗಾಡೇರಿಯನ್ನು ಮತ್ತಷ್ಟು ವಿಸ್ತರಿಸಿ ಸಶಕ್ತಿಗೊಳಿಸಬೇಕಿದೆ. ಹೀಗಾಗಿ ಕೇಂದ್ರ ಸರ್ಕಾರದ ನೆರವು ಅಗತ್ಯವಾಗಿದೆ ಎಂಬ ಮನವಿಗೆ ಸಚಿವರು ಕೂಡಲೇ ಸ್ಪಂದಿಸಿದ್ದಾಗಿ ತಿಳಿಸಿದ್ದಾರೆ.

ಹಾಗೆಯೇ, ಹೊಳೆನರಸೀಪುರ ತಾಲ್ಲೂಕಿನ ಮೊಸಳೆ ಹೊಸಹಳ್ಳಿ ಹಾಗೂ ಬೆಟ್ಟದ ರಂಗನಾಥ ಸ್ವಾಮಿ ದೇವಾಲಯಕ್ಕೆ ನೇರ ಸಂಪರ್ಕ ಕಲ್ಪಿಸುವ ಮಾವಿನಕೆರೆ ರೈಲು ನಿಲ್ದಾಣಗಳನ್ನು ಮೇಲ್ದರ್ಜೆಗೇರಿಸಿ ಅತ್ಯಾಧುನಿಕವಾಗಿ ಅಭಿವೃದ್ಧಿ ಮಾಡಬೇಕೆಂಬ ದೇವೇಗೌಡರ ಮನವಿಗೆ ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ಸ್ಪಂದಿಸಿದ್ದು, ಪ್ರಸಕ್ತ ಸಂಸತ್ ಅಧಿವೇಶನ ಮುಗಿಯುವುದಕ್ಕೆ ಮೊದಲೇ ಈ ಬಗ್ಗೆ ವಿಸ್ತೃತ ವರದಿ ಪಡೆದುಕೊಳ್ಳುವುದಾಗಿ ಭರವಸೆ ನೀಡಿದ್ದಾಗಿ ಹೇಳಿದ್ದಾರೆ.

ನಾದಬ್ರಹ್ಮ ಹಂಸಲೇಖರಿಗೆ 'ಜೀವಮಾನ ಸಾಧನೆ' ಪ್ರಶಸ್ತಿ



ಬೆಂಗಳೂರು: ಕನ್ನಡ ಚಿತ್ರರಂಗದ ಹಿರಿಯ ಗೀತ ರಚನೆಕಾರ ಹಾಗೂ ಸಂಗೀತ ನಿರ್ದೇಶಕ ನಾದಬ್ರಹ್ಮ ಡಾ.ಹಂಸಲೇಖ ಅವರನ್ನು 17ನೇ ಬೆಂಗಳೂರು ಅಂತಾರಾಷ್ಟ್ರೀಯ ಚಲನ ಚಿತ್ರೋತ್ಸವದ 'ಜೀವಮಾನ ಸಾಧನೆ ಪ್ರಶಸ್ತಿ'ಗೆ ರಾಜ್ಯ ಸರ್ಕಾರವು ಇಂದು ಅಧಿ ಕೃತವಾಗಿ ಆಯ್ಕೆ ಮಾಡಿ ಆದೇಶಿಸಿದೆ.

ರಾಜ್ಯ ಸರ್ಕಾರವು 2026ರ ಜ.13ರಂದು ಹೊರಡಿಸಿದ್ದ ಆದೇಶದನ್ವಯ ರಚಿಸಲಾಗಿದ್ದ ಆಯ್ಕೆ ಸಮಿತಿಯು, ಫೆ.4ರಂದು ಸಭೆ ಸೇರಿ ಕನ್ನಡ ಚಲನಚಿತ್ರ ರಂಗಕ್ಕೆ ಡಾ.ಹಂಸಲೇಖ ಅವರು ನೀಡಿರುವ ಅಪ್ರತಿಮ ಕೊಡುಗೆಯನ್ನು ಪರಿಗಣಿಸಿ, ಅವಿರೋಧವಾಗಿ ಶಿಫಾರಸು ಮಾಡಿದ ಮೂವರು ಗಣ್ಯರ ಪಟ್ಟಿಯಲ್ಲಿ ಡಾ.ಹಂಸ ಲೇಖ ಹೆಸರನ್ನು ಅಂತಿಮ ಗೊಳಿಸಲಾಗಿದೆ. ಶುಕ್ರವಾರ(ಫೆ.6) ಬೆಂಗಳೂರು ಅಂತಾರಾಷ್ಟ್ರೀಯ ಚಲನಚಿತ್ರೋತ್ಸವದ ಸಮಾರೋಪ ಸಮಾರಂಭದಲ್ಲಿ ಗಣ್ಯರ ಸಮ್ಮುಖದಲ್ಲಿ ಹಂಸಲೇಖ ಅವರಿಗೆ ಪ್ರಶಸ್ತಿ ಪ್ರದಾನ ಮಾಡಲಾಗುವುದು ಎಂದು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಆಯುಕ್ತ ಹೇಮಂತ್ ಎಂ.ನಿಂಬಾಳ್ಕರ್ ತಿಳಿಸಿದ್ದಾರೆ.

ಮೈಸೂರು ಜಿಲ್ಲಾ ಹಾಪ್‌ಕಾಮ್ಸ್ ಆಡಳಿತ ಮಂಡಳಿ ಚುನಾವಣೆಯಲ್ಲಿ

ಹಾಲಿ ಅಧ್ಯಕ್ಷ ಹೊಸಹುಂಡಿ ರಘು ನೇತೃತ್ವದ ತಂಡ ಜಯಭೇರಿ



ಮೈಸೂರಿನ ಕರ್ಜನ್ ಪಾರ್ಕ್ ಆವರಣದ ಎಂ.ಹೆಚ್.ಮರೀಗೌಡ ಸಭಾಂಗಣದಲ್ಲಿ ಗುರುವಾರ ಜಿಲ್ಲಾ ಹಾಪ್‌ಕಾಮ್ಸ್‌ನ ಆಡಳಿತ ಮಂಡಳಿಯ ನಿರ್ದೇಶಕರ ಸ್ಥಾನಗಳಿಗೆ ಆಯ್ಕೆಯಾದವರನ್ನು ಅವರ ಬೆಂಬಲಿಗರು ಅಭಿನಂದಿಸಿದರು.

ಮೈಸೂರು,ಫೆ.5(ಪಿಎಂ)– ಮೈಸೂರು ಜಿಲ್ಲಾ ತೋಟದ ಬೆಳೆಗಾರರ ಮಾರಾಟ ಮತ್ತು ಸಂಸ್ಕರಣ ಸಹಕಾರ ಸಂಘದ (ಜಿಲ್ಲಾ ಹಾಪ್‌ಕಾಮ್ಸ್) ಆಡಳಿತ ಮಂಡಳಿಯ ನಿರ್ದೇಶಕರ ಸ್ಥಾನಗಳಿಗೆ ನಡೆದ ಚುನಾವಣೆಯಲ್ಲಿ ಸಂಘದ ಹಾಲಿ ಅಧ್ಯಕ್ಷ ಹೊಸಹುಂಡಿ ರಘು ನೇತೃತ್ವದ ತಂಡ ಜಯಭೇರಿ ಭಾರಿಸಿದೆ.

ಮೈಸೂರಿನ ಕರ್ಜನ್ ಪಾರ್ಕ್ ಆವರಣದ ಎಂ.ಹೆಚ್.ಮರೀಗೌಡ ಸಭಾಂಗಣದಲ್ಲಿ ಗುರುವಾರ ಚುನಾವಣೆ ನಡೆಯಿತು. ಹೊಸಹುಂಡಿ ರಘು ಸೇರಿದಂತೆ ಅವರ ತಂಡದ 10 ಮಂದಿ ಚುನಾವಣೆಯಲ್ಲಿ ಗೆಲುವು ಸಾಧಿಸಿದರು. ಇವರ ತಂಡದ ಸೂರ್ಯ ಕುಮಾರ್ ಹಾಗೂ ಹೆಚ್.ಎಸ್.ಚಂದ್ರೇ ಗೌಡ ಅವಿರೋಧ ಆಯ್ಕೆಯಾದರೆ, ಕಣದಲ್ಲಿದ್ದ ಇವರ ತಂಡದ 12 ಮಂದಿ ಪೈಕಿ 10 ಮಂದಿ (ರಘು ಅವರು ಒಳಗೊಂಡಂತೆ) ಗೆಲುವು ಸಾಧಿಸಿದರು.

ಹೊಸಹುಂಡಿ ರಘು, ಹಿಂದುಳಿದ ವರ್ಗ ಪ್ರವರ್ಗ ಬಿ ಸ್ಥಾನದಲ್ಲಿ 774 ಮತಗಳನ್ನು ಪಡೆದು ಚುನಾಯಿತರಾದರು. ಇವರ ತಂಡದ ಎಸ್.ಜಿ.ನಳಿನಿ (ಪಡೆದ ಮತಗಳು–538, ಮಹಿಳಾ ಮೀಸಲು), ಡಿ.ಪದ್ಮನಾಭ (511, ಪರಿಶಿಷ್ಟ ಜಾತಿ ಮೀಸಲು), ಬಿ.ಎನ್.ಪ್ರಭುಸ್ವಾಮಿ (621, ನಂಜನಗೂಡು ತಾಲೂಕಿನಿಂದ), ಬಿ.ಪಿ.ಬೋರೇಗೌಡ (640, ಹೆಚ್‌ಡಿ ಕೋಟೆ ತಾಲೂಕಿನಿಂದ), ಜೆ.ಮಹದೇವ (596, ಮೈಸೂರು ತಾಲೂಕಿನಿಂದ), ವೈ.ಜಿ.ಮಹೇಂದ್ರ (656, ಟಿ.ನರಸೀಪುರ ತಾಲೂಕಿನಿಂದ), ಟಿ.ರಾಮೇಗೌಡ (574, ಹಿಂದುಳಿದ ವರ್ಗ ಪ್ರವರ್ಗ ಎ ಮೀಸಲು ಸ್ಥಾನ), ಎಸ್.ಕೆ.ಶಿವಣ್ಣ (576, ಪಿರಿಯಾಪಟ್ಟಣ ತಾಲೂಕಿನಿಂದ), ಆರ್.ಸರ್ವೇಶ (597, ಪರಿಶಿಷ್ಟ ಪಂಗಡ ಮೀಸಲು ಸ್ಥಾನ) ಆಯ್ಕೆಯಾದರು.

ಪರಿಶಿಷ್ಟ ಜಾತಿ ಮೀಸಲು ಸ್ಥಾನದಿಂದ ಕಣದಲ್ಲಿದ್ದ ಹುಯಿಲಾಳು ರಾಮಸ್ವಾಮಿ (ಬಿ.ಎಸ್.ರಾಮಸ್ವಾಮಿ) ಪರಾಭವಗೊಂಡರೆ, ಇವರ ತಂಡದ 6 ಮಂದಿ ಪೈಕಿ ಎಂ.ವಿ.ಸಂಜಯ್ (847, ಕೆಆರ್ ನಗರ ತಾಲೂಕಿನಿಂದ) ಹಾಗೂ ನೇತ್ರಾವತಿ (512, ಮಹಿಳಾ ಮೀಸಲು ಸ್ಥಾನ) ಮಾತ್ರ ಗೆಲುವು ದಾಖಲಿಸಿದರು.

12 ನಿರ್ದೇಶಕ ಸ್ಥಾನಗಳಿಗೆ ನಡೆದ ಚುನಾವಣೆಯಲ್ಲಿ ಒಟ್ಟು 40 ಅಭ್ಯರ್ಥಿಗಳು ಕಣದಲ್ಲಿದ್ದರು. ಒಟ್ಟು 1,608 ಮತದಾರರ ಪೈಕಿ 1,439 (ಶೇ.89) ಮಂದಿ ಮತದಾನ ಮಾಡಿದರು. ಒಬ್ಬ ಮತದಾರನಿಗೆ 12 ಮತಗಳನ್ನು ಚಲಾಯಿಸಲು ಅವಕಾಶ ವಿತ್ತು ಮುಂದಿನ ಐದು ವರ್ಷಗಳ ಅವಧಿಗೆ ಚುನಾವಣೆ ನಡೆಯಿತು. ಎಂ.ಹೆಚ್.ಮರೀಗೌಡ ಸಭಾಂಗಣದಲ್ಲಿ ವ್ಯವಸ್ಥೆಗೊಳಿಸಿದ್ದ ಮತಗಟ್ಟೆಗಳಲ್ಲಿ ಬೆಳಗ್ಗೆ 9ರಿಂದ ಸಂಜೆ 4ರವರೆಗೆ ಮತದಾನ ಪ್ರಕ್ರಿಯೆ ಬಿರುಸಿನಿಂದ ನಡೆಯಿತು. ಆ ಬಳಿಕ ಇಲ್ಲಿಯೇ ಎಣಿಕೆ ಪ್ರಕ್ರಿಯೆ ನಡೆದು ಫಲಿತಾಂಶ ಘೋಷಿಸಲಾಯಿತು. ಸಹಕಾರ ಇಲಾಖೆಯ ಸಹಾಯಕ ನಿಬಂಧಕರಾದ ಜೆ.ಎಂ.ಜಯಲಕ್ಷೀ ಚುನಾವಣಾಧಿಕಾರಿಯಾಗಿ ಕಾರ್ಯನಿರ್ವಹಿಸಿದರು. ಇದೇ ವೇಳೆ ಗೆಲುವು ಸಾಧಿಸಿದವರಿಗೆ ಅಭಿನಂದಿಸ ಲಾಯಿತು. ಕಾಂಗ್ರೆಸ್ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಉತ್ತನಹಳ್ಳಿ ಶಿವಣ್ಣ, ಮುಖಂಡರಾದ ಅಹಿಂದ ಜವರಪ್ಪ ಬಾಲಕೃಷ್ಣ ಮತ್ತಿತರರು ಹಾಜರಿದ್ದರು.

ಜಿಲ್ಲಾ ಕಾಂಗ್ರೆಸ್ ಕಾರ್ಯದರ್ಶಿಯಾಗಿ ಎಸ್.ಭಾಸ್ಕರ್ ನೇಮಕ



ಮೈಸೂರು, ಫೆ.5– ಮೈಸೂರು ಗ್ರಾಮಾಂತರ ಜಿಲ್ಲಾ ಕಾಂಗ್ರೆಸ್ ಸಮಿತಿ ಕಾರ್ಯದರ್ಶಿಯಾಗಿ ಮೈಸೂರಿನ ಬೋಗಾದಿ ರಾಮಮಂದಿರ ರಸ್ತೆ ನಿವಾಸಿ ಎಸ್.ಭಾಸ್ಕರ್ ಅವರನ್ನು ನೇಮಕ ಮಾಡಿ, ಕೆಪಿಸಿಸಿ ಅಧ್ಯಕ್ಷರೂ ಆದ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಆದೇಶಿಸಿದ್ದಾರೆ ಎಂದು ಕಾಂಗ್ರೆಸ್ ಜಿಲ್ಲಾಧ್ಯಕ್ಷ ಡಾ.ಬಿ.ಜೆ.ವಿಜಯ್‌ಕುಮಾರ್ ತಿಳಿಸಿದ್ದಾರೆ.

ಹೆಚ್.ಡಿ.ರೇವಣ್ಣಗೆ ಮತ್ತೆ ಹಿನ್ನಡೆ; ಚಾರ್ಜ್‌ಶೀಟ್ ಸಲ್ಲಿಸದಂತೆ ನೀಡಿದ್ದ ತಡೆ ತೆರವು



ಬೆಂಗಳೂರು: ಮಹಿಳೆ ಅಪಹರಣ ಪ್ರಕರಣಕ್ಕೆ ಸಂಬಂಧಿಸಿದಂತೆ ಮಾಜಿ ಸಚಿವ ಹೆಚ್.ಡಿ.ರೇವಣ್ಣ ಅವರ ವಿರುದ್ಧ ಚಾರ್ಜ್‌ಶೀಟ್ ಸಲ್ಲಿಸದಂತೆ ನೀಡಲಾಗಿದ್ದ ಹೈಕೋರ್ಟ್‌ನ ತಡೆಯಾಜ್ಞೆಯನ್ನು ಇದೀಗ ನ್ಯಾಯಾಲಯ ತೆರವುಗೊಳಿಸಿದೆ.

ಕೆ.ಆರ್.ನಗರ ಮಹಿಳೆಯೊಬ್ಬರ ಅಪಹರಣಕ್ಕೆ ಸಂಬಂಧಿಸಿದಂತೆ ಹೆಚ್.ಡಿ.ರೇವಣ್ಣ ಅವರ ವಿರುದ್ಧ ಗಂಭೀರ ಆರೋಪಗಳು ಕೇಳಿಬಂದಿದ್ದ ಹಿನ್ನೆಲೆಯಲ್ಲಿ ಈ ಸಂಬಂಧ ಪೊಲೀಸರು ತನಿಖೆ ನಡೆಸುತ್ತಿದ್ದರು. ತನಿಖೆ ಅಂತಿಮ ಹಂತ ತಲುಪುತ್ತಿದ್ದಂತೆ, ಚಾರ್ಜ್‌ಶೀಟ್ ಸಲ್ಲಿಕೆಗೆ ತಡೆ ನೀಡುವಂತೆ ಹೆಚ್.ಡಿ. ರೇವಣ್ಣ ಹೈಕೋರ್ಟ್‌ಗೆ ಅರ್ಜಿ ಸಲ್ಲಿಸಿದ್ದರು.

ಅರ್ಜಿಯ ಪ್ರಾಥಮಿಕ ವಿಚಾರಣೆ ವೇಳೆ ಹೈಕೋರ್ಟ್ ತಾತ್ಕಾಲಿಕವಾಗಿ ದೋಷಾರೋಪಣೆ ಸಲ್ಲಿಕೆಗೆ ತಡೆಯಾಜ್ಞೆ ನೀಡಿತ್ತು. ಆದರೆ, ನಂತರ ಪ್ರಕರಣದ ಎಲ್ಲಾ ಅಂಶಗಳು, ತನಿಖಾ ದಾಖಲೆಗಳು ಹಾಗೂ ವಾದ–ಪ್ರತಿವಾದಗಳನ್ನು ಪರಿಶೀಲಿಸಿದ ನ್ಯಾಯಾಲಯ, ಇದೀಗ ಆ ತಡೆಯಾಜ್ಞೆ ತೆರವುಗೊಳಿಸಿದೆ.



9ನೇ ವರ್ಷದ ಪುಣ್ಯಸ್ಮರಣೆ



ನೀವು ನಮ್ಮನ್ನು ಅಗಲಿ ಇಂದಿಗೆ 9 ವರ್ಷ ಕಳೆದರೂ, ಸದಾ ನಿಮ್ಮ ನೆನಪಿನಲ್ಲಿರುವ ದುಃಖತಪ್ತರು
ಸಹೋದರಿ: ಲಕ್ಷ್ಮೀದೇವಮ್ಮ,
ಪತ್ನಿ : ಆಲಮ್ಮ,
ಮಕ್ಕಳು : ಐಶ್ವರ್ಯ, ಪಲ್ಲವಿ

M. ನಾಗರಾಜು (ಚಿನ್ನಸ್ವಾಮಿ)

ಸ್ಥಳ : ಗುಂಡ್ಲುಪೇಟೆ ಟೌನ್, 18ನೇ ಬ್ಲಾಕ್, 4ನೇ ಡಿವಿಷನ್



ಉತ್ತರ ಪ್ರದೇಶ ವಿಧಾನಸಭೆ ಸ್ಪೀಕರ್‌ಗೆ ಮೈಸೂರು ಸಾಂಪ್ರದಾಯಿಕ ಶೈಲಿಯ ಪೀಠ

ಇದು ಕರ್ನಾಟಕದ ಮಾಡೆಲ್ ಎಂದು ಸಿಎಂ ಯೋಗಿ ಆದಿತ್ಯ ನಾಥ್ ಬಣ್ಣನೆ

ಮೈಸೂರು, ಫೆ.5(ಬಿಎಲ್‌ಯು/ವಿವಿಹೆಚ್)– ಸಾಂಸ್ಕೃತಿಕ ನಗರಿ ಮೈಸೂರಿನ ಶಿಲ್ಪಿಯೊಬ್ಬರು ಸಾಂಪ್ರದಾಯಿಕ ಮೈಸೂರು ಶೈಲಿಯಲ್ಲಿ ಕೆತ್ತನೆ ಮಾಡಿರುವ ಅತ್ಯಾಕರ್ಷಕ ಪೀಠ (ಆಸನ)ವನ್ನು ಉತ್ತರ ಪ್ರದೇಶ ವಿಧಾನಸಭೆಯ ಸ್ಪೀಕರ್ ಸ್ಥಾನದಲ್ಲಿ ಸ್ಥಾಪಿಸಲಾಗಿದೆ.

ಮೈಸೂರಿನ ಶಿಲ್ಪಿ ಕೈಜರ್ ಅಲಿ ಖಾನ್ ಮೈಸೂರು ಶೈಲಿಯಲ್ಲಿ ಕೆತ್ತನೆ ಮಾಡಿರುವ ಪೀಠವನ್ನು ಉತ್ತರ ಪ್ರದೇಶದ ಸ್ಪೀಕರ್ ಸ್ಥಾನದಲ್ಲಿ ಸ್ಥಾಪನೆ ಮಾಡಿದ್ದು, ಕಣ್ಮನ ಸೆಳೆಯುತ್ತಿದೆ.

ಉತ್ತರ ಪ್ರದೇಶದ ಮುಖ್ಯಮಂತ್ರಿ ಯೋಗಿ ಆದಿತ್ಯ ನಾಥ್ ಅವರು ಭಾರತದ ಸಾಂಪ್ರದಾಯಿಕತೆಗೆ ಹೆಚ್ಚು ಒತ್ತು ನೀಡುವವರಿದ್ದಾರೆ. ಈ ಹಿನ್ನೆಲೆಯಲ್ಲಿ ಅಲ್ಲಿನ ವಿಧಾನಸಭೆಯ ಆಂತರಿಕ ವಿನ್ಯಾಸವನ್ನು ಭಾರತದ ಸಾಂಪ್ರದಾಯಿಕ ಶೈಲಿಯಲ್ಲೇ ನಿರ್ಮಾಣ ಮಾಡಿಸಿದ್ದಾರೆ.

ಈ ನಿಟ್ಟಿನಲ್ಲಿ ಭಾರತದ ಸಾಂಪ್ರದಾಯಿಕ ಶೈಲಿಯ ಆಸನವನ್ನು ಕೂಡ ಸ್ಪೀಕರ್ ಪೀಠದಲ್ಲಿ ಸ್ಥಾಪಿಸಬೇಕೆಂದು ಯೋಗಿ ಆದಿತ್ಯ ನಾಥ್ ನಿರ್ಧರಿಸಿದರು. ತರುವಾಯ ಮೈಸೂರಿನ ಶಿಲ್ಪಿ ಕೈಜರ್ ಅಲಿ ಖಾನ್ ಅವರಿಗೆ ಪೀಠ ನಿರ್ಮಾಣ ಕಾರ್ಯದ ಜವಾಬ್ದಾರಿ ನೀಡಿದರು.

ಅದರಂತೆ ಕೈಜರ್ ಅಲಿ ಖಾನ್ ಅವರು ಬಹಳ ಸುಂದರವಾಗಿ ಮೈಸೂರು ಶೈಲಿಯಲ್ಲಿ ಸ್ಪೀಕರ್ ಪೀಠವನ್ನು ಕೆತ್ತನೆ ಮಾಡಿ ಕೊಟ್ಟಿದ್ದಾರೆ. ಇದನ್ನು ಕರ್ನಾಟಕದ ಮಾಡೆಲ್ ಎಂದು ಆದಿತ್ಯ ನಾಥ್ ಬಣ್ಣಿಸಿದ್ದಾರೆ.

ಮೈಸೂರಿನ ಸಾಂಪ್ರದಾಯಿಕ ಕಲೆ ಹಾಗೂ ಕುಂದಣ ಕಲೆ ಭಾರತ ಮಾತ್ರವಲ್ಲದೆ ವಿದೇಶದಲ್ಲೂ ಪ್ರಖ್ಯಾತಿ ಹೊಂದಿದೆ. 500 ರೂಪಾಯಿಯಿಂದ 5 ಲಕ್ಷದವರೆಗೆ ಇವು ಮಾರಾಟವಾಗುತ್ತವೆ.

> ವಿಧಾನ ಸಭೆಯ ಮುಖ್ಯ ದ್ವಾರ, ಗುಲ್ಬರ್ಗಾ ಬುದ್ಧ ವಿಹಾರದ ಮುಖ್ಯದ್ವಾರ, ಬೆಳಗಾವಿ ಸ್ಪೀಕರ್ ಪೀಠ ಸೇರಿದಂತೆ ಹಲವು ಕರಕುಶಲ ಕೆಲಸಗಳನ್ನು ಮಾಡಿದ್ದೇನೆ. ಸ್ಪೀಕರ್ ಯು.ಟಿ.ಖಾದರ್ ಅವರು ನನ್ನ ಕಾರ್ಯಕ್ಷಮತೆಯನ್ನು ಗುರುತಿಸಿದ್ದಕ್ಕಾಗಿ ಅವರಿಗೆ ಕೃತಜ್ಞನಾಗಿದ್ದೇವೆ.
>
> -ಕೈಜರ್ ಅಲಿ ಖಾನ್, ಶಿಲ್ಪಿ, ಆರ್.ಕೆ.ಫೈನ್ ಆರ್ಟ್ಸ್ ಅಂಡ್ ಕ್ರಾಫ್ಟ್ ಪ್ರೊಪರೇಟರ್ ಮೈಸೂರು.

ಈಗ ಸ್ಟೈಲಿಷ್ ಆಗಿರುವ ಬಹಳಷ್ಟು ಫರ್ನಿಚರ್‌ಗಳು ಮಾರುಕಟ್ಟೆಗೆ ಲಗ್ಗೆ ಇಟ್ಟಿದ್ದರೂ ಮೈಸೂರು ಸಾಂಪ್ರದಾಯಿಕ ಶೈಲಿಯ ಪೀಠೋಪಕರಣಗಳ ಆಕರ್ಷಣೆ ಮಾತ್ರ ಕುಗ್ಗಿಲ್ಲ.

ಈ ಬಗ್ಗೆ 'ಮೈಸೂರು ಮಿತ್ರ'ನೊಂದಿಗೆ ಮಾತನಾಡಿದ ಶಿಲ್ಪಿ, ಮೈಸೂರಿನ ಲಷ್ಕರ್ ಮೊಹಲ್ಲಾ ನಿವಾಸಿ ಕೈಜರ್ ಅಲಿ ಖಾನ್, 2025ರ ಸೆಪ್ಟೆಂಬರ್ 11ರಂದು ದೇಶದ ಎಲ್ಲಾ ಸ್ಪೀಕರ್‌ಗಳು ಬೆಂಗಳೂರಿನಲ್ಲಿ ಸಮಾವೇಶಗೊಂಡಿದ್ದರು. ಯುಪಿ ಸ್ಪೀಕರ್ ಸತೀಶ್ ಮಹಾನ ಅವರೂ ಇದ್ದರು. ಈ ವೇಳೆ 1957ರಲ್ಲಿ ರೂಪಿಸಿದ ನಮ್ಮ ರಾಜ್ಯದ ಸ್ಪೀಕರ್ ಪೀಠ ನೋಡಿ ಆಕರ್ಷಿತರಾಗಿ, ಇದೇ ಮಾದರಿಯ ಪೀಠ ಉತ್ತರ ಪ್ರದೇಶಕ್ಕೆ ಬೇಕಿದೆ ಎಂದು ಸ್ಪೀಕರ್ ಯು.ಟಿ. ಖಾದರ್ ಅವರ ಬಳಿ ಪ್ರಸ್ತಾಪಿಸಿದ್ದರು. ಸ್ಪೀಕರ್ ಯು.ಟಿ. ಖಾದರ್ ಅವರು ಅರಣ್ಯ ಇಲಾಖೆಗೆ ಶಿಫಾರಸ್ಸು ಮಾಡಿದ್ದು, ನಂತರ ಅವರು ಈ ಪೀಠ ರೂಪಿಸುವ ಕೆಲಸವನ್ನು ನನಗೆ ವಹಿಸಿದರು. ಈ ಕಾರ್ಯ ನನಗೆ ಕೈಗೂಡಲು ಕರ್ನಾಟಕ ವಿಧಾನ ಸಭಾ ಸ್ಪೀಕರ್ ಯು.ಟಿ.ಖಾದರ್ ಅವರೇ ಕಾರಣರಾಗಿದ್ದು, ಅವರನ್ನು ಮರೆಯುವಂತಿಲ್ಲ ಎಂದರು.

ಮೂರೂವರೆ ತಿಂಗಳ ಅವಧಿಯಲ್ಲಿ 12 ಜನರನ್ನೊಳಗೊಂಡ ನಮ್ಮ ತಂಡ ಹಗಲು ರಾತ್ರಿ ಈ ಕೆಲಸವನ್ನು ಮಾಡಿ ಮುಗಿಸಿದ್ದೇವೆ. ಈ ಪೀಠ ರಚನೆಗೆ 'ಕರ್ನಾಟಕದ ರೋಸ್ ವುಡ್' ಮರವನ್ನು ಬಳಸಲಾಗಿದೆ. ಇದೇ ಫೆ.9 ರಿಂದ ಉತ್ತರ ಪ್ರದೇಶದಲ್ಲಿ ಅಧಿವೇಶನ ಆರಂಭವಾಗಲಿದ್ದು, ಇದಕ್ಕೂ ಮುನ್ನಾ ಈ ಪೀಠ ರೂಪಿಸಿಕೊಡುವಂತೆ ಸೂಚಿಸಿದ್ದರು. ಅದರಂತೆ ಇಂದು ಉತ್ತರ ಪ್ರದೇಶ ವಿಧಾನಸಭೆಯಲ್ಲಿ ಸ್ಪೀಕರ್ ಪೀಠ ಸ್ಥಾಪಿಸಿ, ಮೈಸೂರಿಗೆ ಆಗಮಿಸಿದ್ದೇನೆ ಎಂದು ಅವರು ತಿಳಿಸಿದರು.



ಉತ್ತರ ಪ್ರದೇಶದ ವಿಧಾನ ಸಭೆಯಲ್ಲಿ ಸ್ಥಾಪಿತವಾಗಿರುವ ತಾವು ರೂಪಿಸಿದ ಸ್ಪೀಕರ್ ಪೀಠದೊಂದಿಗೆ ಶಿಲ್ಪಿ ಕೈಜರ್ ಅಲಿ ಖಾನ್

ಶೇಷಾದ್ರಿಪುರಂ ಪದವಿ ಕಾಲೇಜಿನಲ್ಲಿ ಸ್ವಯಂಪ್ರೇರಿತ ರಕ್ತದಾನ ಶಿಬಿರ ; 181 ಯೂನಿಟ್ ರಕ್ತ ಸಂಗ್ರಹ

ಮೈಸೂರು,ಫೆ.5(ಪಿಎಂ)– ಹೆಬ್ಬಾಳು ರಿಂಗ್ ರಸ್ತೆಯಲ್ಲಿರುವ ಶೇಷಾದ್ರಿಪುರಂ ಪದವಿ ಕಾಲೇಜಿನಲ್ಲಿ ಗುರುವಾರ ನಡೆದ 9ನೇ ಸ್ವಯಂಪ್ರೇರಿತ ರಕ್ತದಾನ ಶಿಬಿರದಲ್ಲಿ ಒಟ್ಟು 181 ಯೂನಿಟ್ ರಕ್ತ ಸಂಗ್ರಹಿಸಲಾಯಿತು.

ಕಾಲೇಜಿನ ಆಂತರಿಕ ಗುಣಮಟ್ಟ ಭರವಸೆ ಕೋಶ, ಯುವ ರೆಡ್ ಕ್ರಾಸ್ ಘಟಕ, ರಾಷ್ಟ್ರೀಯ ಸೇವಾ ಯೋಜನೆ ಘಟಕ, ಎನ್‌ಸಿಸಿ, ಭಾರತೀಯ ರೆಡ್ ಕ್ರಾಸ್ ಸೊಸೈಟಿ, ಕೆಆರ್ ಆಸ್ಪತ್ರೆ ರಕ್ತ ನಿಧಿ ಕೇಂದ್ರ, ರೋಟರಿ ಕ್ಲಬ್ ಆಫ್ ಮೈಸೂರು ಮೆಟ್ರೋ ಸಂಯುಕ್ತಾಶ್ರಯದಲ್ಲಿ ನಡೆದ ರಕ್ತದಾನ ಶಿಬಿರದಲ್ಲಿ ಕಾಲೇಜು ವಿದ್ಯಾರ್ಥಿಗಳು, ಬೋಧಕರು, ಬೋಧಕೇತರರು, ಹಳೇ ವಿದ್ಯಾರ್ಥಿಗಳು, ಪೋಷಕರು ಹಾಗೂ ಸಾರ್ವಜನಿಕರು ರಕ್ತದಾನ ಮಾಡಿದರು.

ಶೇಷಾದ್ರಿಪುರಂ ಶಿಕ್ಷಣ ದತ್ತಿಯ ಮಾಜಿ ಅಧ್ಯಕ್ಷರೂ ಆದ ಮಾಜಿ ಮೇಯರ್ ದಿವಂಗತ ಕೆ.ಎಂ.ನಂಜಪ್ಪ ಅವರ ಸ್ಮರಣಾರ್ಥ ನಡೆದ ಈ ಶಿಬಿರದಲ್ಲಿ ಮುಖ್ಯ ಅತಿಥಿಯಾಗಿ ಪಾಲ್ಗೊಂಡಿದ್ದ ಕಾಲೇಜು ಶಿಕ್ಷಣ ಇಲಾಖೆಯ ಪ್ರಾದೇಶಿಕ ನಿರ್ದೇಶಕಿ ಡಾ.ಡಿ.ಎಸ್.ಪ್ರತಿಮಾ ಮಾತನಾಡಿ, ಕೆ.ಎಂ.ನಂಜಪ್ಪ ಅವರು ಲಕ್ಷಾಂತರ ವಿದ್ಯಾರ್ಥಿಗಳಿಗೆ ವಿದ್ಯೆ ಕೊಡುವ ಜೊತೆಗೆ ಅವರಲ್ಲಿ ಮೌಲ್ಯ ತುಂಬುವ ಕೆಲಸ ಮಾಡಿದರು ಎಂದು ಸ್ಮರಿಸಿದರು.



ಮೈಸೂರಿನ ಹೆಬ್ಬಾಳು ರಿಂಗ್ ರಸ್ತೆಯ ಶೇಷಾದ್ರಿಪುರಂ ಪದವಿ ಕಾಲೇಜಿನಲ್ಲಿ ಗುರುವಾರ ರಕ್ತದಾನ ಶಿಬಿರ ನಡೆಯಿತು.

ರಕ್ತದಾನವೆಂದರೆ ಮಹಾದಾನ. ಇದರಿಂದ ಅನೇಕ ಜನರ ಪ್ರಾಣ ಉಳಿಸಿ ಮಾನವೀಯತೆ ಮೆರೆಯಬಹುದು. ಒಂದು ಯೂನಿಟ್ ರಕ್ತದಿಂದ ಮೂರು ಜನರ ಪ್ರಾಣ ಕಾಪಾಡಬಹುದು. ರಕ್ತ ಕೊಡುವುದರಿಂದ ನಮ್ಮ ದೇಹಕ್ಕೆ ಅನೇಕ ಆರೋಗ್ಯಕರ ಪ್ರಯೋಜನಗಳಿವೆ. ದೇಹದಲ್ಲಿ ಕಬ್ಬಿಣದ ಅಂಶ ಸಮತೋಲನದಲ್ಲಿ ಇರಲು ಅನುಕೂಲವಾಗಲಿದೆ. ಹೊಸ ರಕ್ತ ಸಂಚಾರಕ್ಕೂ ದಾರಿಯಾಗುತ್ತದೆ. ಕ್ಯಾನ್ಸರ್ ಮತ್ತು ಹೃದಯ ಸಂಬಂಧಿ ಸಮಸ್ಯೆಗಳಿಂದ ದೂರವಾಗಬಹುದು ಎಂದರು.

ಭಾರತೀಯ ರೆಡ್ ಕ್ರಾಸ್ ಸೊಸೈಟಿ ರಾಜ್ಯ ಸಂಯೋಜಕ ರಾಜು ಚಂದ್ರಶೇಖರ್ ಮಾತನಾಡಿ, ಶೇಷಾದ್ರಿಪುರಂ ಶಿಕ್ಷಣ ಸಂಸ್ಥೆ ಪ್ರತಿ ವರ್ಷ ರಕ್ತದಾನ ಶಿಬಿರ ಏರ್ಪಡಿಸುತ್ತಿದೆ. ಸಣ್ಣ ಸಣ್ಣ ಮಕ್ಕಳು ಕೂಡ ಅನಾರೋಗ್ಯದಿಂದ ನರಳುತ್ತಿದ್ದಾರೆ. ಅಂತಹವರಿಗೆ ರಕ್ತದ ಅವಶ್ಯಕತೆ ಹೆಚ್ಚಾಗಿರುತ್ತದೆ. ಆದ್ದರಿಂದ ಪ್ರತಿಯೊಬ್ಬರು ಸ್ವಯಂಪ್ರೇರಿತವಾಗಿ ರಕ್ತದಾನ ಮಾಡಬೇಕೆಂದು ಮನವಿ ಮಾಡಿದರು.

ಕೆಆರ್ ಆಸ್ಪತ್ರೆ ರಕ್ತನಿಧಿ ಕೇಂದ್ರದ ಅಧಿಕಾರಿ ಡಾ.ಕುಸುಮಾ ಮಾತನಾಡಿ, ರಕ್ತ ಕೊಡುವುದರಿಂದ ದೇಹಕ್ಕೆ ಉಪಯೋಗವೇ ಹೊರತು ಯಾವುದೇ ತೊಂದರೆಯಿಲ್ಲ. ರಕ್ತವನ್ನು ನೀಡಿ 2ರಿಂದ 3 ಗಂಟೆಯವರೆಗೆ ವಿಶ್ರಾಂತಿ ಪಡೆದುಕೊಂಡು ಅನಂತರ ಎಂದಿನಂತೆ ನಿಮ್ಮ ಕೆಲಸ ಮುಂದುವರೆಸಬಹುದು ಎಂದರು.

ಅಧ್ಯಕ್ಷತೆ ವಹಿಸಿದ್ದ ಶೇಷಾದ್ರಿಪುರಂ ಎಜುಕೇಷನಲ್ ಟ್ರಸ್ಟ್‌ನ ಗೌರವ ಪ್ರಧಾನ ಕಾರ್ಯದರ್ಶಿ ನಾಡೋಜ ಡಾ.ವೂಡೆ ಪಿ.ಕೃಷ್ಣ ಮಾತನಾಡಿ, ಕೆ.ಎಂ.ನಂಜಪ್ಪನವರು ರೆಡ್ ಕ್ರಾಸ್ ಸೊಸೈಟಿಯನ್ನು ಕರ್ನಾಟಕದಲ್ಲಿ ಬೆಳೆಸುವಲ್ಲಿ ಪ್ರಮುಖ ಪಾತ್ರ ವಹಿಸಿದವರು. ಇವರ ಪ್ರೇರಣೆಯಿಂದಾಗಿ ಪ್ರತಿವರ್ಷ ನಮ್ಮ ಸಂಸ್ಥೆಯಿಂದ 2,500 ಯೂನಿಟ್ ರಕ್ತ ಸಂಗ್ರಹ ಮಾಡುತ್ತಿದ್ದು, ಇದರಿಂದ ಅಂದಾಜು 8 ಸಾವಿರ ಜನರ ಪ್ರಾಣ ಉಳಿಸುವಂತಹ ಕೆಲಸವಾಗುತ್ತಿದೆ ಎಂದರು.

ಇದೇ ಸಂದರ್ಭದಲ್ಲಿ ಐಕೆಎಸ್ ಪರೀಕ್ಷೆಯಲ್ಲಿ ಹೆಚ್ಚು ಅಂಕ ಗಳಿಸಿದ ವಿದ್ಯಾರ್ಥಿಗಳಾದ ಮನಸ್ವಿನಿ ಮಹೇಂದ್ರ ಕಿರಣ, ಎಂ.ಹರ್ಷಿತಾ, ಕೆ.ಪ್ರದ್ಯುಮ್ನ ಅವರಿಗೆ ಪ್ರಮಾಣಪತ್ರಗಳನ್ನು ವಿತರಿಸಲಾಯಿತು. ಕರ್ನಾಟಕ ಗಾಂಧಿ ಸ್ಮಾರಕ ನಿಧಿ ಗೌರವ ಕೋಶಾಧಿಕಾರಿ ಹೆಚ್.ಬಿ.ದಿನೇಶ್, ರೋಟರಿ ಕ್ಲಬ್ ಆಫ್ ಮೈಸೂರು ಮೆಟ್ರೋ ಅಧ್ಯಕ್ಷ ಮೋಹನ್ ಗುರುಮೂರ್ತಿ, ಕಾಲೇಜಿನ ಆಡಳಿತ ಮಂಡಳಿಯ ಅಧ್ಯಕ್ಷ ಬಿ.ಎ. ಅನಂತರಾವ್, ಪ್ರಾಂಶುಪಾಲರಾದ ಡಾ.ಕೆ.ಸೌಮ್ಯ ಈರಪ್ಪ, ಶೇಷಾದ್ರಿಪುರಂ ಸ್ವತಂತ್ರ ಪದವಿಪೂರ್ವ ಕಾಲೇಜಿನ ಪ್ರಾಂಶುಪಾಲರಾದ ಅರ್ಚನಾ ಸ್ವಾಮಿ ಮತ್ತಿತರರು ಹಾಜರಿದ್ದರು.

ಬ್ಲಡ್ ಆನ್ ಕಾಲ್ ಕ್ಲಬ್‌ನಿಂದ ರಕ್ತದಾನ ಶಿಬಿರ

ಜೀವಧಾರ ರಕ್ತ ನಿಧಿ ನಿರ್ದೇಶಕ ಗಿರೀಶ್‌ಗೆ ಆರೋಗ್ಯ ರಕ್ಷಕ ಪ್ರಶಸ್ತಿ

ಮೈಸೂರು, ಫೆ.5– ಬ್ಲಡ್ ಆನ್ ಕಾಲ್ ಕ್ಲಬ್ ವತಿಯಿಂದ ನ್ಯೂ ಸಯ್ಯಾಜಿರಾವ್ ರಸ್ತೆಯಲ್ಲಿರುವ ಜೀವಧಾರ ರಕ್ತ ನಿಧಿ ಆವರಣದಲ್ಲಿ ಸ್ವಯಂಪ್ರೇರಿತ ರಕ್ತದಾನ ಶಿಬಿರ ಹಾಗೂ 'ಆರೋಗ್ಯ ರಕ್ಷಕ ಸೇವಾ ಪ್ರಶಸ್ತಿ' ಪ್ರದಾನ ಕಾರ್ಯಕ್ರಮವನ್ನು ಆಯೋಜಿಸಲಾಗಿತ್ತು.

ಕಾರ್ಯಕ್ರಮದಲ್ಲಿ ಎರಡು ದಶಕಗಳಿಂದ ಸಂಘಟನೆಯೊಂದಿಗೆ ಸಾಮಾಜಿಕ ಸೇವೆ ಸಲ್ಲಿಸುತ್ತಿರುವ ಜೀವಧಾರ ರಕ್ತ ನಿಧಿ ಕೇಂದ್ರದ ನಿರ್ದೇಶಕ ಎಸ್.ಇ.ಗಿರೀಶ್ ಅವರಿಗೆ ಆರೋಗ್ಯ ರಕ್ಷಕ ಸೇವಾ ಪ್ರಶಸ್ತಿ ಪ್ರದಾನ ಮಾಡಿ, ಅಭಿನಂದಿಸಲಾಯಿತು. ಇದೇ ವೇಳೆ ಸ್ವಯಂಪ್ರೇರಿತವಾಗಿ ರಕ್ತದಾನ ಮಾಡಿದ 35ಕ್ಕೂ ಹೆಚ್ಚು ದಾನಿಗಳಿಗೆ ಪ್ರಮಾಣ ಪತ್ರ ನೀಡಿ, ಪ್ರಶಂಸಿಸಲಾಯಿತು.

ಈ ಸಂದರ್ಭದಲ್ಲಿ ಮೈಸೂರು ಹೋಟೆಲ್ ಮಾಲೀಕರ ಸಂಘದ ಅಧ್ಯಕ್ಷ ಸಿ.ನಾರಾಯಣಗೌಡ, ಸೇವೆಯನ್ನು ಆತ್ಮತೃಪ್ತಿ ಮತ್ತು ಮನಃಸಂತೋಷಕ್ಕಾಗಿ ಮಾಡುತ್ತೇವೆ. ಜೀವಧಾರ ರಕ್ತ ನಿಧಿ ಕೇಂದ್ರದ ನಿರ್ದೇಶಕ ಗಿರೀಶ್, ಸಾಮಾಜಿಕ ಹಾಗೂ ಆರ್ಥಿಕವಾಗಿ ಹಿಂದುಳಿದವರ ಸೇವೆ ಜೊತೆಗೆ ಬಡ ವಿದ್ಯಾರ್ಥಿ ಹಾಗೂ ರೋಗಿಗಳ ನೆರವಿಗೆ ನಿಲ್ಲುತ್ತಿರುವುದು ಶ್ಲಾಘನೀಯ ಎಂದರು.



ಮೈಸೂರಿನ ಜೀವಧಾರ ರಕ್ತ ನಿಧಿ ಕೇಂದ್ರದ ಆವರಣದಲ್ಲಿ ಆಯೋಜಿಸಿದ್ದ ರಕ್ತದಾನ ಶಿಬಿರದ ವೇಳೆ ಕೇಂದ್ರದ ನಿರ್ದೇಶಕ ಎಸ್.ಇ.ಗಿರೀಶ್ ಅವರಿಗೆ ಬ್ಲಡ್ ಆನ್ ಕಾಲ್ ಕ್ಲಬ್ ವತಿಯಿಂದ ಆರೋಗ್ಯ ರಕ್ಷಕ ಸೇವಾ ಪ್ರಶಸ್ತಿ ಪ್ರದಾನ ಮಾಡಲಾಯಿತು.

ಮೈಸೂರು ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆ ಅಧ್ಯಕ್ಷ ಕೆ.ಬಿ.ಲಿಂಗರಾಜು ಮಾತನಾಡಿ, ರಕ್ತದಾನಕ್ಕಿಂತ ಶ್ರೇಷ್ಠವಾದ ದಾನ ಮತ್ತೊಂದಿಲ್ಲ. ಅಪಘಾತ ಮತ್ತಿತರ ಅವಘಡಗಳಿಂದ ರಕ್ತ ನಷ್ಟವಾದವರಲ್ಲಿ ಹಲವರು ಸಕಾಲಕ್ಕೆ ರಕ್ತ ಸಿಗದೆ ಜೀವ ಕಳೆದುಕೊಳ್ಳುತ್ತಿದ್ದಾರೆ. ರಕ್ತದಾನ ಮಾಡುವುದರಿಂದ ಹಲವು ಜೀವಗಳನ್ನು ರಕ್ಷಿಸಬಹುದು. ರೋಗಿಗಳು ಹಾಗೂ ಅವರ ಮನೆಯವರು ರಕ್ತದಾನ ಮಾಡಿದವರನ್ನು ದೇವರಂತೆ ಭಾವಿಸಿ, ಹರಸುತ್ತಾರೆ ಎಂದು ಹೇಳಿದರು.

ಈ ವೇಳೆ ಚಾಮರಾಜ ಕ್ಷೇತ್ರದ ಬಿಜೆಪಿ ಅಧ್ಯಕ್ಷ ದಿನೇಶ್ ಗೌಡ, ಕೆಪಿಸಿಸಿ ಸದಸ್ಯ ನಜರ್ಬಾದ್ ನಟರಾಜ್, ಬಿಜೆಪಿ ಯುವ ಮೋರ್ಚಾ ನಗರಾಧ್ಯಕ್ಷ ರಾಕೇಶ್ ಗೌಡ, ಜೋಗಿ ಮಂಜು, ಕರ್ನಾಟಕ ಹಿತರಕ್ಷಣಾ ವೇದಿಕೆ ಅಧ್ಯಕ್ಷ ವಿನಯ್ ಕುಮಾರ್, ನಿರೂಪಕ ಅಜಯ್ ಶಾಸ್ತ್ರಿ ಬ್ಲಡ್ ಆನ್ ಕಾಲ್ ಕ್ಲಬ್‌ನ ಆನಂದ್, ದೇವೇಂದ್ರ ಪರಿಹಾರಿಯ, ಜಿ.ರಾಘವೇಂದ್ರ, ಕೃಷ್ಣಪ್ಪ (ಗಂಟಯ್ಯ), ಎಸ್.ಎನ್.ರಾಜೇಶ್, ಸುರೇಶ್ ಗೋಲ್ಡ್, ಕೇಬಲ್ ವಿಜಿ, ರಂಗನಾಥ್, ಸದಾಶಿವ ಮತ್ತಿತರರು ಉಪಸ್ಥಿತರಿದ್ದರು.

ಬೆಳಗಾವಿ ಹಿಟ್ ಅಂಡ್ ರನ್ ಕೇಸ್; ಮೂವರು ಯುವಕರ ದಾರುಣ ಸಾವು

ಬೆಳಗಾವಿ, ಫೆ.5– ಹಾರೂಗೇರಿ ಪಟ್ಟಣದ ಅಥಣಿ–ಗೋಕಾಕ ರಸ್ತೆ ಮೇಲೆ ಅಪರಿಚಿತ ವಾಹನ ಬೈಕ್‌ಗೆ ಡಿಕ್ಕಿ ಹೊಡೆದ ಪರಿಣಾಮ ಬೈಕ್ ಮೇಲೆ ಸಂಚರಿಸುತ್ತಿದ್ದ ಮೂವರು ಯುವಕರು ದಾರುಣ ಸಾವನ್ನಪ್ಪಿರುವ ಘಟನೆ ಬುಧವಾರ ನಡೆದಿದೆ.

ಮೃತರನ್ನು ಗಜಾನನ ಮಹಾದೇವ ವಡೆಯರ್(22), ಮಾಳಪ್ಪ ಮಲ್ಲಪ್ಪ ಗೋಲಭಾಂವಿ(22) ಮತ್ತು ಮಹಾದೇವ ಮಲ್ಲಪ್ಪ ಗೋಲಭಾಂವಿ (26) ಎಂದು ಗುರುತಿಸಲಾಗಿದೆ.

ಮೂವರು ಮುಗಳಖೋಡ್ ನಿಂದ ಹಾರೂಗೇರಿಗೆ ದ್ವಿಚಕ್ರ ವಾಹನದಲ್ಲಿ ಪ್ರಯಾಣಿಸುತ್ತಿದ್ದಾಗ, ಅಪರಿಚಿತ ವಾಹನ ಡಿಕ್ಕಿ ಹೊಡೆದು ಸ್ಥಳದಿಂದ ಪರಾರಿಯಾಗಿದೆ. ಡಿಕ್ಕಿಯ ಪರಿಣಾಮ ಗಜಾನನ್ ಮತ್ತು ಮಹಾದೇವ್ ಸ್ಥಳದಲ್ಲೇ ಸಾವನ್ನಪ್ಪಿದರೆ, ಮಾಳಪ್ಪ ತಲೆಗೆ ಗಂಭೀರ ಗಾಯಗಳಾಗಿದ್ದವು. ಅವರನ್ನು ಚಿಕಿತ್ಸೆಗಾಗಿ ಬೆಳಗಾವಿಯ



ಖಾಸಗಿ ಆಸ್ಪತ್ರೆಗೆ ಸಾಗುವ ವೇಳೆ ಮೃತಪಟ್ಟಿದ್ದರು. ಅಪಘಾತದ ಬಗ್ಗೆ ಮಾಹಿತಿ ಪಡೆದ ನಂತರ, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಬಸರ್ಗಿ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಬಳಿಕ ಶವಗಳನ್ನು ಮರಣೋತ್ತರ ಪರೀಕ್ಷೆಗಾಗಿ ಆಸ್ಪತ್ರೆಗೆ ರವಾನಿಸಿದರು.

ಘಟನೆ ಸಂಬಂಧ ಹಾರೂಗೇರಿ ಪೊಲೀಸರು ಭಾರತೀಯ ನ್ಯಾಯ ಸಂಹಿತಾ (ಬಿಎನ್‌ಎಸ್) ಸೆಕ್ಷನ್ 281 ಮತ್ತು 106(1) ಮತ್ತು ಮೋಟಾರು ವಾಹನ ಕಾಯ್ದೆಯ ಸೆಕ್ಷನ್ 134 ಮತ್ತು 187ರ ಅಡಿಯಲ್ಲಿ ಪ್ರಕರಣ ದಾಖಲಿಸಿದ್ದಾರೆ.

ರೋಣ ಜಿಗಳೂರು ಕ್ರಾಸ್ ಬಳಿ ಕ್ರೂಸರ್–ಲಾರಿ ಭೀಕರ ಅಪಘಾತ

ಮೂವರು ಸ್ಥಳದಲ್ಲೇ ಸಾವು, 15 ಮಂದಿ ಗಾಯ

ಗದಗ ಜಿಲ್ಲೆಯ ರೋಣ ತಾಲೂಕಿನ ಜಿಗಳೂರು ಕ್ರಾಸ್ ಬಳಿ ಇಂದು ಗುರುವಾರ ಬೆಳಗ್ಗೆ ಕ್ರೂಸರ್ ಮತ್ತು ಕ್ಯಾಂಟರ್ ವಾಹನಗಳ ನಡುವೆ ನಡೆದ ಭೀಕರ ಅಪಘಾತದಲ್ಲಿ ಮೂವರು ಕೂಲಿ ಕಾರ್ಮಿಕರು ಸ್ಥಳದಲ್ಲೇ ಮೃತಪಟ್ಟಿದ್ದಾರೆ.

ಗಜೇಂದ್ರಗಡದ ನಿವಾಸಿಗಳು ರೋಣ ಕಡೆಗೆ ತೆರಳುತ್ತಿದ್ದಾಗ ಸಂಭವಿಸಿದ ಈ ದುರ್ಘಟನೆಯಲ್ಲಿ 15 ಮಂದಿ ಗಾಯಗೊಂಡಿದ್ದು, ಅವರನ್ನು ಆಸ್ಪತ್ರೆಗೆ ದಾಖಲಿಸಲಾಗಿದೆ. ಮೃತಪಟ್ಟವರನ್ನು ಗಜೇಂದ್ರಗಢ ಪಟ್ಟಣದ ಶಿವಾಜಿಪೇಟೆಯ ನಿವಾಸಿಗಳಾದ ಮರಿಯಂ ಹುನಗುಂದ(55ವ), ಅನ್ನಪೂರ್ಣ ಚಂಗಳಿ(45ವ) ಮತ್ತು ಸುಜಾತ ಹೊಸಮನಿ (30ವ) ಎಂದು ಗುರುತಿಸಲಾಗಿದೆ.



ಅಪಘಾತ ಸ್ಥಳಕ್ಕೆ ಗದಗ ಎಸ್ಪಿ ರೋಹನ್ ಜಗದೀಶ್ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಗಾಯಾಳುಗಳಿಗೆ ಗದಗ ಜಿಮ್ಸ್ ಆಸ್ಪತ್ರೆಯಲ್ಲಿ ಚಿಕಿತ್ಸೆ ನೀಡಲಾಗುತ್ತಿದೆ. ಆರು ಜನ ಕಾರ್ಮಿಕರಿಗೆ ಕೈ, ಕಾಲು ಮುರಿತವಾಗಿದ್ದು, ಆಸ್ಪತ್ರೆಯಲ್ಲಿ ನರಳಾಡುತ್ತಿದ್ದಾರೆ. ಗಾಯಾಳುಗಳ ಸ್ಥಿತಿ ಕಂಡು ಸಂಬಂಧಿಕರು ಕಣ್ಣೀರು ಹಾಕುವಂತಾಗಿದೆ.

ನೇಪಾಳದಿಂದ ಭಾರತೀಯರ ವಂಚಿಸುತ್ತಿದ್ದ ಜಾಲ ಪತ್ತೆ; 11 ಮಂದಿ ಬಂಧನ

- ಮಂಗಳೂರು ಪೊಲೀಸರ ಕಾರ್ಯಾಚರಣೆ
- 624 ಖಾತೆಗಳ ವಿವರ ಬಹಿರಂಗ
- ಒಂದೇ ಖಾತೆಯಲ್ಲಿ 167 ಕೋಟಿ ವಹಿವಾಟು

ಮಂಗಳೂರು: ಹೂಡಿಕೆ ಹೆಸರಿನಲ್ಲಿ ನೇಪಾಳದಿಂದ ಭಾರತೀಯ ನಾಗರಿಕರನ್ನು ಗುರಿಯಾಗಿಸಿಕೊಂಡು ಕೋಟ್ಯಾಂತರ ರೂ. ದೋಚುತ್ತಿದ್ದ ವಂಚಕ ಜಾಲದ 11 ಮಂದಿಯನ್ನು ಬಂಧಿಸಲಾಗಿದೆ. ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಮಂಗಳೂರು ನಗರ ಪೊಲೀಸ್ ಕಮಿಷನರ್ ಸುಧೀರ್ ಕುಮಾರ್ ರೆಡ್ಡಿ, ಸಾಮಾಜಿಕ ಮಾಧ್ಯಮ ಜಾಲತಾಣಗಳ ಮೂಲಕ ಆನ್‌ಲೈನ್‌ನಲ್ಲಿ ಹೂಡಿಕೆ ಹಗರಣ ನಡೆಸುತ್ತಿದ್ದ ಬೃಹತ್ ಜಾಲದಲ್ಲಿ ಭಾರತೀಯರು ಇದ್ದಾರೆ. ಐವರು ತಲೆಮರೆಸಿಕೊಂಡಿದ್ದು, ವಿದೇಶಿ ಸಹಚರ ಕುರಿತು ಪ್ರತ್ಯೇಕ ತನಿಖೆ ನಡೆಸಲಾಗುತ್ತಿದೆ ಎಂದು ತಿಳಿಸಿದ್ದಾರೆ.

ವಶಪಡಿಸಿಕೊಂಡ ಸಾಧನಗಳ ಡಿಜಿಟಲ್ ಫೋರೆನ್ಸಿಕ್ ಪರೀಕ್ಷೆಯಲ್ಲಿ 624 ಬ್ಯಾಂಕ್ ಖಾತೆಗಳ ವಿವರಗಳನ್ನು ಬಹಿರಂಗ ಪಡಿಸಿದೆ. ಈ ಖಾತೆಗಳಿಗೆ ಸಂಬಂಧಿಸಿದ 4,580ಕ್ಕೂ ಹೆಚ್ಚು ದೂರುಗಳನ್ನು ರಾಷ್ಟ್ರೀಯ ಸೈಬರ್ ಅಪರಾಧ ವರದಿ ಪೋರ್ಟಲ್ ನಲ್ಲಿ ದಾಖಲಿಸಲಾಗಿದೆ. ಖಾತೆಯೊಂದರಲ್ಲೇ 167 ಕೋಟಿ ರೂ.ಗೂ ಅಧಿಕ ವಹಿವಾಟು ನಡೆದಿದೆ ಎಂದು ಹೇಳಿದ್ದಾರೆ.

ಸೈಬರ್ ಪೊಲೀಸ್ ಠಾಣೆಯಲ್ಲಿ ದಾಖಲಾದ ಪ್ರಕರಣವೊಂದರಲ್ಲಿ ವಿವಿಧ ಖಾತೆಗಳಿಗೆ ಹಣ ವರ್ಗಾವಣೆ ಮಾಡಿಸಿಕೊಂಡು 1.38 ಕೋಟಿ ವಂಚಿಸಲಾಗಿದೆ. ವಂಚಕರು ಖಾತೆದಾರರನ್ನು ಇನ್‌ಸ್ಟಾಗ್ರಾಮ್ ಮತ್ತು ಟೆಲಿಗ್ರಾಮ್ ಮೂಲಕ ನೇಮಕ ಮಾಡಿಕೊಂಡಿದ್ದು, ಕಮಿಷನ್ ಮತ್ತು ಉದ್ಯೋಗ ಭರವಸೆ ನೀಡಿ, ಹಣವನ್ನು ಕ್ರಿಪ್ಟೋಕರೆನ್ಸಿಯನ್ನಾಗಿ ವಿದೇಶಕ್ಕೆ ವರ್ಗಾಯಿಸಲಾಗಿದೆ. ಬಂಧಿತರಿಂದ ಲ್ಯಾಪ್‌ಟಾಪ್, 21 ಮೊಬೈಲ್ ಫೋನ್‌ಗಳು, 20 ಸಿಮ್ ಕಾರ್ಡ್‌ಗಳು ಹಾಗೂ ಹಲವು ಡೆಬಿಟ್, ಕ್ರೆಡಿಟ್ ಕಾರ್ಡ್‌ಗಳನ್ನು ವಶಕ್ಕೆ ಪಡೆದಿರುವುದಾಗಿ ಪೊಲೀಸರು ತಿಳಿಸಿದ್ದಾರೆ.

ಸಂತ ಫಿಲೋಮಿನಾ ಕಾಲೇಜಲ್ಲಿ ಕ್ಯಾನ್ಸರ್ ಜಾಗೃತಿ ಶಿಬಿರ



ಸಂತ ಫಿಲೋಮಿನಾ ಕಾಲೇಜಿನಲ್ಲಿ ಕ್ಯಾನ್ಸರ್ ಪತ್ತೆ, ಜಾಗೃತಿ ಶಿಬಿರ ನಡೆಯಿತು.

ಮೈಸೂರು, ಫೆ. 5– ತನ್ನ ಓಕ್ ಜುಬಿಲಿ ವರ್ಷದ ಆಚರಣೆ, ವಿಶ್ವ ಕ್ಯಾನ್ಸರ್ ದಿನದ ಸಂದರ್ಭದಲ್ಲಿ ಮಹಿಳಾ ಸಿಬ್ಬಂದಿ ಮತ್ತು ವಿದ್ಯಾರ್ಥಿನಿಯರಿಗಾಗಿ ಕ್ಯಾನ್ಸರ್ (ಸ್ತನ ಮತ್ತು ಗರ್ಭಾಶಯ) ಪತ್ತೆ, ಜಾಗೃತಿ ಶಿಬಿರವನ್ನು ಬಿಷಪ್ ರೆನೆ ಫ್ಯೂಗಾ ಸ್ಮರಣಾರ್ಥ ಸಂತ ಫಿಲೋಮಿನಾ ಕಾಲೇಜಿನ ಚಾಪೆಲ್ ಸಭಾಂಗಣದಲ್ಲಿ ಆಯೋಜಿಸಿತ್ತು.

ಶಿಬಿರವನ್ನು ಕಾಲೇಜಿನ ರಾಷ್ಟ್ರೀಯ ಸೇವಾ ಯೋಜನೆ, ಯೂತ್ ರೆಡ್ ಕ್ರಾಸ್ ಮತ್ತು ಆಂತರಿಕ ಗುಣಮಟ್ಟ ಭರವಸೆ ಕೋಶ ಘಟಕಗಳು ಮೈಸೂರಿನ ಭಾರತ್ ಕ್ಯಾನ್ಸರ್ ಆಸ್ಪತ್ರೆಯ ಸಹಯೋಗದೊಂದಿಗೆ ಜಂಟಿಯಾಗಿ ಆಯೋಜಿಸಲಾಗಿತ್ತು.

ಆಸ್ಪತ್ರೆಯ ವೈದ್ಯಕೀಯ ತಜ್ಞ ಡಾ. ಸಹನಾ ಗಣೇಶ್, ಡಾ.ಶ್ವೇತಾಂಬರಿ ಜಾಗೃತಿ ಗೋಷ್ಠಿಗಳನ್ನು ನಡೆಸಿ, ಕ್ಯಾನ್ಸರ್ ಅನ್ನು ಮೊದಲೇ ಪತ್ತೆ ಹಚ್ಚುವ ವಿಧಾನಗಳು ಮತ್ತು ಮುನ್ನೆಚ್ಚರಿಕೆ ಕ್ರಮಗಳ ಬಗ್ಗೆ ಮಾಹಿತಿ ನೀಡಿದರು. ನಿಯಮಿತ ತಪಾಸಣೆ ಮತ್ತು ಸಮಯೋಚಿತ ವೈದ್ಯಕೀಯ ಸಮಾಲೋಚನೆಯ ಪ್ರಾಮುಖ್ಯತೆಯನ್ನು ಒತ್ತಿ ಹೇಳಿದರು. ಲೇಡಿಸ್ ಲಾಂಜ್‌ನಲ್ಲಿ ನಡೆದ ವಿಶೇಷ ತಪಾಸಣೆಯಲ್ಲಿ 100ಕ್ಕೂ ಹೆಚ್ಚು ವಿದ್ಯಾರ್ಥಿನಿಯರು, ಅಧ್ಯಾಪಕರು ಮತ್ತು ಪೋಷಕ ಸಿಬ್ಬಂದಿ ಭಾಗವಹಿಸಿದ್ದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಉಪ ಪ್ರಾಂಶುಪಾಲ ರೊನಾಲ್ಡ್ ಪ್ರಕಾಶ್ ಕುಟಿನ್ಹಾ ವಹಿಸಿದ್ದರು. ಜಾನ್ಸನ್ ಅರುಳ್‌ರಾಜ್ ಎಲ್., ಕುಮಾರಿ ದೀಪ್ತಿ ಎಂ.ಜೆ., ಮ್ಯಾಥ್ಯೂ ಸಿ., ಡಾ.ದೀಪಾ ವಿ., ಮತ್ತು ಎ. ಥಾಮಸ್ ಗುಣಶೀಲನ್, ಇಂಗ್ಲಿಷ್ ವಿಭಾಗದ ವಿಲಿಯಂ ಜೋಸೆಫ್ ಮತ್ತು ವಾಣಿಜ್ಯ ವಿಭಾಗದ ಕವಿತಾ ಉಪಸ್ಥಿತರಿದ್ದರು.

ಫೆ.8ರಿಂದ 22ರವರೆಗೆ ಸೋಮನಾಥನ ದಿವ್ಯ ದರ್ಶನ ವ್ಯವಸ್ಥೆ

- ಮಹಾಶಿವರಾತ್ರಿ ಹಿನ್ನೆಲೆಯಲ್ಲಿ ಪ್ರಜಾಪಿತ ಬ್ರಹ್ಮಕುಮಾರಿ ಈಶ್ವರಿಯ ವಿವಿಯಿಂದ ಮೈಸೂರು ವಿಜಯನಗರದಲ್ಲಿ ಸೋಮನಾಥ ದೇವಸ್ಥಾನದ ಪ್ರತಿರೂಪ ಸ್ಥಾಪನೆ
- 15 ದಿನಗಳ ಕಾಲ ಹಲವು ಧಾರ್ಮಿಕ ಕಾರ್ಯಗಳು



ಫೆ.8ರಿಂದ 22ರವರೆಗೆ ಶ್ರೀ ಸೋಮನಾಥ ದೇವಾಲಯದ ದಿವ್ಯದರ್ಶನದ ಪೋಸ್ಟರ್ ಅನ್ನು ರಾಜಯೋಗಿನಿ ಡಾ.ಲಕ್ಷ್ಮೀಜಿ ಬಿಡುಗಡೆ ಮಾಡಿದರು. ಪ್ರಜಾಪಿತ ಬ್ರಹ್ಮಾಕುಮಾರಿ ಈಶ್ವರಿಯ ವಿವಿಪ್ರಾಂಶುಪಾಲರಾದ ಬ್ರಹ್ಮಕುಮಾರ ರಂಗನಾಥಜಿ ಚಿತ್ರದಲ್ಲಿದ್ದಾರೆ.

ಮೈಸೂರು,ಫೆ.5(ಎಂಟಿವೈ)– ಮಹಾಶಿವರಾತ್ರಿ ಹಿನ್ನೆಲೆಯಲ್ಲಿ ಮೈಸೂರಿನ ಹುಣಸೂರು ರಸ್ತೆಯ ಐಶ್ವರ್ಯ ಪೆಟ್ರೋಲ್ ಮುಂಭಾಗದ ಮೈದಾನದಲ್ಲಿ ಫೆ.8ರಿಂದ 22ರವರೆಗೆ ಗುಜರಾತಿನ ಸುಪ್ರಸಿದ್ಧ ಶ್ರೀ ಸೋಮನಾಥ ದೇವಾಲಯದ ದಿವ್ಯದರ್ಶನ ವ್ಯವಸ್ಥೆ ಮಾಡಲಾಗಿದ್ದು, ಪ್ರತಿದಿನ ಬೆಳಗ್ಗೆ 8 ರಿಂದ ರಾತ್ರಿ 9 ಗಂಟೆವರೆಗೆ ಭಕ್ತರು ದರ್ಶನ ಪಡೆಯಬಹುದು ಎಂದು ಪ್ರಜಾಪಿತ ಬ್ರಹ್ಮಾಕುಮಾರಿ ಈಶ್ವರಿಯ ವಿಶ್ವವಿದ್ಯಾಲಯದ ಪ್ರಾಂಶುಪಾಲರಾದ ಬ್ರಹ್ಮಕುಮಾರ ರಂಗನಾಥಜಿ ತಿಳಿಸಿದ್ದಾರೆ.

ಮೈಸೂರಿನ ಯಾದವಗಿರಿಯಲ್ಲಿರುವ ಪ್ರಜಾಪಿತ ಬ್ರಹ್ಮಾಕುಮಾರಿ ಸಂಸ್ಥೆಯ ಸಭಾಂಗಣದಲ್ಲಿ ಗುರುವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಪ್ರಜಾಪಿತ ಬ್ರಹ್ಮಾಕುಮಾರಿ ಈಶ್ವರಿಯ ವಿಶ್ವವಿದ್ಯಾಲಯದ 90ನೇ ವಾರ್ಷಿಕೋತ್ಸವ ಹಾಗೂ ಮಹಾಶಿವರಾತ್ರಿಯ ಪ್ರಯುಕ್ತ ಭಕ್ತರಿಗೆ ದ್ವಾದಶ ಜ್ಯೋತಿರ್ಲಿಂಗಗಳಲ್ಲಿ ಒಂದಾಗಿರುವ ಗುಜರಾತಿನ ಅರಬಿ ಸಮುದ್ರ ತಟದಲ್ಲಿರುವ ಶ್ರೀ ಸೋಮನಾಥ ಮಂದಿರದ ಪ್ರತಿರೂಪ ನಿರ್ಮಿಸಲಾಗಿದೆ. ಇದಲ್ಲದೇ ಮಾದಕದ್ರವ್ಯ ಸೇವನೆ ವಿರುದ್ಧ ಜಾಗೃತಿ ಮೂಡಿಸುವ ಹಾಗೂ ಮನಸ್ಸಿಗೆ ಮಸಾಜು ಮಾಡುವ ಐದು ನಿಮಿಷಗಳ ಕಂಪ್ಯೂಟರ್ ಕಾರ್ಯಕ್ರಮ–ಮೈಂಡ್ ಸ್ಪಾ, ಗೃಹಸ್ಥದಲ್ಲಿ ಸಾಮರಸ್ಯದಿಂದಿರಲು ಪ್ರಾಯೋಗಿಕ ಚಿತ್ರ ಪ್ರದರ್ಶನ, ವಿದ್ಯಾರ್ಥಿ ಜೀವನದಲ್ಲಿ ಏಕಾಗ್ರತೆ ಮತ್ತು ಗುರಿ ಸಾಧನೆಯ ಬಗ್ಗೆ ಸಮಾಲೋಚನೆ, ಮೌಲ್ಯಗಳ ಪ್ರಯೋಗ ವಿವರಿಸುವ ಆಟಗಳು ಮತ್ತು ಧ್ಯಾನ ಶಿಬಿರ, ಪ್ರತಿದಿನ ಚಿಂತನ, ಉಪನ್ಯಾಸ, ಸಾಂಸ್ಕೃತಿಕ ಕಾರ್ಯಕ್ರಮ, ವಾಹನಗಳ ಮೂಲಕ ಕಾರ್ಯಕ್ರಮಗಳ ಪ್ರಸಾರ ಮತ್ತು ಮಾದಕ ದ್ರವ್ಯಗಳ ಸೇವನೆಯ ವಿರುದ್ಧ ಜಾಗೃತಿ ಕಾರ್ಯಕ್ರಮ ಆಯೋಜಿಸಲಾಗಿದೆ ಎಂದು ತಿಳಿಸಿದರು.

ಫೆ.8ರಂದು ಸಂಜೆ 6 ಗಂಟೆಗೆ ನಡೆಯುವ ಉದ್ಘಾಟನಾ ಸಮಾರಂಭ ಸಾನಿಧ್ಯವನ್ನು ಮೈಸೂರು ಉಪ ವಲಯ ಮುಖ್ಯ ಸಂಚಾಲಕರಾದ ರಾಜಯೋಗಿನಿ ಡಾ.ಲಕ್ಷ್ಮೀಜಿ ವಹಿಸಲಿದ್ದಾರೆ. ಬೆಂಗಳೂರಿನ ವಿಶ್ವ ಒಕ್ಕಲಿಗ ಮಹಾಸಂಸ್ಥಾನ ಮಠದ ಡಾ.ನಿಶ್ಚಲಾನಂದನಾಥ ಸ್ವಾಮೀಜಿಕಾರ್ಯಕ್ರಮಕ್ಕೆ ಚಾಲನೆ ನೀಡಲಿದ್ದಾರೆ. ಜಿಲ್ಲಾ ಉಸ್ತುವಾರಿ ಸಚಿವ ಡಾ.ಹೆಚ್.ಸಿ. ಮಹದೇವಪ್ಪ, ಶಾಸಕರಾದ ಕೆ.ಹರೀಶ್‌ಗೌಡ, ಡಿ.ರವಿಶಂಕರ್ ಅತಿಥಿಯಾಗಿ ಪಾಲ್ಗೊಳ್ಳಲಿದ್ದು, ಮುಕ್ತ ವಿವಿ ಕುಲಪತಿ ಡಾ. ಶರಣಪ್ಪ ವಿ. ಹಲಸೆ, ಹಿರಿಯ ನ್ಯಾಯವಾದಿ ಅಶೋಕ್ ಹಾರನಹಳ್ಳಿ, ಆದಿಚುಂಚನಗಿರಿ ವಿವಿ ಕುಲಸಚಿವ ಡಾ.ಸಿ.ಕೆ.ಸುಬ್ಬರಾಯ ವಿಶೇಷ ಅತಿಥಿಯಾಗಿ ಪಾಲ್ಗೊಳ್ಳುವರು ಎಂದರು.

ಈ ವೇಳೆ ಹೆಸರಾಂತ ಸಾಹಿತಿ ಕೆ.ಸಿ.ಶಿವಪ್ಪ ಮತ್ತು ಅಂತಾರಾಷ್ಟ್ರೀಯ ನೃತ್ಯಪಟು ಡಾ. ವಸುಂಧರಾ ದೊರೆಸ್ವಾಮಿ ಅವರಿಗೆ ಈಶ್ವರಿಯ ಪ್ರಶಸ್ತಿ ನೀಡಿ ಗೌರವಿಸಲಾಗುವುದು. ಗಾಯಕಿ ಅಮೂಲ್ಯ ಅವರಿಂದ ಗಾಯನ ಕಾರ್ಯಕ್ರಮ ಇರುತ್ತದೆ. ಸಂಸ್ಥೆಯ ಆರು ದಶಕಗಳ ವಾರ್ಷಿಕೋತ್ಸವ ಸಂದರ್ಭದಲ್ಲಿ ಆರಂಭದಿಂದ ಈವರೆಗಿನ ಎಲ್ಲಾ ಬೆಳವಣಿಗೆಯನ್ನು ಒಳಗೊಂಡ ಛಾಯಾಚಿತ್ರ ಪ್ರದರ್ಶನ ನಡೆಯಲಿದೆ. ಉಡುಪಿ ಪೇಜಾವರ ಮಠದ ವಿಶ್ವಪ್ರಸನ್ನತೀರ್ಥ ಸ್ವಾಮೀಜಿ ಉದ್ಘಾಟಿಸುವರು. ಯೋಗಾನರಸಿಂಹ ಸ್ವಾಮಿ ದೇವಸ್ಥಾನದ ಡಾ.ಭಾಷ್ಯಂ ಸ್ವಾಮೀಜಿ ಆಶೀರ್ವಚನ ನೀಡುವರು. ಶಾಸಕ ಟಿ.ಎಸ್. ಶ್ರೀವತ್ಸ ಮತ್ತು ಆರ್ಟ್ ಆಫ್ ಲೀವಿಂಗ್‌ನ ಮುಖ್ಯಸ್ಥ ಸ್ವಾಮಿ ದಿವ್ಯಪಾದಾಜಿ ಮುಖ್ಯ ಅತಿಥಿಯಾಗಿ ಪಾಲ್ಗೊಳ್ಳುವರು ಎಂದು ತಿಳಿಸಿದರು.

ಫೆ.13ರಂದು ಸಂಜೆ 6.30ಕ್ಕೆ ವಿಶ್ವ ಶಾಂತಿಗಾಗಿ ಸರ್ವ ಧರ್ಮ ಸಭೆ ನಡೆಯಲಿದೆ. ಮೈಸೂರು ಉಪ ವಲಯದ ಮುಖ್ಯ ಸಂಚಾಲಕಿ ಡಾ. ಲಕ್ಷ್ಮೀಜಿ ಸಾನ್ನಿಧ್ಯ ವಹಿಸಲಿದ್ದು, ಅರಮೇರಿ ಕಳಂಚೇರಿ ಮಠದ ಶಾಂತ ಮಲ್ಲಿಕಾರ್ಜುನಸ್ವಾಮೀಜಿ ಆಶೀರ್ವಚನ ನೀಡುವರು. ಸರ್ ಖಾಜಿ ಮೌಲಾನಾ ಮೊಹಮ್ಮದ್ ಉಸ್ಮಾನ್ ಶರೀಫ್, ರುಹುಲ್ಲ ಖಾದಿರಿ ಸಿಲ್ಸಿಲಾದ ರುಹುಲ್ಲಾ ಶಾಹ್ ಖಾದಿರಿ, ಬಿಶಪ್ ಡಾ.ಫ್ರಾನ್ಸಿಸ್ ಸೆರ್ರಾವ್, ಮೈಸೂರು ಗುರುದ್ವಾರದ ಶ್ರೀ ಗುರು ಸಿಂಗ್ ಸಭಾದ ಪ್ರಧಾನ ಕಾರ್ಯದರ್ಶಿ ಹರ್‌ಪ್ರೀತ್ ಸಿಂಗ್ ಜಿ ಮುಖ್ಯ ಅತಿಥಿಯಾಗಿ ಪಾಲ್ಗೊಳ್ಳುವುದಾಗಿ ಹೇಳಿದರು.

ಫೆ.15ರಂದು ಸಂಜೆ 6.30ಕ್ಕೆ ಡಾ. ಲಕ್ಷ್ಮೀಜಿ ಸಾನ್ನಿಧ್ಯದಲ್ಲಿ ಶಿವರಾತ್ರಿ ಕಾರ್ಯಕ್ರಮ ನಡೆಯಲಿದೆ. ಕಾವೇರಿ ಎಂಜಿನಿಯರಿಂಗ್ ಕಾಲೇಜಿನ ಪ್ರಾಂಶುಪಾಲ ಡಾ.ಆರ್.ದೀಪು, ಕಾರಾಗೃಹದ ಸಹಾಯಕ ಅಧೀಕ್ಷಕಿ ಎಂ.ದೀಪಾ, ಭಾರತ್ ಇಂಟರ್ ನ್ಯಾಷನಲ್ ಟ್ರಾವೆಲ್ಸ್‌ನ ಮಹೇಂದ್ರ ಸಾಲಿಯಾನ್, ಇಂಡಿಯಾ ಟಿಬೆಟ್‌ನ ಪ್ರಾದೇಶಿಕ ಸಂಯೋಜಕ ಜಯಪ್ರಕಾಶ್‌ರಾಜೇ ಅರಸ್, ಉದ್ಯಮಿ ಅಶೋಕ್ ಗೋವಿಂದೇಗೌಡ ಮತ್ತು ಬಿಜೆಪಿ ಅಲ್ಪಸಂಖ್ಯಾತರ ಮೋರ್ಚಾ ರಾಜ್ಯಾಧ್ಯಕ್ಷ ಡಾ. ಅನಿಲ್ ಥಾಮಸ್ ಮುಖ್ಯ ಅತಿಥಿಯಾಗಿ ಪಾಲ್ಗೊಳ್ಳುವರು ಎಂದರು.

ಫೆ.22ರಂದು ಸಮಾರೋಪ ಸಮಾರಂಭ ನಡೆಯಲಿದ್ದು, ಸಂಸದ ಹಾಗೂ ಹೃದ್ರೋಗ ತಜ್ಞ ಡಾ.ಸಿ.ಎನ್.ಮಂಜುನಾಥ್ ಮುಖ್ಯ ಅತಿಥಿಯಾಗಿ ಪಾಲ್ಗೊಂಡು, ಈಶ್ವರಿಯ ಪ್ರಶಸ್ತಿ ಸ್ವೀಕರಿಸುವರು. ವಿಶ್ರಾಂತ ಕುಲಪತಿಗಳಾದ ಪ್ರೊ.ಕೆ.ಎಸ್. ರಂಗಪ್ಪ, ಪ್ರೊ.ಇ.ಟಿ. ಪುಟ್ಟಯ್ಯ, ಹಿರಿಯ ವಕೀಲ ಓ. ಶಾಮ್ ಭಟ್, ವಿಶ್ರಾಂತ ಜಿಲ್ಲಾ ನ್ಯಾಯಾಧೀಶ ಸಿ.ಜಿ. ಹುನಗುಂದ ಗೌರವ ಅತಿಥಿಯಾಗಿ ಪಾಲ್ಗೊಳ್ಳಲಿದ್ದಾರೆ ಎಂದರು. ಪ್ರತಿದಿನ ಸಂಜೆ 6.15ರಿಂದ 6.45ರವರೆಗೆ ಬ್ರಹ್ಮಾಕುಮಾರಿ ಸಹೋದರಿಯರಿಂದ ಚಿಂತನ ಮತ್ತು ಧ್ಯಾನ ಹಾಗೂ ಪ್ರತಿದಿನ ಸಂಜೆ 7ರಿಂದ ರಾತ್ರಿ 8 ಗಂಟೆವರೆಗೆ ಉಪನ್ಯಾಸ, ರಾತ್ರಿ 8 ರಿಂದ 9 ಗಂಟೆವರೆಗೆ ಸಾಂಸ್ಕೃತಿಕ ಕಾರ್ಯಕ್ರಮ ಜರುಗಲಿದೆ ಎಂದು ವಿವರಿಸಿದರು. ಸುದ್ದಿಗೋಷ್ಠಿಯಲ್ಲಿ ರಾಜಯೋಗಿನಿ ಡಾ. ಲಕ್ಷ್ಮೀಜಿ ಇದ್ದರು.

ಬಜೆಟ್‌ನಲ್ಲಿ ರೈಲ್ವೆ ವಲಯಕ್ಕೆ ಆದ್ಯತೆ; ಮಾಜಿ ಪ್ರಧಾನಿ ದೇವೇಗೌಡರಿಂದ ಸಚಿವರಿಗೆ ಅಭಿನಂದನೆ

ಬೆಂಗಳೂರು-ಹೈದರಾಬಾದ್ ಹೈ-ಸ್ಪೀಡ್ ರೈಲ್ವೆ ಕಾರಿಡಾರ್ ಅನ್ನು ಬೀದರ್‌ಗೆ ವಿಸ್ತರಿಸಲು ಮನವಿ



ನವದೆಹಲಿ,ಫೆ.5- ಕೇಂದ್ರ ಬಜೆಟ್‌ನಲ್ಲಿ ರೈಲ್ವೆ ವಲಯಕ್ಕೆ ಹೆಚ್ಚು ಅನುದಾನ ಮೀಸಲಿಟ್ಟು ಹಲವಾರು ಯೋಜನೆಗಳನ್ನು ಘೋಷಿಸಿರುವ ಹಿನ್ನೆಲೆಯಲ್ಲಿ ಮಾಜಿ ಪ್ರಧಾನಿ ಹೆಚ್.ಡಿ.ದೇವೇಗೌಡರು, ಕೇಂದ್ರ ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ಅವರನ್ನು ಅಭಿನಂದಿಸಿದ್ದಾರೆ.

ಈ ಸಂಬಂಧ ಅವರಿಗೆ ಪತ್ರ ಬರೆದಿರುವ ದೇವೇಗೌಡರು, ಬಜೆಟ್‌ನಲ್ಲಿ ಸುಸ್ಥಿರ ಸಾರಿಗೆ ಮತ್ತು ಆರ್ಥಿಕ ಬೆಳವಣಿಗೆಗಾಗಿ ಸುಮಾರು 4,000 ಕಿ.ಮೀ. ಉದ್ದದ ಏಳು ಹೊಸ ಹೈ-ಸ್ಪೀಡ್ ರೈಲು ಕಾರಿಡಾರ್‌ಗಳನ್ನು ಘೋಷಿಸಿರುವುದು ಮಹತ್ವದ ನಿರ್ಧಾರವಾಗಿದೆ ಎಂದು ಪ್ರಶಂಸಿಸಿದ್ದಾರೆ. ಚೆನ್ನೈ-ಬೆಂಗಳೂರು-ಹೈದರಾಬಾದ್ (ಹೈದರಾಬಾದ್-ಚೆನ್ನೈ ಮತ್ತು ಚೆನ್ನೈ-ಬೆಂಗಳೂರು ವಿಭಾಗಗಳೊಂದಿಗೆ) ದಕ್ಷಿಣ ಭಾಗದಲ್ಲಿ ಹೈ-ಸ್ಪೀಡ್ ತ್ರಿಕೋನವನ್ನು ಸೃಷ್ಟಿಸಲಾಗುತ್ತಿದೆ. ಇದು ಆಂಧ್ರ ಪ್ರದೇಶ, ತೆಲಂಗಾಣ, ತಮಿಳುನಾಡು ಮತ್ತು ಕರ್ನಾಟಕದ ಜನರ ಆಕಾಂಕ್ಷೆಗಳು ಮತ್ತು ಅವರ ಚಲನಶೀಲತೆಯ ಅಗತ್ಯಗಳನ್ನು ಪೂರೈಸುವುದರೊಂದಿಗೆ ಕೇರಳ ಮತ್ತು ಪುದುಚೇರಿಗೆ ಪ್ರಯೋಜನವನ್ನು ನೀಡುತ್ತದೆ.

ಮುಂಬೈ-ಪುಣೆ, ಪುಣೆ-ಹೈದರಾಬಾದ್, ದೆಹಲಿ-ವಾರಣಾಸಿ ಮತ್ತು ವಾರಣಾಸಿ-ಸಿಲಿಗುರಿಯಂತಹ ಇತರ ಕಾರಿಡಾರ್‌ಗಳು ದೇಶಾದ್ಯಂತ ಪ್ರಮುಖ ನಗರ, ಕೈಗಾರಿಕಾ ಮತ್ತು ಆಧ್ಯಾತ್ಮಿಕ ಕೇಂದ್ರಗಳನ್ನು ಸಂಪರ್ಕಿಸುತ್ತವೆ. ಪ್ರಯಾಣದ ಸಮಯವನ್ನು ಕಡಿಮೆ ಮಾಡುತ್ತವೆ ಮತ್ತು 16 ಲಕ್ಷ ಕೋಟಿ ರೂ. ಹೂಡಿಕೆಗಳನ್ನು ಆಕರ್ಷಿಸುತ್ತವೆ. ಈ ದೂರದೃಷ್ಟಿಯ ಉಪಕ್ರಮವು ವಿಕಸಿತ ಭಾರತ-2047ರ ಉದಾತ್ತ ಕನಸಿನೊಂದಿಗೆ ಸರಾಗವಾಗಿ ಹೊಂದಿಕೆಯಾಗುವುದರೊಂದಿಗೆ ರಾಷ್ಟ್ರದ ಪ್ರಯಾಣವನ್ನು ವೇಗಗೊಳಿಸುತ್ತದೆ ಎಂದು ಅವರು ತಮ್ಮ ಪತ್ರದಲ್ಲಿ ಅಭಿಪ್ರಾಯಿಸಿದ್ದಾರೆ.

ಬೀದರ್ ಸೇರಿಸಲು ಮನವಿ: ಬೆಂಗಳೂರು-ಹೈದರಾಬಾದ್ ಹೈ-ಸ್ಪೀಡ್ ರೈಲ್ವೆ ಕಾರಿಡಾರ್ ಅನ್ನು ಬೀದರ್‌ವರೆಗೆ ವಿಸ್ತರಿಸಬೇಕು. ಇದು ಉತ್ತರ ಕರ್ನಾಟಕ ಮತ್ತು ತೆಲಂಗಾಣ ಪ್ರದೇಶಗಳಿಗೆ ಹೆಚ್ಚು ಅನುಕೂಲ ಆಗುತ್ತದೆ. ಬೆಂಗಳೂರು ಮತ್ತು ಬೆಳಗಾವಿ ನಡುವಿನ ಅಂತರವು ಸುಮಾರು 600 ಕಿ.ಮೀ., ಮತ್ತು ಪ್ರಸ್ತುತ 8-10 ಗಂಟೆ ಪ್ರಯಾಣದ ಸಮಯ ಗಣನೀಯವಾಗಿ ಕಡಿಮೆಯಾಗುತ್ತದೆ. ಇದರಿಂದ ಉತ್ತರ ಕರ್ನಾಟಕ ಮತ್ತು ದಕ್ಷಿಣ ಕರ್ನಾಟಕ ಪ್ರದೇಶಗಳಿಗೆ ಪ್ರಗತಿಗೆ ಹೈ-ಸ್ಪೀಡ್ ರೈಲು ಕಾರಿಡಾರ್ ತುಂಬಾ ಪ್ರಯೋಜನಕಾರಿ ಆಗಲಿದೆ ಎಂದು ಹೆಚ್.ಡಿ.ದೇವೇಗೌಡರು ಮನವಿ ಮಾಡಿದ್ದಾರೆ.


ಹಳೇ ಮೈಸೂರು ಭಾಗದ ಹಲವು ರೈಲ್ವೆ ಯೋಜನೆ ಕುರಿತು ರೈಲ್ವೆ ಸಚಿವರೊಂದಿಗೆ ಕುಮಾರಸ್ವಾಮಿ ಮಹತ್ವದ ಚರ್ಚೆ

ಚಾಮುಂಡಿ ಎಕ್ಸ್‌ಪ್ರೆಸ್‌ಗೆ ಹೆಚ್ಚುವರಿ ಬೋಗಿಗಳು, ಪಾಂಡವಪುರದಲ್ಲಿ ಗೂಡ್ಸ್ ಯಾರ್ಡ್, ಹೆಜ್ಜಾಲ-ಚಾ.ನಗರ ಹೊಸ ರೈಲು ಮಾರ್ಗ, ವಿಸಿ ಫಾರ್ಮ್ ಬಳಿ ಮೇಲ್ಸೇತುವೆ ಸೇರಿದಂತೆ ಹತ್ತಾರು ಬೇಡಿಕೆ ಈಡೇರಿಕೆಗೆ ಮನವಿ

ನವದೆಹಲಿ,ಫೆ.5-ಮೈಸೂರು-ಬೆಂಗಳೂರು ನಡುವೆ ಸಂಚರಿಸುವ ಚಾಮುಂಡಿ ಎಕ್ಸ್‌ಪ್ರೆಸ್ ರೈಲಿಗೆ ಹೆಚ್ಚುವರಿ ಬೋಗಿಗಳ ಜೋಡಣೆ ಸೇರಿದಂತೆ ಹಲವು ಬೇಡಿಕೆಗಳ ಬಗ್ಗೆ ಕೇಂದ್ರದ ಬೃಹತ್ ಕೈಗಾರಿಕೆ ಮತ್ತು ಉಕ್ಕು ಖಾತೆ ಸಚಿವ ಹೆಚ್.ಡಿ.ಕುಮಾರಸ್ವಾಮಿ ಅವರು ರೈಲ್ವೆ ಸಚಿವ ಅಶ್ವಿನಿ ವೈಷ್ಣವ ಅವರೊಂದಿಗೆ ಮಾತುಕತೆ ನಡೆಸಿದರು.

ಗುರುವಾರ ಮಧ್ಯಾಹ್ನ ಸಂಸತ್ ಭವನದಲ್ಲಿರುವ ತಮ್ಮ ಕಚೇರಿಗೆ ಆಗಮಿಸಿದ ರೈಲ್ವೆ ಸಚಿವರೊಂದಿಗೆ ಚರ್ಚಿಸಿದ ಕುಮಾರಸ್ವಾಮಿ, ಮುಖ್ಯವಾಗಿ ಬೆಂಗಳೂರು-ಮೈಸೂರು ನಡುವಿನ ಮಾರ್ಗಕ್ಕೆ ಸಂಬಂಧಿಸಿದಂತೆ ನೆನೆಗುದಿಗೆ ಬಿದ್ದಿರುವ ಸಾರ್ವಜನಿಕರ ರೈಲ್ವೆ ಬೇಡಿಕೆಗಳ ಬಗ್ಗೆ ಮನವಿಗಳನ್ನು ಸಲ್ಲಿಸಿದರು.

ಮೈಸೂರು-ಬೆಂಗಳೂರು ನಡುವೆ ಅಪಾರ ಸಂಖ್ಯೆಯ ಪ್ರಯಾಣಿಕರು ನಿತ್ಯ ಸಂಚರಿಸುವುದರಿಂದ ಚಾಮುಂಡಿ ಎಕ್ಸ್‌ಪ್ರೆಸ್ ರೈಲಿನ(ಸಂಖ್ಯೆ 16215) ಬೋಗಿಗಳ ಸಂಖ್ಯೆಯನ್ನು ಹೆಚ್ಚಿಸುವುದು, ಬೆಂಗಳೂರು-ಮಂಗಳೂರು-ಮುರುಡೇಶ್ವರ ಮಾರ್ಗದ ರೈಲು(ಸಂಖ್ಯೆ 16585) ಮಂಡ್ಯ ಹಾಗೂ ಮದ್ದೂರಿನಲ್ಲಿ ನಿಲುಗಡೆ ನೀಡುವುದು, ಮದ್ದೂರು ರೈಲು ನಿಲ್ದಾಣವನ್ನು ಮೇಲ್ದರ್ಜೆಗೇರಿಸುವುದು, ಮದ್ದೂರು ತಾಲೂಕು ಹನಕೆರೆ ಗ್ರಾಮದ ಬಳಿಯ ಲೆವೆಲ್ ಕ್ರಾಸಿಂಗ್(ಸಂಖ್ಯೆ 60) ಅನ್ನು ಮೇಲ್ದರ್ಜೆಗೇರಿಸುವುದು, ಚನ್ನಪಟ್ಟಣದಲ್ಲಿ ಎಕ್ಸ್‌ಪ್ರೆಸ್ ರೈಲುಗಳ ನಿಲುಗಡೆ ಸೇರಿದಂತೆ ಹಲವು ಬೇಡಿಕೆಗಳ ಈಡೇರಿಕೆಗೆ ಮನವಿ ಮಾಡಿದರು.



ನವದೆಹಲಿಯಲ್ಲಿ ಗುರುವಾರ ಕೇಂದ್ರದ ಬೃಹತ್ ಕೈಗಾರಿಕೆ ಮತ್ತು ಉಕ್ಕು ಖಾತೆ ಸಚಿವ ಹೆಚ್.ಡಿ.ಕುಮಾರಸ್ವಾಮಿ ಹಾಗೂ ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ಕರ್ನಾಟಕದ ರೈಲ್ವೆ ಯೋಜನೆಗಳ ಬಗ್ಗೆ ಚರ್ಚೆ ನಡೆಸಿದರು.

ಸೇತುವೆ ನಿರ್ಮಾಣಕ್ಕೆ ಮನವಿ: ಮಂಡ್ಯ-ಮೇಲುಕೋಟೆ ರಸ್ತೆಯ ವಿ.ಸಿ.ಫಾರ್ಮ್ ಗೇಟ್‌ನಲ್ಲಿ ರೈಲ್ವೆ ಓವರ್‌ಬ್ರಿಡ್ಜ್ ನಿರ್ಮಾಣ ಅತ್ಯಗತ್ಯವಾಗಿದೆ. ಈ ಮಾರ್ಗದಲ್ಲಿ ರೈಲುಗಳ ನಿರಂತರ ಸಂಚಾರದಿಂದಾಗಿ, ರೈತರು ಮತ್ತು ಸಾರ್ವಜನಿಕರು ದೀರ್ಘಕಾಲದಿಂದ ಸಂಚಾರ ಅಡಚಣೆ ಎದುರಿಸುತ್ತಿದ್ದಾರೆ. ದೈನಂದಿನ ಪ್ರಯಾಣ ಮತ್ತು ಕೃಷಿ ಉತ್ಪನ್ನಗಳ ಸಾಗಣೆ ಮೇಲೆ ಪ್ರತಿಕೂಲ ಪರಿಣಾಮ ಬೀರಿದೆ. ಹೀಗಾಗಿ ಈ ಜಾಗದಲ್ಲಿ ರೈಲ್ವೆ ಓವರ್‌ಬ್ರಿಡ್ಜ್ ನಿರ್ಮಾಣ ಮಾಡಬೇಕು. ಹಾಗೆಯೇ ಮಂಡ್ಯ ಜಿಲ್ಲೆಯ ನೊಡೇಕೊಪ್ಪಲು ಬಳಿ ರೈತರು ಮತ್ತು ಶಾಲಾ ಮಕ್ಕಳ ಅನುಕೂಲಕ್ಕಾಗಿ ರೈಲ್ವೆ ಅಂಡರ್ ಪಾಸ್ ನಿರ್ಮಿಸಬೇಕು. ಮಂಡ್ಯದಿಂದ ತೂಬಿನಕೆರೆ, ಪಾಂಡವಪುರದಿಂದ ಕೆಆರ್‌ಎಸ್, ಕೆ.ಆರ್.ಪೇಟೆ ಮತ್ತು ಮಡಿಕೇರಿ ಕಡೆಗೆ ಹೆಚ್ಚು ವಾಹನಗಳು ಸಂಚರಿಸುವುದರಿಂದ ದೊಡ್ಡಬ್ಯಾಡರಹಳ್ಳಿಯಲ್ಲಿ ತೀವ್ರ ದಟ್ಟಣೆ ಉಂಟಾಗುತ್ತದೆ. ಆದ್ದರಿಂದ ದೊಡ್ಡಬ್ಯಾಡರಹಳ್ಳಿಯಲ್ಲಿ ರೈಲ್ವೆ ಮೇಲ್ಸೇತುವೆ ನಿರ್ಮಿಸಿಕೊಡಬೇಕು. ರಾಮನಗರ ಮತ್ತು ಚನ್ನಪಟ್ಟಣದ ನಡುವೆ ಬರುವ ಲೆವೆಲ್ ಕ್ರಾಸಿಂಗ್(ಸಂಖ್ಯೆ 44)ನಲ್ಲಿ ಮೇಲ್ಸೇತುವೆ ನಿರ್ಮಿಸಬೇಕು ಎಂದು ಕೋರಿದರು.

ಗೂಡ್ಸ್ ಯಾರ್ಡ್‌ಗೆ ಒತ್ತಾಯ: ಪಾಂಡವಪುರ ಪಟ್ಟಣವು ಕೆ.ಆರ್.ಪೇಟೆ, ನಾಗಮಂಗಲ ಮತ್ತು ಶ್ರೀರಂಗಪಟ್ಟಣ ತಾಲೂಕುಗಳ ಪ್ರಮುಖ ವ್ಯಾಪಾರ ಕೇಂದ್ರ ಸ್ಥಾನವಾಗಿದೆ. ಇಲ್ಲಿಗೆ ಕೃಷಿ ಮತ್ತು ವಾಣಿಜ್ಯ ಸರಕುಗಳ ಸಾಗಣೆಗೆ ಅನುಕೂಲವಾಗುವಂತೆ ರೈತರು ಮತ್ತು ವ್ಯಾಪಾರಿಗಳಿಗೆ ಸಾರಿಗೆ ವೆಚ್ಚವನ್ನು ಕಡಿಮೆ ಮಾಡುವುದು ಅತ್ಯವಶ್ಯವಾಗಿದೆ. ಅಲ್ಲಿನ ಒಟ್ಟಾರೆ ಆರ್ಥಿಕ ಬೆಳವಣಿಗೆಗೆ ಉತ್ತೇಜನ ನೀಡಲು ಪಾಂಡವಪುರದಲ್ಲಿ ಗೂಡ್ಸ್ ಯಾರ್ಡ್ ಸ್ಥಾಪನೆ ಮಾಡಬೇಕು.

ಹೊಸ ರೈಲು ಮಾರ್ಗಕ್ಕೆ ಆಗ್ರಹ

ಮಂಗಳೂರು ಮತ್ತು ಹಾಸನ ಮಾರ್ಗವಾಗಿ ಮುಂಬಯಿ-ಬೆಂಗಳೂರು-ಮುಂಬಯಿ ನಗರಗಳಿಗೆ ಸಂಪರ್ಕಿಸಲು ಹೊಸ ರೈಲು ಮಂಜೂರು ಮಾಡಬೇಕು. ಹೆಜ್ಜಾಲ-ಚಾಮರಾಜನಗರ ಹೊಸ ರೈಲು ಮಾರ್ಗ ಮಂಜೂರು ಮಾಡಬೇಕು. ಈ ಮಾರ್ಗವು ಹೆಜ್ಜಾಲ, ಕನಕಪುರ, ಮಳವಳ್ಳಿ, ಕೊಳ್ಳೇಗಾಲ, ಯಳಂದೂರು ಸಂಪರ್ಕಿಸುವುದರಿಂದ ಈ ಭಾಗದ ಆರ್ಥಿಕ ಚಟುವಟಿಕೆಗಳಿಗೆ ಹೆಚ್ಚು ಉತ್ತೇಜನ ನೀಡಿದಂತಾಗುತ್ತದೆ ಎಂದು ರೈಲ್ವೆ ಸಚಿವರಿಗೆ ಕುಮಾರಸ್ವಾಮಿ ಮನದಟ್ಟು ಮಾಡಿಕೊಟ್ಟರು.

ಹಾಸನ ಜಿಲ್ಲೆಯ ಸಕಲೇಶಪುರ ರೈಲು ನಿಲ್ದಾಣದ ಅಭಿವೃದ್ಧಿ, ಕೊಪ್ಪಳ ಜಿಲ್ಲೆಯಲ್ಲಿ ಹೊಸ ಬ್ರಾಡ್‌ಗೇಜ್ ರೈಲು ಮಾರ್ಗಗಳ ನಿರ್ಮಾಣಕ್ಕೆ ಅನುದಾನ, ಹೊಸಕೋಟೆ ತಾಲೂಕಿನ ತಿಂಡ್ಲು ಬಳಿಯ ಸರ್ವೀಸ್ ರಸ್ತೆಯಲ್ಲಿ ಮ್ಯಾಜಿಕ್ ಬಾಕ್ಸ್‌ಗಳನ್ನು ಅಳವಡಿಸುವುದು ಸೇರಿದಂತೆ ಹಲವು ಪ್ರಸ್ತಾವಗಳನ್ನು ಮುಂದಿಟ್ಟರು. ಇದಕ್ಕೆ ಸಕಾರಾತ್ಮಕವಾಗಿ ಸ್ಪಂದಿಸಿದ ರೈಲ್ವೆ ಸಚಿವ ಅಶ್ವಿನಿ ವೈಷ್ಣವ್, ಎಲ್ಲಾ ಬೇಡಿಕೆಗಳ ಬಗ್ಗೆ ಸೂಕ್ತ ಕ್ರಮ ಕೈಗೊಳ್ಳುವ ಭರವಸೆ ನೀಡಿದರು.

ಮೈಸೂರು ವಿವಿಯ ಪ್ರಸಾರಾಂಗ ಪುಸ್ತಕಗಳ ನಕಲು ಮಾರಾಟ; ಕಾನೂನು ಕ್ರಮಕ್ಕೆ ನಿರ್ಧಾರ

ಪ್ರಸಾರಾಂಗ ನಿರ್ದೇಶಕ ಪ್ರೊ.ಎಂ.ನಂಜಯ್ಯ ಹೊಂಗನೂರು ಎಚ್ಚರಿಕೆ



ಮೈಸೂರು ವಿವಿ ಪ್ರಸಾರಾಂಗದಲ್ಲಿ ನಡೆದ ಪ್ರಚಾರೋಪನ್ಯಾಸದಲ್ಲಿ ಪ್ರಸಾರಾಂಗ ನಿರ್ದೇಶಕ ಪ್ರೊ.ನಂಜಯ್ಯ ಹೊಂಗನೂರು ಮಾತನಾಡಿದರು.

ಮೈಸೂರು, ಫೆ.5(ಎಂಕೆ)- ಮೈಸೂರು ವಿಶ್ವವಿದ್ಯಾನಿಲಯದ ಪ್ರಸಾರಾಂಗ ಪ್ರಕಟಿಸಿರುವ ಪಠ್ಯಪುಸ್ತಕಗಳನ್ನು ಜೆರಾಕ್ಸ್ ಮಾಡಿ ನಕಲು ಪ್ರತಿ ಮಾರಾಟ ಮಾಡುತ್ತಿರುವವರ ವಿರುದ್ಧ ಕಾನೂನು ಕ್ರಮ ಜರುಗಿಸಲಾಗುವುದು ಎಂದು ಪ್ರಸಾರಾಂಗ ನಿರ್ದೇಶಕ ಪ್ರೊ.ಎಂ.ನಂಜಯ್ಯ ಹೊಂಗನೂರು ಎಚ್ಚರಿಸಿದರು.

ಮೈಸೂರು ಯುವರಾಜ ಕಾಲೇಜಿನಲ್ಲಿ ಆಯೋಜಿಸಿದ್ದ ಪ್ರಚಾರೋಪನ್ಯಾಸ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಪ್ರಸಾರಾಂಗವು ವಿವಿ ವಿದ್ಯಾರ್ಥಿಗಳ ಅಧ್ಯಯನದ ಅನುಕೂಲಕ್ಕಾಗಿ ಸಕಾಲದಲ್ಲಿ ಪಠ್ಯಪುಸ್ತಕಗಳನ್ನು ಮುದ್ರಿಸಿ ಪೂರೈಸುತ್ತಿದೆ. ಆದರೆ ಕೆಲವರು ಅದೇ ಪಠ್ಯಪುಸ್ತಕಗಳನ್ನು ಜೆರಾಕ್ಸ್ ಮಾಡಿ, ಮಾರಾಟ ಮಾಡುತ್ತಿರುವುದು ಹಾಗೂ ವೆಬ್‌ಸೈಟ್ ಒಂದರಲ್ಲಿ ಪ್ರಸಾರಾಂಗ ಪ್ರಕಟಣೆಗಳ ನಕಲು ಮಾಡಿ ಮಾರಾಟ ಮಾಡುತ್ತಿರುವುದು ಗಮನಕ್ಕೆ ಬಂದಿದೆ. ಈ ಕುರಿತು ವಿವಿ ಕುಲಪತಿ ಮತ್ತು ಕುಲಸಚಿವರ ಗಮನಕ್ಕೆ ತಂದು ಕಾನೂನು ರೀತಿ ಕ್ರಮ ಕೈಗೊಳ್ಳಲಾಗುವುದು ಎಂದರು.

ರಿಯಾಯ್ತಿ ಮಾರಾಟದಿಂದ ಆದಾಯ: ಪ್ರಸಾರಾಂಗವು ಕಳೆದ ತಿಂಗಳು ಹಮ್ಮಿಕೊಂಡಿದ್ದ ವಿಶೇಷ ರಿಯಾಯ್ತಿ ಮಾರಾಟದಿಂದಾಗಿ ಸುಮಾರು 15 ಲಕ್ಷ ರೂ. ಆದಾಯ ಬಂದಿದೆ. ಈ ತಿಂಗಳಾಂತ್ಯದವರೆಗೂ ಪ್ರಸಾರಾಂಗ ಹಾಗೂ ರಾಮಸ್ವಾಮಿ ವೃತ್ತದ ಮಳಿಗೆಯಲ್ಲಿ ರಿಯಾಯ್ತಿ ಮಾರಾಟ ಮುಂದುವರೆಯಲಿದೆ ಎಂದರು.

ಸಮ ಸಮಾಜ ನಿರ್ಮಾಣ: ಸಂವಿಧಾನದ ಆಶಯಗಳನ್ನು ಕುರಿತು ಮಾತನಾಡಿದ ಹಿರಿಯ ಪತ್ರಕರ್ತ ಅಂಶಿ ಪ್ರಸನ್ನಕುಮಾರ್, ದೇಶ ಸ್ವಾತಂತ್ರ್ಯ ಪಡೆದು ಹಾಗೂ ಸಂವಿಧಾನ ಅಳವಡಿಸಿಕೊಂಡು ಏಳೂವರೆ ದಶಕಗಳೇ ಕಳೆದರೂ ಇನ್ನೂ ಎಲ್ಲರಿಗೂ ವಿದ್ಯೆ ಸಿಕ್ಕಿಲ್ಲ. ಅಸ್ಪೃಶ್ಯತೆ ಹೋಗಿಲ್ಲ. ಅಸಮಾನತೆ ಕಡಿಮೆಯಾಗಿಲ್ಲ. ಇವತ್ತಿಗೂ ಮರ್ಯಾದಾಗೇಡು ಹತ್ಯೆಗಳು ನಡೆಯುತ್ತಿವೆ. ಆದ್ದರಿಂದ ಪ್ರತಿಯೊಬ್ಬರು ಸಂವಿಧಾನದ ಆಶಯ ಅರ್ಥ ಮಾಡಿಕೊಂಡರೆ ಸಮ ಸಮಾಜ ನಿರ್ಮಾಣ ಸಾಧ್ಯ ಎಂದರು.

ಕಾಲೇಜು ಪ್ರಾಂಶುಪಾಲ ಪ್ರೊ.ಎಸ್.ಮಹದೇವಮೂರ್ತಿ ಅಧ್ಯಕ್ಷತೆ ವಹಿಸಿದ್ದರು. ಕನ್ನಡ ವಿಭಾಗದ ಮುಖ್ಯಸ್ಥ ಪ್ರೊ.ಪರಶುರಾಮ, ಸಂವಿಧಾನ ವಿಭಾಗದ ಸಂಯೋಜಕ ಡಾ.ರವಿಚಂದ್ರ, ಇಂಗ್ಲಿಷ್ ವಿಭಾಗದ ಮುಖ್ಯಸ್ಥ ಪ್ರೊ.ವಿಜಯಕುಮಾರ್ ಬೊರಟ್ಟಿ, ಪ್ರೊ.ಶೇಖರ್ ನಾಯ್ಕ್, ಪ್ರೊ.ಅನ್ನಪೂರ್ಣ, ಪ್ರೊ.ರೂಬಿ ಸೆಲೆಸ್ಟೀನಾ, ಪ್ರೊ.ಸದಾಶಿವಯ್ಯ, ಎನ್‌ಎಸ್‌ಎಸ್ ಅಧಿಕಾರಿ ಡಾ.ಗಿರೀಶ್ಚಂದ್ರ, ಪ್ರಸಾರಾಂಗ ಅಧೀಕ್ಷಕ ಎಂ.ಡಿ.ಚನ್ನಬಸಪ್ಪ, ಪಲ್ಲವಿ ಮನೋಹರ, ಸಹನಾ, ಭಾವನಾ, ಅಹಲ್ಯಾ ಮತ್ತಿತರರು ಉಪಸ್ಥಿತರಿದ್ದರು.

'ಪ್ರಸಾದ್' ವಿರೋಧಿಸಿ ಚಾ.ಬೆಟ್ಟದಲ್ಲಿ ಪ್ರತಿಭಟನೆ



'ಪ್ರಸಾದ್' ಯೋಜನೆ ವಿರೋಧಿಸಿ ಮಂಡ್ಯ ರಕ್ಷಣಾ ವೇದಿಕೆ ಕಾರ್ಯಕರ್ತರು ಚಾಮುಂಡಿಬೆಟ್ಟದಲ್ಲಿ ಪ್ರತಿಭಟನೆ ನಡೆಸಿದರು.

ಮೈಸೂರು, ಫೆ.5(ಬಿಎಲ್‌ಯು)- ಚಾಮುಂಡಿಬೆಟ್ಟದಲ್ಲಿ ಕೈಗೊಂಡಿರುವ 'ಪ್ರಸಾದ್' ಯೋಜನೆ ಕಾಮಗಾರಿ ವಿರೋಧಿಸಿ ಮಂಡ್ಯ ರಕ್ಷಣಾ ವೇದಿಕೆಯ ಕಾರ್ಯಕರ್ತರು ಇಂದು ಚಾಮುಂಡಿ ಬೆಟ್ಟದಲ್ಲಿ ಪ್ರತಿಭಟನೆ ನಡೆಸಿದರು.

ಮಂಡ್ಯದ ಸಾಂಪ್ರದಾಯಿಕ ಉಡುಗೆಯಾದ ಪಟಾಪಟಿ ಚಡ್ಡಿ ಧರಿಸಿದ್ದ ಪ್ರತಿಭಟನಾಕಾರರು ಪ್ರಸಾದ್ ಯೋಜನೆ ಅನುಷ್ಠಾನ ರದ್ದು ಮಾಡುವಂತೆ ಸರ್ಕಾರವನ್ನು ಆಗ್ರಹಿಸಿದರು. ಪಾರಂಪರಿಕ ತಾಣವಾದ ಚಾಮುಂಡಿಬೆಟ್ಟದಲ್ಲಿ ಅಭಿವೃದ್ಧಿ ಹೆಸರಿನಲ್ಲಿ ಪ್ರಕೃತಿಯ ಒಡಲನ್ನು ಸೀಳಲು ಮುಂದಾಗುತ್ತಿದ್ದಾರೆ. ನಂದಿ ಮಾರ್ಗದಲ್ಲಿ ಈಗಾಗಲೇ ಭೂ ಕುಸಿತವಾಗಿದ್ದರೂ ಇನ್ನೂ ಕೂಡ ಬುದ್ಧಿ ಕಲಿತಿಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಪ್ರಸಾದ್ ಯೋಜನೆಯಲ್ಲಿ ಕೈಗೊಳ್ಳುತ್ತಿರುವ ಕಾಮಗಾರಿಯಿಂದ ಚಾಮುಂಡೇಶ್ವರಿ ದೇವಸ್ಥಾನ ಹಾಗೂ ಗೋಪುರದ ಅಸ್ತಿತ್ವಕ್ಕೆ ಧಕ್ಕೆಯಾಗುತ್ತದೆ ಎಂದು ಆತಂಕ ವ್ಯಕ್ತಪಡಿಸಿದರು. ಕೂಡಲೇ 'ಪ್ರಸಾದ್' ಯೋಜನೆ ಕೈ ಬಿಟ್ಟು ಚಾಮುಂಡಿಬೆಟ್ಟದ ನೈಜ ಪರಿಸರವನ್ನು ಉಳಿಸಬೇಕೆಂದು ಮನವಿ ಮಾಡಿದರು. ಪ್ರತಿಭಟನೆ ನಡೆಸಿದ ನಂತರ ರಕ್ಷಣಾ ವೇದಿಕೆ ಕಾರ್ಯಕರ್ತರು ತಾಯಿ ಚಾಮುಂಡೇಶ್ವರಿ ದರ್ಶನ ಪಡೆದು ನಿರ್ಗಮಿಸಿದರು. ವೇದಿಕೆಯ ಜಿಲ್ಲಾಧ್ಯಕ್ಷ ಶಂಕರ್ ಬಾಬು, ಅಭಿಷೇಕ್, ಲೋಕೇಶ್ ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರು.

ಫೆ.8, ಸ್ವಾತಿ ನಕ್ಷತ್ರ ಪೂಜೆ

ಮೈಸೂರು: ಮೈಸೂರಿನ ಯೋಗಾನರಸಿಂಹಸ್ವಾಮಿ ದೇವಸ್ಥಾನದಲ್ಲಿ ಫೆ8ರಂದು ಸ್ವಾತಿ ನಕ್ಷತ್ರ ವಿಶೇಷ ಪೂಜೆ ಏರ್ಪಡಿಸಲಾಗಿದೆ. ಬೆಳಗ್ಗೆ 9ಕ್ಕೆ, ಅಭಿಷೇಕ, ಮಧ್ಯಾಹ್ನ 12 ಗಂಟೆಗೆ ಪ್ರಸಾದ ವಿತರಿಸಲಾಗುವುದು. ಫೆ15ರಂದು ಮಹಾ ಶಿವರಾತ್ರಿ ಪ್ರಯುಕ್ತ ಶ್ರೀ ಸ್ವಾಮಿಗೆ ಅಲಂಕಾರ ಸೇವೆ, ಪೂಜೆಗಳು ಬೆಳಗ್ಗೆ 7ರಿಂದ ನಡೆಯಲಿವೆ. ಫೆ.17ರಂದು ಅಮವಾಸ್ಯೆ ಪೂಜೆ ನಡೆಯಲಿದೆ. ಸಂಜೆ 7 ಗಂಟೆಗೆ ಅಭಿಷೇಕ, ರಾತ್ರಿ 8 ಗಂಟೆಗೆ ಪ್ರಸಾದ ವಿತರಿಸಲಾಗುವುದು. ಮಾ.3ರಂದು ಪೂರ್ಣಿಮಾ ಚಂದ್ರಗ್ರಹಣವು ಮಧ್ಯಾಹ್ನ 3.20ಕ್ಕೆ ಗ್ರಹಣ ಸ್ಪರ್ಶ ಕಾಲವಾಗಿದ್ದು, ಸಂಜೆ 6.47ಕ್ಕೆ ಮೋಕ್ಷವಾಗಲಿದೆ ಎಂದು ದೇವಸ್ಥಾನದ ಆಡಳಿತಾಧಿಕಾರಿ ಎನ್.ಶ್ರೀನಿವಾಸನ್ ತಿಳಿಸಿದ್ದಾರೆ.

ನಾಳೆ ಮಾಜಿ ಶಾಸಕ ಎಂ.ಕೆ.ಸೋಮಶೇಖರ್ ಹುಟ್ಟುಹಬ್ಬ ಆಚರಣೆ; ವಿವಿಧ ಸೇವಾ ಕಾರ್ಯಕ್ರಮ



ಮೈಸೂರು, ಫೆ.5(ಎಂಟಿವೈ)- ಮಾಜಿ ಶಾಸಕ ಎಂ.ಕೆ.ಸೋಮಶೇಖರ್ ಹುಟ್ಟುಹಬ್ಬದ ಅಂಗವಾಗಿ ಫೆ.7ರಂದು ದಿನವಿಡೀ ವಿವಿಧ ಸೇವಾ ಕಾರ್ಯಕ್ರಮ ಆಯೋಜಿಸಲಾಗಿದೆ ಎಂದು ಎಂ.ಕೆ. ಸೋಮಶೇಖರ್ ಅಭಿಮಾನಿ ಬಳಗದ ಮುಖಂಡ ರವಿಶಂಕರ್ ತಿಳಿಸಿದ್ದಾರೆ.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಮೈಸೂರಿನ ಕೆ.ಆರ್.ಕ್ಷೇತ್ರದಲ್ಲಿ ಶಾಸಕರಾಗಿ ಕ್ಷೇತ್ರದ ಅಭಿವೃದ್ಧಿ ಮಾಡಿದ್ದಾರೆ. ಮಾಜಿ ಶಾಸಕರಾಗಿದ್ದರೂ ಕ್ಷೇತ್ರದ ಜನರ ಸಮಸ್ಯೆ ಬಗೆಹರಿಸಿ, ಸರ್ಕಾರದ ವಿವಿಧ ಸೌಲಭ್ಯ ನೆರವು ದೊರಕಿಸಿಕೊಡುವ ಮೂಲಕ ಜನರ ಸೇವೆಯನ್ನು ನಿರಂತರವಾಗಿ ಮಾಡುತ್ತಾ ಬಂದಿದ್ದಾರೆ. ಈ ಹಿನ್ನೆಲೆಯಲ್ಲಿ ಮಾಜಿ ಶಾಸಕರ ಹುಟ್ಟು ಹಬ್ಬದ ಅಂಗವಾಗಿ ವಿವಿಧ ಸೇವಾ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ ಎಂದರು.

ಫೆ.7ರಂದು ಬೆಳಗಿನಿಂದ ಸಂಜೆವರೆಗೆ ಕೆ.ಆರ್.ಕ್ಷೇತ್ರದಾದ್ಯಂತ ಸೇವಾ ಕಾರ್ಯ ಜರುಗಲಿದೆ. ಬಡಮಕ್ಕಳಿಗೆ ಪುಸ್ತಕ ವಿತರಣೆ, ಬಡ ರೋಗಿಗಳಿಗೆ ಹಣಕಾಸು ನೆರವು, ಅನ್ನ ಸಂತರ್ಪಣೆ, ಗಿಡ ನೆಡುವ ಕಾರ್ಯಕ್ರಮ, ಕೆಲ ಅನಾಥಾಶ್ರಮಗಳಲ್ಲಿ ಊಟ, ಉಪಹಾರದ ವ್ಯವಸ್ಥೆ ಸೇರಿದಂತೆ ಇನ್ನಿತರ ಸೇವಾ ಕಾರ್ಯಕ್ರಮ ನಡೆಸಲಾಗುತ್ತದೆ ಎಂದು ತಿಳಿಸಿದರು.

ಅಂದು ಸಂಜೆ 6.30ಕ್ಕೆ ನಗರದ ಮಹಾರಾಜ ಕಾಲೇಜು ಶತಮಾನೋತ್ಸವ ಭವನದಲ್ಲಿ ಸಭಾ ಕಾರ್ಯಕ್ರಮ ಆಯೋಜಿಸಲಾಗಿದೆ. ಈ ಕಾರ್ಯಕ್ರಮದಲ್ಲಿ ಸುಧೀರ್ ಕುಮಾರ್ ಮರೊಳ್ಳಿ ಅವರಿಂದ 'ಮತದಾನ ಪ್ರಜಾಪ್ರಭುತ್ವಕ್ಕೆ ಎಷ್ಟು ಪೂರಕ' ವಿಷಯ ಕುರಿತು ಮಾತನಾಡಲಿದ್ದಾರೆ. ಈ ವೇಳೆ ವಿವಿಧ ಕ್ಷೇತ್ರದ ಮುಖಂಡರು ಪಾಲ್ಗೊಳ್ಳಲಿದ್ದಾರೆ. ಈ ವೇದಿಕೆ ಕಾರ್ಯಕ್ರಮದಲ್ಲೂ ವಿವಿಧ ಸೇವಾ ಕಾರ್ಯಕ್ರಮ ಜರುಗಲಿದೆ ಎಂದರು. ಸುದ್ದಿಗೋಷ್ಠಿಯಲ್ಲಿ ಪಾಲಿಕೆ ಮಾಜಿ ಸದಸ್ಯರಾದ ಗೋಪಿ, ಸುನೀಲ್, ಜಿ.ಸೋಮಶೇಖರ್, ವಿನಯ್ ಕುಮಾರ್, ವಿಜಯಕುಮಾರ್ ಇದ್ದರು.

ನಿಧನ



ಫಯಾಜ್ ಅಹಮದ್ ಖಾನ್

ಮೈಸೂರು, ಫೆ.5-ಮೈಸೂರಿನ ಹಲೀಂ ನಗರ ನಿವಾಸಿ ಹಾಗೂ ಬನ್ನಿಮಂಟಪದ ಮೆ॥ ಎಫ್.ಎಸ್. ಫ್ಲವರ್ ಸ್ಟಾಲ್ ಮಾಲೀಕ ಫಯಾಜ್ ಅಹಮದ್ ಖಾನ್ (60) ಇಂದು ನಿಧನರಾದರು. ಮೃತರು ಪತ್ನಿ, ನಾಲ್ವರು ಪುತ್ರಿಯರು, ಇಬ್ಬರು ಪುತ್ರರು ಸೇರಿದಂತೆ ಅಪಾರ ಬಂಧುಗಳು, ಸ್ನೇಹಿತರು ಹಾಗೂ ಹಿತೈಷಿಗಳನ್ನು ಅಗಲಿದ್ದಾರೆ. ಈ ಸಂಬಂಧ ಗುರುವಾರ ಸಂಜೆ ಮಸೀದಿ ಅಕ್ಬರಿ, ಹಲೀಂ ನಗರ, ಬನ್ನಿಮಂಟಪ ಬಡಾವಣೆ, ಮೈಸೂರು ಇಲ್ಲಿ ನಮಾಜ್-ಎ-ಜನಾಜಾ (ಅಂತ್ಯಕ್ರಿಯೆಯ ಪ್ರಾರ್ಥನೆ) ನೆರವೇರಿಸಿದ ನಂತರ ಮೈಸೂರಿನ ಟಿಪ್ಪು ಸರ್ಕಲ್ ಹಿಂಭಾಗ ಇರುವ ಮುಸ್ಲಿಮರ ರುದ್ರಭೂಮಿ ಗೇಟ್ ನಂ.5ರಲ್ಲಿ ಮೃತರ ಅಂತ್ಯ ಸಂಸ್ಕಾರ ನೆರವೇರಿಸಲಾಯಿತು ಎಂದು ಕುಟುಂಬದ ಮೂಲಗಳು ತಿಳಿಸಿವೆ.

ರಾಜೇಶ್ವರಿ



ಮೈಸೂರು ರಾಘವೇಂದ್ರನಗರದ ನಿವಾಸಿ ರಾಜೇಶ್ವರಿ(74) ಅವರು ಬುಧವಾರ ರಾತ್ರಿ ನಿಧನರಾದರು. ಮೃತರು ಮೈಸೂರು ಕುವೆಂಪುನಗರದಲ್ಲಿರುವ ಎಸ್.ಎಲ್.ಎನ್ ವೈನ್ಸ್ ಮಾಲೀಕರು. ಇವರು ಇಬ್ಬರು ಪುತ್ರರು, ಸೊಸೆಯಂದಿರು ಸೇರಿದಂತೆ ಅಪಾರ ಬಂಧು ವರ್ಗ ಅಗಲಿದ್ದಾರೆ. ಮೃತರ ಅಂತ್ಯಕ್ರಿಯೆ ಗುರುವಾರ ಚಾಮುಂಡಿಬೆಟ್ಟದ ತಪ್ಪಲಿನ ರುದ್ರಭೂಮಿಯಲ್ಲಿ ನಡೆಯಿತು.

ಮೈಸೂರು ಹಾಗೂ ಸುತ್ತಮುತ್ತ ಇಂದು...



ಇಂದಿನ ಪಂಚಾಂಗ

6.2.2026 ಶುಕ್ರವಾರ, ಮಳೆ ನಕ್ಷತ್ರ: ಧನಿಷ್ಠ 6.02.2026 ರಿಂದ 18.02.2026
ವಿಶ್ವಾವಸು ನಾಮ ಸಂವತ್ಸರ, ಉತ್ತರಾಯಣ, ಶಿಶಿರ ಋತು, ಮಾಘ ಮಾಸ, ಕೃಷ್ಣ ಪಕ್ಷ,
ತಿಥಿ: ಪಂಚಮಿ, ನಕ್ಷತ್ರ: ಹಸ್ತ, ರಾಹುಕಾಲ: ಬೆಳಗ್ಗೆ 10.30ರಿಂದ 12ರವರೆಗೆ

- **ಜೆಎಸ್‌ಎಸ್ ಆಯುರ್ವೇದ ಆಸ್ಪತ್ರೆ :** ಮೈಗ್ರೇನ್ ಹಾಗೂ ಕಣ್ಣು-ಮೂಗಿನ ಅಲರ್ಜಿ ಚಿಕಿತ್ಸಾ ಶಿಬಿರ, ಸ್ಥಳ: ಜೆಎಸ್‌ಎಸ್ ಆಯುರ್ವೇದ ಆಸ್ಪತ್ರೆ, ಆಲನಹಳ್ಳಿ, ಬೆಳಗ್ಗೆ 9.30 ರಿಂದ.
- **ಟ್ಯಾಕ್ಸ್ ಕನ್ಸಲ್ಟೆಂಟ್ಸ್ ಅಸೋಸಿಯೇಷನ್ ಆಫ್ ಇಂಡಿಯಾ :** ಜಿಎಸ್‌ಟಿ ಮತ್ತು ಆದಾಯ ತೆರಿಗೆ ಶೋಕಾಸ್ ನೋಟಿಸ್, ಮೇಲ್ಮನವಿ, ಜಿಎಸ್‌ಟಿ ಮತ್ತು ಐಟಿ ಅನುಸರಣೆ ಮತ್ತು ಟ್ಯಾಲಿ ಕುರಿತು ವಲಯ ತೆರಿಗೆ ಸಮ್ಮೇಳನ, ಜಿಎಸ್‌ಟಿ ಭಾಷಣಕಾರರು : ಹಿರಿಯ ವಕೀಲ ಆನಂದ್ ಸಾಯಿ ಪ್ರಸಾದ್, ಐಟಿ ಸ್ಪೀಕರ್ ಸಿಎ ಸಿದ್ದಣ್ಣ ಬಿರಾದಾರ್, ಸ್ಥಳ: ಅಯ್ಸ್ಟರ್‌ಬೇ, ಕನ್ನಡ ಪರಿಷತ್ ರಸ್ತೆ, ವಿಜಯನಗರ 2ನೇ ಹಂತ, ಬೆಳಿಗ್ಗೆ 9.30 ರಿಂದ.
- **ಕಾವೇರಿ ಆಯುರ್ವೇದ ಆಸ್ಪತ್ರೆ :** ಮಕ್ಕಳಲ್ಲಿ ಕಂಡುಬರುವ ಸೆರೆಬ್ರಲ್ ಪಾಲ್ಸಿ ಹಾಗೂ ಕುಂಠಿತ ಬೆಳವಣಿಗೆ ಕುರಿತು ಉಚಿತ ತಪಾಸಣೆ ಮತ್ತು ಚಿಕಿತ್ಸಾ ಶಿಬಿರ, ಸ್ಥಳ: ಕಾವೇರಿ ಆಯುರ್ವೇದ ಆಸ್ಪತ್ರೆ, ದೇವೇಗೌಡ ಸರ್ಕಲ್ ಹತ್ತಿರ, ಕೆಬಿಎಲ್ ಲೇಔಟ್. ಬೆಳಗ್ಗೆ 10 ಗಂಟೆಯಿಂದ.
- **ಸುಯೋಗ್ ಆಸ್ಪತ್ರೆ :** ಉಚಿತ ಹೃದ್ರೋಗ ತಪಾಸಣಾ ಶಿಬಿರ, ಸ್ಥಳ: ಸುಯೋಗ್ ಆಸ್ಪತ್ರೆ, ರಾಮಕೃಷ್ಣನಗರ, ಬೆಳಗ್ಗೆ 10 ರಿಂದ.
- **ಮೈಸೂರು ವಿಶ್ವವಿದ್ಯಾನಿಲಯ, ಮಾಳವಿಯ ಮಿಷನ್ ಶಿಕ್ಷಕರ ತರಬೇತಿ ಕೇಂದ್ರ :** ರೂಸಾ 2.0 ಪ್ರಾಯೋಜಿತ ಅಧ್ಯಾಪಕರ ಅಭಿವೃದ್ಧಿ ಕಾರ್ಯಕ್ರಮ, ಉದ್ಘಾಟನೆ : ಶೈಕ್ಷಣಿಕ ಬಹುಮಾಧ್ಯಮ ಸಂಶೋಧನಾ ಕೇಂದ್ರದ ನಿರ್ದೇಶಕರಾದ ಪ್ರೊ. ಎಂ.ಎಸ್. ಸಪ್ನ, ಅಧ್ಯಕ್ಷತೆ : ಮಾಳವಿಯ ಮಿಷನ್ ಶಿಕ್ಷಕರ ತರಬೇತಿ ಕೇಂದ್ರದ ನಿರ್ದೇಶಕರಾದ ಪ್ರೊ. ಹೆಚ್.ಪಿ. ಜ್ಯೋತಿ, ಸ್ಥಳ: ಎಂಎಂಟಿಟಿಸಿ ಸಭಾಂಗಣ, ಮಾನಸಗಂಗೋತ್ರಿ, ಬೆಳಗ್ಗೆ 10ಕ್ಕೆ.
- **ಗೌತಮ ಶೈಕ್ಷಣಿಕ ಮತ್ತು ಸಾಂಸ್ಕೃತಿಕ ಸೇವಾ ಟ್ರಸ್ಟ್ :** ಉಚಿತ ಜನಪದ ಮತ್ತು ರಂಗ ತರಬೇತಿ, ಸ್ಥಳ: ಟ್ರಸ್ಟ್ ಆವರಣ, ವಿಜಯನಗರ 3ನೇ ಹಂತ, ಬೆಳಗ್ಗೆ 10 ರಿಂದ.
- **ಮಹಾರಾಜ ಕಾಲೇಜು, ಕನ್ನಡ ವಿಭಾಗ :** ಸಾಹಿತ್ಯ ವಿಮರ್ಶೆಯ ಕೌಶಲ್ಯಗಳು ಕುರಿತು ಕಾರ್ಯಾಗಾರ, ಉದ್ಘಾಟನೆ : ಕಾಲೇಜು ಪ್ರಿನ್ಸಿಪಾಲ್ ಪ್ರೊ.ವಿ.ಷಣ್ಮುಗಂ, ಉಪಸ್ಥಿತರು: ಕನ್ನಡ ವಿಭಾಗದ ಮುಖ್ಯಸ್ಥೆ ಪ್ರೊ.ಡಿ.ವಿಜಯಲಕ್ಷ್ಮಿ, ಸ್ಥಳ: ಕೊಠಡಿ ಸಂಖ್ಯೆ 37, ಕಾಲೇಜು ಆವರಣ, ಬೆಳಗ್ಗೆ 10ಕ್ಕೆ.
- **ದೀಪಾ ಶಿಕ್ಷಣ ಮತ್ತು ಸೇವಾ ಸಂಸ್ಥೆ :** ದ್ವಿತೀಯ ಪಿಯು ವಿದ್ಯಾರ್ಥಿಗಳಿಗೆ ಬೀಳ್ಕೊಡುಗೆ ಸಮಾರಂಭ, ಮುಖ್ಯ ಅತಿಥಿಗಳು : ಅಪರ ಜಿಲ್ಲಾಧಿಕಾರಿ ಡಾ.ಪಿ.ಶಿವರಾಜು, ಅಧ್ಯಕ್ಷತೆ : ಸಂಸ್ಥೆ ಅಧ್ಯಕ್ಷ ಡಾ.ಎಂ. ರಾಮಪ್ಪ, ಉಪಸ್ಥಿತರು: ಸದಾಶಿವ ಪೂಜಾರಿ, ವಿ.ಎನ್.ಸುಂದರ್, ಸುಬ್ಬರಾವ್, ಬಾಲಕೃಷ್ಣ, ಶ್ರೀಮತಿ ನಿವೇದಿತಾ ಸುವರ್ಣ, ಸ್ಥಳ: ವಿವೇಕಾನಂದ ಸಭಾಂಗಣ, ಕಾಲೇಜು ಆವರಣ, ಬೆಳಗ್ಗೆ 10ಕ್ಕೆ.
- **ಜೆಎಸ್‌ಎಸ್ ಮಹಿಳಾ ಕಾಲೇಜು :** ಸ್ಟೇಟ್ ಲೆವೆಲ್ ಮ್ಯಾನ್.ಕಾಮ್ ಫೆಸ್ಟ್, ಸಾನ್ನಿಧ್ಯ : ಸುತ್ತೂರು ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ, ಉದ್ಘಾಟನೆ : ಶಾಸಕ ಕೆ. ಹರೀಶ್‌ಗೌಡ, ಅಧ್ಯಕ್ಷತೆ : ಕಾಲೇಜು ಶಿಕ್ಷಣ ಇಲಾಖೆ ನಿರ್ದೇಶಕ ಪ್ರೊ. ಮೊರಬದ ಮಲ್ಲಿಕಾರ್ಜುನ, ಮುಖ್ಯ ಅತಿಥಿಗಳು : ಮೈಸೂರು ವಿವಿ ಕುಲಸಚಿವೆ ಶ್ರೀಮತಿ ಎಂ.ಕೆ. ಸವಿತಾ, ಎಸ್‌ಬಿಐ ಎಜಿಎಂ ಬಿ.ವಿ. ವಿಶ್ವಾಸ್, ಸ್ಥಳ: ಜೆಎಸ್‌ಎಸ್ ಮಹಿಳಾ ಕಾಲೇಜು, ಬೆಳಗ್ಗೆ 10.15ಕ್ಕೆ.
- **ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆ, ಜೆಎಸ್‌ಎಸ್ ಮಹಿಳಾ ತಾಂತ್ರಿಕ ಮಹಾವಿದ್ಯಾಲಯ :** ಸ್ಟಾರ್ಟ್ ಅಪ್ ಕನೆಕ್ಟ್ ಕಾರ್ಯಕ್ರಮ, ಮುಖ್ಯ ಅತಿಥಿಗಳು : ಮೈಸೂರು ಜಿಲ್ಲಾ ಕೈಗಾರಿಕಾ ಕೇಂದ್ರದ ಜಂಟಿ ನಿರ್ದೇಶಕ ದಿನೇಶ್, ಸಿಡಾಕ್ ಮೈಸೂರು ಜಿಲ್ಲೆ ಜಂಟಿ ನಿರ್ದೇಶಕ ಮಧು, ಡಿಎಫ್‌ಆರ್‌ಎಲ್ ಮಾಜಿ ವಿಜ್ಞಾನಿ ಡಾ. ನಂಜಪ್ಪ, ಉದ್ಯಮಿ ಎ.ಎಂ. ಬಾಬು, ಡಾ. ಅನುಪಮ ಬಿ. ಪಂಡಿತ್, ಪ್ರಿನ್ಸಿಪಾಲ್ ಡಾ. ಶಿವಕುಮಾರ್, ಇನ್ಕ್ಯುಬೇಟರ್ ಕೇಂದ್ರದ ಮುಖ್ಯ ನಿರೀಕ್ಷಕರಾದ ಡಾ. ಪದ್ಮಶ್ರೀ, ಸಿಇಓ ಯಶಸ್ವಿನಾಗ್, ಸ್ಥಳ: ಜೆಎಸ್‌ಎಸ್‌ಎಸ್ ಮಹಿಳಾ ತಾಂತ್ರಿಕ ವಿದ್ಯಾಲಯ, ಬೆಳಗ್ಗೆ 11ಕ್ಕೆ.
- **ಸ್ವಾಭಿಮಾನಿ ಆರಾಧ್ಯ ಬಳಗ :** ಪಿ. ನಾಗಭೂಷಣ ಆರಾಧ್ಯ ಅವರಿಗೆ ಅಭಿನಂದನಾ ಸಮಾರಂಭ, ಅಧ್ಯಕ್ಷತೆ : ನಿವೃತ್ತ ಉಪನ್ಯಾಸಕ ಬಿ.ಕೆ. ಮಲ್ಲಾರಾಧ್ಯ, ಅಭಿನಂದಿತರು : ಆರಾಧ್ಯ ಮಹಾಸಭಾ ಅಧ್ಯಕ್ಷ ಪಿ. ನಾಗಭೂಷಣ ಆರಾಧ್ಯ, ಮುಖ್ಯ ಅತಿಥಿಗಳು : ಶಾಸಕ ಟಿ.ಎಸ್. ಶ್ರೀವತ್ಸ, ಪಾಲಿಕೆ ಮಾಜಿ ಸದಸ್ಯ ರಾಮ್ ಪ್ರಸಾದ್, ಅಭಿನಂದನಾ ನುಡಿ : ನಿವೃತ್ತ ಮುಖ್ಯೋಪಾಧ್ಯಾಯ ರೇವಣಾರಾಧ್ಯ, ಸ್ಥಳ: ಆರಾಧ್ಯ ಮಹಾಸಭಾ, ಚಾಮುಂಡಿಪುರಂ, ಸಂಜೆ 5ಕ್ಕೆ.
- **ಹರಿದಾಸ ಸಂಗೀತ ಸಾಹಿತ್ಯೋತ್ಸವ ಸಮಿತಿ :** ಮಧ್ವ-ಪುರಂದರ ನಮನ, 'ಗರುಡಪುರಾಣ ಮತ್ತು ಅಗ್ನಿಪುರಾಣ', ಸ್ಥಳ: ಶಾರದಾ ವಿಲಾಸ ಶತಮಾನೋತ್ಸವ ಭವನ, ಕೃಷ್ಣಮೂರ್ತಿಪುರಂ, ಸಂಜೆ 5 ರಿಂದ.
- **ಸಂಚಲನ (ಮೈಸೂರು), ಅರಳಿ ಸೇವಾಟ್ರಸ್ಟ್ (ಬೆಂಗಳೂರು), ಕನ್ನಡ ಮತ್ತು ಸಂಸ್ಕೃತಿ ಇಲಾಖೆ :** ಸಂಚಲನ ದಶಮಾನೋತ್ಸವ-ರಂಗ ಸಂಭ್ರಮ, ಸಭಾ ಕಾರ್ಯಕ್ರಮ, ಉಪಸ್ಥಿತರು : ಹಿರಿಯ ರಂಗಕರ್ಮಿ ಪ್ರಸನ್ನ, ಶಾಸಕ ದರ್ಶನ್ ಧ್ರುವನಾರಾಯಣ್, ಅಪರ ಜಿಲ್ಲಾಧಿಕಾರಿ ಡಾ. ಪಿ. ಶಿವರಾಜು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಜಂಟಿ ನಿರ್ದೇಶಕ ವಿ.ಎನ್. ಮಲ್ಲಿಕಾರ್ಜುನಸ್ವಾಮಿ, ನಮ್ಮ ರಾಗ ತಂಡದಿಂದ ಚಲನಚಿತ್ರ ಗೀತೆಗಳು, ಸಂಚಲನ ಮೈಸೂರು ರಂಗ ತಂಡದಿಂದ 'ಎರಡೆರಡ್ಲಾ ಐದು' ನಾಟಕ ಪ್ರದರ್ಶನ, ರಚನೆ : ಆಸಿಫ್ ಕ್ಷತ್ರಿಯ, ಸಂಗೀತ : ದಿಗ್ವಿಜಯ ಹೆಗ್ಗೋಡು, ನಿರ್ದೇಶನ : ಆಸಿಫ್ ಕ್ಷತ್ರಿಯ ಮತ್ತು ಶ್ವೇತಾ ಶ್ರೀನಿವಾಸ್, ಸ್ಥಳ: ಕಿರುರಂಗ ಮಂದಿರ, ಸಂಜೆ 6 ಗಂಟೆಯಿಂದ.
- **ಮಾಲಿನಿ ನೃತ್ಯಶಾಲೆ ಮತ್ತು ಸಾಂಸ್ಕೃತಿಕ ಕೇಂದ್ರ, ಶ್ರೀ ಮಾಲಿನಿ ನೃತ್ಯಶಾಲೆ :** ವಿದುಷಿ ಡಾ. ವಿ. ಮಾಲಿನಿ ಅವರಿಂದ ದಾಸವಾಣಿ ಕನಕ ಪುರಂದರ ನಮನ ಕಾರ್ಯಕ್ರಮ, ಸನ್ಮಾನಿತರು : ಹಿನ್ನಲೆ ಗಾಯಕ ಎಂ. ನಟರಾಜು, ಸ್ಥಳ: ಕರಗ ದೇವಸ್ಥಾನ, ರೇಣುಕಾದೇವಿ ದೇವಸ್ಥಾನ, ಇಟ್ಟಿಗೆಗೂಡು, ರೇಣುಕಾದೇವಿ ಸಭಾಂಗಣ, ಸಂಜೆ 6ಕ್ಕೆ.
- **ಮೈತ್ರಿ ಚಾರಿಟಬಲ್ ಟ್ರಸ್ಟ್ :** ಶಾಲಾ ವಾರ್ಷಿಕೋತ್ಸವ, ಮುಖ್ಯ ಅತಿಥಿಗಳು : ಹಿರಿಯ ಪತ್ರಕರ್ತ ಅಂಶಿ ಪ್ರಸನ್ನಕುಮಾರ್, ಉಪಸ್ಥಿತರು : ಮ್ಯಾನೇಜಿಂಗ್ ಟ್ರಸ್ಟಿ ಪೃಥ್ವಿ ಸುದೀಂದರ್, ಅಧ್ಯಕ್ಷ ರವೀಂದ್ರ ಜೋಶಿ, ಖಜಾಂಚಿ ಡಾ. ಅನಿಲ್ ಕುಮಾರ್, ಸ್ಥಳ: ಗಾನಭಾರತಿ ರಮಾಗೋವಿಂದ ಕಲಾವೇದಿಕೆ, ಆದಿಚುಂಚನಗಿರಿ ರಸ್ತೆ, ಕುವೆಂಪುನಗರ, ಸಂಜೆ 6ಕ್ಕೆ.

ಮೈಸೂರು ಆಕಾಶವಾಣಿ



ಬೆಳಗ್ಗೆ: 6.10 ಚಿಂತನ, 6.15 ಗೀತಾರಾಧನ, 6.35 ಮತ್ತು ಸಂಜೆ 6.10 ಜ್ಞಾನ ಜ್ಯೋತಿ ಜೀವನ ಪಾಠ ಕಲಿಸಿದ ಸಾಧಕಿಯರ ಪರಿಚಯ ಮಾಲಿಕೆ, ಪ್ರಸ್ತುತಿ: ಬಿ.ಕೆ. ಮೀನಾಕ್ಷಿ, 6.40 ಅರಿವಿನ ಶಿಖರ-ಸರ್ವಜ್ಞನ ತ್ರಿಪದಿಗಳನ್ನಾಧರಿಸಿದ ಬಾನುಲಿ ಸರಣಿ, ಗಾಯನ - ರೋಹಿಣಿ ಸುಧಾಂ, ವ್ಯಾಖ್ಯಾನ-ಡಾ. ಪ್ರದೀಪ್ ಕುಮಾರ್ ಹೆಬ್ರಿ, 6.50 ರೈತರಿಗೆ ಸಲಹೆ, 7.15 ಭಾವಗೀತೆಗಳು, 8.30 ಕನ್ನಡ ಚಿತ್ರಗೀತೆಗಳು, 9.00 ನಮ್ಮ ಆರೋಗ್ಯ, 9.30 ಗಾಂಧೀ ಸ್ಮೃತಿ, 9.35 ಕನ್ನಡ ಚಿತ್ರಗೀತೆಗಳು, 10.00 ಕರ್ನಾಟಕ ಶಾಸ್ತ್ರೀಯ ಸಂಗೀತ, ಸಿಕ್ಕಿಲ್ ಮಾಲಚಂದ್ರಶೇಖರ್ - ಕೊಳಲುವಾದನ, 11.00 ನಿಮ್ಮೊಂದಿಗೆ ಮೈಸೂರು ಆಕಾಶವಾಣಿ ಕಾಮನ ಬಿಲ್ಲು ಬದುಕಿನ ಬಣ್ಣಗಳ ಚಿತ್ತಾರ, ಪ್ರಸ್ತುತಿ : ಜಿ.ಎನ್. ಮಂಜುನಾಥ್

ಮಧ್ಯಾಹ್ನ: 12.05 ವನಿತಾ ವಿಹಾರ, 12.35 ದೇವರನಾಮ, 12.45 ಕಾದಂಬರಿ ವಿಹಾರ, 1.00 ಪ್ರಗತಿ ಪಥ- ಕೇಂದ್ರ ಸರ್ಕಾರದ ವಿವಿಧ ಅಭಿವೃದ್ಧಿ ಯೋಜನೆಗಳ ಸರಣಿ, 1.20 ಭಾವಗೀತೆಗಳು, 1.30 ಸಂದೇಶ ಆಧಾರಿತ ಶ್ರೋತೃಗಳ ಮೆಚ್ಚಿನ ಚಿತ್ರಗೀತೆಗಳ ಕಾರ್ಯಕ್ರಮ, 2.40 ದಾರಿ ದೀಪ-ಪ್ರಾಯೋಜಿತ ಕಾರ್ಯಕ್ರಮ. ಪ್ರಾಯೋಜಕರು: FEBA India, 2.55 ಸಿರಿಗನ್ನಡಂ ಗೆಲ್ಗೆ, ಪ್ರಸ್ತುತಿ : ಜಿ.ಕೆ. ರವೀಂದ್ರಕುಮಾರ್, 3.00 ಕರ್ನಾಟಕ ಶಾಸ್ತ್ರೀಯ ಸಂಗೀತ, ವಿದೂಷಿ ಕಾರ್ತಿಕಾ ವೈದ್ಯನಾಥನ್- ಹಾಡುಗಾರಿಕೆ, 4.00 ಮಹಿಳಾರಂಗ, 4.30 ವೃತ್ತಿ ಮಾರ್ಗದರ್ಶನ, 6.50 ಕೃಷಿರಂಗ, ಹಲೋ ಕೃಷಿರಂಗ-ಪ್ರಾಯೋಜಿತ ನೇರ ಫೋನ್-ಇನ್ ಕಾರ್ಯಕ್ರಮ, ಪ್ರಾಯೋಜಕರು-ಕೃಷಿ ಇಲಾಖೆ, ಕರ್ನಾಟಕ ಸರ್ಕಾರ, ವಿಷಯ-ಸಮಗ್ರ ಪೀಡೆ ನಿರ್ವಹಣೆ, ಭಾಗವಹಿಸುತ್ತಾರೆ-ಬೆಂಗಳೂರು ಕೃಷಿ ವಿಶ್ವವಿದ್ಯಾನಿಲಯದ ಡಾ. ಕೆ.ಮುರಳಿ ಮೋಹನ್, ಪರಾಗ ಬೇಸಾಯದ ಬದುಕು ಸರಾಗ, 7.45 ಕನ್ನಡದಲ್ಲಿ ಭಾಷಣ, 8.00 ವಿಜ್ಞಾನ ಭಾರತಿ- ಅಡುಗೆ ಮನೆ, ಆರೋಗ್ಯ ಹಾಗೂ ವಿಜ್ಞಾನದ ಮೂಲ ಕೇಂದ್ರ ಮಾತನಾಡುವವರು-ಡಾ. ಪುರೋಹಿತ್ ಸರಸ್ವತಿ, ಪ್ಲಾಸ್ಟಿಕ್ ಬಳಕೆಯಿಂದ ದೂರವಿರಿ ಮಾತನಾಡುವವರು -ಸಾತನೂರು ದೇವರಾಜ್, 9.30 ಕರ್ನಾಟಕ ಶಾಸ್ತ್ರೀಯ ಸಂಗೀತ, ರಮಾಮಣಿ ಆರ್.ಎ.- ಹಾಡುಗಾರಿಕೆ, 10.00 ಜನಪದ ಸಂಗೀತ, 10.30 ಸವಿನೆನಪು

ಗೋಣಿಕೊಪ್ಪದಲ್ಲಿ ನರೇಗಾ ಬಚಾವೋ ಸಂಗ್ರಾಮ

ಕಾಂಗ್ರೆಸ್ ಪಕ್ಷದ ಸಾವಿರಾರು ಕಾರ್ಯಕರ್ತರಿಂದ 5 ಕಿಮೀ ಕಾಲ್ನಡಿಗೆ ಜಾಥಾ

ಗೋಣಿಕೊಪ್ಪ: ಮಹಾತ್ಮ ಗಾಂಧಿ ನರೇಗಾ ಬಚಾವೋ ಸಂಗ್ರಮಕ್ಕೆ 7500ಕ್ಕೂ ಹೆಚ್ಚು ಹೆಜ್ಜೆಗಳನ್ನಾಕುವ ಮೂಲಕ ವಿರಾಜಪೇಟೆ ವಿಧಾನಸಭಾ ಕ್ಷೇತ್ರದ ಕಾಂಗ್ರೆಸ್ ಕಾರ್ಯಕರ್ತರು ಐದು ಕಿಲೋಮೀಟರ್ ಕಾಲ್ನಡಿಗೆ ಜಾಥಾ ನಡೆಸಿದರು.

ಗೋಣಿಕೊಪ್ಪ ಉಮಾಮಹೇಶ್ವರಿ ದೇವಸ್ಥಾನದಿಂದ ಪೊನ್ನಂಪೇಟೆ ಗಾಂಧಿ ಪ್ರತಿಮೆವರೆಗೆ ಪಾದಯಾತ್ರೆ ಸಾಗಿ ಬಂದಿತ್ತು. ಸಾವಿರಾರು ಕಾರ್ಯಕರ್ತರು ಮನ್ರೇಗಾ ಯೋಜನೆ ಹೆಸರು ಬದಲಾವಣೆಯ ಕೇಂದ್ರ ಸರ್ಕಾರದ ನಡೆ ಪ್ರಶ್ನಿಸಿ, ಘೋಷಣೆಗಳು ಹಾಕಿ ವಿರೋಧಿಸಿದರು.

ಪಾದಯಾತ್ರೆಯಲ್ಲಿ ಭಾಗವಹಿಸಿದ್ದ ಕಾರ್ಯಕರ್ತರಿಗೆ ರಸ್ತೆಯ ಉದ್ದಕ್ಕೂ ಕುಡಿಯುವ ನೀರು, ಮಜ್ಜಿಗೆ, ತಂಪುಪಾನೀಯ, ಪಾಯಸ, ವಡೆ ವಿತರಿಸಲಾಯಿತು. ಮುಖ್ಯಮಂತ್ರಿಗಳ ಕಾನೂನು ಸಲಹೆಗಾರ, ಶಾಸಕ ಎ.ಎಸ್ ಪೊನ್ನಣ್ಣ ಅವರ ಮುಂದಾಳತ್ವದಲ್ಲಿ ಕಾಲ್ನಡಿಗೆ ಜಾಥಾ ಸಾಗಿ ಬಂದಿತ್ತು.

ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷ ತೀತಿರ ಧರ್ಮಜ ಉತ್ತಪ್ಪ ಕೆಪಿಸಿಸಿ ವಕ್ತಾರ ಎಂ.ಲಕ್ಷ್ಮಣ್, ರಾಜ್ಯ ಕಾಂಗ್ರೆಸ್ ಕಾರ್ಯಕಾರಿಣಿ ಸಮಿತಿ ಕಾರ್ಯದರ್ಶಿ, ಶಾಂತೆಯಂಡ ವೀಣಾ ಅಚ್ಚಯ್ಯ, ಪ್ರಮುಖರುಗಳಾದ ಆಪಟ್ಟೀರ ಟಾಟು ಮೊಣ್ಣಪ್ಪ, ಕುಲ್ಲಚಂಡ ಪ್ರಮೋದ್ ಗಣಪತಿ, ಕೊಲ್ಲೀರ ಬೋಪಣ್ಣ, ಚಂದ್ರಕಲಾ, ಮಿದೇರಿರ ನವೀನ್, ರಾಜ್ಯ ಅಲ್ಪಸಂಖ್ಯಾತ ಘಟಕದ ಉಪಾಧ್ಯಕ್ಷ ಗಫೂರ್ ಇದ್ದರು. ನಂತರ ಪೊನ್ನಂಪೇಟೆ ಗಾಂಧಿ ಪ್ರತಿಮೆಗೆ ಪುಷ್ಪಾರ್ಚನೆ ಮಾಡುವ ಮೂಲಕ ಜಾಥಕ್ಕೆ ಸಮಾಪ್ತಿ ಮಾಡಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಶಾಸಕ ಎ.ಎಸ್ ಪೊನ್ನಣ್ಣ, ಭಾರತ ದೇಶವನ್ನು ಪ್ರಪಂಚದಲ್ಲೇ ಗುರುತಿಸುವಂತೆ ಮಾಡಿದ ಮಹಾತ್ಮನ ಹೆಸರನ್ನು ಕಾಯ್ದೆಯಿಂದ ಕಿತ್ತೊಗೆಯುವ ಕಾರಣಕ್ಕೆ ಸ್ಪಷ್ಟತೆಯನ್ನು ಕೊಡಿ ಎಂದು ಕಾನೂನಾತ್ಮಕವಾದ ಪ್ರಶ್ನೆಗಳನ್ನು ಕೇಂದ್ರ ಸರ್ಕಾರಕ್ಕೆ ಕೇಳಿದರೆ ಯಾವುದೇ ಉತ್ತರ ನೀಡುತ್ತಿಲ್ಲ. ಇದಕ್ಕೆ ವಿರೋಧವಾಗಿ ಭಾವನಾತ್ಮಕವಾದ, ದ್ವೇಷ ಆಧಾರಿತವಾದ, ಪ್ರಜಾತಂಕಕಾರಿಯಾದ ರಾಜಕಾರಣವನ್ನು ಮಾಡುತ್ತಿದ್ದಾರೆ ಎಂದರು.


ಕಾಂಗ್ರೆಸ್ ಕಾರ್ಯಕರ್ತರು ಗುರುವಾರ ಗೋಣಿಕೊಪ್ಪದಲ್ಲಿ ಕಾಲ್ನಡಿಗೆ ಜಾಥಾ ನಡೆಸಿದರು.

ನರೇಗಾ ಕಾನೂನು ತಿದ್ದುಪಡಿಯಿಂದ ರೈತರ ಗ್ರಾಮೀಣ ಜನರ ದಲಿತರ ಕೂಲಿ ಕಾರ್ಮಿಕರ ಹೊಟ್ಟೆಗೆ ತಣ್ಣೀರು ಬಟ್ಟೆ ಹಾಕುವ ಪ್ರಯತ್ನ ಸಾಗುತ್ತಿದೆ.

ಭಾರತದ ಸ್ವಾತಂತ್ರ್ಯಕ್ಕಾಗಿ 17 ವರ್ಷಗಳ ಕಾಲ ಕಾರಾಗೃಹ ಶಿಕ್ಷೆಯನ್ನು ಅನುಭವಿಸಿದ ಗಾಂಧೀಜಿ ಹೆಸರನ್ನು ಕೇಂದ್ರ ಸರ್ಕಾರ ಮರೆತು ಹೋಗುತ್ತಿದೆ ಎಂಬುದೇ ವಿಪರ್ಯಾಸ. ಇಂತಹ ಬೆಳವಣಿಗೆಗೆ ಭಾರತದ ಪ್ರಜಾಪ್ರಭುತ್ವ ವ್ಯವಸ್ಥೆಗೆ ಆತಂಕಕಾರಿಯಾಗಿದೆ ಎಂದು ಹೇಳಿದರು.

ಭಾರತವನ್ನು ತಿಳಿಯಬೇಕಾದರೆ ಭಾರತದ ಗ್ರಾಮಗಳನ್ನು ನೋಡಬೇಕು ಎಂಬ ಗಾಂಧಿ ಕಲ್ಪನೆಯನ್ನು ಮುಂದಾಲೋಚನೆಯ ಮೂಲಕ 2005ರಲ್ಲಿ ಜಾರಿಗೆ ತಂದ ನರೇಗಾ ಯೋಜನೆ ಕಳೆದ 20 ವರ್ಷಗಳಿಂದ ಗ್ರಾಮೀಣ ಜನರಿಗೆ ಉದ್ಯೋಗ ಸೃಷ್ಟಿ ಮಾಡಿದೆ. ಆದರೆ ಇಂದು ಕಾಯ್ದೆಯನ್ನು ತಿದ್ದುಪಡಿ ಮಾಡುವ ಮೂಲಕ ರಾಜ್ಯ ಸರ್ಕಾರಕ್ಕೆ ಬಹುದೊಟ್ಟ ಹೊರೆಯನ್ನು ಹಾಕಿ ಯೋಜನೆ ಅನುಷ್ಠಾನವಾಗದಂತೆ ನೋಡಿಕೊಳ್ಳುವ ಪ್ರಯತ್ನ ಸಾಗುತ್ತಿದೆ ಎಂದರು.

ಹಿಂದೆ ಕೇಂದ್ರ ಸರಕಾರ ಶೇಕಡ 90ರಷ್ಟು ಮತ್ತು ರಾಜ್ಯ ಸರ್ಕಾರ 10ರಷ್ಟು ಒದಗಿಸುತ್ತಿತ್ತು. ಇದೀಗ ರಾಜ್ಯ ಸರ್ಕಾರ 40 ರಷ್ಟು ಅನುದಾನ ಒದಗಿಸುವಂತೆ ಕಾನೂನು ತಿದ್ದುಪಡಿ ಮಾಡಲಾಗಿದೆ. ಇದೊಂದು ಮರಣ ಶಾಸನದಂತಾಗಿದೆ ಎಂದು ಹೇಳಿದರು.

ಯಾವುದೇ ರಾಜ್ಯ ಸರ್ಕಾರದ ಜೊತೆ ಚರ್ಚೆ ಮಾಡದೆ ಏಕಾಏಕಿ ಕಾನೂನು ಜಾರಿ ಮಾಡುವ ಮೂಲಕ ಸಂವಿಧಾನ ವಿರೋಧ ಚಟುವಟಿಕೆಯನ್ನು ಕೇಂದ್ರ ಸರ್ಕಾರ ಅನುಸರಿಸಿದೆ. ಇದು ಮಹಾತ್ಮನ ತತ್ವ, ಸಿದ್ಧಾಂತ ನಡೆಗಳಿಗೆ ವಿರೋಧದ ವ್ಯವಸ್ಥೆಯಾಗಿದೆ. ಈ ವಿಚಾರವನ್ನು ತೀವ್ರವಾಗಿ ಖಂಡಿಸಲಾಗುತ್ತಿದೆ ಎಂದು ಹೇಳಿದರು.

ನಾಳೆ ಶನಿವಾರಸಂತೆಯಲ್ಲಿ ಬಸ್ ನಿಲ್ದಾಣ ಉದ್ಘಾಟನೆ

ಮಡಿಕೇರಿ, ಫೆ.5– ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ ವತಿಯಿಂದ ಜಿಲ್ಲೆಯ ಶನಿವಾರಸಂತೆಯಲ್ಲಿ 0.65 ಎಕರೆ ವಿಸ್ತೀರ್ಣದಲ್ಲಿ 105 ಲಕ್ಷ ರೂ. ವೆಚ್ಚದಲ್ಲಿ ನಿರ್ಮಿಸಲಾದ ನೂತನ ಬಸ್ ನಿಲ್ದಾಣದ ಉದ್ಘಾಟನಾ ಸಮಾರಂಭವು ಫೆ.7 ರಂದು ಬೆಳಗ್ಗೆ 11.30 ಗಂಟೆಗೆ ಶನಿವಾರಸಂತೆ ಬಸ್ ನಿಲ್ದಾಣದಲ್ಲಿ ನಡೆಯಲಿದೆ.

ಜಿಲ್ಲಾ ಉಸ್ತುವಾರಿ ಸಚಿವ ಎನ್.ಎಸ್.ಭೋಸರಾಜು, ಸಾರಿಗೆ ಮತ್ತು ಮುಜರಾಯಿ ಸಚಿವರಾದ ರಾಮಲಿಂಗಾ ರೆಡ್ಡಿ, ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮದ ಅಧ್ಯಕ್ಷರು ಹಾಗೂ ಗುಬ್ಬಿ ವಿಧಾನಸಭಾ ಕ್ಷೇತ್ರದ ಶಾಸಕರಾದ ಎಸ್.ಆರ್. ಶ್ರೀನಿವಾಸ್(ವಾಸು), ಶಾಸಕರಾದ ಡಾ.ಮಂತರ್‌ಗೌಡ, ಎ.ಎಸ್.ಪೊನ್ನಣ್ಣ, ಸಂಸದರಾದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಸೇರಿದಂತೆ ಮತ್ತಿತರರು ಭಾಗವಹಿಸುವರು ಎಂದು ಪ್ರಕಟಣೆ ತಿಳಿಸಿದೆ.

ಮೋಟಾರ್ ಸ್ಪೋರ್ಟ್ಸ್ ಭಾರತೀಯ ರಾಷ್ಟ್ರೀಯ ರ‍್ಯಾಲಿ ಚಾಂಪಿಯನ್‌ಶಿಪ್‌ನಲ್ಲಿ ಕೊಡಗಿನ ಯುವಕನ ಸಾಧನೆ

ಮಡಿಕೇರಿ: ಹಾಕಿ, ಕ್ರಿಕೆಟ್, ಟೆನಿಸ್ ಹೀಗೆ ವಿವಿಧ ಕ್ರೀಡಾ ಕ್ಷೇತ್ರಗಳಲ್ಲಿ ಕೊಡಗಿನವರ ಸಾಧನೆ ಅಪಾರ. ಇದೀಗ ಈ ಪಟ್ಟಿಯಲ್ಲಿ ಮೋಟಾರ್ ಸ್ಪೋರ್ಟ್ಸ್ ಭಾರತೀಯ ರಾಷ್ಟ್ರೀಯ ರ‍್ಯಾಲಿ ಚಾಂಪಿಯನ್‌ಶಿಪ್ (INRC) ನಲ್ಲಿ ಓವರ್ ಆಲ್ ಚಾಂಪಿಯನ್‌ಶಿಪ್ ಗೆಲ್ಲುವ ಮೂಲಕ ಕೊಡಗಿನ ಯುವನೋರ್ವ ಪ್ರಥಮ ಬಾರಿಗೆ ಇತಿಹಾಸ ನಿರ್ಮಿಸಿದ್ದಾರೆ.

ಅಮ್ಮತ್ತಿ–ಹೊಸೂರಿನ ಕೊಂಗಂಡ ಕುಟುಂಬಕ್ಕೆ ಸೇರಿದ ಗಗನ್ ಕರುಂಬಯ್ಯ ಅವರೆ ಈ ಸಾಧನೆ ಮಾಡಿರೋ ಯುವ ರ‍್ಯಾಲಿ ಪಟು, 2013ರಿಂದ ಮೋಟಾರ್ ಸ್ಪೋರ್ಟ್ಸ್‌ನಲ್ಲಿ ಸಕ್ರಿಯರಾಗಿರುವ ಗಗನ್ ಪ್ರಸ್ತುತ, ಟೀಮ್ ಟಿಎಸ್‌ಐ ರೇಸಿಂಗ್ (ಸಿಡ್ವಿನ್)ನೊಂದಿಗೆ ಡೀನ್ ಮಸ್ಕಾರ್ನೆನ್ಸ್ (ಮಂಗಳೂರು) ಇವರೊಂದಿಗೆ ಸಹ–ಚಾಲಕರಾಗಿದ್ದಾರೆ.

ರಾಷ್ಟ್ರೀಯ ಮಟ್ಟದ ನಾಲ್ಕು ಚಕ್ರಗಳ ರ‍್ಯಾಲಿ ನಲ್ಲಿ ಇದೆ ಮೊದಲ ಬಾರಿಗೆ ಗಮನಾರ್ಹ ಮೈಲಿಗಲ್ಲು ಸಾಧಿಸಿದ ಕೊಡಗಿನ ಮೊದಲ ವ್ಯಕ್ತಿ ಎಂಬ ಹೆಗ್ಗಳಿಕೆಗೆ ಗಗನ್ ಪಾತ್ರರಾಗಿದ್ದು, ಎಲ್ಲೆಡೆಯಿಂದ ಪ್ರಶಂಸೆ ವ್ಯಕ್ತವಾಗುತ್ತಿದೆ.

ಇತ್ತೀಚೆಗೆ ಫೆಡರೇಷನ್ ಆಫ್ ಮೋಟಾರ್ ಸ್ಪೋರ್ಟ್ಸ್ ಆಫ್ ಇಂಡಿಯಾ, ಬ್ಲೂಬ್ಯಾಂಡ್ ಸ್ಪೋರ್ಟ್ಸ್. ಅಮ್ಮತ್ತಿ ರೋಬಸ್ಟಾ ಅಡ್ವೆಂಚರ್ ಮತ್ತು ಸ್ಪೋರ್ಟ್ಸ್ ಅಕಾಡೆಮಿ ಆಯೋಜಿಸಿದ್ದ ರಾಷ್ಟ್ರಮಟ್ಟದ ಇಂಡಿಯನ್ ನ್ಯಾಷನಲ್ ರ‍್ಯಾಲಿ ಚಾಂಪಿಯನ್‌ಶಿಪ್ ನಲ್ಲಿ (ಐಎನ್‌ಆರ್‌ಸಿ) ಸಮಗ್ರ ಪ್ರಶಸ್ತಿಯನ್ನು ಮುಡಿಗೇರಿಸಿಕೊಂಡಿದ್ದ, ಮಂಗಳೂರಿನ ಡೀನ್ ಮಸ್ಕರೇನ್ಹಸ್–ಕೊಡಗಿನ ಕೊಂಗಂಡ ಗಗನ್ ಕರುಂಬಯ್ಯ ಜೋಡಿ ಇದೀಗ ಸಮಗ್ರ ಚಾಂಪಿಯನ್ ಶಿಪ್ ಪಟ್ಟವನ್ನು ತನ್ನದಾಗಿಸಿಕೊಳ್ಳುವ ಮೂಲಕ ಎಲ್ಲರ ಗಮನ ಸೆಳೆದಿದೆ.



ಸ್ಪರ್ಧೆ ಹೆಚ್ಚು ಸವಾಲಿನ ವಿಚಾರವಾಗಿತ್ತು. ಕ್ರೀಡೆಯನ್ನು ನೈಜತೆಯೊಂದಿಗೆ ಆನಂದಿಸಿದ್ದೇವೆ. ರೊಬಸ್ಟಾ ರ‍್ಯಾಲಿ ಅಂತೆ ಇದು ಕೂಡ ಹೊಸ ಅನುಭವ ನೀಡಿದೆ. ಈ ಸಾಧನೆಯಿಂದ ಮತ್ತಷ್ಟು ಉತ್ಸಾಹ ಹೆಚ್ಚಾಗಿದೆ. ಮತ್ತಷ್ಟು ಸಾಧನೆ ಮಾಡುವ ಛಲ ಬಂದಿದೆ.
– ಕೊಂಗಂಡ ಗಗನ್ ಕರುಂಬಯ್ಯ, ಚಾಂಪಿಯನ್ ರ‍್ಯಾಲಿಪಟು.

ಯುವ ರ‍್ಯಾಲಿ ಪಟುಗಳ ಈ ಸಾಧನೆ ನಿಜವಾಗಿಯೂ ಮೆಚ್ಚತಕ್ಕದ್ದು, ಇದು ಬಹಳ ಸಂತೋಷದ ವಿಚಾರ. ಈ ರೀತಿಯ ಸಾಧನೆ ಮಾಡುವುದು ಸುಲಭವಲ್ಲ, ಈ ಯಶಸ್ಸು ಕೊಡಗಿನ ಯುವ ಜನತೆಗೆ ಮತ್ತು ಎಲ್ಲಾ ಮೋಟಾರ್ ಸ್ಪೋರ್ಟ್ಸ್ ಉತ್ಸಾಹಿಗಳಿಗೆ ದೊಡ್ಡ ಸ್ಫೂರ್ತಿಯಾಗಿದೆ. ಅಂತಿಮ ಹಂತದ ರ‍್ಯಾಲಿ (ಸುತ್ತು 6) ಮಹಾರಾಷ್ಟ್ರದ ನಾಸಿಕ್‌ನಲ್ಲಿ ನಡೆಯಲಿದ್ದರೂ, ಕೊನೆಯ ಹಂತ ಮುಗಿಯುವ ಮೊದಲೇ ಗಗನ್ ಡೀನ್ ಜೋಡಿ ಉತ್ತಮ ಅಂಕ (ಪಾಯಿಂಟ್)ಗಳನ್ನು ಪಡೆಯುವ ಮೂಲಕ ಚಾಂಪಿಯನ್‌ಶಿಪ್ ಅನ್ನು ಈಗಾಗಲೇ ವಶಪಡಿಸಿಕೊಂಡಿದೆ. ಈ ಅದ್ಭುತ ಮಟ್ಟವನ್ನು ತಲುಪಿದ್ದಕ್ಕಾಗಿ ಮತ್ತು ಭಾರತೀಯ ಮೋಟಾರ್ ಸ್ಪೋರ್ಟ್ಸ್‌ನಲ್ಲಿ ಗಮನಾರ್ಹ ಮೈಲಿಗಲ್ಲನ್ನು ಸೃಷ್ಟಿಸಿದ್ದಕ್ಕಾಗಿ ಗಗನ್ ಕರುಂಬಯ್ಯ ಮತ್ತು ಇಡೀ ತಂಡಕ್ಕೆ ಹೃತ್ಪೂರ್ವಕ ಅಭಿನಂದನೆಗಳು. –ತಿಮ್ಮಣ್ಣ ಉದ್ದಪಂಡ, ಸ್ಥಾಪಕರು, ರೋಬಸ್ಟಾ ಅಡ್ವೆಂಚರ್ ಅಂಡ್ ಸ್ಪೋರ್ಟ್ಸ್ ಅಕಾಡೆಮಿ

ಮದ್ಯ ಸೇವಿಸಿ ವಾಹನ ಚಾಲನೆ: ಪ್ರಕರಣ ದಾಖಲು

ವಿರಾಜಪೇಟೆ, ಫೆ.5– ಮದ್ಯ ಸೇವಿಸಿ ವಾಹನ ಚಾಲನೆ ಮಾಡುವ ಚಾಲಕರ ಮೇಲೆ ನಿಗಾ ವಹಿಸಿರುವ ವಿರಾಜಪೇಟೆ ನಗರ ಠಾಣೆ ಅಪರಾಧ ವಿಭಾಗದ ಪೊಲೀಸರು 9 ಪ್ರಕರಣ ದಾಖಲಿಸಿ ದಂಡ ವಿಧಿಸಿ ವಾಹನಗಳನ್ನು ವಶಪಡಿಸಿಕೊಂಡಿದ್ದಾರೆ.

ವಿರಾಜಪೇಟೆ ನಗರ ಠಾಣೆ ಅಪರಾದ ವಿಭಾಗದ ಉಪನಿರೀಕ್ಷಕ ಟಿ.ಎಂ. ಕಾವೇರಪ್ಪ ಹಾಗೂ ಸಿಬ್ಬಂದಿಗಳು ಸಂಜೆ ಹೊತ್ತಲ್ಲಿ ನಗರದ ಮುಖ್ಯ ರಸ್ತೆಯಲ್ಲಿ ವಾಹನ ಮತ್ತು ಚಾಲಕರನ್ನು ತಪಾಸಣೆ ನಡೆಸಿದರು. ಈ ಸಂದರ್ಭ ಮದ್ಯ ಸೇವನೆ ಮಾಡಿ ವಾಹನ ಚಾಲನೆಯಲ್ಲಿ ತೊಡಗಿದ್ದ 9 ವಾಹನಗಳ ಚಾಲಕರ ವಿರುದ್ಧ ಪ್ರಕರಣ ದಾಖಲಿಸಿ 90000 ರೂ, ದಂಡ ವಿಧಿಸಿ ನ್ಯಾಯಾಲಯದ ತೀರ್ಪು ಬರುವವರೆಗೂ ವಾಹನಗಳನ್ನು ವಶಪಡಿಸಿಕೊಳ್ಳಲಾಗಿದೆ ಎಂದು ಎಸ್‌ಐ, ಟಿ.ಎಂ.ಕಾವೇರಪ್ಪ ತಿಳಿಸಿದ್ದಾರೆ.

ಶಂಭುಲಿಂಗೇಶ್ವರನ ಹುಂಡಿಯಲ್ಲಿ 16.66 ಲಕ್ಷ ರೂ. ಸಂಗ್ರಹ


ಸಾಸಲು ಗ್ರಾಮದ ಸೋಮೇಶ್ವರ, ಶಂಭುಲಿಂಗೇಶ್ವರ ಹುಂಡಿ ಎಣಿಕೆ ನಡೆಯಿತು.

ಕಿಕ್ಕೇರಿ, ಫೆ.5– ಇಲ್ಲಿಗೆ ಸಮೀಪದ ಸಾಸಲು ಶ್ರೀಸೋಮೇಶ್ವರ, ಶಂಭುಲಿಂಗೇಶ್ವರ ದೇಗುಲದ ಹುಂಡಿಯಲ್ಲಿ 16.66 ಲಕ್ಷ ರೂ. ಸಂಗ್ರಹವಾಗಿದೆ.

ಮುಜರಾಯಿ ಇಲಾಖೆ ಅಧಿಕಾರಿಯೂ ಆದ ತಹಸೀಲ್ದಾರ್ ಎಸ್.ಯು.ಅಶೋಕ್ ಮಾರ್ಗದರ್ಶನದಲ್ಲಿ ಉಪ ತಹಸೀಲ್ದಾರ್ ವೀಣಾ ಅವರ ಸಮ್ಮುಖದಲ್ಲಿ ದೇಗುಲದ ಆವರಣದಲ್ಲಿ 16 ಹುಂಡಿಗಳನ್ನು ಪೊಲೀಸರ ಬಿಗಿ ಭದ್ರತೆಯಲ್ಲಿ ಎಣಿಕೆ ಮಾಡಲಾಯಿತು.

ಈ ವೇಳೆ ಹುಂಡಿಯಲ್ಲಿ 16,66,746 ರೂ., ಬೆಳ್ಳಿ ಲೇಪನದ ನಾಗರಸೆಡೆ, ತೊಟ್ಟಿಲಿನಂತಹ ವಸ್ತುಗಳನ್ನು ಹರಕೆ ರೂಪದಲ್ಲಿ ಭಕ್ತರು ದೇವರಿಗೆ ಅರ್ಪಿಸಿದ್ದರು.

ಬಳಿಕ ಹಣವನ್ನು ಕೆ.ಆರ್.ಪೇಟೆಯ ಬ್ಯಾಂಕ್ ಆಫ್ ಬರೋಡಾ ಬ್ಯಾಂಕ್‌ನ ದೇವಾಲಯದ ಖಾತೆಗೆ ಜಮಾ ಮಾಡಲಾಯಿತು.

ಈ ವೇಳೆ ರಾಜಸ್ವ ನಿರೀಕ್ಷಕ ಡಿ.ಆರ್. ನರೇಂದ್ರ, ಗ್ರಾಮ ಆಡಳಿತಾಧಿಕಾರಿ ತಿಪ್ಪೇಶ್, ಸುನೀಲ್ ಗಾಣಿಗೇರ್, ವನಜಾಕ್ಷಿ, ಗ್ರಾಮ ಸಹಾಯಕರು, ಬ್ಯಾಂಕ್ ಆಫ್ ಬರೋಡಾ ಸಿಬ್ಬಂದಿ, ಗ್ರಾಮದ ಮುಖಂಡರು ಇದ್ದರು.

ಯೋಗೇಶ್ ನಿಧನ



ಶ್ರೀರಂಗಪಟ್ಟಣ, ಫೆ.5– ತಾಲೂಕಿನ ಪಾಲಹಳ್ಳಿ ಗ್ರಾಮದ ನಿವಾಸಿ ಯೋಗೇಶ್ (56) ಗುರುವಾರ ಬೆಳಗ್ಗೆ ನಿಧನರಾದರು.

ಮೃತರು ಪತ್ನಿ, ಓರ್ವ ಪುತ್ರ, ಪುತ್ರಿ ಸೇರಿದಂತೆ ಅಪಾರ ಬಂಧುಗಳನ್ನು ಅಗಲಿದ್ದಾರೆ. ಅಂತ್ಯಕ್ರಿಯೆ ಸಂಜೆ ಸ್ವಗ್ರಾಮದಲ್ಲಿ ನೆರವೇರಿತು ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಮನರೇಗಾ ರಕ್ಷಣೆಗೆ ಒತ್ತಾಯಿಸಿ ಅನಿರ್ದಿಷ್ಟಾವಧಿ ಪ್ರತಿಭಟನೆ

ಭಾರತೀನಗರ, ಫೆ.5– ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆ ರಕ್ಷಣೆಗೆ ಒತ್ತಾಯಿಸಿ ಕೃಷಿ ಕೂಲಿಕಾರರ ಸಂಘದ ಪದಾಧಿಕಾರಿಗಳು ಇಲ್ಲಿಗೆ ಸಮೀಪದ ಚಿಕ್ಕರಸಿನಕೆರೆ ಗ್ರಾಪಂಗೆ ಮುತ್ತಿಗೆ ಹಾಕಿ ಅನಿರ್ದಿಷ್ಟಾವಧಿ ಪ್ರತಿಭಟನೆ ನಡೆಸಿದರು.

ಕೃಷಿ ಕೂಲಿಕಾರರ ಸಂಘದ ತಾಲೂಕು ಅಧ್ಯಕ್ಷ ಟಿ.ಪಿ.ಅರುಣ್‌ಕುಮಾರ್ ಮಾತನಾಡಿ, ಮನರ್ರೇಗಾ ಯೋಜನೆ ಬದಲಾಯಿಸಲು ಕೇಂದ್ರ ಸರ್ಕಾರ ಮುಂದಾಗಿದೆ. ಇದರಿಂದ ಬಡ ಕೂಲಿ ಕಾರ್ಮಿಕರಿಗೆ ಅನ್ಯಾಯವಾಗಲಿದೆ. ಹಾಗಾಗಿ ಗ್ರಾಪಂನಲ್ಲಿ ಮನರೇಗಾ ಹೆಸರಲ್ಲೇ ಉದ್ಯೋಗ ನೀಡಬೇಕೆಂದು ಆಗ್ರಹಿಸಿದರು.

ಕೇಂದ್ರ ಸರ್ಕಾರ ಜಾರಿಗೊಳಿಸಿರುವ ವಿಬಿ ಜಿ ರಾಮ್ ಜಿ ಯೋಜನೆಯನ್ನು ವಾಪಸ್ ಪಡೆಯಬೇಕು. ಇಲ್ಲದಿದ್ದರೆ ಎಲ್ಲಾ ಗ್ರಾಪಂ ಎದುರು ಉಗ್ರ ಪ್ರತಿಭಟನೆ ಹಮ್ಮಿಕೊಳ್ಳಬೇಕಾಗುತ್ತದೆ ಎಂದು ಎಚ್ಚರಿಕೆ ನೀಡಿದ ಅವರು, ನಮ್ಮ ಮನವಿಯನ್ನು ಕೇಂದ್ರ ಸರ್ಕಾರಕ್ಕೆ ಪಿಡಿಓ ತಲುಪಿಸಬೇಕು ಎಂದರು.


ಮನರೇಗಾ ಯೋಜನೆ ರಕ್ಷಣೆಗೆ ಒತ್ತಾಯಿಸಿ ಪ್ರತಿಭಟನೆ ನಡೆಸಲಾಯಿತು.

ಕೂಲಿಕಾರರಿಗೆ ಬಹಳಷ್ಟು ತೊಂದರೆ ಕೊಡುತ್ತಾ ಬಂದಿರುವ ಗ್ರಾಪಂ ಅಧಿಕಾರಿಗಳು 2 ತಿಂಗಳಾದರೂ ಕೂಲಿಕಾರರಿಗೆ ಉದ್ಯೋಗ ಖಾತರಿ ಯೋಜನೆಯಡಿ ಕೆಲಸ ಮಾಡಿದವರಿಗೆ ಹಣ ಬಿಡುಗಡೆ ಮಾಡಿಲ್ಲ. ಈ ಬಗ್ಗೆ ಜಿಪಂ, ತಾಪಂ ಅಧಿಕಾರಿಗಳೊಂದಿಗೆ ಚರ್ಚಿಸಿದರೂ ಯಾವುದೇ ಪ್ರಯೋಜನವಾಗಿಲ್ಲ ಎಂದರು.

ಕೂಲಿಕಾರರಿಂದ ಬಾಕಿ ಉಳಿಸಿಕೊಂಡಿರುವ ಪ್ರೋತ್ಸಾಹ ಧನವನ್ನು ಕೂಡಲೇ ಬಿಡುಗಡೆ ಮಾಡಬೇಕು. ಗುರುದೇವರಹಳ್ಳಿಯ ಜಿ.ಮಾದೇಗೌಡರ ಬಡಾವಣೆಯಲ್ಲಿ ಶುದ್ಧ ಕುಡಿಯುವ ನೀರಿನ ಘಟಕ ಸ್ಥಾಪಿಸಲು ಕೂಡಲೇ ಕ್ರಮ ವಹಿಸಬೇಕು ಎಂದು ಆಗ್ರಹಿಸಿದರು.

ಪ್ರತಿಭಟನೆಯಲ್ಲಿ ಕೃಷಿ ಕೂಲಿಕಾರರ ಸಂಘದ ವಲಯ ಸಮಿತಿ ಅಧ್ಯಕ್ಷ ಈರೇಗೌಡ, ಕಾರ್ಯದರ್ಶಿ ನಾಗಮ್ಮ, ಕಾಯಕ ಬಂಧುಗಳಾದ ಬಿರೇಶ್, ಬಸವರಾಜು, ಕೃಷ್ಣ ಪ್ರೇಮ, ರೇಣುಕಾ, ಲಕ್ಷ್ಮಿ, ದೇವರಾಜು, ಮದ್ದೂರಯ್ಯ, ಯಶೋಧಮ್ಮ, ಪುಟ್ಟತಾಯಮ್ಮ, ಗೌರಮ್ಮ, ಚಂದ್ರಮ್ಮ, ವೆಂಕಟಸ್ವಾಮಿ, ಶಿವರತ್ನ, ಶಿವಮ್ಮ, ಚಿಕ್ಕಮ್ಮ, ಸಿದ್ದೇಗೌಡ ಹಲವರು ಭಾಗವಹಿಸಿದ್ದರು.

ಧರ್ಮಸ್ಥಳ ಸಂಸ್ಥೆಯಿಂದ ವಾತ್ಸಲ್ಯ ಕಿಟ್ ವಿತರಣೆ

ಕೆ.ಆರ್.ಪೇಟೆ, ಫೆ.5– ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ತಾಲೂಕಿನ 69 ಫಲಾನುಭವಿಗಳಿಗೆ ವಾತ್ಸಲ್ಯ ಕಿಟ್ ವಿತರಿಸಲಾಯಿತು.

ತಾಲೂಕು ಯೋಜನಾಧಿಕಾರಿ ತಿಲಕ್‌ರಾಜ್ ಮಾತನಾಡಿ, ನಿರ್ಗತಿಕರು ಹಾಗೂ ಯಾರು ಇಲ್ಲದವರನ್ನು ಗುರುತಿಸಿ ಅವರಿಗೆ ಪ್ರತಿ ತಿಂಗಳು ವಾತ್ಸಲ್ಯ ಮಾಸಾಶನ ನೀಡಲಾಗುತ್ತಿದೆ. ಇದರ ಜೊತೆಗೆ ವರ್ಷಕ್ಕೊಮ್ಮೆ ಅವರ ಜೀವನೋಪಾಯಕ್ಕೆ ಅಗತ್ಯವಿರುವ ವಸ್ತುಗಳು ಹಾಗೂ ಪರಿಕರಗಳನ್ನೊಳಗೊಂಡ ವಾತ್ಸಲ್ಯ ಕಿಟ್ ಅನ್ನು ನೀಡಲಾಗುತ್ತಿದೆ. ಅದೇ ರೀತಿ ಈ ಬಾರಿ 69 ಫಲಾನುಭವಿಗಳನ್ನು ಗುರುತಿಸಲಾಗಿದ್ದು, ಎಲ್ಲರಿಗೂ ಏಕಕಾಲದಲ್ಲಿ ಅವರ ಮನೆ ಬಾಗಿಲಿಗೆ ತೆರಳಿ ಗ್ರಾಮಸ್ಥರ ಸಮ್ಮುಖದಲ್ಲಿ ವಾತ್ಸಲ್ಯ ಕಿಟ್‌ಗಳನ್ನು ವಿತರಿಸಲಾಗುತ್ತಿದೆ ಎಂದು ತಿಳಿಸಿದರು. ಜ್ಞಾನ ವಿಕಾಸ ಸಮನ್ವಯಾಧಿಕಾರಿ ಅನಿತಾ, ಜಯ ಕರ್ನಾಟಕ ಸಂಘಟನೆ ತಾಲೂಕು ಅಧ್ಯಕ್ಷ ಹೆಚ್.ಆರ್.ಸೋಮಶೇಖರ್, ವಲಯದ ಮೇಲ್ವಿಚಾರಕಿ ಲಕ್ಷ್ಮಿ, ವಸಂತ, ಗ್ರಾಪಂ ಸದಸ್ಯ ಜಗದೀಶ್, ಸುಜಾತ, ಸಾಕಮ್ಮ, ಸೇವಾ ಪ್ರತಿನಿಧಿ ಬೇಬಿ ಸೇರಿದಂತೆ ಮತ್ತಿತರರಿದ್ದರು.



ಪಾಂಡವಪುರ ಪತ್ರಕರ್ತರ ಸಂಘಕ್ಕೆ ಚನ್ನಮಾದೇಗೌಡ ಅಧ್ಯಕ್ಷ


ಪಾಂಡವಪುರ ಪತ್ರಕರ್ತರ ಸಂಘದ ಅಧ್ಯಕ್ಷರಾಗಿ ಚನ್ನಮಾದೇಗೌಡ ಆಯ್ಕೆಯಾದರು.

ಪಾಂಡವಪುರ, ಫೆ5– ತಾಲೂಕು ಕಾರ್ಯನಿರತ ಪತ್ರಕರ್ತರ ಸಂಘದ ನೂತನ ಅಧ್ಯಕ್ಷರಾಗಿ ಚನ್ನಮಾದೇಗೌಡ ಹಾಗೂ ಪ್ರಧಾನ ಕಾರ್ಯದರ್ಶಿಯಾಗಿ ಟಿ.ವಿ.ಅನಿಲ್ ಕುಮಾರ್ ಅವಿರೋಧವಾಗಿ ಆಯ್ಕೆಯಾಗಿದ್ದಾರೆ.

ಉಳಿದಂತೆ ಉಪಾಧ್ಯಕ್ಷರಾಗಿ ಎಸ್.ನಾಗಸುಂದರ್, ಖಜಾಂಚಿ ಬೀರಶೆಟ್ಟಹಳ್ಳಿ ಭಾಸ್ಕರ್, ಕಾರ್ಯದರ್ಶಿಯಾಗಿ ಎಸ್.ರವಿಕುಮಾರ್ ಅವಿರೋಧವಾಗಿ ಆಯ್ಕೆಯಾದರು.

ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಉಪಾಧ್ಯಕ್ಷ ಮತ್ತಿಕೆರೆ ಜಯರಾಂ ಅವರ ನೇತೃತ್ವದಲ್ಲಿ ಚುನಾವಣಾ ಪ್ರಕ್ರಿಯೆ ನಡೆಯಿತು. ಚುನಾವಣಾಧಿಕಾರಿಯಾಗಿ ಜಿಲ್ಲಾ ಕಾರ್ಯದರ್ಶಿ ಹೆಚ್.ಶಿವರಾಜು ಕಾರ್ಯನಿರ್ವಹಿಸಿದರು. ಈ ವೇಳೆ ಕಾರ್ಯನಿರತ ಪತ್ರಕರ್ತರ ಸಂಘದ ಕಾರ್ಯದರ್ಶಿ ಸೋಮಶೇಖರ್ ಕೆರಗೋಡು, ಜಿಲ್ಲಾಧ್ಯಕ್ಷ ಕೆ.ಎನ್.ರಾಘವೇಂದ್ರ, ಉಪಾಧ್ಯಕ್ಷ ಕೆ.ಸಿ.ಮಂಜುನಾಥ್, ಸಿ.ಎ.ಲೋಕೇಶ್, ರವಿ, ಕಾರ್ಯದರ್ಶಿಗಳಾದ ಕೆ.ಎನ್.ನಾಗೇಗೌಡ, ನಾಗೇಶ್, ಹೆಚ್.ಶಿವರಾಜು, ಜಿಲ್ಲಾ ನಿರ್ದೇಶಕ ಕುಮಾರಸ್ವಾಮಿ, ಜಿಲ್ಲಾ ಮಾಜಿ ಉಪಾಧ್ಯಕ್ಷ ಬಿ.ಎಸ್.ಜಯರಾಂ, ಜಿಲ್ಲಾ ಮಾಜಿ ಕಾರ್ಯದರ್ಶಿ ಸಿ.ಆರ್.ರಮೇಶ್ ಇದ್ದರು.

ನಾಳೆ 'ನಾನು ಕಾಫಿರ' ಪುಸ್ತಕ ಬಿಡುಗಡೆ

ಮಂಡ್ಯ, ಫೆ5– ಅಖಿಲ ಭಾರತ ಸಾಹಿತ್ಯ ಪರಿಷತ್ ಮತ್ತು ಸ್ವರಾಷ್ಟ್ರ ಪ್ರಕಾಶನ ಸಹಯೋಗದಲ್ಲಿ 'ನಾನು ಕಾಫಿರ' ಪುಸ್ತಕ ಬಿಡುಗಡೆ ಸಮಾರಂಭವನ್ನು ಫೆ.7ರಂದು ಬೆಳಗ್ಗೆ 10.30ಕ್ಕೆ ನಗರದ ಡಾ.ಬಿ.ಆರ್. ಅಂಬೇಡ್ಕರ್ ಭವನದಲ್ಲಿ ಆಯೋಜಿಸಲಾಗಿದೆ ಎಂದು ಕೃತಿಯ ಕರ್ತೃ ಡಾ. ಸುಧಾಕರ್ ಹೊಸಳ್ಳಿ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಭಾರತವನ್ನು ವಿಭಜಿಸಲು ಅಂಬೇಡ್ಕರ್ ಅವರನ್ನು ಹಿಂದೂ ಧರ್ಮದ ವಿರುದ್ಧ ಗುರಾಣಿಯಾಗಿ ಬಳಸಲಾಗುತ್ತಿದೆ. ಈ ಸಂಬಂಧ ಹಿಂದೂ ಸಮಾಜದ ಜಾಗೃತಿ ಅಂಗವಾಗಿ 'ನಾನು ಕಾಫಿರ' ಕೃತಿ ಬಿಡುಗಡೆ ಮಾಡಲಾಗುತ್ತಿದೆ ಎಂದರು.

ಬಿಜೆಪಿ ರಾಜ್ಯ ಸಂಘಟನಾ ಪ್ರಧಾನ ಕಾರ್ಯದರ್ಶಿ ಬಿ.ಎಲ್.ಸಂತೋಷ್ ಕಾರ್ಯಕ್ರಮ ಉದ್ಘಾಟಿಸಿ, ಪುಸ್ತಕ ಬಿಡುಗಡೆ ಮಾಡುವರು. ಸಂಸದ ಯದುವೀರ್ ಅಧ್ಯಕ್ಷತೆ ವಹಿಸುವರು. ಎಸ್‌ಬಿಇಟಿ ಕಾರ್ಯದರ್ಶಿ ಡಾ.ಮೀರಾಶಿವಲಿಂಗಯ್ಯ ಹಾಗೂ ಸ್ವರಾಷ್ಟ್ರ ಪ್ರಕಾಶನದ ಮಹಾಪೋಷಕ ಚಂದ್ರಶೇಖರ್ ಭಾಗವಹಿಸಲಿದ್ದಾರೆ. ಸಂವಿಧಾನ ತಜ್ಞ, ಲೇಖಕ ಡಾ.ಸುಧಾಕರ ಹೊಸಳ್ಳಿ ಉಪಸ್ಥಿತರಿರುವರು ಎಂದರು.

ಕಾರ್ಯಕ್ರಮದಲ್ಲಿ ಪದ್ಮಶ್ರೀ ಪ್ರಶಸ್ತಿ ಪುರಸ್ಕೃತ, ಪುಸ್ತಕ ಪ್ರೇಮಿ ಎಂ.ಅಂಕೇಗೌಡ ಅವರನ್ನು ಸನ್ಮಾನಿಲಾಗುವುದು ಎಂದರು.

ಸುವರ್ಣಾವತಿ ಜಲಾಶಯದಲ್ಲಿ ಜಲಸಾಹಸಕ್ಕೆ ಚಾಲನೆ


ಜಲಸಾಹಸ ಕ್ರೀಡೋತ್ಸವಕ್ಕೆ ಶಾಸಕ ಸಿ.ಪುಟ್ಟರಂಗಶೆಟ್ಟಿ ಚಾಲನೆ ನೀಡಿದರು.

ಚಾಮರಾಜನಗರ, ಫೆ.5– ಯುವಕರು ಹಾಗೂ ಸಾರ್ವಜನಿಕರನ್ನು ಕ್ರೀಡೆಗೆ ಉತ್ತೇಜಿಸುವ ಸಲುವಾಗಿ ಇಲ್ಲಿನ ಸುವರ್ಣಾವತಿ ಜಲಾಶಯದಲ್ಲಿ ಗುರುವಾರ ಆರಂಭವಾದ ಜಲಸಾಹಸ ಕ್ರೀಡೋತ್ಸವಕ್ಕೆ ಶಾಸಕ ಸಿ.ಪುಟ್ಟರಂಗಶೆಟ್ಟಿ ಚಾಲನೆ ನೀಡಿದರು.

ತಾಲೂಕಿನ ಅಟ್ಟುಗೂಳಿಪುರ ಗ್ರಾಮದ ಸುವರ್ಣಾವತಿ ಜಲಾಶಯದಲ್ಲಿ ಜಿಲ್ಲಾಡಳಿತ, ಜಿಪಂ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಹಾಗೂ ಬೆಂಗಳೂರಿನ ಜನರಲ್ ತಿಮ್ಮಯ್ಯ ರಾಷ್ಟ್ರೀಯ ಸಾಹಸ ಅಕಾಡಮಿ ಸಹಯೋಗದಲ್ಲಿ ಹಮ್ಮಿಕೊಂಡಿರುವ 2 ದಿನಗಳ ಜಲಸಾಹಸ ಕ್ರೀಡೋತ್ಸವವನ್ನು ಜಲಾಶಯಕ್ಕೆ ದೀಪಾರತಿ ಮಾಡುವ ಮೂಲಕ ಉದ್ಘಾಟಿಸಿ ಮಾತನಾಡಿದ ಶಾಸಕರು, ಜಾನಪದ ಕಲೆಗಳ ತವರೂರು ಚಾಮರಾಜನಗರ ಜಿಲ್ಲೆ ಪ್ರವಾಸಿ ತಾಣವಾಗಿಯೂ ಹೆಸರುವಾಸಿಯಾಗಿದೆ. ವಿಶೇಷ ಅನುದಾನ ಬಳಸಿ ಸುವರ್ಣಾವತಿ ಜಲಾಶಯವನ್ನು ಅಭಿವೃದ್ಧಿಪಡಿಸಲು 2008 ರಿಂದಲೂ ಬೇಡಿಕೆ ಇಡುತ್ತಿದ್ದೇನೆ. ಅಲ್ಲದೇ ಜಲಾಶಯವನ್ನು ಉತ್ತಮ ಪ್ರವಾಸಿ ತಾಣವಾಗಿ ಮಾರ್ಪಡಿಸಲು 43 ಕೋಟಿ ರೂ.ಗಳ ಅಂದಾಜು ಪಟ್ಟಿಯನ್ನು ಈಗಾಗಲೇ ಸರ್ಕಾರಕ್ಕೆ ಸಲ್ಲಿಸಲಾಗಿದೆ. ಅನುದಾನ ಬಿಡುಗಡೆಯಾಗುವ ನಿರೀಕ್ಷೆ ಇದೆ ಎಂದರು.

> 2 ದಿನ ನಡೆಯುವ ಜಲಸಾಹಸ ಕ್ರೀಡೋತ್ಸವದಲ್ಲಿ ಮೊದಲ ದಿನ ಯುವಕರು, ವಿವಿಧ ಕಾಲೇಜು ವಿದ್ಯಾರ್ಥಿಗಳು ಮತ್ತು 2ನೇ ದಿನ ಸಾರ್ವಜನಿಕರು ಪಾಲ್ಗೊಳ್ಳಬಹುದಾಗಿದೆ. ಜಲಸಾಹಸ ಕ್ರೀಡೆ ಕ್ರೀಡಾಪಟುಗಳು ಹೊರಹೊಮ್ಮಲು ಉತ್ತಮ ವೇದಿಕೆಯಾಗಲಿದೆ. ಕ್ರೀಡೆಯಲ್ಲಿ ಭಾಗವಹಿಸಲು ತರಬೇತಿಯೂ ಅಗತ್ಯ. – ಶ್ರೀರೂಪ, ಜಿಲ್ಲಾಧಿಕಾರಿ.

ಜಲಸಾಹಸ ಕ್ರೀಡೆಗೆ ಜಿಲ್ಲೆಯಲ್ಲಿ ಉತ್ತಮ ವಾತಾವರಣವಿದೆ. ಸುವರ್ಣಾವತಿ ಜಲಾಶಯ ಸೇರಿದಂತೆ ಸುತ್ತಮುತ್ತಲಿನ ಕೆರೆಗಳು ತುಂಬಿದರೆ ಜಲಸಾಹಸ ಕ್ರೀಡೆಗೆ ಅನುಕೂಲವಾಗಲಿದೆ. ಕ್ರೀಡೋತ್ಸವದಲ್ಲಿ ಸಾರ್ವಜನಿಕರು, ಯುವಜನರು ಹೆಚ್ಚಾಗಿ ಪಾಲ್ಗೊಂಡು ಮುಂದಿನ ದಿನಗಳಲ್ಲಿ ಜಲಸಾಹಸ ಕ್ರೀಡೆ ಜಿಲ್ಲೆಯಲ್ಲಿ ನಿರಂತರವಾಗಿ ನಡೆಯುವಂತೆ ನೋಡಿಕೊಳ್ಳಬೇಕು ಎಂದ ಅವರು ನಗರದ ಜಿಲ್ಲಾ ಕ್ರೀಡಾಂಗಣದಲ್ಲಿ ಈಜುಕೊಳ (ಸ್ವಿಮ್ಮಿಂಗ್ ಫೂಲ್) ನಿರ್ಮಾಣಕ್ಕಾಗಿ 15 ಕೋಟಿ ಅಂದಾಜುಪಟ್ಟಿ ತಯಾರಿಸಲಾಗಿದೆ ಎಂದರು.

ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಮಹಮದ್ ಅಸ್ಗರ್ ಮುನ್ನಾ ಮಾತನಾಡಿ ಜಿಲ್ಲೆಯಲ್ಲಿ ಸಾಕಷ್ಟು ಕ್ರೀಡಾಪಟುಗಳಿದ್ದು, ಅವರನ್ನು ಪ್ರೇರೇಪಿಸಲು ಜಲಸಾಹಸ ಕ್ರೀಡೆ ಸಹಕಾರಿಯಾಗಿದೆ. ರಾಜ್ಯ ಮಟ್ಟದಲ್ಲಿ ಜಲಸಾಹಸ ಕ್ರೀಡೆ ಪ್ರಚಲಿತವಾಗಬೇಕು. ಜಲ ಸಾಹಸ ಕ್ರೀಡೆಯನ್ನು, ಜಿಲ್ಲೆಯಲ್ಲಿ ಹೆಚ್ಚಾಗಿ ಆಯೋಜಿಸಬೇಕು. ಜಿಲ್ಲೆಯ ಯುವಕರು ಹಾಗೂ ಸಾರ್ವಜನಿಕರು ಜಲಸಾಹಸ ಕ್ರೀಡೆ ಸದುಪಯೋಗ ಪಡೆಯುವಂತೆ ಸಲಹೆ ನೀಡಿದರು.

ಈ ವೇಳೆ ಜಿಲ್ಲಾ ಪಂಚಾಯತಿ ಸಿಇಓ ಮೋನಾರೋತ್, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕ ಕೆ. ಸುರೇಶ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಎಸ್. ಚಿದಂಬರ, ಜನರಲ್ ತಿಮ್ಮಯ್ಯ ರಾಷ್ಟ್ರೀಯ ಸಾಹಸ ಅಕಾಡೆಮಿ ಪ್ರಶಿಕ್ಷಕರಾದ ಶಬ್ಬೀರ್, ದಿನೇಶ್ ಎಸ್.ಸುವರ್ಣ, ಅಟ್ಟುಗೂಳಿಪುರ ಗ್ರಾಪಂ ಕಾರ್ಯದರ್ಶಿ ಧರ್ಮರಾಜ್ ಇತರರಿದ್ದರು.

ಎನ್.ಕುಮಾರ್ ನಿಧನ



ಯಳಂದೂರು, ಫೆ.5– ಇಲ್ಲಿನ ಪಟ್ಟಣ ಪಂಚಾಯಿತಿಯಲ್ಲಿ ಅರೆಕಾಲಿಕ ಚಾಲಕರಾಗಿ ಸೇವೆ ಸಲ್ಲಿಸುತ್ತಿದ್ದ ಪಟ್ಟಣದ ಗೌತಮ್ ಬಡಾವಣೆ ನಿವಾಸಿ ಎನ್.ಕುಮಾರ್(55) ಗುರುವಾರ ಸಂಜೆ ನಿಧನರಾದರು. ಮೃತರು ಪತ್ನಿ ಪದ್ಮಾ, ಓರ್ವ ಪುತ್ರ, ಪುತ್ರಿ ಸೇರಿದಂತೆ ಅಪಾರ ಬಂಧುಗಳನ್ನು ಅಗಲಿದ್ದಾರೆ. ಅಂತ್ಯಕ್ರಿಯೆ ಶುಕ್ರವಾರ ಪಟ್ಟಣದ ಕಾರಾಪುರ ವಿರಕ್ತ ಮಠದ ಬಳಿಯ ಸಾರ್ವಜನಿಕ ಸ್ಮಶಾನದಲ್ಲಿ ನಡೆಯಲಿದೆ ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಮಾದಪ್ಪನ ಹುಂಡಿಯಲ್ಲಿ 2.14 ಕೋಟಿ ರೂ. ಸಂಗ್ರಹ

ಹನೂರು, ಫೆ.5– ತಾಲೂಕಿನ ಪ್ರಸಿದ್ಧ ಯಾತ್ರಾ ಕ್ಷೇತ್ರ ಶ್ರೀಮಲೆ ಮಹದೇಶ್ವರ ಬೆಟ್ಟದ ಮಹದೇಶ್ವರಸ್ವಾಮಿ ದೇವಸ್ಥಾನದ ಹುಂಡಿಯಲ್ಲಿ ಈ ಬಾರಿ 27 ದಿನಗಳ ಅವಧಿಯಲ್ಲಿ 2.14 ಕೋಟಿ ರೂ. ಸಂಗ್ರಹವಾಗಿದೆ.

ಮಹದೇಶ್ವರ ಬೆಟ್ಟದ ಬಸ್ ನಿಲ್ದಾಣದ ಬಳಿಯ ವಾಣಿಜ್ಯ ಸಂಕೀರ್ಣದಲ್ಲಿ ಸಾಲೂರು ಬೃಹನ್ ಮಠದ ಅಧ್ಯಕ್ಷ ಶ್ರೀಶಾಂತ ಮಲ್ಲಿಕಾರ್ಜುನ ಸ್ವಾಮೀಜಿ ಅವರ ಸಮ್ಮುಖದಲ್ಲಿ ಹುಂಡಿಗಳನ್ನು ತೆರೆದು, ಬಳಿಕ ಸಿಸಿ ಕ್ಯಾಮರಾ ಕಣ್ಗಾವಲಿನಲ್ಲಿ ಎಣಿಕೆ ಕಾರ್ಯ ಪ್ರಾರಂಭಿಸಲಾಯಿತು.

ಸರ್ಕಾರಿ ರಜಾ ದಿನ, ಸಂಕ್ರಾಂತಿ ಹಬ್ಬ, ಅಮಾವಾಸ್ಯೆ ಹಾಗೂ ವಿಶೇಷ ದಿನಗಳ ಹಿನ್ನೆಲೆಯಲ್ಲಿ ಮಾದಪ್ಪನ ಸನ್ನಿಧಿಯಲ್ಲಿ ನಡೆದ ವಿಶೇಷ ಪೂಜಾ ಮಹೋತ್ಸವ ಸೇರಿದಂತೆ ರಾಜ್ಯ ಸರ್ಕಾರದ ಮಹತ್ವಾಕಾಂಕ್ಷೆ ಯೋಜನೆಗಳಲ್ಲಿ ಒಂದಾದ ಶಕ್ತಿ ಯೋಜನೆಯ ಉಚಿತ ಬಸ್ ಪ್ರಯಾಣದ ಹಿನ್ನೆಲೆಯಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಭಕ್ತರು ದೇವಸ್ಥಾನಕ್ಕೆ ಭೇಟಿ ನೀಡಿದ್ದರಿಂದ ಹರಕೆ ರೂಪದಲ್ಲಿ 2,14,40,939 ರೂ. ನಗದು, 45 ಗ್ರಾಂ ಚಿನ್ನ ಹಾಗೂ 2 ಕೆಜಿ 320 ಗ್ರಾಂ ಬೆಳ್ಳಿ ಸಂಗ್ರಹವಾಗಿದೆ. ಅಲ್ಲದೇ ಚಲಾವಣೆಯಲ್ಲಿ ಇಲ್ಲದ 2,000 ಮುಖಬೆಲೆಯ 3 ನೋಟುಗಳು ಹಾಗೂ ವಿದೇಶಿಯ 9 ನೋಟುಗಳನ್ನು ಭಕ್ತರು ಹುಂಡಿಯಲ್ಲಿ ಹಾಕಿದ್ದಾರೆ.

ಎಣಿಕೆ ಕಾರ್ಯದಲ್ಲಿ ಶ್ರೀಮಲೆ ಮಹದೇಶ್ವರಸ್ವಾಮಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರದ ಕಾರ್ಯದರ್ಶಿ ಎ.ಈ. ರಘು, ಪ್ರಾಧಿಕಾರದ ನಾಮ ನಿರ್ದೇಶಿತ ಸದಸ್ಯರಾದ ಮರಿಸ್ವಾಮಿ, ಭಾಗ್ಯಮ್ಮ, ಮಹದೇವಪ್ಪ, ಗಂಗನ ತಿಮ್ಮಯ್ಯ, ಪ್ರಾಧಿಕಾರದ ಉಪಕಾರ್ಯದರ್ಶಿ ಚಂದ್ರಶೇಖರ, ಲೆಕ್ಕಧೀಕ್ಷಕರಾದ ಗುರುಮಲ್ಲಯ್ಯ, ಜಿಲ್ಲಾಡಳಿತ ಕಚೇರಿಯ ಕಲ್ಯಾಣಮ್ಮ ಹಾಗೂ ಪ್ರಾಧಿಕಾರದ ಸಿಬ್ಬಂದಿ, ಪೊಲೀಸ್ ಅಧಿಕಾರಿಗಳು ಮತ್ತು ಸಿಬ್ಬಂದಿ, ಕೊಳ್ಳೇಗಾಲದ ಬ್ಯಾಂಕ್ ಆಫ್ ಬರೋಡಾ ಮುಖ್ಯ ವ್ಯವಸ್ಥಾಪಕರು, ಸಿಬ್ಬಂದಿ ಸೇರಿದಂತೆ ಇತರರಿದ್ದರು.

ಮರಣ ಹೊಂದಿದ ಹಾಲು ಉತ್ಪಾದಕರ ಸದಸ್ಯರ ವಾರಸುದಾರರಿಗೆ ಪರಿಹಾರದ ಚೆಕ್ ವಿತರಣೆ



ಗುಂಡ್ಲುಪೇಟೆ, ಫೆ.5 (ಸೋವ್ರ್.ಜಿ)– ಮರಣ ಹೊಂದಿದ 61 ಹಾಲು ಉತ್ಪಾದಕರ ಸದಸ್ಯರ ವಾರಸುದಾರರಿಗೆ ಚಾಮರಾಜನಗರ ಸಹಕಾರಿ ಹಾಲು ಒಕ್ಕೂಟ ಹಾಗೂ ಚಾಮುಲ್ ರೈತ ಕಲ್ಯಾಣ ಟ್ರಸ್ಟ್ ವತಿಯಿಂದ ತಲಾ 15 ಸಾವಿರದಂತೆ ಒಟ್ಟು 9,15,000 ರೂ.ಗಳ ಪರಿಹಾರದ ಚೆಕ್‌ಗಳನ್ನು ಚಾಮುಲ್ ನಿರ್ದೇಶಕರಾದ ಹೆಚ್.ಎಸ್. ನಂಜುಂಡ ಪ್ರಸಾದ್ ಹಾಗೂ ಎಂ.ಪಿ. ಸುನೀಲ್ ವಿತರಿಸಿದರು.

ಚಾಮುಲ್ ನಿರ್ದೇಶಕ ಹೆಚ್.ಎಸ್. ನಂಜುಂಡ ಪ್ರಸಾದ್ ಮಾತನಾಡಿ, ಮರಣ ಹೊಂದಿದ ಹಾಲು ಉತ್ಪಾದಕರ ಸಹಕಾರ ಸಂಘಗಳ ಸದಸ್ಯರ ವಾರಸುದಾರರಿಗೆ ಒಕ್ಕೂಟದಿಂದ ಪರಿಹಾರ ನೀಡಲಾಗುತ್ತಿದೆ. ಅಲ್ಲದೇ 58 ವರ್ಷ ಒಳಪಟ್ಟ ಸದಸ್ಯರಿಗೆ ಸಂಘಗಳಲ್ಲಿ 1 ಲಕ್ಷದವರೆಗೆ ವಿಮ ಸೌಲಭ್ಯಗಳು ಲಭ್ಯವಿದೆ. ರಾಸುಗಳಿಗೆ ತುರ್ತು ಚಿಕಿತ್ಸೆಗೆ ಪ್ರತ್ಯೇಕ ವ್ಯವಸ್ಥೆ ಮಾಡಲಾಗಿದೆ. ಈ ಎಲ್ಲಾ ಸೌಲಭ್ಯಗಳನ್ನು ಒಕ್ಕೂಟದಿಂದ ಹಾಲು ಉತ್ಪಾದಕರ ಸಂಘಗಳ ಮೂಲಕ ಉತ್ಪಾದಕರಿಗೆ ನೀಡುತ್ತಿದ್ದು, ಈ ಸೌಲಭ್ಯಗಳು ಯಾವುದೇ ಖಾಸಗಿ ಡೇರಿಗಳಲ್ಲಿ ಲಭ್ಯವಿಲ್ಲ. ಹೀಗಾಗಿ ಇವುಗಳನ್ನು ಪ್ರತಿಯೊಬ್ಬರೂ ಸದುಪಯೋಗಪಡಿಸಿಕೊಳ್ಳಬೇಕು ಎಂದರು.

ನಿರ್ದೇಶಕ ಸುನೀಲ್ ಮಾತನಾಡಿದರು. ಈ ವೇಳೆ ವಿಸ್ತರಣಾಧಿಕಾರಿ ಹೆಚ್.ಪ್ರಕಾಶ್, ಸಿದ್ದಲಿಂಗೇಶ್, ರಂಜಿತಾ, ಮುದ್ದಪ್ಪ, ಉದಯ್, ಮಂಜೇಶ್, ಕಾರ್ಯದರ್ಶಿ ಮಹೇಂದ್ರ ಹಾಗೂ ತಾಲೂಕಿನ ಕಾರ್ಯದರ್ಶಿಗಳು, ಫಲಾನುಭವಿಗಳು ಹಾಜರಿದ್ದರು.

■ ಸತ್ಯಮೂರ್ತಿ ತೋಳಹುಣಸೆ

ಎವರಿ ಒನ್ ವಾಂಟ್ಸ್ ದಿಸ್ ಲವ್ ಸಾಂಗ್ ಬಿಡುಗಡೆ




ಚಿತ್ರರಂಗದಲ್ಲಿ ಹೊಸ ಪ್ರತಿಭೆಗಳ ಪ್ರವೇಶ ಹೆಚ್ಚಾಗಿದೆ. ಆ ಸಾಲಿಗೆ ಇದೀಗ ಯುವ ಉದ್ಯಮಿ ನಹೇಶ್ ಪೋಲ್ ಹೊಸ ಸೇರ್ಪಡೆ. ಚಿತ್ರರಂಗಕ್ಕೆ ನನ್ನದೊಂದು ಕೊಡುಗೆ ಕೊಡಬೇಕೆಂಬ ಆಸೆಯಿಂದ 'ಎವರಿ ಒನ್ ವಾಂಟ್ಸ್ ದಿಸ್' ಬಹುಭಾಷಾ ಚಿತ್ರವನ್ನು ನೀಡುತ್ತಿದ್ದಾರೆ. ಈ ಮೂಲಕ ಚಿತ್ರಪ್ರೇಮಿಗಳಿಗೆ ಒಂದು ಸುಂದರ ಸಿನಿಮ್ಯಾಟಿಕ್ ಅನುಭವ ನೀಡುವ ಅಭಿಲಾಷೆ ಹೊಂದಿದ್ದಾರೆ. ಈ ಚಿತ್ರವನ್ನು ತಮ್ಮ ರ್‍ಯಾಡಿಕಲ್ ಕಾನ್ಸೆಪ್ಟ್ ಸ್ಟುಡಿಯೋ ಮೂಲಕ ನಿರ್ಮಾಣ ಮಾಡುತ್ತಿದ್ದಾರೆ. ಜತೆಗೆ ನಿರ್ದೇಶನ, ಸಂಗೀತದ ಜವಾಬ್ದಾರಿಯನ್ನೂ ಹೊತ್ತಿದ್ದಾರೆ. ಚಿತ್ರದ ನಾಯಕ ಕೂಡ ಅವರೇ. ಸಾಗರಮೂರ್ತಿ ಅವರ ಛಾಯಾಗ್ರಹಣ ಮತ್ತು ನೃತ್ಯ ನಿರ್ದೇಶನವಿದೆ. ಕಾರ್ಯಕಾರಿ ನಿರ್ಮಾಪಕರಾಗಿ ಕೆ.ಬಾಲಸುಬ್ರಮಣ್ಯಂ ಕೈಜೋಡಿಸಿದ್ದಾರೆ.

ಈಗಾಗಲೇ ಒಂದಷ್ಟು ಭಾಗದ ಚಿತ್ರೀಕರಣ ಪೂರೈಸಿರುವ ನಹೇಶ್‌ಪೋಲ್ ಅವರು, ಒಂದು ವಿಶೇಷ ಹಾಡಿನ ಬಿಡುಗಡೆ ಸಮಾರಂಭವನ್ನು ಇಟ್ಟುಕೊಂಡಿದ್ದರು, ಈ ಸಂದರ್ಭದಲ್ಲಿ ಮಾತನಾಡಿದ ಅವರು, 2026ರಲ್ಲಿ ನಮ್ಮ ಬ್ಯಾನರ್‌ನಿಂದ ಮೂರು ಚಿತ್ರಗಳನ್ನು ನಿರ್ಮಿಸುವ ಯೋಜನೆಯಿದೆ. ಈ ಚಿತ್ರ ತೊಂಬತ್ತು ನಿಮಿಷ ಅವಧಿಯದ್ದಾಗಿದೆ. ಹಣ ಮಾಡುವ ಆಸೆಯಿಂದ ವಜ್ರದ ದರೋಡೆಗೆ ಪ್ಲಾನ್ ಮಾಡುವ ತಂಡ, ಮುಂದೆ ಅದರಿಂದಾಗುವ ಅನಾಹುತಗಳನ್ನು ಕಾಮಿಡಿ ಹಾಗೂ ಥ್ರಿಲ್ಲರ್ ಜಾನರ್ ಕಥೆಯ ಮೂಲಕ ಹೇಳುವ ಪ್ರಯತ್ನ ಮಾಡಿದ್ದೇವೆ. ಈಗಾಗಲೇ ಬಹುತೇಕ ಚಿತ್ರೀಕರಣ ಮುಗಿದಿದ್ದು ಸದ್ಯದಲ್ಲೇ ಚಿತ್ರವನ್ನು ಪ್ರೇಕ್ಷಕರ ಮುಂದೆ ತರುತ್ತಿದ್ದೇವೆ ಎಂದು ಹೇಳಿದರು.

ಈ ಚಿತ್ರದ ನಾಯಕಿ ಹಾಗೂ ಕ್ರಿಯೇಟಿವ್ ನಿರ್ದೇಶಕಿಯಾಗಿ ಅಕ್ಷರಾ ಸುರೇಶ್ ಅವರು ಕೆಲಸ ಮಾಡುತ್ತಿದ್ದಾರೆ. ಹಾಡಿನ ಕುರಿತು ಮಾತನಾಡುತ್ತ ಲವ್‌ಸಾಂಗ್ ಇದೆ. ಕನ್ನಡ, ಇಂಗ್ಲೀಷ್, ಹಿಂದಿ, ತೆಲುಗು ಮತ್ತು ತಮಿಳು ಭಾಷೆಯ ಸಾಹಿತ್ಯ ಈ ಹಾಡಲ್ಲಿದೆ. ಚಿತ್ರದಲ್ಲಿ ಒಟ್ಟು ಆರು ಹಾಡುಗಳಿವೆ. ಎಲ್ಲೆಡೆ ಮನರಂಜನೆ ಎಂಬ ಪರಿಕಲ್ಪನೆಯಡಿ ನಮ್ಮದೇ ಆದ ಅತ್ಯಾಧುನಿಕ ಪ್ರೊಜೆಕ್ಟರ್ ಇದ್ದು, ಆ ಮೂಲಕ ನೀವಿರುವ ಜಾಗದಲ್ಲೇ ಕಡಿಮೆ ದರದಲ್ಲಿ ಚಲನಚಿತ್ರ ತೋರಿಸುವ ಯೋಜನೆ ಹಾಕಿಕೊಂಡಿದ್ದೇವೆ ಎಂದು ವಿವರಿಸಿದರು.

ಇಂದಿನಿಂದ ಕರಿಕಾಡನ ಅಬ್ಬರ...!





ಕಾಡ ನಟರಾಜ್ ಕಥೆ ಬರೆದುನಿರ್ಮಿಸಿರುವ 'ಕರಿಕಾಡ' ಚಿತ್ರ ಇಂದಿನಿಂದ ರಾಜ್ಯಾದ್ಯಂತ ಬಿಡುಗಡೆಯಾಗುತ್ತಿದೆ. ಇತ್ತೀಚೆಗೆ ಚಿತ್ರದ ಟ್ರೈಲರ್ ಬಿಡುಗಡೆಯಾಯಿತು. ಕೆ.ವೆಂಕಟೇಶ್ ಚಿತ್ರದ ಚಿತ್ರಕಥೆ ಬರೆದು ಆ್ಯಕ್ಷನ್ ಕಟ್ ಹೇಳಿದ್ದಾರೆ.

ನಾಯಕ ಕಮ್ ನಿರ್ಮಾಪಕ ಕಾಡ ನಟರಾಜ್ ಮಾತನಾಡಿ, ನಮ್ಮ ಚಿತ್ರದಲ್ಲಿ 7 ಹಾಡುಗಳಿದ್ದು ಎಲ್ಲವೂ ಅದ್ಭುತವಾಗಿವೆ. ಆ ಪೈಕಿ ರತುನಿ ಸಾಂಗ್ ಬಿಟ್ಟು ಎಲ್ಲ ಹಾಡುಗಳನ್ನ ನಿರ್ದೇಶಕರೇ ಬರೆದಿದ್ದಾರೆ. ನಮ್ಮ ಚಿತ್ರ ನೋಡುಗರನ್ನು ನಗಿಸುತ್ತದೆ, ಅಳಿಸುತ್ತದೆ. ಕನ್ನಡ, ತಮಿಳು ಸೇರಿ ಐದು ಭಾಷೆಯಲ್ಲಿ ಚಿತ್ರ ತಯಾರಾಗಿದ್ದು, ವಾರದ ನಂತರ ತೆಲುಗು, ಹಿಂದಿ ಭಾಷೆಯಲ್ಲಿ ರಿಲೀಸ್ ಮಾಡುತ್ತೇವೆ. ಕನ್ನಡ, ಮಲಯಾಳಂ, ತಮಿಳು ಚಿತ್ರ ಫೆ6ಕ್ಕೆ ರಿಲೀಸಾಗುತ್ತಿದೆ. ನಮ್ಮ ಕಂಟೆಂಟ್ ಮೇಲೆ ನಮಗೆ 100% ನಂಬಿಕೆಯಿದೆ. ಉಳಿದಂತೆ ಪ್ರೇಕ್ಷಕರೇ ಗೆಲ್ಲಿಸಬೇಕು ಎಂದು ಹೇಳಿದರು. ನಿರ್ಮಾಪಕಿ ದೀಪ್ತಿ ದಾಮೋದರ ಮಾತನಾಡಿ ಚಿತ್ರದ ಪ್ರೊಡ್ಯೂಸರ್ ನಾನೇ ಆದರೂ ನಾನಿನ್ನೂ ಸಿನಿಮಾ ನೋಡಿಲ್ಲ. ನಿಮ್ಮ ಜತೆ ಚಿತ್ರ ನೋಡಲು ನಾನೂ ಕಾಯುತ್ತಿದ್ದೇನೆ ಎಂದರು.

ನಿರ್ದೇಶಕ ಕೆ. ವೆಂಕಟೇಶ್ ಮಾತನಾಡಿ, ನಮ್ಮ ಚಿತ್ರ ಸಿಹಿ, ಖಾರ ಎಲ್ಲಾ ಇರುವ ಹಬ್ಬ ದೂಟದಂತೆ. ಸಿನಿಮಾ ಮೇಲೆ ನಮಗೆ ಪೂರ್ತಿ ನಂಬಿಕೆ ಇದೆ ಎಂದರು.

ಕಾಡ ನಟರಾಜ್ ಅವರ ಪತ್ನಿ ದೀಪ್ತಿ ದಾಮೋದರ್ ಅವರ ನಿರ್ಮಾಣದ ಈ ಚಿತ್ರಕ್ಕೆ ಶಶಾಂಕ್ ಶೇಷಗಿರಿ ಹಾಗೂ ಅತಿಶಯ್ ಜೈನ್ ಸಂಗೀತ ಸಂಯೋಜನೆಯಿದೆ.



ಸುದೀಪ್ ಸಾಥ್

ಸಾಹಸ ನಿರ್ದೇಶಕ ಕೆ.ರವಿವರ್ಮ ಈಗ ನಿರ್ಮಾಪಕರಾಗಿದ್ದಾರೆ. ಅವರ ನಿರ್ಮಾಣದ ಚಿತ್ರ 'ರಕ್ಕಸ ಪುರದೊಳ್' ಇಂದು ಬಿಡುಗಡೆಯಾಗಿದೆ, ಇತ್ತೀಚೆಗೆ ಈ ಚಿತ್ರದ ಟೀಸರನ್ನು ಕಿಚ್ಚ ಸುದೀಪ್ ಹಾಗೂ ಜೋಗಿ ಪ್ರೇಮ್ ಬಿಡುಗಡೆ ಮಾಡಿದರು. ನಟ ರಾಜ್ ಬಿ. ಶೆಟ್ಟಿ ವಿಭಿನ್ನ ಪಾತ್ರದಲ್ಲಿ ಕಾಣಿಸಿಕೊಂಡಿರುವ ಈ ಚಿತ್ರಕ್ಕೆ ಜೋಗಿಪ್ರೇಮ್ ಶಿಷ್ಯ ರವಿಸಾರಂಗ ಆಕ್ಷನ್‌ಕಟ್ ಹೇಳಿದ್ದಾರೆ.

ವೇದಿಕೆಯಲ್ಲಿ ಕಿಚ್ಚ ಸುದೀಪ್ ಮಾತನಾಡಿ ರವಿವರ್ಮ ಅವರ ಬೆಳವಣಿಗೆಯನ್ನು ನಾನು ಕಂಡಿದ್ದೇನೆ. 96-97ರಲ್ಲಿ ಕನಸುಗಳನ್ನು ಹೊತ್ತು ಬಂದ ವ್ಯಕ್ತಿ, ತುಂಬಾ ಫೈಟ್ ಮಾಡಿದ್ದಾರೆ. ಬೇರೆ ರಾಜ್ಯಗಳಿಗೆ ಹೋಗಿ ಕನ್ನಡದ ಬಾವುಟ ಹಾರಿಸಿದ್ದಾರೆ. ಆದರೂ ತನ್ನನ್ನು ಕಳೆದುಕೊಂಡಿಲ್ಲ, ಆತನಿಗೋಸ್ಕರ ನಾನು ಎಲ್ಲಿಗೆ ಬೇಕಾದ್ರೂ ಹೋಗ್ತೀನಿ, ನಮಗೆ ಆಕ್ಷನ್‌ನಲ್ಲಿ ದೊಡ್ಡ ಹೆಸರು ಬರುತ್ತೆ ಎಂದರೆ ಅದಕ್ಕೆ ಇವರೇ ಕಾರಣ ಎಂದರು.

ನಾಯಕ ರಾಜ್ ಬಿ.ಶೆಟ್ಟಿ ಮಾತನಾಡಿ, ನಾನೀ ಸಿನಿಮಾ ಒಪ್ಪಿಕೊಳ್ಳಲು ನಿರ್ದೇಶಕರೇ ಕಾರಣ. ಅವರು ಕಥೆ ಹೇಳಿದ ರೀತಿ ನನಗೆ ಇಷ್ಟವಾಯಿತು. ಇದೊಂದು ಫ್ಯಾಮಿಲಿ ಎಂಟರ್‌ಟೈನರ್, ಖಾಕಿ ಹಾಕಿದ ಸಾಮಾನ್ಯ ಮನುಷ್ಯನೊಬ್ಬನ ಹೋರಾಟದ ಕಥೆಯಿದು ಎಂದರು.


ನಿರ್ಮಾಪಕ ಕೆ.ರವಿವರ್ಮಾ ಮಾತನಾಡಿ ನಾನು ಇಂಡಸ್ಟ್ರಿಗೆ ಬಂದು 30 ವರ್ಷ ಆಯ್ತು. ಎಲ್ಲರೂ ನನ್ನ ಮೇಲಿನ ಪ್ರೀತಿ ವಿಶ್ವಾಸಕ್ಕೆ ಕೆಲಸ ಮಾಡಿದ್ದಾರೆ. ಸಿನಿಮಾದಲ್ಲಿ ದುಡಿದಿದ್ದನ್ನು ಸಿನಿಮಾಗೇ ಹಾಕಿದ್ದೇನೆ. ಪ್ರೇಮ್ ಆರಂಭದಿಂದ ನನ್ನ ಕೈಹಿಡಿದು ನಡೆಸಿಕೊಂಡು ಬಂದಿದ್ದಾರೆ ಎಂದರು. ನಿರ್ದೇಶಕ ರವಿ ಸಾರಂಗ ಮಾತನಾಡಿ ಇದೊಂದು ಸೈಕಲಾಜಿಕಲ್ ಆಕ್ಷನ್, ಥ್ರಿಲರ್ ಚಿತ್ರ. ರಾಜ್ ಬಿ.ಶೆಟ್ಟಿ ಅವರು ಆಫ್ ಮೈಂಡೆಡ್ ಪೊಲೀಸ್ ಪಾತ್ರ ಮಾಡಿದ್ದಾರೆ ಎಂದರು. ನಾಯಕಿ ಸ್ವಾತಿಷ್ಠ ಕೃಷ್ಣ ಮಾತನಾಡಿ ಒಂದು ಸರಳ ಪ್ರೇಮಕಥೆ ನಂತರ ಎರಡನೇ ಚಿತ್ರವಿದು ಎಂದರು.



ಸಿನಿಪದಬಂಧ-613



ಉಮ್ಮತ್ತೂರು ಇಂದುಶೇಖರ್
ಮೊ.9880820462



ಹೆಸರು

ವಿಳಾಸ

ದೂರವಾಣಿ ಸಂಖ್ಯೆ

ಎಡದಿಂದ ಬಲಕ್ಕೆ

1. ಕಗ್ಗತ್ತಲು ಆವರಿಸಿಕೊಂಡಿರುವ ಕಪ್ಪನೆಯ ಬೆಟ್ಟ 4
4. ರವಿಚಂದ್ರನ್ ಅಭಿನಯದಲ್ಲಿ ಬಿಲ್ಲು ಹಿಡಿದು ಬಂದವನು 5
6. ಅನುಮಾನದಲ್ಲೂ ದೊರೆತ ಪ್ರಯೋಜನ 5
8. ಅನಂತ್‌ನಾಗ್ ಅಭಿನಯದಲ್ಲಿ ಅರಳಿದ ಬಿಳಿ ಬಣ್ಣದ ಪುಷ್ಪ 5
10. 'ಹೋದೆಯಾ ದೂರ ಓ ಜೊತೆಗಾರ...', ಹಾಡಿನ ಗಾಯಕಿ 5
15. ಜಗ್ಗೇಶ್ ನಮ್ಮ ದೇಶದ ಕರೆನ್ಸಿಯೊಂದಿಗಿದ್ದಾನೆ 5
17. ರವಿಚಂದ್ರನ್ ವೇಷ ತೊಟ್ಟು ವಾದ್ಯ ಹಿಡಿದವನು 5
18. ವಿಷ್ಣುವರ್ಧನ್ – ಗೀತಾ ಅಭಿನಯದ ಚಿತ್ರ 5
20. ಶಿವಣ್ಣನ ಯುದ್ಧ ಭೂಮಿ 4

ಮೇಲಿನಿಂದ ಕೆಳಕ್ಕೆ

1. ರಾಕಿಂಗ್ ಸ್ಟಾರ್ ಯಶ್– ಹರಿಪ್ರಿಯ ಅಭಿನಯದ ಚಿತ್ರ 5
2. ಲೈಲಾ ಜೊತೆ ಬಂದವನು 2
3. ಸಿದ್ದಲಿಂಗಯ್ಯ ನಿರ್ದೇಶನದಲ್ಲಿ ಸೋತುಹೋದವನು 4
4. ಕೋಗಿಲೆಯ ನುಡಿ 5
5. ಪೂಜಾ ಗಾಂಧಿಯ ಸಿಹಿ ತಿನಿಸು ಸ್ವಲ್ಪ ಹುಳಿ 3
7. ಅಕ್ಷಯದಲ್ಲಿ ಸಿಕ್ಕ ಲೂಸ್ ಮಾದನ ಚಿತ್ರ 2
9. ವಿಷ್ಣುವರ್ಧನ್ ಹಾಡಿದ ಜೋಗುಳ 2
11. ವಿಷ್ಣುವರ್ಧನ್, ಪ್ರಭಾಕರ್, ಡಾಲಿ, ಸೋನಾಕ್ಷಿ ಅಭಿನಯದ ಚಿತ್ರ 5
12. ಕಾಡಿನ ರಾಜ ಚಿತ್ರದ ನಾಯಕಿ 2
13. ಸ್ವರ್ಗಕ್ಕೆ ದಾರಿ ತೋರಿದಾಕೆ 2
14. ಅನೂಪ್ ಭಂಡಾರಿ ಚಿತ್ರ ಅಲೆ ಎಬ್ಬಿಸಿದೆ 5
15. ಒಲವಿನ ಆಸರೆ ಚಿತ್ರದ ನಾಯಕಿ 3
16. ಅರಸ –ಅರಸಿ 4
19. ರವಿಚಂದ್ರನ್ ಬುದ್ಧಿವಂತ 2

ಸಿನಿ ಪದಬಂಧ 612ರ ಉತ್ತರ

ಜೀ	ವ	ನ	ದಿ		ಅಂ					
ವ		ಗ್ಮ		ಬಂ	ಗಾ	ರ	ದ	ಮ	ನೆ	
ನ			ಮಾ		ರ			ಕ್ಕ		ತುಂ
ಜೋ	ಡಿ	ಜೀ	ವ		ಕ		ಗಾ	ಳಿ	ಮಾ	ತು
ಕಾ			ಮಾ			ಸಿ		ರ		ರು
ಲಿ		ಶಿ	ವ	ರಂ	ಜಿ	ನಿ		ಲ		
	ರಾ		ಮ			ಮಾ		ವ್ವ		ಸೀ
	ಜ	ಲ	ದು	ರ್ಗ		ತಾ	ಯಿ	ಮ	ಮ	ತೆ
	ಸಿಂ		ವೆ		ತಾ	ರೆ		ನೆ		ಯ
	ಹ		ಮಾ			ಯ		ತುಂ		ರು
		ಹಾ	ಡು	ಗಾ	ರ	ರು		ಬ	ಡ್ಡಿ	

ವಿಜೇತರು: ಬಿ.ಹೆಚ್.ಶ್ರೀನಿವಾಸಮೂರ್ತಿ, #3070/ಬಿ, 1ನೇ ಹಂತ, ಹೆಬ್ಬಾಳ್, ಲಕ್ಷ್ಮೀಕಾಂತನಗರ, ಮೈಸೂರು-570016

ವಿಳಾಸ: 'ಸಿನಿಬಂಧ' ವಿಭಾಗ, 'ಮೈಸೂರು ಮಿತ್ರ' ದಿನಪತ್ರಿಕೆ, ಬನ್ನಿಮಂಟಪ, ಮೈಸೂರು-570 015

'ಸರಳ ಸುಬ್ಬರಾವ್' 70ರ ಕಾಲಘಟ್ಟದ ಪ್ರೇಮಕಥೆ




ಶ್ರಾವಣಿ ಸುಬ್ರಮಣ್ಯ', 'ಶ್ರೀಕಂಠ'ದಂಥ ಸದಭಿರುಚಿಯ ಚಿತ್ರಗಳನ್ನು ನೀಡಿದ ಮಂಜು ಸ್ವರಾಜ್ ನಿರ್ದೇಶನದ ಮತ್ತೊಂದು ಚಿತ್ರ ಸರಳ ಸುಬ್ಬರಾವ್. ಕೃಷ್ಣ ಅಜೇಯ್‌ರಾವ್ ಹಾಗೂ ಮಿಶಾ ನಾರಂಗ್ ನಟಿಸಿರುವ ಈ ಚಿತ್ರದ ಟ್ರೈಲರ್ ಇತ್ತೀಚೆಗೆ ಬಿಡುಗಡೆಯಾಯಿತು.

ಎಪ್ಪತ್ತರ ಕಾಲಘಟ್ಟದಲ್ಲಿ ನಡೆಯುವ ಪ್ರೇಮಕಥೆ ಈ ಚಿತ್ರದಲ್ಲಿದೆ. ನಿರ್ದೇಶಕ ಮಂಜು ಸ್ವರಾಜ್ ಮಾತನಾಡುತ್ತ 'ಸರಳ ಸುಬ್ಬರಾವ್' ಇದೇ ತಿಂಗಳ 12ರಂದು ತೆರೆಗೆ ಬರಲಿದೆ. ಹಿರಿಯ ಕಾದಂಬರಿಗಾರ್ತಿ ತ್ರಿವೇಣಿ ಅವರ ಕಾದಂಬರಿಯನ್ನಾಧರಿಸಿ ಈ ಚಿತ್ರ ಮಾಡಿದ್ದೇನೆ. ಕನ್ನಡದಲ್ಲಿ ತೀರ ಅಪರೂಪ ಎನ್ನಬಹುದಾದ ಕಥೆ ಈ ಚಿತ್ರದಲ್ಲಿದ್ದು, ಎಲ್ಲರಿಗೂ ಇಷ್ಟವಾಗುತ್ತೆ ಎಂಬ ಭರವಸೆಯಿದೆ. ನೂರು ವರ್ಷಗಳ ಇತಿಹಾಸವಿರುವ ಮೈಸೂರಿನ ಪುರಾತನ ಮನೆಯೊಂದರಲ್ಲಿ ಚಿತ್ರದ ಬಹುತೇಕ ಚಿತ್ರೀಕರಣ ಮಾಡಿದ್ದೇವೆ. ಅಜೇಯ್ ರಾವ್ ಜತೆ ಪಂಜಾಬ್ ಮೂಲದ ಮಿಶಾ ನಾರಂಗ್ ನಾಯಕಿ ಪಾತ್ರ ಮಾಡಿದ್ದಾರೆ. ರಂಗಾಯಣ ರಘು, ವೀಣಾ ಸುಂದರ್, ರಘು ರಾಮನಕೊಪ್ಪ, ವಿಜಯ್ ಚಂಡೂರ್ ಹೀಗೆ ಬಹುತೇಕ ಕಲಾವಿದರು ನಮ್ಮ ಚಿತ್ರದಲ್ಲಿದ್ದಾರೆ. ಅಜನೀಶ್ ಲೋಕನಾಥ್ ಅವರ ಸಂಗೀತ, ಪ್ರದೀಪ್ ಪದ್ಮಕುಮಾರ್ ಅವರ ಛಾಯಾಗ್ರಹಣ ನಮ್ಮ ಚಿತ್ರಕ್ಕಿದೆ ಎಂದು ಹೇಳಿದರು.

ನಾನು ಹುಟ್ಟಿದ್ದು 1980ರಲ್ಲಿ. ಈ ಚಿತ್ರದ ಕಥೆ ನಡೆಯುವುದು 1970ರ ಕಾಲಘಟ್ಟದಲ್ಲಿ ಎಂದು ವಿವರ ನೀಡಿದ ನಾಯಕ ಅಜೇಯ್‌ರಾವ್, ದಂಪತಿಗಳ ನಡುವೆ ನಡೆಯೋ ಲವ್ ಸ್ಟೋರಿಯನ್ನು ಮಂಜು ಸ್ವರಾಜ್ ಹಾಗೂ ನಿರ್ಮಾಪಕ ಲೋಹಿತ್ ನಂಜುಂಡಯ್ಯ ಅವರು ಆಯ್ಕೆ ಮಾಡಿಕೊಂಡಿದ್ದಾರೆ. ನಾನು ರೆಟ್ರೋಶೈಲಿಯ ಪಾತ್ರದಲ್ಲಿ ಕಾಣಿಸಿಕೊಂಡಿದ್ದೇನೆ, ಪ್ರೇಮಿಗಳ ದಿನದ ಸಂದರ್ಭದಲ್ಲಿ ನಮ್ಮ ಚಿತ್ರ ತೆರೆಗೆ ಬರಲಿದೆ ಎಂದರು.

ನಿರ್ಮಾಪಕ ಲೋಹಿತ್ ನಂಜುಂಡಯ್ಯ ಮಾತನಾಡುತ್ತ ನಿರ್ದೇಶಕರು ಹೇಳಿದ ಕಥೆ ನನಗೆ ಬಹಳ ಇಷ್ಟವಾಯಿತು. ಕನ್ನಡದಲ್ಲಿ ಇಂಥದ್ದೊಂದು ಕಥೆ ಬಂದಿಲ್ಲ, ತುಂಬಾ ಇಂಟರೆಸ್ಟಿಂಗ್ ಆಗಿದೆ, ಹಾಡುಗಳೂ ಅದ್ಭುತವಾಗಿ ಬಂದಿವೆ ಎಂದು ವಿವರಿಸಿದರು. ನಾಯಕಿ ಮಿಶಾ ನಾರಂಗ್ ಮಾತನಾಡುತ್ತ ಈ ಚಿತ್ರದಲ್ಲಿ ನಾನು ಗೃಹಿಣಿಯ ಪಾತ್ರ ಮಾಡಿದ್ದೇನೆ ಎಂದರು.

'ಫೆಬ್ರವರಿ 30' ಟ್ರೈಲರ್ ಬಿಡುಗಡೆ



ಇತ್ತೀಚಿನ ದಿನಗಳಲ್ಲಿ ಸೈಕಲಾಜಿಕಲ್ ಥ್ರಿಲ್ಲರ್ ಚಿತ್ರಗಳನ್ನೇ ಪ್ರೇಕ್ಷಕರು ಹೆಚ್ಚು ಇಷ್ಟಪಡುತ್ತಿದ್ದಾರೆ. ಆ ಸಾಲಿಗೆ 'ಫೆಬ್ರುವರಿ 30' ಮತ್ತೊಂದು ಸೇರ್ಪಡೆ. ಮೈಸೂರು ಮೂಲದ ಪ್ರಶಾಂತ್ ಎಂ.ಎಲ್. ಅವರ ನಿರ್ದೇಶನದ ಈ ಚಿತ್ರಕ್ಕೆ ಶಂಕರ ಮೂವೀಸ್ ಇಂಟರ್‌ನ್ಯಾಷನಲ್ ಅಡಿ ಜೋಸೆಫ್ ಬೇಬಿ ಅವರು ಬಂಡವಾಳ ಹೂಡಿದ್ದಾರೆ. ಬಿಗ್‌ಬಾಸ್ ಖ್ಯಾತಿಯ ಅಭಿಷೇಕ್ ಶ್ರೀಕಾಂತ್ ನಾಯಕನಾಗಿ ನಟಿಸಿರುವ ಈ ಚಿತ್ರದ ಟ್ರೈಲರ್ ಬಿಡುಗಡೆ ಸಮಾರಂಭ ಇತ್ತೀಚೆಗೆ ನಡೆಯಿತು.

ಈ ಸಂದರ್ಭದಲ್ಲಿ ನಿರ್ದೇಶಕ ಎಂ.ಎಲ್. ಪ್ರಶಾಂತ್ ಮಾತನಾಡುತ್ತಾ, ನಾನೊಬ್ಬ ಐಟಿ ಉದ್ಯೋಗಿ. ಒಂದಷ್ಟು ಕಿರು ಚಿತ್ರಗಳನ್ನು ನಿರ್ದೇಶಿಸಿದ್ದು, ಇದೇ ಮೊದಲ ಬಾರಿಗೆ ಸಿನಿಮಾ ನಿರ್ದೇಶನ ಮಾಡಿದ್ದೇನೆ. ಚಿಕ್ಕದಾಗಿ ಮಾಡೋಣ ಅಂತ ಆರಂಭಿಸಿದ ಚಿತ್ರವಿದು, ಆದ್ರೆ ಹೋಗ್ತಾ ಹೋಗ್ತಾ ದೊಡ್ಡ ಮಟ್ಟದಲ್ಲಿಯೇ ಆಯಿತು. ಈಗಾಗಲೇ ಚಿತ್ರೀಕರಣ ಮುಗಿದು ರಿಲೀಸ್‌ಗೆ ಸಿದ್ದವಾಗಿದೆ. ಸಿನಿಮಾ ತುಂಬಾ ಚೆನ್ನಾಗಿ ಬಂದಿದೆ ನಿರ್ಮಾಪಕರಿಗೆ ಕಥೆ ಇಷ್ಟವಾಗಿ ನಿರ್ಮಾಣಕ್ಕೆ ಮುಂದಾದರು. ಇದೊಂದು ಸೈಕಲಾಜಿಕಲ್ ಥ್ರಿಲ್ಲರ್ ಜಾನರ್ ಚಿತ್ರ ಫೆಬ್ರುವರಿ 30 ಅಂದ್ರೆ ಅನ್‌ಎಕ್ಸ್‌ಪೆಕ್ಟೆಡ್ ಡೇಟ್. ಪ್ರೇಕ್ಷಕರಿಗೆ ಖಂಡಿತ ಇಷ್ಟವಾಗುತ್ತೆ ಎಂದರು.

ನಟ ಅಭಿಷೇಕ್ ಶ್ರೀಕಾಂತ್ ಮಾತನಾಡಿ, ಇದು ನನ್ನ ಫಸ್ಟ್ ಹಾರರ್ ಚಿತ್ರ. ಈ ಕಥೆ ಕೇಳುವಾಗ ಯೂನಿಕ್ ಅನ್ನಿಸ್ತು ಜೋಸೆಫ್ ಬೇರೆ ರಾಜ್ಯದಿಂದ ಬಂದು ನಮ್ಮನ್ನ ನಂಬಿ ಬಂಡವಾಳ ಹಾಕಿದ್ದಾರೆ ಎಂದರು. ಚೇತನ್ ಮಾತನಾಡುತ್ತ ಫೆಬ್ರವರಿ ತಿಂಗಳಲ್ಲಿ ಬರೋದೇ 28 ದಿನ. ಸಿನಿಮಾಗೆ ಯಾಕೆ ಈ ಟೈಟಲ್ ಇಟ್ಟಿದ್ದೇವೆ ಅಂತ ಚಿತ್ರ ನೋಡಿದಾಗ ಖಂಡಿತ ತಿಳಿಯುತ್ತದೆ. ತಮಿಳುನಾಡಿನಿಂದ ಬಂದ ವ್ಯಕ್ತಿ ನಮ್ಮ ಕನ್ನಡ ಭಾಷೆಯಲ್ಲಿ ಚಿತ್ರ ಮಾಡುತ್ತಿದ್ದಾರೆ ಅನ್ನೋದು ಹೆಮ್ಮೆಯ ವಿಚಾರ ಎಂದರು. ಚಿತ್ರದ ನಾಯಕಿಯಾಗಿ ಸಾಹಿತ್ಯ ಶೆಟ್ಟಿ, ಅಕ್ಷಯ್, ಮನೋಜ್, ಶಿವಕುಮಾರ್ ಉಳಿದ ಪಾತ್ರಗಳಲ್ಲಿದ್ದಾರೆ. ಪಿ.ಎಂ. ಉನ್ನಿಕೃಷ್ಣನ್ ಅವರ ಛಾಯಾಗ್ರಹಣ, ಲಿಜಿನ್ ಪಂಬೋ ಅವರ ಸಂಗೀತ ಸಂಯೋಜನೆ ಈ ಚಿತ್ರಕ್ಕಿದೆ.

ಮೈಸೂರು ಮಿತ್ರ

ವಿವಿಧ ಸೇವಾ ಕಾರ್ಯದೊಂದಿಗೆ ಜಿಪಂ ಮಾಜಿ ಅಧ್ಯಕ್ಷ ಸಾ.ರಾ.ನಂದೀಶ್ ಹುಟ್ಟುಹಬ್ಬ ಆಚರಣೆ



ಜಿ.ಪಂ. ಮಾಜಿ ಅಧ್ಯಕ್ಷರಾದ ಸಾ.ರಾ.ನಂದೀಶ್ ಅವರಿಗೆ ಅವರ ಅಭಿಮಾನಿ ಬಳಗದಿಂದ ಅಭಿನಂದಿಸಿ ಶುಭಾಶಂಯ ಕೋರಿದರು.



ಸಾಲಿಗ್ರಾಮದಲ್ಲಿ ವಿವಿಧ ಸೇವಾ ಕಾರ್ಯಕ್ರಮಗಳ ಮೂಲಕ ಸಾ.ರಾ.ನಂದೀಶ್ ಅವರ ಹುಟ್ಟುಹಬ್ಬವನ್ನು ಅಭಿಮಾನಿ ಬಳಗದಿಂದ ವಿಶಿಷ್ಟವಾಗಿ ಆಚರಿಸಲಾಯಿತು.

ಭೇರ್ಯ: ಜಿ.ಪಂ.ಮಾಜಿ ಅಧ್ಯಕ್ಷರಾದ ಸಾ.ರಾ.ನಂದೀಶ್ ಅವರ 56ನೇ ಹುಟ್ಟು ಹಬ್ಬವನ್ನು ಅಭಿಮಾನಿ ಬಳಗದಿಂದ ಗುರುವಾರ ಸಾಲಿಗ್ರಾಮ ಪಟ್ಟಣದ ಗಾಂಧಿ ವೃತ್ತದಲ್ಲಿ ವಿವಿಧ ಸೇವಾ ಕಾರ್ಯಕ್ರಮಗಳ ಮೂಲಕ ಬಹಳ ವಿಶಿಷ್ಠವಾಗಿ ಆಚರಿಸಲಾಯಿತು.

ಗಾಂಧಿ ಪ್ರತಿಮೆಗೆ ಮಾಲಾರ್ಪಣೆ ಮಾಡಿದ ನಂತರ ಬೃಹತ್ ಗಾತ್ರದ ಕೇಕ್ ಕತ್ತರಿಸಲಾಯಿತು. ಬಳಿಕ ಸಾ.ರಾ. ನಂದೀಶ್ ತಂದೆ ಎಸ್.ಆರ್.ರಾಮೇಗೌಡ ಅವರು ಅನ್ನ ಸಂತರ್ಪಣೆ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು. ಇದಕ್ಕೂ ಮೊದಲು ಸಾಲಿಗ್ರಾಮ ಪಟ್ಟಣದ ಶ್ರೀ ಯೋಗನರಸಿಂಹ ದೇವಸ್ಥಾನದಲ್ಲಿ ಜಿ.ಪಂ. ಮಾಜಿ ಅಧ್ಯಕ್ಷ ಸಾ.ರಾ. ನಂದೀಶ್ ಅವರ ಹೆಸರಿನಲ್ಲಿ ಅಭಿಮಾನಿ ಬಳಗದಿಂದ ವಿವಿಧ ಪೂಜಾ ಕೈಂಕರ್ಯಗಳನ್ನು ನೆರವೇರಿಸಿದರು.

ಪಟ್ಟಣದ ಸಾರ್ವಜನಿಕ ಸ್ಮಶಾನ (ರುದ್ರಭೂಮಿ)ದಲ್ಲಿ ಶವ ಸಂಸ್ಕಾರಕ್ಕೆ ಮಾಡಲು ಬರುವ ಜನರಿಗೆ ಶಾಶ್ವತ ಕುಡಿಯುವ ನೀರಿ ವ್ಯವಸ್ಥೆ ಕಲ್ಪಿಸಿದ ಅಭಿಮಾನಿಗಳು ಸ್ಮಶಾನದ ಸುತ್ತ ಗಿಡಗಳನ್ನು ನೆಟ್ಟು ನೀರೆರದರು. ಗಿಡಗಳನ್ನು ನೆಟ್ಟರೇ ಸಾಲದು ನಿತ್ಯ ಗಿಡಗಳಿಗೆ ನೀರು ಹಾಕಬೇಕು ಅದಕ್ಕಾಗಿ ಗಿಡಗಳಿಗೆ ನೀರುಣಿಸಲು ತಮ್ಮ ಸ್ವಂತ ಹಣದಿಂದ ಸಾ.ರಾ.ನಂದೀಶ್ ಅವರು ಹನಿ ನೀರಾವರಿ ಮಾಡಿಸಿದ್ದಾರೆ ಎಂದು ಅಭಿಮಾನಿಯೊಬ್ಬರು ತಿಳಿಸಿದರು.

ತಮ್ಮ ಹುಟ್ಟು ಹಬ್ಬದಂದು ದುಂದು ವೆಚ್ಚ ಮಾಡದೇ ಹತ್ತು ಹಲವು ಸೇವಾ ಕಾರ್ಯಕ್ರಮಗಳನ್ನು ಮಾಡುತ್ತಿರುವ ಜಿ.ಪಂ. ಮಾಜಿ ಅಧ್ಯಕ್ಷರಾದ ಸಾ.ರಾ. ನಂದೀಶ್ ಅವರ ಸರಳತೆಯನ್ನು ಪಟ್ಟಣದ ಜನತೆ ಮೆಚ್ಚುಗೆ ವ್ಯಕ್ತಪಡಿಸಿದರು.

ಪಟ್ಟಣದ ಶಾಲಾ, ಕಾಲೇಜಿಗೆ ತೆರಳಿ ವಿದ್ಯಾರ್ಥಿಗಳಿಗೆ ಸಿಹಿ ವಿತರಿಸಲಾಯಿತು.

ನಾಳೆಯಿಂದ ಕನ್ಯಾಕುಮಾರಿ–ಕಾಶ್ಮೀರದವರೆಗೆ ರೈತ ಜಾಗೃತಿ ಯಾತ್ರೆ

ತಿ.ನರಸೀಪುರ, ಫೆ.5– ದೇಶದ ರೈತರ ಬಹು ಮುಖ್ಯ ಸಮಸ್ಯೆಗಳಾದ ಎಂ.ಎಸ್. ಸ್ವಾಮಿನಾಥನ್ ಸಮಿತಿಯ ಶಿಫಾರಸನ್ನು ಜಾರಿಗೆ ತರುವುದು, ಕೃಷಿ ಉತ್ಪನ್ನಗಳಿಗೆ ಕನಿಷ್ಠ ಬೆಂಬಲ ಬೆಲೆ ಖಾತ್ರಿ ಕಾನೂನು ಜಾರಿ, ರಾಷ್ಟ್ರೀಕೃತ ಬ್ಯಾಂಕುಗಳಿಂದ ಪಡೆದ ಕೃಷಿ ಸಾಲ ಸಂಪೂರ್ಣ ಮನ್ನಾ ಸೇರಿದಂತೆ ಇನ್ನಿತರ ವಿಷಯಗಳ ಬಗ್ಗೆ ಕೇಂದ್ರ ಸರ್ಕಾರದ ಗಮನ ಸೆಳೆಯಲು ಸಂಯುಕ್ತ ಕಿಸಾನ್ ಮೋರ್ಚಾ (ರಾಜಕೀಯತರ) ಸಂಘಟನೆ ನೇತೃತ್ವದಲ್ಲಿ ಕನ್ಯಾಕುಮಾರಿಯಿಂದ ಕಾಶ್ಮೀರದವರೆಗೆ ರೈತ ಜಾಗೃತಿ ಯಾತ್ರೆಯನ್ನು ಹಮ್ಮಿಕೊಳ್ಳಲಾಗಿದೆ ಎಂದು ರಾಜ್ಯ ಕಬ್ಬು ಬೆಳೆಗಾರರ ಸಂಘದ ಕಾರ್ಯಾಧ್ಯಕ್ಷ ಕಿರಗಸೂರು ಶಂಕರ್ ತಿಳಿಸಿದ್ದಾರೆ.

ಕಬಿನಿ ಅತಿಥಿ ಗೃಹದಲ್ಲಿ ನಡೆದ ಸಭೆಯಲ್ಲಿ ಚರ್ಚಿಸಲಾದ ನಂತರ ಅವರು ಈ ವಿಷಯ ತಿಳಿಸಿದರು. ಸಂಯುಕ್ತ ಮೋರ್ಚಾ ಮುಖ್ಯಸ್ಥರಾದ ಜಗಜಿತ್ ಸಿಂಗ್ ಧಲೇವಾಲಾ ಹಾಗೂ ರಾಷ್ಟ್ರೀಯ ಸಹ ಸಂಚಾಲಕರಾದ ರಾಜ್ಯ ಕಬ್ಬು ಬೆಳೆಗಾರ ಸಂಘದ ರಾಜ್ಯ ಅಧ್ಯಕ್ಷ ರೈತ ರತ್ನ ಕುರುಬೂರು ಶಾಂತ ಕುಮಾರ್ ನೇತೃತ್ವದಲ್ಲಿ ಫೆ.7 ರಂದು ಕನ್ಯಾಕುಮಾರಿಯಿಂದ ಯಾತ್ರೆ ಆರಂಭವಾಗಿ ಪಾಂಡಿಚೇರಿ, ತಮಿಳುನಾಡು



ಸಭೆಯ ನಂತರ ಸುದ್ದಿಗಾರರೊಂದಿಗೆ ಮಾತನಾಡುತ್ತಿರುವ ರೈತ ಮುಖಂಡರು.

ರಾಜ್ಯಗಳ ಮೂಲಕ ಫೆ. 10ರಂದು ಸಂಜೆ 5 ಗಂಟೆಗೆ ಚಾಮರಾಜನಗರದ ಮೂಲಕ ಕರ್ನಾಟಕಕ್ಕೆ ಆಗಮಿಸುತ್ತಿದೆ ಚಾಮರಾಜನಗರ ಮುಖ್ಯ ರಸ್ತೆಯ ಹಳ್ಳಿಗಳಲ್ಲಿ ಸಭೆ ನಡೆಸಿ ರೈತರಲ್ಲಿ ಜಾಗೃತಿ ಮೂಡಿಸಿ ಸಹಿ ಸಂಗ್ರಹ ಮಾಡಿಸಿ ಮೈಸೂರಿಗೆ ಆಗಮಿಸಲಿದೆ.

ಫೆ11ರಂದು 11 ಗಂಟೆಗೆ ಮೈಸೂರಿನ ಗಣಪತಿ ಸಚ್ಚಿದಾನಂದ ಸ್ವಾಮಿ ಆಶ್ರಮದಲ್ಲಿ ರೈತರ ಬೃಹತ್ ಸಮಾವೇಶ ಹಮ್ಮಿಕೊಳ್ಳಲಾಗಿದೆ. ಈ ಸಮಾವೇಶಕ್ಕೆ ತಾಲೂಕಿನ ರೈತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ರೈತರಿಂದ ಸಹಿ ಸಂಗ್ರಹ ಪತ್ರ ಸ್ವೀಕರಿಸಿ ಮಧ್ಯಾಹ್ನ 1 ಗಂಟೆಗೆ ಮಂಡ್ಯ ನಗರದಲ್ಲಿ ಸಹಿ ಸಂಗ್ರಹ ಪತ್ರ ಸ್ವೀಕರಿಸಿ ನಂತರ ಮದ್ದೂರು ಮೂಲಕ ಚನ್ನಪಟ್ಟಣ ರಾಮನಗರದಲ್ಲಿ ರೈತರ ಸಹಿ ಸಂಗ್ರಹ ಪತ್ರ ಪಡೆದು ಬೆಂಗಳೂರಿಗೆ ತೆರಳುತ್ತದೆ. ಅಲ್ಲಿ ವಾಸ್ತವ್ಯ ಹೂಡಲಿದೆ.

ಫೆ.12 ರ ಬೆಳಿಗ್ಗೆ ಮುಖ್ಯಮಂತ್ರಿಗಳನ್ನು ಭೇಟಿ ಮಾಡಿ ನಂತರ ರೈತ ಜಾಗೃತಿ ಯಾತ್ರೆಯ ಉದ್ದೇಶವನ್ನು ತಿಳಿಸಲಾಗುವುದು.

ಇಂದಿನ ಸಭೆಯಲ್ಲಿ ತಾಲೂಕು ಅಧ್ಯಕ್ಷ ಕುರುಬೂರು ಸಿದ್ದೇಶ್, ಜಿಲ್ಲಾ ಕಾರ್ಯಾಧ್ಯಕ್ಷ ಕಿರಗಸೂರು ಶಂಕರ್, ಹೆಗ್ಗೂರು ರಂಗರಾಜ್ ತಾಲೂಕು ಸಂಘಟನಾ ಕಾರ್ಯದರ್ಶಿ ಕುರುಬೂರು ಪ್ರದೀಪ್, ತಾಲೂಕು ಮಹಿಳಾ ಅಧ್ಯಕ್ಷೆ ಮುಡುಕುನಪುರ ರೂಪ ನಂಜುಂಡಸ್ವಾಮಿ, ಉಮೇಶ್, ಗೌರಿಶಂಕರ್, ರಾಜೇಶ್, ಯೋಗೇಶ್, ವಾಚ್ ಕುಮಾರ್, ನಾಗರಾಜು, ಶಾಂತರಾಜು, ರಾಮ್ ಮೂರ್ತಿ ಮಂಟೇಸ್ವಾಮಿ ಮುಂತಾದವರು ಇದ್ದರು.

ಹೆಚ್.ಡಿ.ಕೋಟೆಯಲ್ಲಿ ವಾತ್ಸಲ್ಯ ಕಿಟ್ ವಿತರಣೆ



ಮನಿಯಮ್ಮರಿಗೆ ವಾತ್ಸಲ್ಯ ಕಿಟ್ ಅನ್ನು ಕ್ಷೇತ್ರ ಯೋಜನಾಧಿಕಾರಿ ವಿ.ಭಾಸ್ಕರ್ ವಿತರಿಸಿದರು.

ಹೆಚ್.ಡಿ.ಕೋಟೆ: ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಬಿಸಿ ಟ್ರಸ್ಟ್ ವತಿಯಿಂದ 63 ಮಂದಿ ಫಲಾನುಭವಿಗಳಿಗೆ ವಾತ್ಸಲ್ಯ ಕಿಟ್ ವಿತರಣೆ ಮಾಡಲಾಯಿತು.

ಪಟ್ಟಣದ ನಿವಾಸಿ ಮನಿಯಮ್ಮ ಅವರಿಗೆ ವಾತ್ಸಲ್ಯ ಕಿಟ್ ಅನ್ನು ಕ್ಷೇತ್ರ ಯೋಜನಾಧಿಕಾರಿ ವಿ.ಭಾಸ್ಕರ್ ವಿತರಿಸಿ ಮಾತನಾಡಿ ದುಡಿಯಲು ಶಕ್ತಿಯಿಲ್ಲದೇ ಅತ್ಯಂತ ಅಸಹಾಯಕ ಸ್ಥಿತಿಯಲ್ಲಿರುವ ಅಶಕ್ತರಿಗೆ ಜೀವನ ನಿರ್ವಹಣೆಗಾಗಿ ಪ್ರತೀ ತಿಂಗಳು ಯೋಜನೆಯಿಂದ ಮಾಸಾಶನವನ್ನು ನೀಡಲಾಗುತ್ತಿದೆ. ತಾಲೂಕಿನಲ್ಲಿ 180 ಜನರಿಗೆ ಪ್ರತಿ ತಿಂಗಳು ಮಾಸಾಶನ ನೀಡಲಾಗುತ್ತಿದೆ. ಇದರಲ್ಲಿ ಮಾಸಾಶನ ಪಡೆಯುವ 63 ಸದಸ್ಯರಿಗೆ ಈ ದಿನ ದೈನಂದಿನ ಬಳಕೆ ವಸ್ತುಗಳಾದ ಪಾತ್ರೆ, ಚಾಪೆ, ದಿಂಬು, ದಿಂಬಿನ ಕವರ್, ಬೆಡ್ ಶೀಟ್, ಉಡುಗೆಯ ಬಟ್ಟೆ, ವಾತ್ಸಲ್ಯ ಮಿಕ್ಸ್, ಸೋಪು ಒಳಗೊಂಡ ವಾತ್ಸಲ್ಯ ಕಿಟ್ ಅನ್ನು ವಿತರಣೆ ಮಾಡಲಾಗಿದೆ ಎಂದರು.

ತಾಲೂಕು ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಕನ್ನಡ ಪ್ರಮೋದ ಮಾತನಾಡಿ ಪೂಜ್ಯ ವೀರೇಂದ್ರ ಹೆಗ್ಗಡೆಯವರು ಮಹಿಳೆಯರ ಆರ್ಥಿಕ ಸಬಲೀಕರಣ ಮಾಡುವುದರ ಜೊತೆಗೆ ಅನಾರೋಗ್ಯದಿಂದ ಬಳಲುತ್ತಿರುವ ಅಶಕ್ತರ ಅನುಕೂಲಕ್ಕಾಗಿ ಜನಮಂಗಲ ಕಾರ್ಯಕ್ರಮದಡಿಯಲ್ಲಿ ರಾಜ್ಯದ 4400 ಜನರಿಗೆ ವಾಕರ್, ವಾಟರ್ ಬೆಡ್ ಮತ್ತು ವ್ಹೀಲ್ ಚೇರನ್ನು ನೀಡಲಾಗಿದೆ ಎಂದರು.

ನಿರುದ್ಯೋಗಿಗಳಿಗೆ ಸಂಸ್ಥೆಯಿಂದ ಕಂಪ್ಯೂಟರ್, ಟೈಲರಿಂಗ್, ಕಸೂತಿ, ಸಿದ್ಧ ಉಡುಪು, ಬ್ಯೂಟಿಷಿಯನ್ ಸೇರಿದಂತೆ ಅನೇಕ ತರಬೇತಿಯನ್ನು ನೀಡಲಾಗುತ್ತಿದೆ.

ರಾಜ್ಯದಲ್ಲಿ 63 ಸಾವಿರ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ವೇತನ ನೀಡಲಾಗಿದ್ದು, 508 ಶಾಲೆಗಳಿಗೆ ಡೆಸ್ಕ್ ಮತ್ತು ಬೆಂಚುಗಳನ್ನು ನೀಡಿರುವುದು ಶೈಕ್ಷಣಿಕ ಅಭಿವೃದ್ಧಿಗೆ ವೀರೇಂದ್ರ ಹೆಗ್ಗಡೆಯವರ ಕೊಡುಗೆ ಸಾಕ್ಷಿ ಎಂದರು.

ಗಂಗಾಧರ್, ಮೇಲ್ವಿಚಾರಕಿ ಚೈತ್ರ, ಸೇವಾಪ್ರತಿನಿಧಿ ಮಂಗಳ ಹಾಗೂ ಮಹಿಳಾ ಸ್ವಸಹಾಯ ಸಂಘದ ಸದಸ್ಯರು ಇದ್ದರು.

ಇಂದಿನಿಂದ ರತ್ನಪುರಿಯಲ್ಲಿ ಹಿಂದೂ– ಮುಸ್ಲಿಂ ಭಾವೈಕ್ಯತೆ ಸಾರುವ ಕಾರ್ಯಕ್ರಮ

ಹುಣಸೂರು, ಫೆ.5– ತಾಲೂಕಿನ ರತ್ನಪುರಿ ಗ್ರಾಮದಲ್ಲಿ ಹಿಂದೂ–ಮುಸ್ಲಿಂ ಭಾವೈಕ್ಯತೆ ಸಾರುವ ಶ್ರೀ ಆಂಜನೇಯ ಸ್ವಾಮಿಯ 62ನೇ ವರ್ಷದ ಮಹಾಭಿಷೇಕ, ಪಲ್ಲಕ್ಕಿ ಉತ್ಸವ ಹಾಗೂ ಹಜರತ್ ಜಮಾಲ್ ಬೀಬೀ ಮಾ ಸಹೇಬಾ ಗಂಧೋತ್ಸವ ಉರುಸ್ ಜಾತ್ರಾ ಮಹೋತ್ಸವ ಫೆ.6 ರಿಂದ ಫೆ.9ರವರೆಗೆ ನಡೆಯಲಿದೆ ಎಂದು ಜಾತ್ರಾ ಮಹೋತ್ಸವ ಸಮಿಂಯ ಅಧ್ಯಕ್ಷ ಪ್ರಭು ತಿಳಿಸಿದರು.

ನಗರದ ಪತ್ರಿಕಾ ಕಚೇರಿಯಲ್ಲಿ ಪತ್ರಿಕಾ ಗೋಷ್ಠಿಯಲ್ಲಿ ಮಾತನಾಡಿದ ಅವರು, ಇಡೀ ರಾಜ್ಯವೇ ನೋಡುವಂತೆ ಮಾದರಿ ಗ್ರಾಮವಾಗಿರುವ ರತ್ನಪುರಿ ಗ್ರಾಮದಲ್ಲಿ ಹಿಂದೂ–ಮುಸ್ಲಿಂ ಎರಡು ಸಮುದಾಯಗಳು ಸೇರಿ ಸಾಮರಸ್ಯ ಮತ್ತು ಸೌಹಾರ್ದತೆಯಿಂದ ಭಾವೈಕ್ಯತೆ ಸಾರುವಂತೆ ದರ್ಗಾ ಜಾತ್ರೆ ಮತ್ತು ಉರುಸ್ ಅನ್ನು ಅದ್ದೂರಿಯಾಗಿ ಆಚರಿಸಲಾಗುವುದು ಎಂದರು.

ಶ್ರೀ ಆಂಜನೇಯ ಸ್ವಾಮಿ ಜಾತ್ರಾ ಮಹೋತ್ಸವ ಹಾಗೂ ಜನಾಬ್ ಜಮಾಲ್ ಬೀಬೀ ಮಾ ಸಾಹೆಬ ಉರುಸ್ ಅಂಗವಾಗಿ ಫೆ6 ಮತ್ತು ಫೆ7 ರಂದು ರಾಜ್ಯ ಮಟ್ಟದ ಹೊನಲು ಬೆಳಕಿನ ಮ್ಯಾಟ್ ಕಬ್ಬಡಿ ಪಂದ್ಯಾವಳಿ ಆಯೋಜಿಸಲಾಗಿದೆ. ಈ ಪಂದ್ಯಾವಳಿಗೆ ಉಡುಪಿ, ಮಂಗಳೂರು, ಬೆಳಗಾವಿ, ಸೇರಿದಂತೆ ರಾಜ್ಯ ವಿವಿದ ಕಡೆಗಳಿಂದ ಕ್ರೀಡಾಪಟುಗಳು ಆಗಮಿಸಲಿದ್ದಾರೆ.

ವಿಬಿ ಜಿ ರಾಮ್ ಜಿ ವಿರೋಧಿಸಿ, ನರೇಗಾ ಬೆಂಬಲಿಸಿ



ಸುತ್ತೂರು: ಬಡ ಕಾರ್ಮಿಕರಿಗೆ ನೆರವಾಗಲೆಂಬ ಉದ್ದೇಶದಿಂದ ಈ ಹಿಂದೆ ಕಾಂಗ್ರೆಸ್ ಸರ್ಕಾರ ಅಧಿಕಾರದಲ್ಲಿದ್ದ ವೇಳೆ ಜಾರಿಗೆ ತರಲಾಗಿದ್ದ ಮನ್ರೇಗಾ ಯೋಜನೆಯನ್ನು ರದ್ದುಗೊಳಿಸಿ, ಇದರ ಬದಲಾಯಿಸಿ ವಿಬಿ ಜಿ ರಾಮ್ ಜಿ ಯೋಜನೆ ಜಾರಿಗೆ ತರಲು ಕೇಂದ್ರ ಸರ್ಕಾರ ಮುಂದಾಗಿರುವುದು ಖಂಡನೀಯ ಎಂದು ವಿಧಾನಪರಿಷತ್ ಸದಸ್ಯ ಡಾ.ಯತೀಂದ್ರ ಸಿದ್ದರಾಮಯ್ಯ ವಾಗ್ದಾಳಿ ನಡೆಸಿದರು.

ವರುಣಾ ಕ್ಷೇತ್ರ ವ್ಯಾಪ್ತಿಯ ಹದಿನಾರು ಮೊಳೆ ಗ್ರಾಮದ ಗ್ರಾಮ ಪಂಚಾಯಿತಿ ಕಾರ್ಯಾಲಯದಲ್ಲಿ ಗುರುವಾರ ಆಯೋಜಿಸಲಾಗಿದ್ದ ಸಾರ್ವಜನಿಕ ಕುಂದು–ಕೊರತೆ ಸಭೆಯಲ್ಲಿ ಮಾತನಾಡಿ ಅವರು, ಮನಮೋಹನ್ ಸಿಂಗ್ ಅವರು ಪ್ರಧಾನಿಯಾಗಿದ್ದ ಸಂದರ್ಭದಲ್ಲಿ ಬಡ ಕೂಲಿ ಕಾರ್ಮಿಕರಿಗೆ ಅನು ಕೂಲವಾಗಲಿ ಎಂಬ ಉದ್ದೇಶದಿಂದ ವರ್ಷಪೂರ್ತಿ ಕೆಲಸ ನೀಡುವ ಮನ್ರೇಗಾ ಯೋಜನೆಯನ್ನು ಜಾರಿಗೆ ತಂದು ಯಶಸ್ವಿಯಾಗಿತ್ತು. ಆದರೆ ಇದೀಗ ಅಧಿಕಾರದಲ್ಲಿರುವ ಕೇಂದ್ರ ಬಿಜೆಪಿ ಸರ್ಕಾರ ಇದನ್ನು ವಿಬಿಜಿರಾಮ್‌ಜಿ ಹೆಸರಿನಡಿ ಜಾರಿಗೊಳಿಸಿದ್ದು, ಬಡವರಿಗೆ ಮೋಸ ಮಾಡಲು ಹೊರಟಿದೆ ಎಂದು ಕಿಡಿಕಾರಿದರು.

ಮೃಗಾಲಯ ಅಧ್ಯಕ್ಷ ಹಾಡ್ಯ ರಂಗಸ್ವಾಮಿ, ರಾಜ್ಯ ವಾಲ್ಮೀಕಿ ಅಭಿವೃದ್ಧಿ ನಿಗಮದ ಮಾಜಿ ಅಧ್ಯಕ್ಷ ಎಸ್.ಸಿ.ಬಸವರಾಜ್, ಶ್ರೀಕಂಠೇಶ್ವರ ಧರ್ಮದರ್ಶನ ಮಂಡಳಿ ಮಾಜಿ ಅಧ್ಯಕ್ಷ ಇಂದನ್ ಬಾಬು, ಕಲ್ಮಳ್ಳಿ ಬಾಬು, ರಾಜೇಶ್, ಕಾಡಾ ಅಧ್ಯಕ್ಷ ಮರಿಸ್ವಾಮಿ, ಎಂ.ಸಿ.ಹುಂಡಿ ಶಿವಪ್ರಸಾದ್, ಗ್ರಾಮ ಪಂಚಾಯತ್ ಅಧ್ಯಕ್ಷರಾದ ಸಣ್ಣತಾಯಿ, ನಟರಾಜ್, ಕುರುಬರ ತಾಲೂಕು ಅಧ್ಯಕ್ಷ ಕೆಂಪಣ್ಣ, ಕಲ್ಮಳಿ ಬಾಬು, ಬೊಕ್ಕಳ್ಳಿ ದೊರೆಸ್ವಾಮಿ, ಗೋವಿಂದ ಶೆಟ್ಟಿ, ಸಿದ್ಧಶೆಟ್ಟಿ, ಕರಿಯಪ್ಪ, ಪರಶಿವಮೂರ್ತಿ, ರವಿ, ಗಂಗನ ತಿಮ್ಮಯ್ಯ, ಸಿದ್ದಯ್ಯ, ಸೇರಿದಂತೆ ಕ್ಷೇತ್ರದ ಕಾಂಗ್ರೆಸ್ ಮುಖಂಡರು ಮತ್ತು ಗ್ರಾಮಸ್ಥರು ಭಾಗವಹಿಸಿದ್ದರು.

ಸಿಡಿಲು ಮಲ್ಲಿಕಾರ್ಜುನ ಸ್ವಾಮಿ ಜಾತ್ರೆಯಲ್ಲಿ ಅನ್ನದಾಸೋಹ



ಸಿಡಿಲು ಮಲ್ಲಿಕಾರ್ಜುನ ಸ್ವಾಮಿ ಜಾತ್ರೋತ್ಸವದ ಅಂಗವಾಗಿ ಅನ್ನದಾಸೋಹ ಕಾರ್ಯಕ್ರಮವನ್ನು ಗಾವಡಗೆರೆ ಮಠದ ಶ್ರೀ ನಟರಾಜ ಸ್ವಾಮೀಜಿ ಹಾಗೂ ಬೆಟ್ಟದಪುರದ ಚನ್ನಬಸವ ದೇಶಿ ಕೇಂದ್ರ ಸ್ವಾಮೀಜಿ, ದಿಂಡಗಾಡ್ ಮಠದ ಅಪ್ಪಾಜಿ ಸ್ವಾಮೀಜಿ, ನ್ಯಾಯಾಧೀಶರಾದ ಮಲ್ಲಿಕಾರ್ಜುನ್ ಹಾಗೂ ಇತರರ ಗಣ್ಯರು ಉದ್ಘಾಟಿಸಿದರು. ದಾಸೋಹ ಸಮಿತಿಯ ಕೆ.ಬಿ ಶಿವಕುಮಾರ ಸ್ವಾಮಿ, ಬೆಮ್ಮತಿ ಸುರೇಶ್, ಶಿವದೇವ್, ಮಂಜು, ರುದ್ರೇಶ್, ಗಣೇಶ್, ಗಿರೀಶ್, ಮಹೇಶ್, ಶಾಂತಕುಮಾರ್ ಸೇರಿದಂತೆ ಗ್ರಾಮಸ್ಥರು ಹಾಗೂ ಭಕ್ತರ ವೃಂದ ಭಾಗವಹಿಸಿದ್ದರು.

ಗೂಡ್ಸ್ ವಾಹನ ಡಿಕ್ಕಿ: ಬೈಕ್ ಸವಾರ ಸಾವು

ಹೆಚ್.ಡಿ.ಕೋಟೆ: ಗೂಡ್ಸ್ ವಾಹನ ಡಿಕ್ಕಿ ಹೊಡೆದ ಪರಿಣಾಮ ಬೈಕ್ ಸವಾರ ಸ್ಥಳದಲ್ಲೇ ಸಾವನ್ನಪ್ಪಿರುವ ಘಟನೆ ವರದಿಯಾಗಿದೆ.



ಬಸವರಾಜು(62) ಮೃತ ದುರ್ದೈವಿ. ತಾಲೂಕಿನ ಮಾದಾಪುರ ಗದಿಗೆ ಮುಖ್ಯ ರಸ್ತೆಯ ಚಿಕ್ಕ ಕೆರೆಯೂರು ಗೇಟ್ ಬಳಿ ಸಾಲುಂಡಿ ಗ್ರಾಮದ ನಿವಾಸಿ ಬಸವರಾಜು ಬೈಕ್‌ನಲ್ಲಿ ತೆರಳುತ್ತಿದ್ದ ವೇಳೆ ಎದುರಿನಿಂದ ಬಂದ ಗೂಡ್ಸ್ ಆಟೋ ಡಿಕ್ಕಿ ಹೊಡೆದ ಪರಿಣಾಮ ಸ್ಥಳದಲ್ಲೇ ಬೈಕ್ ಸವಾರ ಮೃತಪಟ್ಟಿದ್ದಾರೆ. ಚಾಲಕ ವಾಹನ ಬಿಟ್ಟು ಪರಾರಿಯಾಗಿದ್ದಾನೆ.

ಮರಣೋತ್ತರ ಪರೀಕ್ಷೆಗೆ ಸಾರ್ವಜನಿಕ ಆಸ್ಪತ್ರೆಯಲ್ಲಿ ಶವವನ್ನು ಇರಿಸಿ ಮರಣೋತ್ತರ ಪರೀಕ್ಷೆ ನಂತರ ವಾರಸುದಾರರಿಗೆ ಮೃತದೇಹವನ್ನು ಹಸ್ತಾಂತರಿಸಲಾಯಿತು.

ಈ ಸಂಬಂಧ ಹೆಚ್.ಡಿ.ಕೋಟೆ ಪಟ್ಟಣದ ಪೊಲೀಸರು ಪ್ರಕರಣ ದಾಖಲಿಸಿಕೊಂಡು, ತನಿಖೆ ಕೈಗೊಂಡಿದ್ದಾರೆ

ಮೂರನೇ ಪುಟದಿಂದ

ಮೋದಿಗೆ ಬರಬೇಡಿ ಅಂದಿದ್ದೆ...

ಬಂದೆ ಎಂದು ಇದೇ ವೇಳೆ ಸ್ಪಷ್ಟಪಡಿಸಿದ್ದಾರೆ. ಆದರೆ ಈ ಆರೋಪವನ್ನು ಕಾಂಗ್ರೆಸ್ ಸ್ಪಷ್ಟವಾಗಿ ನಿರಾಕರಿಸಿದ್ದು, ಸರ್ಕಾರವು ವಿರೋಧ ಪಕ್ಷದ ಬಗ್ಗೆ ತಪ್ಪು ಕಲ್ಪನೆ ಬರುವಂತೆ ವರದಿಗಳನ್ನು ಹಬ್ಬಿಸುತ್ತಿದೆ ಎಂದು ಪ್ರತ್ಯಾರೋಪ ಮಾಡಿದೆ. ಈ ಬಗ್ಗೆ ಸುದ್ದಿಗಾರರೊಂದಿಗೆ ಮಾತನಾಡಿರುವ ಕಾಂಗ್ರೆಸ್ ನಾಯಕ ಪವನ್ ಖೇರಾ, ಸ್ಪೀಕರ್ ಕಾರ್ಯಾಲಯದ ಆರೋಪಗಳನ್ನು ಸ್ಪಷ್ಟವಾಗಿ ತಳ್ಳಿ ಹಾಕಿದ್ದಾರೆ. ಸರ್ಕಾರವು ವಿಪಕ್ಷಗಳ ಬಗ್ಗೆ ಮಾಧ್ಯಮಗಳಿಗೆ ತಪ್ಪು ಮಾಹಿತಿ ನೀಡುತ್ತಿದೆ. ಅದೇ ರೀತಿ ಪಕ್ಷದ ಮಹಿಳಾ ಸಂಸದರ ವಿರುದ್ಧವೂ ತಪ್ಪು ಕಲ್ಪನೆ ಮಾಡುವ ಹುನ್ನಾರ ನಡೆಸಿದೆ. ಮಹಿಳೆಯೊಬ್ಬರು ಪ್ರತಿಭಟನೆ ನಡೆಸಿದರೆ ಅದು ಭಯೋತ್ಪಾದನೆಯಾಗುತ್ತದಯೇ ಎಂದು ಖಾರವಾಗಿ ಪ್ರಶ್ನಿಸಿದ್ದಾರೆ.

ಪ್ರತಿಭಟನೆಗಳಿಂದಾಗಿ ಹಲವು ಬಾರಿ ಮುಂದೂಡಲ್ಪಟ್ಟಿತು. ಮಧ್ಯಾಹ್ನ 3 ಗಂಟೆಗೆ ಸದನ ಮತ್ತೆ ಸೇರಿದ ನಂತರ ಮಾತನಾಡಿದ ಸ್ಪೀಕರ್, ವಿರೋಧ ಪಕ್ಷದ ಸದಸ್ಯರನ್ನು ತರಾಟೆಗೆ ತೆಗೆದುಕೊಂಡರು ಮತ್ತು ಬುಧವಾರ ಸದನದಲ್ಲಿ ಅವರ ನಡವಳಿಕೆ ಸದನಕ್ಕೆ ಕಪ್ಪು ಚುಕ್ಕೆ. ಇತಿಹಾಸದಲ್ಲಿ ಎಂದಿಗೂ ರಾಜಕೀಯ ಭಿನ್ನಾಭಿಪ್ರಾಯಗಳನ್ನು ಸದನಕ್ಕೆ ಎಳೆದು ತಂದಿಲ್ಲ. ಸ್ಪೀಕರ್ ಕಚೇರಿಯಲ್ಲಿ ವಿರೋಧ ಪಕ್ಷದ ಸದಸ್ಯರ ನಡವಳಿಕೆ ಸೂಕ್ತವಲ್ಲ ಮತ್ತು ವಾಸ್ತವವಾಗಿ ಅದು ಕಪ್ಪು ಚುಕ್ಕೆಯಂತೆ ಇತ್ತು ಎಂದು ಅವರು ಕಿಡಿಕಾರಿದರು.

ಬ್ಯಾಲೆಟ್ ಬಳಕೆ

ಜಿಬಿಎ ಎಲೆಕ್ಷನ್‌ನಲ್ಲಿ ಇವಿಎಂ ಬಳಸದಿರಲು ತೀರ್ಮಾನಿಸಿದೆ. ಇದೀಗ ಸ್ಥಳೀಯ ಸಂಸ್ಥೆಗಳ ಚುನಾವಣೆಗಳನ್ನು ಸಹ ಬ್ಯಾಲೆಟ್ ಪೇಪರ್ ಮೂಲಕ ನಡೆಸಲು ರಾಜ್ಯ ಸರ್ಕಾರ ತೀರ್ಮಾನ ಮಾಡಿದೆ.

ಏಪ್ರಿಲ್–ಮೇನಲ್ಲಿ ಸ್ಥಳೀಯ ಸಂಸ್ಥೆ ಎಲೆಕ್ಷನ್: ರಾಜ್ಯದ ಬಹುತೇಕ ಗ್ರಾಮ ಪಂಚಾಯಿತಿಗಳ ಚುನಾಯಿತ ಪ್ರತಿನಿಧಿಗಳ ಅಧಿಕಾರಾವಧಿ ಫೆಬ್ರವರಿ– ಮಾರ್ಚ್ ತಿಂಗಳಲ್ಲಿ ಮುಗಿಯಲಿದೆ. ಹೀಗಾಗಿ 2026ರ ಏಪ್ರಿಲ್– ಮೇ ತಿಂಗಳಲ್ಲಿ ಚುನಾವಣೆ ನಡೆಸಲು ಸರಕಾರ ಸಜ್ಜಾಗಿದ್ದು, ಪೂರ್ವಸಿದ್ಧತೆಗೆ ರಾಜ್ಯದ ಎಲ್ಲ ಜಿಲ್ಲಾಧಿಕಾರಿಗಳಿಗೆ ಮೀಸಲಾತಿ ನಿಗದಿಯೂ ಸೇರಿದಂತೆ ಸಿದ್ಧತೆ ಮಾಡಿಕೊಳ್ಳುವಂತೆ ನಿರ್ದೇಶನ ಕೂಡ ನೀಡಿದೆ. ಈಗಾಗಲೇ ರಾಜ್ಯ ಚುನಾವಣಾ ಆಯೋಗವು ಅವಧಿ ಪೂರ್ಣಗೊಂಡ ಗ್ರಾಪಂಗಳಿಗೆ ನಿಗದಿತ ಕಾಲಮಿತಿಯಲ್ಲಿ ಮೀಸಲು ಅಧಿಸೂಚನೆ ಹೊರಡಿಸುವಂತೆ ರಾಜ್ಯ ಸರ್ಕಾರವನ್ನು ಕೋರಿದೆ.

ರಾಜ್ಯದ 5,948 ಗ್ರಾಪಂಗಳ ಪೈಕಿ 5,698 ಗ್ರಾಪಂಗಳಿಗೆ 2020 ಡಿಸೆಂಬರ್‌ನಲ್ಲಿ ಚುನಾವಣೆ ಆಗಿತ್ತು. ಅಧ್ಯಕ್ಷ–ಉಪಾಧ್ಯಕ್ಷರ ಚುನಾವಣೆ 2021– 22ರಲ್ಲಿ ನಡೆದಿದ್ದರಿಂದ 2026ರ ಫೆಬ್ರವರಿ ಎರಡನೇ ವಾರಕ್ಕೆ ಈ ಪಂಚಾಯಿತಿ ಚುನಾಯಿತ ಸದಸ್ಯರ ಅಧಿಕಾರಾವಧಿ ಮುಗಿಂಯಲಿದೆ. ಇದರೊಟ್ಟಿಗೆ 2026ರ ಮಾರ್ಚ್‌ಗೆ ಮುಗಿಯುವ 92 ಗ್ರಾಪಂಗಳನ್ನು ಸೇರಿಸಿ ಚುನಾವಣೆ ನಡೆಸಲು ಸರಕಾರ ತಯಾರಿ ನಡೆಸಿದೆ. ಈಗಾಗಲೇ ರಾಜ್ಯದ 187 ನಗರ ಸ್ಥಳೀಂಯ ಸಂಸ್ಥೆಗಳ ಕೌನ್ಸಿಲ್ ಅವಧಿ ಮುಗಿದಿದೆ. 2021ರಿಂದಲೇ ರಾಜ್ಯದ 31 ಜಿಲ್ಲಾ ಪಂಚಾಯಿತಿ ಹಾಗೂ 240 ತಾಲೂಕು ಪಂಚಾಯಿತಿಗಳಿಗೆ ಎಲೆಕ್ಷನ್ ನಡೆದಿರುವುದರಿಂದ ಚುನಾಯಿತ ಪ್ರತಿನಿಧಿಗಳಿಲ್ಲ. ಹೀಗಾಗಿ ಏಪ್ರಿಲ್, ಮೇನಲ್ಲಿ ಸ್ಥಳೀಂಯ ಸಂಸ್ಥೆಗಳಿಗೆ ಚುನಾವಣೆ ನಡೆಸುವ ಸಾಧ್ಯತೆಗಳಿವೆ.

ಕೆ.ಮುದ್ದಮ್ಮ ನಿಧನ

ಮೈಸೂರು, ಫೆ.5– ತಾಲೂಕಿನ ಕುಪ್ಪೇಗಾಲ ಗ್ರಾಮದ ಲೇಟ್



ಕೆ.ಎಸ್.ಹೊಂಬೇಗೌಡರ ಧರ್ಮಪತ್ನಿ ಕೆ.ಮುದ್ದಮ್ಮ(79) ಅವರು ಮೈಸೂರಿನ ಜೆಎಸ್‌ಎಸ್ ಆಸ್ಪತ್ರೆಯಲ್ಲಿ ಗುರುವಾರ ನಿಧನರಾದರು. ಇವರು ಪುತ್ರ ಸೇರಿದಂತೆ ಅಪಾರ ಬಂಧು–ಬಳಗವನ್ನು ಅಗಲಿದ್ದಾರೆ. ಅಂತ್ಯ ಸಂಸ್ಕಾರ ಶುಕ್ರವಾರ ಬೆಳಗ್ಗೆ 11ಕ್ಕೆ ಕುಪ್ಪೇಗಾಲ ಗ್ರಾಮದಲ್ಲಿ ನೆರವೇರಲಿದೆ ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಶಕ್ತಿಯ ಮಹತ್ವದ ಭಾಗ ವ್ಯಯವಾಗುತ್ತಿದೆ

ಉತ್ತರಿಸಿದ ಪ್ರಧಾನಿ ಮೋದಿ, ನಾವು ಭವಿಷ್ಯಕ್ಕೆ ಸಿದ್ಧವಾಗಿರುವ ನೀತಿಗಳ ಮೇಲೆ ಬಲವಾದ ಒತ್ತು ನೀಡಿದ್ದೇವೆ. ಇಂದು, ದೇಶವನ್ನು ನೀತಿ ಮತ್ತು ಕಾರ್ಯತಂತ್ರದ ಆಧಾರದ ಮೇಲೆ ಆಳಲಾಗುತ್ತಿದೆ. ಭಾರತದ ಮೇಲಿನ ಜಾಗತಿಕ ನಂಬಿಕೆ ಹೆಚ್ಚುತ್ತಿದೆ. ಭಾರತ ದೇಶ ಎಲ್ಲಾ ಕ್ಷೇತ್ರಗಳಲ್ಲಿ ಮುನ್ನುಗ್ಗುತ್ತಿದೆ. ರಾಷ್ಟ್ರಪತಿಗಳ ಭಾಷಣದ ಮೂಲಕ ಭಾರತದ ಅಭಿವೃದ್ಧಿಯ ಧ್ವನಿ ಸಂಸತ್‌ನಲ್ಲಿ ಪ್ರತಿಧ್ವನಿಸಿದೆ. ಈ ನಡುವೆ ಹಿಂದಿನ ತಪ್ಪುಗಳನ್ನು ಸರಿಪಡಿಸಲು ನಮ್ಮ ಶಕ್ತಿಯ ಮಹತ್ವದ ಭಾಗ ವ್ಯಯವಾಗುತ್ತಿದೆ ಎಂದರು.

ಸ್ವಾತಂತ್ರ್ಯ ಸಿಕ್ಕಿದಾಗ ಆರ್ಥಿಕತೆಯಲ್ಲಿ 6 ನೇ ಸ್ಥಾನದಲ್ಲಿದ್ದ ಭಾರತವನ್ನು ಇವರೆಲ್ಲಾ ಸೇರಿ 12ನೇ ಸ್ಥಾನಕ್ಕೆ ಇಳಿಸಿ ಬಿಟ್ಟರು. ಆದರೆ ನಾವು ಅಧಿಕಾರಕ್ಕೆ ಬಂದ ಬಳಿಕ 3ನೇ ಸ್ಥಾನಕ್ಕೆ ಬಂದಿದ್ದೇವೆ. ದೊಡ್ಡ ದೊಡ್ಡ ಆರ್ಥಿಕತೆಯಲ್ಲಿ ಭಾರತದ ಬೆಳವಣಿಗೆಯೂ ಹೆಚ್ಚಿದೆ. ಹೆಚ್ಚಿನ ಬೆಳವಣಿಗೆ, ಕಡಿಮೆ ಹಣದುಬ್ಬರ ಇದರ ಲಕ್ಷಣವಾಗಿದೆ. ನಾವು ಹೀಗೆ ನಿಲ್ಲುವುದು ಇಲ್ಲ, ಹಿಂದಿ ರುಗಿ ನೋಡುವುದು ಇಲ್ಲ. ಇಪ್ಪತ್ತೊಂದನೇ ಶತಮಾನದ ಮೊದಲ ಕಾಲುಭಾಗ ಮುಗಿದು ಹೋಗಿದೆ. ಸ್ವಾತಂತ್ರ್ಯದ ಶತಮಾನೋತ್ಸವದಲ್ಲಿ ಮತ್ತೊಂದು ಕಾಲು ಭಾಗ ಬರಲಿದೆ. ಅದು ಭಾರತದ ಅಭಿವೃದ್ಧಿಗೆ ಮೀಸಲು ಎಂದು ಹೇಳಿದರು.

ಒಂದು ಕಾಲದಲ್ಲಿ ಜಗತ್ತಿನ ಯಾವುದೇ ದೇಶ ಭಾರತದೊಂದಿಗೆ ವ್ಯವಹರಿಸಲು ಬರುತ್ತಿರಲಿಲ್ಲ. ಈಗ ದೇಶಗಳು ಸುಮ್ಮನೆ ವಾಣಿಜ್ಯ ದೃಷ್ಟಿಯಿಂದ ಒಪ್ಪಂದ ಮಾಡುತ್ತಿಲ್ಲ. ಅಭಿವೃದ್ಧಿಶೀಲ ದೇಶದ ಜೊತೆಗೆ ಆರ್ಥಿಕತೆಗೂ ನೆರವು ಸಿಗುತ್ತದೆ. ಭಾರತವು ಹಲವಾರು ದೇಶಗಳೊಂದಿಗೆ ಭವಿಷ್ಯಕ್ಕೆ ಸಿದ್ಧವಾದ ವ್ಯಾಪಾರ ಒಪ್ಪಂದ ಗಳಿಗೆ ಸಹಿ ಹಾಕುತ್ತಿದೆ. ಕಳೆದ ಕೆಲವು ದಿನಗಳಲ್ಲಿ, ನಾವು ವಿಶ್ವದ 9 ದೊಡ್ಡ ಮತ್ತು ಪ್ರಮುಖ ದೇಶಗಳೊಂದಿಗೆ ವ್ಯಾಪಾರ ಒಪ್ಪಂದಗಳಿಗೆ ಸಹಿ ಹಾಕಿ ದ್ದೇವೆ. 27 ದೇಶಗಳೊಂದಿಗೆ, ಯುರೋಪಿಯನ್ ಒಕ್ಕೂಟದೊಂದಿಗೆ ಮಾಡಿಕೊಂಡಿ ರುವ ಒಪ್ಪಂದವು ಒಪ್ಪಂದಗಳ ಮಹಾ ತಾಯಿಯಾಗಿದೆ ಎಂದು ಬಣ್ಣಿಸಿದರು.

ಸದ್ಯಕ್ಕೆ ಭಾರತದ ಭಾಗ್ಯಕ್ಕೆ ಹಲವು ಅದೃಷ್ಟಗಳು ಒಲಿದು ಬಂದಿವೆ. ಜಗತ್ತಿನ ಸಮೃದ್ಧ ದೇಶಗಳಿಗೆ ವಯಸ್ಸಾಗುತ್ತಾ ಹೋಗುತ್ತಿದೆ. ಅಲ್ಲಿನ ಜನಸಂಖ್ಯೆ ವಯಸ್ಸಿನ ಕಟ್ಟಕಡೆಯ ಹಂತ ತಲುಪಿದೆ. ನಮ್ಮ ದೇಶ ದಿನದಿಂದ ದಿನಕ್ಕೆ ಯೌವನಕ್ಕೆ ಕಾಲಿಡುತ್ತಿದೆ. ವಿಕಸಿತ ಭಾರತವೊಂದೇ ನಮ್ಮ ಅಜೆಂಡಾ. ನಾವು 'ರಿಫಾರ್ಮ್, ಪರ್ಫಾರ್ಮ್, ಟ್ರಾನ್ಸ್‌ಫಾರ್ಮ್' ಮಂತ್ರದ ಮೂಲಕ ಸಾಗುತ್ತಿದ್ದೇವೆ. ದೇಶದ ಅಭಿವೃದ್ಧಿ ಸರಿಯಾದ ದಿಕ್ಕಿನಲ್ಲಿ ಸಾಗುತ್ತಿದೆ. ನಾವು ಪ್ರತಿಯೊಂದು ಗುರಿಯನ್ನು ಸಾಧಿಸ ಬೇಕು. ಇದಕ್ಕಾಗಿ ಎಲ್ಲಾ ಕ್ಷೇತ್ರಗಳಲ್ಲೂ ಆತ್ಮವಿಶ್ವಾಸದಿಂದ ಮುನ್ನುಗ್ಗುತ್ತಿದ್ದೇವೆ. ಆದರೆ ಕಾಂಗ್ರೆಸ್‌ಗೆ ಯಾವುದೇ ವಿಷನ್ ಇಲ್ಲ, ಉದ್ದೇಶವೂ ಇಲ್ಲ ಎಂದರು.

ರಾಷ್ಟ್ರಪತಿಗಳು ತಮ್ಮ ಭಾಷಣವನ್ನು ಸಂವೇದನಾಶೀಲತೆಯಿಂದ ನಮ್ಮ ಮುಂದೆ ಮಂಡಿಸಿದ್ದಾರೆ. ಈ ದೇಶದ ಮಧ್ಯಮ ವರ್ಗ, ಬಡವರು, ದೇಶದ ಹಳ್ಳಿಗಳು, ರೈತರು, ಮಹಿಳೆಯರು, ವಿಜ್ಞಾನ ಸೇರಿ ದಂತೆ ಎಲ್ಲಾ ವಿಚಾರಗಳ ಬಗ್ಗೆ ಮಾತನಾಡಿ ದ್ದಾರೆ. ಕೆಂಪುಕೋಟೆಯಲ್ಲಿ ಕಾಂಗ್ರೆಸ್ ಪ್ರಧಾನಿಗಳ ಭಾಷಣಗಳಲ್ಲಿ ಯಾವುದೇ ಅಭಿವೃದ್ಧಿ ಬಗೆಗಿನ ಮಾತುಗಳು ಇರಲಿಲ್ಲ. ನಮ್ಮ ಹೆಚ್ಚಿನ ಶಕ್ತಿ ಅವರ ತಪ್ಪುಗಳನ್ನು ಸರಿಪಡಿಸುವುದರಲ್ಲಿ ಮುಗಿಂಯುತ್ತಿದೆ. ಇಂದು ದೇಶ ನೀತಿಗಳ ಆಧಾರದಲ್ಲಿ ನಡೆಯುತ್ತಿದೆ ಎಂದು ಹೇಳಿದರು.

ಪ್ರಧಾನಿ ಮನವಿ–ಪ್ರತಿಪಕ್ಷಗಳಿಂದ ಸಭಾ ತ್ಯಾಗ: ಮೋದಿ ಭಾಷಣ ಆರಂಭವಾಗು ತ್ತಿದ್ದಂತೆ ಪ್ರತಿಪಕ್ಷಗಳ ಗದ್ದಲ ಆರಂಭ ಗೊಂಡಿತು. ಪ್ರಧಾನಿ ಮೋದಿ ವಿರುದ್ಧ ವಿಪಕ್ಷ ನಾಯಕರು ಘೋಷಣೆ ಕೂಗಿದರು. ಸರ್ವಾಧಿಕಾರಿ ಧೋರಣೆ ನಡೆಯುವುದಿಲ್ಲ ಎಂದು ಘೋಷಣೆ ಕೂಗಿದರು. ಈ ಸಂದರ್ಭ ದಲ್ಲಿ ಪ್ರಧಾನಿ ಮೋದಿ ಮಾತನಾಡಲು ಅವಕಾಶ ನೀಡುವಂತೆ ಮನವಿ ಮಾಡಿ ದರು. ಆದರೂ ಘೋಷಣೆ ಕೂಗುತ್ತಾ ಪ್ರತಿಪಕ್ಷದವರು ಸಭಾತ್ಯಾಗ ಮಾಡಿದರು.

ನಕಲು ಮಾಡಿ ವಂಚನೆ: ಪ್ರಕರಣ ದಾಖಲು

ಇನ್ಸ್‌ಟಿಟ್ಯೂಟ್ ಆಫ್ ಟೆಕ್ನಾಲಜಿ ವಿಶ್ವವಿದ್ಯಾಲಯದ ಕುಲಪತಿಗಳ ನೇಮಕಾತಿ ಆದೇಶ ಹೊರಡಿಸಿದ್ದಾನೆ. ಈ ನಿಟ್ಟಿನಲ್ಲಿ ಸುಜಯೇಂದ್ರ ವಿರುದ್ಧ ಕಾನೂನು ಕ್ರಮ ಜರುಗಿಸುವಂತೆ ಪ್ರದೀಪ್ ದೂರಿನಲ್ಲಿ ಉಲ್ಲೇಖಿಸಿದ್ದಾರೆ. ಪ್ರಕರಣಕ್ಕೆ ಸಂಬಂಧಿಸಿ 2026ರ ಜನವರಿ 5ರಂದು ವಿಧಾನಸೌಧ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಲಾಗಿದೆ. ಆರೋಪಿ ವಿಜಯನಗರ ಠಾಣಾ ವ್ಯಾಪ್ತಿಯಲ್ಲಿ ವಾಸಿಸುತ್ತಿರುವುದರಿಂದ, ಜನವರಿ 21ರಂದು ಪ್ರಕರಣವನ್ನು ವಿಜಯನಗರ ಪೊಲೀಸ್ ಠಾಣೆಗೆ ವರ್ಗಾಯಿಸಲಾಗಿದೆ.

ಆರೋಪಿ ವಿರುದ್ಧ ಈಗಾಗಲೇ ಹಲವು ಪ್ರಕರಣಗಳು ದಾಖಲಾಗಿವೆ. ಜಮ್ಮು ಮತ್ತು ಕಾಶ್ಮೀರದ ವೈದ್ಯರೊಬ್ಬರಿಂದ 2.7 ಕೋಟಿ ರೂ. ಹಣ ಸಂಗ್ರಹಿಸಿ, ದೇವನಹಳ್ಳಿಯಲ್ಲಿ ಆಯುರ್ವೇದ ಆಸ್ಪತ್ರೆ ಸ್ಥಾಪಿಸುವುದಾಗಿ ವಂಚಿಸಿದ ಪ್ರಕರಣದಲ್ಲಿ ಈತ 2025ರ ನವೆಂಬರ್‌ನಲ್ಲಿ ಬಂಧಿತನಾಗಿದ್ದ. ಇದಲ್ಲದೆ, ಚೆಕ್ ಬೌನ್ಸ್ ಪ್ರಕರಣಗಳೂ ಈತನ ವಿರುದ್ಧವಿದೆ ಎಂದು ಪೊಲೀಸ್ ಮೂಲಗಳು ತಿಳಿಸಿವೆ. ಇದೀಗ ರಾಜ್ಯಪಾಲರ ಸಹಿ ನಕಲು ಮಾಡಿರುವುದು ರಾಷ್ಟ್ರದ ಸಂವಿಧಾನಾತ್ಮಕ ಹುದ್ದೆಯ ಗೌರವಕ್ಕೆ ಧಕ್ಕೆ ತರುವ ಗಂಭೀರ ಅಪರಾಧವಾಗಿದ್ದು, ಈ ಪ್ರಕರಣದಲ್ಲಿ ಇನ್ನಾರಾದರೂ ಸಹಕರಿಸಿದ್ದಾರೆಯೇ, ಎಷ್ಟು ನಕಲಿ ಪತ್ರಗಳನ್ನು ಹೊರಡಿಸಲಾಗಿದೆ, ಹಣಕಾಸು ವ್ಯವಹಾರ ನಡೆದಿದೆಯೇ ಎಂಬ ಅಂಶಗಳ ಕುರಿತು ಪೊಲೀಸರು ತನಿಖೆ ತೀವ್ರಗೊಳಿಸಿದ್ದಾರೆ.

ಮೈಸೂರಿನ ಹೈವೆ ವೃತ್ತದಲ್ಲಿನ ಅವೈಜ್ಞಾನಿಕ ಸಿಗ್ನಲ್ ಲೈಟ್ ಕಂಬಗಳ ತೆರವು

ಐಕಾನಿಕ್ ಎಲಿಫೆಂಟ್ ಶಿಲ್ಪ ಕಾರಂಜಿ ಮರೆಗೆ ಮುಕ್ತಿ



ಮೈಸೂರಿನ ಹೈವೆ ವೃತ್ತ (ಮೌಲಾನಾ ಅಬ್ದುಲ್ ಕಲಾಂ ಆಜಾದ್ ವೃತ್ತ) ಅವೈಜ್ಞಾನಿಕವಾಗಿ ಅಳವಡಿಸಿದ್ದ ಸಿಗ್ನಲ್ ಲೈಟ್ ಕಂಬಗಳನ್ನು ಸಂಚಾರಿ ಪೊಲೀಸರು ಗುರುವಾರ ತೆರವುಗೊಳಿಸಿದ್ದಾರೆ.

ಮೈಸೂರು, ಫೆ.5(ಬಿಎಲ್‌ಯು)– ಮೈಸೂರಿನ ಹೈವೆ ವೃತ್ತ (ಮೌಲಾನಾ ಅಬ್ದುಲ್ ಕಲಾಂ ಆಜಾದ್ ವೃತ್ತ) ದಲ್ಲಿ ಅವೈಜ್ಞಾನಿಕವಾಗಿ ಅಳವಡಿಸಿದ್ದ ಸಿಗ್ನಲ್ ಲೈಟ್ ಕಂಬಗಳನ್ನು ಸಂಚಾರಿ ಪೊಲೀಸರು ಕೊನೆಗೂ ತೆರವುಗೊಳಿಸಿದ್ದಾರೆ.

ಇಂತಹ ಸಿಗ್ನಲ್ ಲೈಟ್ ಕಂಬಗಳಿಂದ ವೃತ್ತದ ಸೌಂದರ್ಯಕ್ಕೆ ಧಕ್ಕೆಯಾಗುತ್ತದೆ, ಜೊತೆಗೆ ವೃತ್ತದ ಮಧ್ಯದಲ್ಲಿರುವ ಐಕಾನಿಕ್ ಎಲಿಫೆಂಟ್ ಶಿಲ್ಪ ಕಾರಂಜಿ ಮರೆಯಾಗುತ್ತದೆ ಎಂಬ ಟೀಕೆ ವ್ಯಕ್ತವಾಗಿತ್ತು.

ಈ ಹಿನ್ನೆಲೆಯಲ್ಲಿ 'ಮೈಸೂರು ಮಿತ್ರ'ನ ಫೆಬ್ರವರಿ 4ರ ಸಂಚಿಕೆಯಲ್ಲಿ 'ಮೈಸೂರಿನ ಹೈವೆ ವೃತ್ತದ ಅಂದಗೆಡಿಸುತ್ತಿರುವ ಅವೈಜ್ಞಾನಿಕ ಸಿಗ್ನಲ್ ಲೈಟ್ ಕಂಬಗಳು' ಎಂಬ ಶೀರ್ಷಿಕೆಯಡಿ ಸುದ್ದಿ ಪ್ರಕಟವಾಗಿತ್ತು.

ವೃತ್ತದ ಒಳಗೆ ಅಳವಡಿಸಿರುವ ಸಿಗ್ನಲ್ ಲೈಟ್ ಕಂಬಗಳಿಂದ ವೃತ್ತದ ಸೌಂದರ್ಯಕ್ಕೆ ಯಾವ ರೀತಿ ಧಕ್ಕೆಯಾಗುತ್ತದೆ ಹಾಗೂ ವೃತ್ತದ ಮಧ್ಯ ಭಾಗದಲ್ಲಿರುವ ಐಕಾನಿಕ್ ಎಲಿಫೆಂಟ್ ಶಿಲ್ಪ ಕಾರಂಜಿ ಯಾವ ರೀತಿ ಮರೆಯಾಗುತ್ತದೆ ಎಂಬ ಬಗ್ಗೆ ಸಮಗ್ರ ವಿವರವಿರುವ ಸುದ್ದಿಯನ್ನು 'ಮೈಸೂರು ಮಿತ್ರ' ಪ್ರಕಟಿಸಿತ್ತು.

ಈ ವರದಿಯನ್ನು ಗಂಭೀರವಾಗಿ ಪರಿಗಣಿಸಿದ ಸಂಚಾರಿ ಪೊಲೀಸ್ ಅಧಿಕಾರಿಗಳು ಸ್ಥಳ ಪರಿಶೀಲನೆ ನಡೆಸಿ, ಆಗಿರುವ ಪ್ರಮಾದವನ್ನು ಹಿರಿಯ ಅಧಿಕಾರಿಗಳಿಗೆ ವರದಿ ಮಾಡಿದ್ದರು.

ಅವರ ನಿರ್ದೇಶನದ ಮೇರೆಗೆ ಇಂದು ಸಂಜೆ ವೇಳೆಗೆ ವೃತ್ತದ ಮಧ್ಯೆ ಅಳವಡಿಸಿದ್ದ ಸಿಗ್ನಲ್ ಲೈಟ್ ಕಂಬಗಳನ್ನು ಸಂಚಾರಿ ಪೊಲೀಸರು ತೆರವು ಮಾಡಿದ್ದಾರೆ.

ಅವಶ್ಯವಾಗಿ ಮತ್ತೊಂದು ಕೆಲಸ ಆಗಬೇಕಿದೆ

ಹೈವೆ ವೃತ್ತದ ಸುತ್ತ ನಿರ್ಮಿಸಿರುವ ಗ್ರಿಲ್‌ನಲ್ಲಿ ಮೃತಪಟ್ಟವರಿಗೆ ಶ್ರದ್ಧಾಂಜಲಿ, ಹುಟ್ಟುಹಬ್ಬಕ್ಕೆ ಶುಭಾಶಯ, ರಾಜಕೀಯ ಪಕ್ಷಗಳ ಸಮಾರಂಭಗಳು ನಡೆದಾಗ ಸ್ವಾಗತ ಕೋರುವ ಫ್ಲೆಕ್ಸ್‌ಗಳನ್ನು ಅಳವಡಿಸಲಾಗುತ್ತಿದೆ. ಇದರಿಂದ ವೃತ್ತದ ಅಂದಕ್ಕೆ ಧಕ್ಕೆಯಾಗುತ್ತಿದೆ, ಜೊತೆಗೆ ವೃತ್ತದ ಮಧ್ಯೆ ಇರುವ ಐಕಾನಿಕ್ ಎಲಿಫೆಂಟ್ ಶಿಲ್ಪ ಕಾರಂಜಿ ಕೂಡ ಮರೆಯಾಗುತ್ತಿದೆ. ಮೈಸೂರು ನಗರ ಪಾಲಿಕೆಯವರು ಕೂಡಲೇ ಇದನ್ನು ತೆರವುಗೊಳಿಸಿ, ವೃತ್ತದ ಸೊಬಗನ್ನು ಮತ್ತಷ್ಟು ಹೆಚ್ಚಿಸಬೇಕಿದೆ.

ಬಿಜೆಪಿ ರಾಷ್ಟ್ರೀಯ ಅಧ್ಯಕ್ಷರ ಭೇಟಿಯಾದ ರಾಜ್ಯಾಧ್ಯಕ್ಷ ವಿಜಯೇಂದ್ರ

ವಿಧಾನಪರಿಷತ್ ಚುನಾವಣೆ, ರಾಜಕೀಯ ಬೆಳವಣಿಗೆ ಬಗ್ಗೆ ಚರ್ಚೆ

ಬೆಂಗಳೂರು: ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ನಿತಿನ್ ನಬಿನ್ ಅವರನ್ನು ದೆಹಲಿಯಲ್ಲಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಭೇಟಿ ಮಾಡಿ ಮಾತುಕತೆ ನಡೆಸಿದ್ದಾರೆ.

ಮಾತುಕತೆ ವೇಳೆ ರಾಜ್ಯದಲ್ಲಿ ನಡೆಯುತ್ತಿರುವ ರಾಜಕೀಯ ಬೆಳವಣಿಗೆಗಳು ಹಾಗೂ ಸರ್ಕಾರದ ವಿರುದ್ಧದ ಬಿಜೆಪಿ ಹೋರಾಟಗಳ ಕುರಿತು ಮಾಹಿತಿ ನೀಡಿದ್ದಾರೆ ಎಂದು ತಿಳಿದುಬಂದಿದೆ.

ವಿಧಾನಪರಿಷತ್‌ನ ಶಿಕ್ಷಕರು ಹಾಗೂ ಪದವೀಧರರ ಕ್ಷೇತ್ರಗಳಿಗೆ 2026ರ ನವೆಂಬರ್‌ನಲ್ಲಿ ಚುನಾವಣೆ ನಡೆಯಲಿದ್ದು, ಬೆಂಗಳೂರು ಶಿಕ್ಷಕರ ಕ್ಷೇತ್ರ, ಪಶ್ಚಿಮ ಪದವೀಧರರ ಕ್ಷೇತ್ರ, ಆಗ್ನೇಯ ಪದವೀಧರರ ಕ್ಷೇತ್ರ ಹಾಗೂ ಈಶಾನ್ಯ ಶಿಕ್ಷಕರ ಕ್ಷೇತ್ರಗಳಿಗೆ ಸಂಭಾವ್ಯರ ಹೆಸರುಗಳನ್ನು ಬಿಜೆಪಿ ಪ್ರಮುಖರ ಸಭೆಯಲ್ಲಿ ಚರ್ಚಿಸಿ ತಿಂಗಳುಗಳ ಹಿಂದೆಯೇ ವರಿಷ್ಠರಿಗೆ ಕಳುಹಿಸಲಾಗಿದೆ. ಪ್ರತಿಯೊಂದು ಕ್ಷೇತ್ರಕ್ಕೆ 3–4 ಹೆಸರುಗಳನ್ನು ಶಿಫಾರಸು ಮಾಡಲಾಗಿದೆ. ಬೆಂಗಳೂರು ಶಿಕ್ಷಕರ ಕ್ಷೇತ್ರವನ್ನು ಬಿಟ್ಟುಕೊಡುವಂತೆ ಜೆಡಿಎಸ್ ಪಟ್ಟು ಹಿಡಿದಿದೆ. ಚುನಾವಣಾ ಪ್ರಚಾರಕ್ಕೆ ಅನುಕೂಲವಾಗಲು ಅಭ್ಯರ್ಥಿಗಳ ಪಟ್ಟಿಯನ್ನು ಶೀಘ್ರ ಪ್ರಕಟಿಸುವಂತೆ ನಿತಿನ್ ಅವರಿಗೆ ವಿಜಯೇಂದ್ರ ಮನವಿ ಮಾಡಿದ್ದಾರೆ..

ಬಾಗಲಕೋಟೆ ಹಾಗೂ ದಾವಣಗೆರೆ ದಕ್ಷಿಣ ಕ್ಷೇತ್ರಗಳಿಗೆ ಶೀಘ್ರ ಉಪಚುನಾವಣೆ ಘೋಷಣೆಯಾಗುವ ಸಂಭವ ಇದೆ. ಬಾಗಲಕೋಟೆಗೆ ವೀರಣ್ಣ ಚರಂತಿಮಠ ಸೇರಿ ಮೂವರು



ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ನಿತಿನ್ ನಬಿನ್ ಅವರನ್ನು ದೆಹಲಿಯಲ್ಲಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಭೇಟಿ ಮಾಡಿದರು.

ಆಕಾಂಕ್ಷಿಗಳು ಹಾಗೂ ದಾವಣಗೆರೆ ದಕ್ಷಿಣಕ್ಕೆ ಐದಾರು ಆಕಾಂಕ್ಷಿಗಳಿದ್ದಾರೆ. ಈ ಕ್ಷೇತ್ರಗಳಿಗೂ ಅಭ್ಯರ್ಥಿಗಳನ್ನು ಶೀಘ್ರ ಆಖೈರು ಮಾಡುವ ಬಗ್ಗೆ ಚರ್ಚೆ ನಡೆದಿದೆ.

ಭೇಟಿ ಬಗ್ಗೆ ಪ್ರತಿಕ್ರಿಯಿಸಿದ ವಿಜಯೇಂದ್ರ, ರಾಜ್ಯದಲ್ಲಿ ಪಕ್ಷದ ಚಟುವಟಿಕೆಗಳು ಹಾಗೂ ಮುಂಬರುವ ದಿನಗಳಲ್ಲಿ ಸಂಘಟನೆಯನ್ನು ಮತ್ತಷ್ಟು ಬಲಪಡಿಸುವ ಕುರಿತಂತೆ ವಿಸ್ತೃತವಾಗಿ ಚರ್ಚಿಸಲಾಯಿತು ಎಂದು ತಿಳಿಸಿದ್ದಾರೆ.

ಕಾಡಾನೆ ದಾಳಿಗೆ ವೃದ್ಧ ಬಲಿ

ಬಿ.ಮಟಕೆರೆ ಎಸ್ಟಿ ಕಾಲೋನಿಯಲ್ಲಿ ದುರಂತ



ಮೃತ ಮಾದ



ಸರಗೂರು ತಾಲೂಕಿನ ಬಿ.ಮಟಗೆರೆ ಎಸ್ಟಿ ಕಾಲೋನಿಯಲ್ಲಿ ಕಾಡಾನೆ ದಾಳಿಗೆ ಬಲಿಯಾದ ಮಾದ ಕುಟುಂಬದ ಸದಸ್ಯರಿಗೆ ಬಂಡೀಪುರ ಹುಲಿ ಸಂರಕ್ಷಿತ ಪ್ರದೇಶ ಸಿಎಫ್ ಎಸ್.ಪ್ರಭಾಕರನ್ ಪರಿಹಾರದ ಚೆಕ್ ವಿತರಿಸಿದರು.

ಮೈಸೂರು, ಫೆ.5(ಎಂಟಿವೈ)– ಬಹಿರ್ದೆಸೆಗೆಂದು ಹೋಗಿದ್ದ ವೃದ್ಧರೊಬ್ಬರನ್ನು ಕಾಡಾನೆ ಬಲಿ ಪಡೆದಿದೆ. ಈ ಘಟನೆ ಸರಗೂರು ತಾಲೂಕಿನ ಬಿ.ಮಟಕೆರೆಯ ಎಸ್ಟಿ ಕಾಲೋನಿ ಬಳಿ ನಡೆದಿದ್ದು, ಈ ಕಾಡಾನೆ ಸೆರೆಗೆ ಗ್ರಾಮಸ್ಥರು ಆಗ್ರಹಿಸಿದ್ದಾರೆ.

ಬಂಡೀಪುರ ಹುಲಿ ಸಂರಕ್ಷಿತ ಪ್ರದೇಶದ ಮೊಳೆಯೂರು ವಲಯ ವ್ಯಾಪ್ತಿಗೆ ಸೇರಿದ ಸರಗೂರು ತಾಲೂಕಿನ ಅಂಚಿಪುರ, ಬಿ.ಮಟಗೆರೆ ಸೇರಿದಂತೆ ವಿವಿಧ ಗ್ರಾಮಗಳಲ್ಲಿ ಕಳೆದ 3–4 ದಿನದಿಂದ ಸುತ್ತಾಡುತ್ತಿದ್ದ ಆನೆ ಕಳೆದ ರಾತ್ರಿ ಬಿ.ಮಟಗೆರೆಯಲ್ಲಿ ಬೀಡುಬಿಟ್ಟು, ಮುಂಜಾನೆ ಕಾಡಿನತ್ತ ತೆರಳುವಾಗ ಎಸ್ಟಿ ಕಾಲೋನಿ ಹಾಡಿ ಬಳಿ ರಸ್ತೆಬದಿ ಬಹಿರ್ದೆಸೆಗೆ ಹೋಗಿದ್ದ ಹಾಡಿ ನಿವಾಸಿ ಮಾದ(81) ಅವರ ಮೇಲೆ ದಾಳಿ ಮಾಡಿ, ಹತ್ಯೆಗೈಯ್ದಿದೆ. ಆನೆ ದಾಳಿಯಿಂದ ಮಾದ ಕಿರುಚಾಡುತ್ತಿದ್ದಾಗ ಹಾಡಿ ನಿವಾಸಿಗಳು ಆತನ ಸಹಾಯಕ್ಕೆ ಬಂದು ಆನೆ ಹಿಮ್ಮೆಟ್ಟಿಸುವ ಪ್ರಯತ್ನ ಮಾಡಿದರೂ, ಯಾವುದೇ ಪ್ರಯೋಜನವಾಗಲಿಲ್ಲ. ಅಷ್ಟರಲ್ಲಾಗಲೇ ದಾಳಿಯ ತೀವ್ರತೆಗೆ ಮಾದ ಕೊನೆಯುಸಿರೆಳೆದಿದ್ದರು ಎಂದು ಪ್ರತ್ಯಕ್ಷದರ್ಶಿಗಳು ತಿಳಿಸಿದ್ದಾರೆ.

ದಾರಿ ತೋರಬೇಕಾದ ಟಾರ್ಚ್ ಜೀವಕ್ಕೆ ಮುಳುವಾಯ್ತು: ಮಾದ ಬಹಿರ್ದೆಸೆಗೆಂದು ಟಾರ್ಚ್ ಹಿಡಿದುಕೊಂಡು ಹೋಗಿದ್ದರು. ರಸ್ತೆ ಪಕ್ಕದ ಹಳ್ಳದ ಬಳಿ ಕುಳಿತಿದ್ದ ಅವರು ಶಬ್ದ ಕೇಳಿ ರಸ್ತೆ ಕಡೆ ಟಾರ್ಚ್ ಬೆಳಕು ಬಿಟ್ಟಿದ್ದಾರೆ. ಇದರಿಂದ ರಸ್ತೆಯಲ್ಲಿ ಹೋಗುತ್ತಿದ್ದ ಆನೆ ಬೆಳಕು ಬಂದ ದಿಕ್ಕಿನತ್ತ ನುಗ್ಗಿದೆ. ಮಬ್ಬುಗತ್ತಲೆಯಾಗಿದ್ದರಿಂದ ಹಾಗೂ ಆನೆ ಬರುವಿಕೆ ಗುರುತಿಸಲು ಸಾಧ್ಯವಾಗದೆ ಮಾದ ದಾಳಿಗೆ ತುತ್ತಾಗಿದ್ದಾರೆ. ಒಂದು ವೇಳೆ ಮಾದ ಟಾರ್ಚ್‌ನ್ನು ಬೇರೆ ದಿಕ್ಕಿಗೆ ಎಸೆದಿದ್ದರೆ ಅಪಾಯದಿಂದ ಪಾರಾಗಬಹುದಿತ್ತು.

3–4 ಬಾರಿ ಬ್ಯಾರಿಕೇಡ್ ಮುರಿದಿದ್ದ ಆನೆ: ಈ ಆನೆ ಹಿಂದೆ 3–4 ಬಾರಿ ಮೊಳೆಯೂರು, ಹೆಡಿಯಾಲ ವಲಯದಲ್ಲಿ ಅರಣ್ಯದಂಚಿನಲ್ಲಿ ಅಳವಡಿಸಿರುವ ರೈಲ್ವೆ ಬ್ಯಾರಿಕೇಡ್ ಭೇದಿಸಿ, ಗಮನ ಸೆಳೆದಿತ್ತು. ಕಳೆದ 2–3 ದಿನಗಳಿಂದ ಕಾಡಂಚಿನಲ್ಲೇ ಇದ್ದ ಈ ಆನೆ ಬುಧವಾರ ಕಾಡಿನಿಂದ ಸಾಕಷ್ಟು ದೂರ ಹೊರಗೆ ಬಂದಿತ್ತು. ಅಂಚಿಪುರ ಸೇರಿದಂತೆ ಸುತ್ತಮುತ್ತಲಿನ ಗ್ರಾಮಗಳ ಬಳಿ ಸುಳಿದಾಡಿತ್ತು.

ಅರಣ್ಯ ಸಿಬ್ಬಂದಿಗೂ ಗಾಯ: ಬುಧವಾರ ಬೆಳಗ್ಗೆ ಆನೆ ಹಾವಳಿ ಕುರಿತು ಗ್ರಾಮಸ್ಥರು ದೂರು ನೀಡಿದ್ದರಿಂದ ಅರಣ್ಯ ಸಿಬ್ಬಂದಿ ಕಾರ್ಯಾಚರಣೆ ನಡೆಸಿ, ಆನೆಯನ್ನು ಅರಣ್ಯ ಪ್ರದೇಶಕ್ಕೆ ಅಟ್ಟುವ ಪ್ರಯತ್ನ ಮಾಡಿದ್ದರು. ಕಾರ್ಯಾಚರಣೆ ವೇಳೆ ಹೆಡಿಯಾಲ ವಿಭಾಗದ ಸಿಬ್ಬಂದಿ ಬಿದ್ದು ಗಾಯ ಮಾಡಿಕೊಂಡಿದ್ದು, ಅವರನ್ನು ಸರಗೂರಿನ ಆಸ್ಪತ್ರೆಯಲ್ಲಿ ಚಿಕಿತ್ಸೆ ಕೊಡಿಸಿ ಮನೆಗೆ ಕಳುಹಿಸಲಾಗಿತ್ತು.

ಕಣ್ತಪ್ಪಿಸಿ ಬಂದ ಆನೆ: ಕಾರ್ಯಾಚರಣೆಯಲ್ಲಿ ತೊಡಗಿದ್ದ ಅರಣ್ಯ ಸಿಬ್ಬಂದಿಗೆ ಕಾಡಾನೆ ಚಳ್ಳೆ ಹಣ್ಣು ತಿನ್ನಿಸಿ ಪರಾರಿಯಾಗಿದೆ. ಕಾಡಿಗೆ ವಾಪಸ್ಸಾಗಿರಬಹುದು ಎಂದು ತಿಳಿದ ಅರಣ್ಯ ಸಿಬ್ಬಂದಿಗೆ ಈಗ ಶಾಕ್ ನೀಡಿದೆ. ಬೆಳಗಾಗುವುದರೊಳಗೆ ಬಿ.ಮಟಗೆರೆ ಮೂಲಕ ಅರಣ್ಯದತ್ತ ಸಾಗಿದ್ದಆನೆ ಆಕಸ್ಮಿಕವಾಗಿ ದಾಳಿ ಮಾಡಿ ವೃದ್ಧರೊಬ್ಬರನ್ನು ಬಲಿ ಪಡೆದಿದೆ.

ಕೆರೆ ಬಳಿ ವಿರಮಿಸಿತ್ತು: ದಾಳಿ ನಡೆಸಿದ ಆನೆ ಮಂಗಳವಾರದಿಂದಲೇ ಗ್ರಾಮಗಳತ್ತ ಮುಖ ಮಾಡಿತ್ತು. ಹಳೇ ಹೆಗ್ಗುಡಿಲು, ಹಳೆಯೂರು, ಬೆದ್ದಲಪುರ, ದಡದಹಳ್ಳಿ ಗ್ರಾಮಗಳ ಬಳಿ ಸುಳಿದಾಡಿದ್ದ ಆನೆ ಬುಧವಾರ ಹಂಚೀಪುರ ಗ್ರಾಮದ ಕೆರೆ ಬಳಿ ದಟ್ಟಪೊದೆಯಲ್ಲಿ ಆಶ್ರಯ ಪಡೆದಿತ್ತು. ಸ್ಥಳಕ್ಕೆ ಆಗಮಿಸಿದ್ದ ಅರಣ್ಯ ಸಿಬ್ಬಂದಿ ರಾತ್ರಿ ಅರಣ್ಯ ಇಲಾಖೆ ಸಿಬ್ಬಂದಿ ಆನೆಯನ್ನು ಕಾಡಿಗೆ ಓಡಿಸುವ ಕಾರ್ಯಾಚರಣೆ ಆರಂಭಿಸಿತ್ತು.

ಕಣ್ಣಿಗೆ ಗಾಯ ಮಾಡಿಕೊಂಡಿರುವ ಆನೆ: ಈ ಆನೆ ಒಂದು ಕಣ್ಣಿಗೆ ಗಾಯವಾಗಿದ್ದು, ಕಳೆದ ಕೆಲ ದಿನಗಳಿಂದ ನಿರಂತರವಾಗಿ ನೀರು ಸೋರುತ್ತಿರುವುದು ದೃಢಪಟ್ಟಿದೆ. ಹಾಗಾಗಿ ಕಣ್ಣಿನ ದೃಷ್ಟಿ ಕ್ಷೀಣಿಸಿದೆ ಎಂದು ಹೇಳಲಾಗುತ್ತಿದೆ. ಆದರೂ, ಟಾರ್ಚ್ ಬೆಳಕನ್ನು ಗಮನಿಸಿ ದಾಳಿ ನಡೆಸಿರುವುದು ಆಶ್ಚರ್ಯವನ್ನುಂಟು ಮಾಡಿದೆ.

ಆಕ್ರೋಶ ವ್ಯಕ್ತಪಡಿಸಿದ ಗ್ರಾಮಸ್ಥರು: ಕಾಡಾನೆ ದಾಳಿ ವಿಷಯ ತಿಳಿಯುತ್ತಿದ್ದಂತೆ ಸ್ಥಳಕ್ಕೆ ಬಂಡೀಪುರ ಹುಲಿ ಸಂರಕ್ಷಿತ ಪ್ರದೇಶದ ಸಿಎಫ್ ಎಸ್.ಪ್ರಭಾಕರನ್, ಹೆಡಿಯಾಲ ಎಸಿಎಫ್ ಡಿ.ಪರಮೇಶ್, ಮೊಳೆಯೂರು ಆರ್‌ಎಫ್‌ಓ ಕೆ.ಆರ್.ನಾರಾಯಣ್ ಆಗಮಿಸಿ ಪರಿಶೀಲಿಸಿದರು. ಈ ವೇಳೆ ಸ್ಥಳೀಯರು ಆನೆಯನ್ನು ಸೆರೆ ಹಿಡಿಯುವಂತೆಯೂ ಆಕ್ರೋಶ ವ್ಯಕ್ತಪಡಿಸಿದರು. ಅಲ್ಲದೆ, ಮಾನವ–ವನ್ಯಜೀವಿ ಸಂಘರ್ಷ ತಡೆಗೆ ಕ್ರಮ ಕೈಗೊಳ್ಳುವಂತೆ ಆಗ್ರಹಿಸಿದರು.

ಕ್ರಮ ಕೈಗೊಳ್ಳುವ ಭರವಸೆ: ಗ್ರಾಮಸ್ಥರ ಅಳಲು ಆಲಿಸಿದ ಸಿಎಫ್ ಎಸ್.ಪ್ರಭಾಕರನ್, ಮೃತ ಮಾದ ಅವರ ಕುಟುಂಬ ಸದಸ್ಯರಿಗೆ ಸಾಂತ್ವನ ಹೇಳಿದರು. ಅಲ್ಲದೆ, ಕಾಡಿನಿಂದ ಆನೆಗಳು ಬರದಂತೆ ಈಗಾಗಲೇ ಈ ಭಾಗದಲ್ಲಿ ರೈಲ್ವೆ ಬ್ಯಾರಿಕೇಡ್ ಅಳವಡಿಸಲಾಗಿದೆ. ಆನೆಗಳು ಯಾವ ಕಡೆಯಿಂದ ಹೊರಗೆ ಬರುತ್ತಿವೆ ಎಂದು ಗುರುತಿಸಿ, ಅಗತ್ಯ ಕ್ರಮ ಕೈಗೊಳ್ಳುವುದಾಗಿ ಭರವಸೆ ನೀಡಿದರು. ಅಲ್ಲದೆ, ಮೃತ ಮಾದ ಅವರ ಪತ್ನಿ, ಮೂವರು ಪುತ್ರರು, ಓರ್ವ ಪುತ್ರಿ ಹಾಗೂ ಹಾಡಿ ನಿವಾಸಿಗಳ ಸಮ್ಮುಖದಲ್ಲಿ 20 ಲಕ್ಷ ರೂ. ಪರಿಹಾರದ ಚೆಕ್ ವಿತರಿಸಿದರು.

ಬಳಿಕ ಸರಗೂರಿನ ಸಮುದಾಯ ಆರೋಗ್ಯ ಕೇಂದ್ರದಲ್ಲಿ ಮರಣೋತ್ತರ ಪರೀಕ್ಷೆ ನಡೆಸಿದ ಬಳಿಕ ವಾರಸುದಾರರಿಗೆ ದೇಹ ಒಪ್ಪಿಸಲಾಯಿತು. ಸರಗೂರು ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಪರಿಹಾರ ವಿತರಿಸಲಾಗಿದೆ

ಕಾಡಂಚಿನಲ್ಲಿ ಮಾನವ–ವನ್ಯಜೀವಿ ಸಂಘರ್ಷ ತಡೆಗೆ ಅಗತ್ಯ ಕ್ರಮ ಕೈಗೊಳ್ಳಲಾಗಿದೆ. ಆದರೂ ಅನಿರೀಕ್ಷಿತವಾಗಿ ನಡೆದ ಆನೆ ದಾಳಿಯಿಂದ ವ್ಯಕ್ತಿಯೊಬ್ಬರು ಮೃತಪಟ್ಟಿದ್ದು, ಅವರ ಕುಟುಂಬಕ್ಕೆ ಸಾಂತ್ವನ ಹೇಳಿ, 20 ಲಕ್ಷ ರೂ. ಪರಿಹಾರದ ಚೆಕ್ ವಿತರಿಸಲಾಗಿದೆ. ಮೃತರ ಪತ್ನಿಗೆ ಐದು ವರ್ಷದವರೆಗೆ 4 ಸಾವಿರ ರೂ. ಮಾಸಿಕ ವೇತನ ನೀಡಲಾಗುತ್ತದೆ. ಕುಟುಂಬದ ಓರ್ವ ಸದಸ್ಯರಿಗೆ ಗುತ್ತಿಗೆ ಆಧಾರದಲ್ಲಿ ಕೆಲಸ ನೀಡಲಾಗುವುದು.

-ಎಸ್.ಪ್ರಭಾಕರನ್, ನಿರ್ದೇಶಕರು, ಬಂಡೀಪುರ ಹುಲಿ ಸಂರಕ್ಷಿತ ಪ್ರದೇಶ

ಮೈಸೂರು ಚಿತ್ರಮಂದಿರಗಳಲ್ಲಿ

ಪದ್ಮ	(ದೂ: 2521923)
ಭಾರತೀ ಟೀಚರ್(ಕ) + ಮಾಯಾಬಿಂಬುಮ್(ತ)	1+3 ಪ್ರದರ್ಶನಗಳು
ವುಡ್‌ಲ್ಯಾಂಡ್ಸ್	(ದೂ: 2422871)
ಲ್ಯಾಂಡ್‌ಲಾರ್ಡ್ (ಕ)	4 ಪ್ರದರ್ಶನಗಳು
ಬಾಲಾಜಿ	(ದೂ: 2497199)
ಮರ್ದಾನಿ–3 (ಹಿ)	3 ಪ್ರದರ್ಶನಗಳು
ಮಹದೇಶ್ವರ	(ಮೊ:9900820093)
45 ಫೇಸ್ ದಿ ಇಯರ್ (ಕ)	4 ಪ್ರದರ್ಶನಗಳು
ಗಾಯಿತ್ರಿ	
ಲ್ಯಾಂಡ್ ಲಾರ್ಡ್ (ಕ)	4 ಪ್ರದರ್ಶನಗಳು
ರಾಜಕಮಲ್	
ವಿತ್ ಲವ್ (ತ)	4 ಪ್ರದರ್ಶನಗಳು
ಸಂಗಂ	
ಕರಿಕಾಡ (ಕ) + ಜೆ.ಸಿ.(ಕ)	2+2 ಪ್ರದರ್ಶನಗಳು
ಲಿಡೋ	
ಕರಗ (ಕ) + ಶಿವಲೀಲಾ (ಕ)	3+1 ಪ್ರದರ್ಶನಗಳು
ತಿಬ್ಬಾದೇವಿ	
–	–
ಪ್ರಭಾ	
ಮಾವುತ (ಕ)	4 ಪ್ರದರ್ಶನಗಳು

ಪಾರಂಪರಿಕತೆಗೆ ಧಕ್ಕೆ ಬಿಗ್‌ಬಾಸ್ ಮಾಜಿ ಸ್ಪರ್ಧಿ ರಜತ್ ವಿರುದ್ಧ ಪೊಲೀಸರಲ್ಲಿ ದೂರು ದಾಖಲು



ಮೈಸೂರು, ಫೆ5(ಎಂಕೆ)– ಮೈಸೂರಿನ ಹಳೆ ಜಿಲ್ಲಾಧಿಕಾರಿ ಕಚೇರಿ ಎದುರು ಸಿಗರೇಟ್ ಸೇದುತ್ತಾ ಫೋಟೋಶೂಟ್ ಮಾಡಿಸಿ, ಪಾರಂಪರಿಕತೆಗೆ ಧಕ್ಕೆ ತಂದಿರುವುದಲ್ಲದೆ ಸಾರ್ವಜನಿಕ ಸ್ಥಳದಲ್ಲಿ ಅಸಭ್ಯ ವರ್ತನೆ ತೋರಿದ್ದಾರೆ ಎಂದು ಬಿಗ್‌ಬಾಸ್ ರಿಯಾಲಿಟಿ ಶೋ ಮಾಜಿ ಸ್ಪರ್ಧಿ ರಜತ್ ವಿರುದ್ಧ ಲಕ್ಷ್ಮಿಪುರಂ ಪೊಲೀಸ್ ಠಾಣೆಯಲ್ಲಿ ಕರ್ನಾಟಕ ಸೇನಾ ಪಡೆ ವತಿಯಿಂದ ದೂರು ದಾಖಲಿಸಲಾಗಿದೆ.

ಮೈಸೂರಿನ ಪಾರಂಪರಿಕ ಕಟ್ಟಡಗಳಲ್ಲಿ ಒಂದಾದ ಹಳೆ ಡಿಸಿ ಕಚೇರಿ ಎದುರು ಸಿಗರೇಟ್ ಸೇದುತ್ತಾ ಫೋಟೋಶೂಟ್ ಮಾಡಿಸಿರುವ ಬಿಗ್‌ಬಾಸ್ ರಿಯಾಲಿಟಿ ಶೋ ಮಾಜಿ ಸ್ಪರ್ಧಿ ರಜತ್, ಸಾರ್ವಜನಿಕ ಸ್ಥಳ ಎಂಬುದನ್ನು ಲೆಕ್ಕಿಸದೆ ರೀಲ್ಸ್ ಮಾಡಿ ಸಾಮಾಜಿಕ ಜಾಲತಾಣಗಳಲ್ಲಿ ಹರಿಬಿಟ್ಟಿರುವುದು ಖಂಡನೀಯ. ರಜತ್ ಅನುಚಿತ ವರ್ತನೆಯಿಂದ ಮೈಸೂರಿನ ಪಾರಂಪರಿಕತೆಗೆ ಧಕ್ಕೆಯಾಗಿರುವುದಲ್ಲದೆ ಅವರ ಹಿಂಬಾಲಕರಿಗೂ ಧೂಮಪಾನಕ್ಕೆ ಪ್ರೇರಣೆ ನೀಡಿದಂತಾಗಿದೆ.

ಈ ಹಿಂದೆಯೂ ಲಾಂಗ್ ಹಿಡಿದು ರೀಲ್ಸ್ ಮಾಡುವ ಮೂಲಕ ಸಾರ್ವಜನಿಕರಲ್ಲಿ ಆತಂಕ ಸೃಷ್ಟಿಸಿದ್ದ ರಜತ್, ಜೈಲಿಗೆ ಹೋಗಿ ಬಂದಿದ್ದರೂ ತಮ್ಮ ಅದೇ ವರ್ತನೆ ಮುಂದುವರೆಸಿದ್ದಾರೆ. ಆದ್ದರಿಂದ ರಜತ್ ವಿರುದ್ಧ ಪ್ರಕರಣ ದಾಖಲಿಸಿ, ಕಾನೂನು ಕ್ರಮ ಜರುಗಿಸುವಂತೆ ದೂರಿನಲ್ಲಿ ತಿಳಿಸಲಾಗಿದೆ. ಈ ವೇಳೆ ಕರ್ನಾಟಕ ಸೇನಾ ಪಡೆ ಜಿಲ್ಲಾಧ್ಯಕ್ಷ ತೇಜಸ್ ಲೋಕೇಶ್ ಗೌಡ, ಮುಖಂಡರಾದ ಗೋಲ್ಡನ್ ಸುರೇಶ್, ಬಸವರಾಜು, ಪ್ರಸನ್ನ, ಮಧುವನ ಚಂದ್ರು, ಎನ್.ದರ್ಶನ್, ಶಾಂತಕುಮಾರ್ ಮತ್ತಿತರರಿದ್ದರು.

ಮೈಸೂರಿನ ಯಾಂದಳ್ಳಿಯ ಒಂಟಿ ಮನೆಯಲ್ಲಿ ಡ್ರಗ್ಸ್ ತಯಾರಿಕೆ ಶಂಕೆ

ಪೊಲೀಸರಿಗೆ ಚಳ್ಳೆ ಹಣ್ಣು ತಿನ್ನಿಸುತ್ತಿರುವ ಶಂಕಿತರು

ಮೈಸೂರು, ಫೆ.5(ಬಿಎಲ್‌ಯು)– ಮೈಸೂರಿನ ಯಾಂದಳ್ಳಿ ಬಳಿಯ ಸಪ್ತ ಮಾತೃಕೆ ಲೇ ಔಟ್‌ನಲ್ಲಿ ಡ್ರಗ್ಸ್ ತಯಾರಿಸುತ್ತಿದ್ದಾರೆಂಬ ಶಂಕೆ ಇರುವ ಇಬ್ಬರು ಇನ್ನೂ ತಲೆಮರೆಸಿಕೊಂಡಿದ್ದು, ಇವರ ಪತ್ತೆಗೆ ಪೊಲೀಸರು ಬೆನ್ನತ್ತಿದ್ದಾರೆ. ಆದರೆ ಶಂಕಿತರು ಪೊಲೀಸರಿಗೆ ಬೀಳದೆ ಚಳ್ಳೆ ಹಣ್ಣು ತಿನ್ನಿಸುತ್ತಿದ್ದಾರೆ.

ಪೊಲೀಸರಿಗೆ ಸಿಕ್ಕಿ ಬೀಳುತ್ತೇವೆ ಎಂದು ಮೊಬೈಲ್ ಸ್ವಿಚ್ ಆಫ್ ಮಾಡಿ ತಲೆಮರೆಸಿಕೊಂಡಿದ್ದಾರೆ. ಇವರಿಗೆ ಪೊಲೀಸರು ತೀವ್ರ ಶೋಧನೆ ನಡೆಸುತ್ತಿದ್ದಾರೆ.

ಸಪ್ತ ಮಾತೃಕೆ ಲೇ ಔಟ್‌ನಲ್ಲಿ ಗಿರೀಶ್ ಬಾಬು ಎಂಬುವರಿಗೆ ಸೇರಿದ ಮೂರು ಅಂತಸ್ತಿನ ಮನೆಯನ್ನು ಇವರು ಬಾಡಿಗೆ ಪಡೆದಿದ್ದರು. ಈ ಮನೆಯಲ್ಲಿ ಡ್ರಗ್ಸ್ ತಯಾರಿಸಲಾಗುತ್ತಿದೆ ಎಂಬ ಸಂಶಯದ ಮೇರೆಗೆ ಪೊಲೀಸರು ದಾಳಿ ಮಾಡಿದ್ದರು.

ದಾಳಿ ವೇಳೆ ಮೊದಲ ಅಂತಸ್ತಿನ ಕೊಠಡಿಯಲ್ಲಿ ವಿವಿಧ ಕಂಪನಿಯ 11 ಮೊಬೈಲ್ ಫೋನ್‌ಗಳು, ಕಪ್ಪು ಬಣ್ಣದ 360 ಗ್ರಾಂ ರಾಸಾಯನಿಕ ಪೌಡರ್, 54 ಗ್ರಾಂ ತೂಕದ ಬಿಳಿ ಬಣ್ಣದ ರಾಸಾಯನಿಕ ಪೌಡರ್, 957 ಗ್ರಾಂ ತೂಕದ ಮತ್ತೊಂದು ಬಿಳಿ ಬಣ್ಣದ ಪುಡಿ ಪತ್ತೆಯಾಗಿದೆ.

ಅಲ್ಲದೆ 2,933 ಗ್ರಾಂ ಗಸಗಸೆ ಮಾದರಿ ವಸ್ತು, ಕಪ್ಪು ಬಣ್ಣದ ಪೇಸ್ಟ್ ಮಾದರಿಯ ವಸ್ತು, ಬೋರಿಕ್ ಆಸಿಡ್ ಕೂಡ ಸಿಕ್ಕಿದೆ. ಜೊತೆಗೆ 13 ನೀಲಿ ಬಣ್ಣದ ಕ್ಯಾನ್‌ಗಳಲ್ಲಿ ಬಿಳಿ ಬಣ್ಣದ ರಾಸಾಯನಿಕ ಪೌಡರ್ ಕೂಡ ದೊರೆತಿದ್ದು, ಪೊಲೀಸರು ಅದನ್ನು ವಶಪಡಿಸಿಕೊಂಡಿದ್ದಾರೆ.

ಅಲ್ಲಿ ಪತ್ತೆಯಾಗಿರುವ ರಾಸಾಯನಿಕದ ಮಾದರಿಯನ್ನು ಎಫ್‌ಎಸ್‌ಎಲ್ (ವಿಧಿ ವಿಜ್ಞಾನ ಪ್ರಯೋಗಾಲಯ) ಗೆ ಕಳುಹಿಸಲಾಗಿದ್ದು, ಫಲಿತಾಂಶ ನಿರೀಕ್ಷಿಸುತ್ತಿದ್ದೇವೆ. ಮೇಲ್ನೋಟಕ್ಕೆ ಇದು ಡ್ರಗ್ಸ್ ಎಂದು ಕಂಡು ಬಂದಿದೆಯಾದರೂ ಪ್ರಯೋಗಾಲಯದ ವರದಿ ಬಂದ ನಂತರ ಅಂತಿಮ ತೀರ್ಮಾನಕ್ಕೆ ಬರಬೇಕಿದೆ ಎಂದು ಅಡಿಷನಲ್ ಎಸ್ಪಿ ನಾಗೇಶ್ 'ಮೈಸೂರು ಮಿತ್ರ'ಗೆ ತಿಳಿಸಿದರು.

ಎಸ್‌ಬಿಐ ಬೆಂಗಳೂರು ವೃತ್ತದ ಸಿಎಸ್‌ಆರ್ ಅನುದಾನದಡಿ ಅಂಗನವಾಡಿ ಕೇಂದ್ರ ಅಭಿವೃದ್ಧಿ



ಎಸ್‌ಬಿಐ ಬೆಂಗಳೂರು ವೃತ್ತದ ವತಿಯಿಂದ ಸಿಎಸ್‌ಆರ್ ಅನುದಾನದಲ್ಲಿ ಉನ್ನತೀಕರಿಸಿದ ಮೈಸೂರಿನ ನಜರ್‌ಬಾದ್‌ನಲ್ಲಿರುವ ಅಂಗನವಾಡಿ ಕೇಂದ್ರಕ್ಕೆ ಇಟ್ಟಿಗೆಗೂಡು ಶಾಖೆ ಭಾರತೀಯ ಸ್ಟೇಟ್ ಬ್ಯಾಂಕ್‌ನ ವ್ಯವಸ್ಥಾಪಕರಾದ ರುಬಿನಾ ಸಾಹೂ ಅವರು ಅಂಗನವಾಡಿಗೆ ಅಗತ್ಯ ಸಾಮಗ್ರಿಗಳನ್ನು ಹಸ್ತಾಂತರಿಸಿದರು.

ಮೈಸೂರು, ಫೆ5(ಎಂಟಿವೈ)– ಎಸ್‌ಬಿಐ ಬೆಂಗಳೂರು ವೃತ್ತದ ವತಿಯಿಂದ ಸಿಎಸ್‌ಆರ್ ಅನುದಾನದಲ್ಲಿ ಮೈಸೂರಿನ ನಜರ್‌ಬಾದ್‌ನಲ್ಲಿರುವ ಅಂಗನವಾಡಿ ಕೇಂದ್ರವನ್ನು ಅಭಿವೃದ್ಧಿಪಡಿಸಿ, ಗುರುವಾರ ಮಕ್ಕಳ ಸೇವಾ ಚಟುವಟಿಕೆಗಳಿಗೆ ಸಮರ್ಪಿಸಿತು.

ಮೈಸೂರಿನ ಸುರಭಿ ಫೌಂಡೇಷನ್ ಟ್ರಸ್ಟ್ ನೇತೃತ್ವದಲ್ಲಿ ಅಂಗನವಾಡಿ ಕೇಂದ್ರವನ್ನು ಅಭಿವೃದ್ಧಿ ಪಡಿಸಲಾಗಿದ್ದು, ಉನ್ನತೀಕರಿಸಿದ ಅಂಗನವಾಡಿ ಕೇಂದ್ರಕ್ಕೆ ಗುರುವಾರ ಬೆಳಗ್ಗೆ ಇಟ್ಟಿಗೆಗೂಡು ಶಾಖೆ ಭಾರತೀಯ ಸ್ಟೇಟ್ ಬ್ಯಾಂಕ್‌ನ ವ್ಯವಸ್ಥಾಪಕರಾದ ರುಬಿನಾ ಸಾಹೂ ಅವರು ಅಗತ್ಯ ಸಾಮಗ್ರಿಗಳನ್ನು ಹಸ್ತಾಂತರಿಸಿದರು.

ಇದೇ ವೇಳೆ ರುಬಿನಾ ಸಾಹೂ ಮಾತನಾಡಿ, ಇತ್ತೀಚೆಗೆ ಖಾಸಗಿ ನರ್ಸರಿಗಳ ಸಂಸ್ಕೃತಿ ಹೆಚ್ಚುತ್ತಿದ್ದು, ಅಂಗನವಾಡಿ ಕೇಂದ್ರಗಳನ್ನು ನಿರ್ಲಕ್ಷಿಸಲಾಗುತ್ತಿದೆ. ಈ ಹಿನ್ನೆಲೆಯಲ್ಲಿ ಅಂಗನವಾಡಿಗಳನ್ನು ಉಳಿಸಿ, ಬೆಳೆಸುವುದರೊಂದಿಗೆ ಬಡ ಕುಟುಂಬದ ಮಕ್ಕಳಿಗೆ ಹೆಚ್ಚು ಅನುಕೂಲ ಮಾಡಿಕೊಡಬೇಕಾಗಿದೆ. ಅದಕ್ಕಾಗಿ ಸಿಎಸ್‌ಆರ್ ಫಂಡ್ ಬಳಸಿ ಅಂಗನವಾಡಿ ಕೇಂದ್ರಗಳನ್ನು ಉನ್ನತೀಕರಿಸಲಾಗಿದೆ. ಇದರಿಂದ ಮಕ್ಕಳಿಗೆ ಕಲಿಕಾ ಆಸಕ್ತಿ ಮೂಡುತ್ತದೆ. ಜೊತೆಗೆ ಕಲಿಯುವ ವಾತಾವರಣ ಸೃಷ್ಟಿಸಿದಂತಾಗಿದೆ ಎಂದು ಅಭಿಪ್ರಾಯಪಟ್ಟರು.

ಈ ಅಂಗನವಾಡಿ ಕೇಂದ್ರದ ಅಭಿವೃದ್ಧಿಗೆ ಒಂದು ಲಕ್ಷ ರೂ. ವೆಚ್ಚ ಮಾಡಲಾಗಿದೆ. ಕೇಂದ್ರದಲ್ಲಿ ಕಲಿಯಲು ಬರುವ 20 ಮಕ್ಕಳಿಗೆ ಬ್ಯಾಗ್ ವಿತರಿಸಲಾಗಿದೆ. ಅಂಗನವಾಡಿ ಕೇಂದ್ರದ ಹೊರಭಾಗ ಮತ್ತು ಒಳಭಾಗಕ್ಕೆ ಬಣ್ಣ ಹಾಗೂ ಚಿತ್ರಕಲೆ, ಗೋಡೆ ಬರಹ ಬರೆಯಲಾಗಿದೆ ಅಲ್ಲದೆ, ಮಕ್ಕಳ ಕಲಿಕೆ ಹಾಗೂ ಆಟಕ್ಕೆ ಬೇಕಾದ ಅಗತ್ಯ ಸಾಮಗ್ರಿ, ನೆಲಹಾಸು ಸೇರಿದಂತೆ ಇನ್ನಿತರ ವಸ್ತುಗಳನ್ನು ವಿತರಿಸಲಾಗಿದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಮೈಸೂರು ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಮೇಲ್ವಿಚಾರಕರಾದ ಸುಮಿತ್ರಾ, ಸುರಭಿ ಫೌಂಡೇಷನ್ ಟ್ರಸ್ಟ್‌ನ ಶೈಕ್ಷಣಿಕ ಸಲಹೆಗಾರ್ತಿ ಮಂಗಳಾ ಮೈತ್ರಿ, ಟ್ರಸ್ಟ್‌ನ ಸಿಎಸ್‌ಆರ್ ವ್ಯವಸ್ಥಾಪಕ ಎಂ.ವಿಶಾಲ್, ಟ್ರಸ್ಟ್ ವ್ಯವಸ್ಥಾಪಕರು ಎಂ.ರೆಡ್ಡಿ, ಅಂಗನವಾಡಿ ಶಿಕ್ಷಕಿ ಎಂ.ತೇಜಸ್ವಿನಿ ಇನ್ನಿತರರು ಉಪಸ್ಥಿತರಿದ್ದರು.

ಬಿಹಾರದಲ್ಲಿ ಮರುಚುನಾವಣೆಗೆ ಆಗ್ರಹಿಸಿ

ಪ್ರಶಾಂತ್ ಕಿಶೋರ್ ಪಕ್ಷದಿಂದ ಸುಪ್ರೀಂಗೆ ಅರ್ಜಿ

ಮಹಿಳೆಯರಿಗೆ ಹಣ ವರ್ಗಾಯಿಸಿ ನೀತಿ ಸಂಹಿತೆ ಉಲ್ಲಂಘನೆ ಆರೋಪ



ನವದೆಹಲಿ: ಮಾಜಿ ಚುನಾವಣಾ ತಂತ್ರಜ್ಞ ಪ್ರಶಾಂತ್ ಕಿಶೋರ್ ಅವರ ಜನ್ ಸುರಾಜ್ ಪಕ್ಷವು 2025ರ ಬಿಹಾರ ವಿಧಾನಸಭಾ ಚುನಾವಣೆಯನ್ನು ಪ್ರಶ್ನಿಸಿ ಸುಪ್ರೀಂಕೋರ್ಟ್‌ಗೆ ಅರ್ಜಿ ಸಲ್ಲಿಸಿ, ರಾಜ್ಯದಲ್ಲಿ ಮತ್ತೆ ಹೊಸದಾಗಿ ಚುನಾವಣೆ ನಡೆಸುವಂತೆ ಕೋರಿದೆ.

ಪ್ರಶಾಂತ್ ಕಿಶೋರ್ ಪಕ್ಷದ ಅರ್ಜಿ ಶುಕ್ರವಾರ ಸುಪ್ರೀಂಕೋರ್ಟ್ ಮುಖ್ಯ ನ್ಯಾಯಮೂರ್ತಿ ಸೂರ್ಯಕಾಂತ್ ಮತ್ತು ಜೋಯ್ಮಲ್ಯ ಬಾಗ್ಚಿ ಅವರ ಪೀಠದ ಮುಂದೆ ವಿಚಾರಣೆಗೆ ಬರುವ ಸಾಧ್ಯತೆಯಿದೆ.

ಬಿಹಾರದ ಒಟ್ಟು 243 ಸ್ಥಾನಗಳಲ್ಲಿ ಬಿಜೆಪಿ ನೇತೃತ್ವದ ಎನ್‌ಡಿಎ 202 ಸ್ಥಾನಗಳನ್ನು ಗೆದ್ದು ರಾಜ್ಯದಲ್ಲಿ ಮತ್ತೆ ಅಧಿಕಾರಕ್ಕೆ ಬಂದಿದೆ. ಕಾಂಗ್ರೆಸ್‌ನ ಆರು ಸ್ಥಾನಗಳು ಸೇರಿದಂತೆ ಇಂಡಿಯಾ ಬ್ಲಾಕ್ ಕೇವಲ 35 ಸ್ಥಾನಗಳನ್ನು ಗಳಿಸಿದೆ. ಜನ್ ಸುರಾಜ್ ಪಕ್ಷವು ತನ್ನ ಖಾತೆ ತೆರೆಯುವಲ್ಲೂ ವಿಫಲವಾಗಿದ್ದು, ಹಲವು ಅಭ್ಯರ್ಥಿಗಳು ಠೇವಣಿ ಕಳೆದುಕೊಂಡಿದ್ದಾರೆ.

ವಿಧಾನಸಭೆ ಚುನಾವಣಾ ಘೋಷಣೆಯಾದ ನಂತರ, ಮುಖ್ಯಮಂತ್ರಿ ನಿತೀಶ್ ಕುಮಾರ್ ಅವರು, ಮಹಿಳಾ ರೋಜ್‌ಗಾರ್ ಯೋಜನೆಯಡಿ ಮಹಿಳೆಯರಿಗೆ ತಲಾ 10,000 ರೂ. ವರ್ಗಾಯಿಸುವ ಮೂಲಕ ಬಿಹಾರ ಸರ್ಕಾರವು ಚುನಾವಣಾ ನೀತಿ ಸಂಹಿತೆಯನ್ನು ಉಲ್ಲಂಘಿಸಿದೆ ಎಂದು ಜನ್ ಸುರಾಜ್ ಪಕ್ಷ ತನ್ನ ಅರ್ಜಿಯಲ್ಲಿ ಆರೋಪಿಸಿದೆ.

ರಾಜ್ಯದಲ್ಲಿ ಮಹಿಳಾ ಮತದಾರರಿಗೆ ನೇರ ಹಣ ವರ್ಗಾವಣೆ ವಿರುದ್ಧ ಸಂವಿಧಾನದ 324ನೇ ವಿಧಿ ಮತ್ತು ಜನತಾ ಪ್ರಾತಿನಿಧ್ಯ ಕಾಯ್ದೆಯ ಸೆಕ್ಷನ್ 123ರ ಅಡಿಯಲ್ಲಿ ಕ್ರಮ ಕೈಗೊಳ್ಳಲು ಚುನಾವಣಾ ಆಯೋಗಕ್ಕೆ ನಿರ್ದೇಶನ ನೀಡುವಂತೆಯೂ ಕೋರಲಾಗಿದೆ.

ರಾಜಮನೆತನದ ನೇತೃತ್ವದಲ್ಲಿ ಮೈಸೂರಲ್ಲಿ ಮರಗಳ ಸಮೀಕ್ಷೆ

● ತ್ರಿಷಿಕಾಕುಮಾರಿ ಒಡೆಯರ್‌ರ ಭೇರುಂಡ ಫೌಂಡೇಷನ್‌ನಡಿ ಸ್ತುತ್ಯಾರ್ಹ ಕಾರ್ಯ ● ಈಗಾಗಲೇ 50 ಸಾವಿರ ಮರಗಳ ಸಮೀಕ್ಷೆ ಪೂರ್ಣ ● ಪರಿಸರ ಸ್ನೇಹಿ ಮಹತ್ವಾಕಾಂಕ್ಷೆಯಡಿ ಮಂಗಳೂರು ಮೂಲದ ಸಂಸ್ಥೆ ಸಾಥ್





ಯಾದವಗಿರಿಯಲ್ಲಿ ತ್ರಿಷಿಕಾಕುಮಾರಿ ಒಡೆಯರ್, ಸ್ವಯಂಸೇವಕರೊಂದಿಗೆ ಮರಗಳ ಕಾಂಡಗಳ ಸುತ್ತಳತೆ ಮಾಡುತ್ತಿರುವುದು.



ಸ್ವಯಂಸೇವಕರೊಂದಿಗೆ ಭೇರುಂಡ ಫೌಂಡೇಶನ್ ಅಧ್ಯಕ್ಷೆ ತ್ರಿಷಿಕಾಕುಮಾರಿ ಒಡೆಯರ್.

ಮೈಸೂರು, ಫೆ.5 (ಎಂಕೆ)– ಸಾಂಸ್ಕೃತಿಕ ನಗರಿ ಮೈಸೂರಿನ ಪರಿಸರ ಸಂರಕ್ಷಣೆಯ ಮಹತ್ವದ ಸದುದ್ದೇಶದೊಂದಿಗೆ ಮರಗಳ ಸಮೀಕ್ಷೆ ಕಾರ್ಯ ಸದ್ದಿಲ್ಲದೆ ನಡೆಯುತ್ತಿದೆ...!

ಅಭಿವೃದ್ಧಿ ಹೆಸರಿನಲ್ಲಿ ಮರಗಳಿಗೆ ಬೀಳುವ ಕತ್ತರಿ ಪ್ರಯೋಗಕ್ಕೆ ಕಡಿವಾಣ ಹಾಕುವ ನಿಟ್ಟಿನಲ್ಲಿ ನಗರ ಪಾಲಿಕೆಯ ಜೊತೆ ಜೊತೆಗೆ 'ನಮ್ಮರ(ನಮ್ಮರ–ನಮ್ಮ ಉಸಿರು)' ಶೀರ್ಷಿಕೆಯಡಿ ರಸ್ತೆ ಬದಿಯಲ್ಲಿರುವ ಮರಗಳ ಸಮೀಕ್ಷೆ ನಡೆಸಿ, ಅವುಗಳನ್ನು ಮುಂದಿನ ಪೀಳಿಗೆಗೆ ಬಳುವಳಿಯಾಗಿ ನೀಡುವ ಕಾರ್ಯ ಸಾಗಿದೆ.

ಮಂಗಳೂರು ಮೂಲದ ಸೆಂಟರ್ ಫಾರ್ ಅಡ್ವಾನ್ಸ್ ಲರ್ನಿಂಗ್ (ಸಿಎಫ್‌ಎಲ್) ಸಂಸ್ಥೆ ಜೊತೆಗೆ ಅರಮನೆ ಮಂಡಳಿ ಸಹಕಾರದೊಂದಿಗೆ ಭೇರುಂಡಾ ಫೌಂಡೇಶನ್ ಅಧ್ಯಕ್ಷರೂ ಆದ ರಾಜವಂಶಸ್ಥೆ ತ್ರಿಷಿಕಾ ಕುಮಾರಿ ಅವರ ನೇತೃತ್ವದಲ್ಲಿ ಮರಗಳ ಸಮೀಕ್ಷೆ ನಡೆಯುತ್ತಿದ್ದು, ಮರಗಳ ಎತ್ತರ, ಗಾತ್ರ, ಪ್ರಭೇದ, ಮರದ ಬುಡದಲ್ಲಿ ಕಾಂಕ್ರಿಟ್ ಅಳವಡಿಕೆಯಿಂದಾಗುತ್ತಿರುವ ಹಾನಿ ಮತ್ತು ಮರಗಳಿಗೆ ತಗುಲಿರುವ ರೋಗ–ರುಜಿನಗಳ ಬಗ್ಗೆ ವೈಜ್ಞಾನಿಕವಾಗಿ ಸಮೀಕ್ಷೆ ನಡೆಸಲಾಗುತ್ತಿದೆ.

ಮರಗಳ ಸಂತತಿ ಮರುಸ್ಥಾಪನೆ: ಮೈಸೂರು ಒಡೆಯರ್ ಆಳ್ವಿಕೆ ಕಾಲದಲ್ಲಿ ವಿಶಾಲ ರಸ್ತೆಗಳ ಬದಿಯಲ್ಲಿ ಚೆಂದದ ಹೂಗಳಿಂದ ಕಣ್ಮನ ಸೆಳೆಯುತ್ತಿದ್ದ ಮರಗಳ ಸಂತತಿಯನ್ನು ಮರುಸ್ಥಾಪಿಸುವ ನಿಟ್ಟಿನಲ್ಲಿ ಮರಗಳ ಸಮೀಕ್ಷೆ ನಡೆಯುತ್ತಿದ್ದು, ಮೈಸೂರು–ಕೊಡಗು ಲೋಕಸಭಾ ಸದಸ್ಯರೂ ಆದ ರಾಜವಂಶಸ್ಥ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಒತ್ತಾಸೆಯಾಗಿ ನಿಂತಿದ್ದಾರೆ.

ಈಗಾಗಲೇ ಪಾಲಿಕೆಯೊಂದಿಗೆ ಒಡಂಬಡಿಕೆ ಮಾಡಿಕೊಂಡಿರುವ ಸಿಎಫ್‌ಎಲ್ ಸಂಸ್ಥೆ, ಮರಗಳ ಗಣತಿ ಕಾರ್ಯ ಆರಂಭಿಸಿದ್ದು, ಪಾಲಿಕೆ ವ್ಯಾಪ್ತಿಯ 65 ವಾರ್ಡ್‌ಗಳಲ್ಲಿಯೂ ಮಾ.31ರೊಳಗೆ ಸಮೀಕ್ಷೆಯನ್ನು ಪೂರ್ಣಗೊಳಿಸುವ ಗುರಿಯನ್ನು ಹೊಂದಿದೆ. ಮೈಸೂರಿನಲ್ಲಿ ಹಸಿರು ಪರಂಪರೆಯನ್ನು ಸಂರಕ್ಷಣೆ ಮಾಡುವುದು ಸಮೀಕ್ಷೆಯ ಮುಖ್ಯ ಉದ್ದೇಶವಾಗಿದೆ ಎಂದು ಭೇರುಂಡಾ ಫೌಂಡೇಶನ್ ಅಧ್ಯಕ್ಷರೂ ಆದ ರಾಜವಂಶಸ್ಥೆ ತ್ರಿಷಿಕಾ ಕುಮಾರಿ 'ಮೈಸೂರು ಮಿತ್ರ'ನಿಗೆ ತಿಳಿಸಿದ್ದಾರೆ.

ವೇಗವಾಗಿ ವಿಸ್ತರಣೆಯಾಗುತ್ತಿರುವ ಮೈಸೂರಿನಲ್ಲಿ ಪಾರಂಪರಿಕ ಕಟ್ಟಡಗಳು, ವಿಶಾಲ ರಸ್ತೆಗಳು ಹಾಗೂ ಉದ್ಯಾನವನಗಳಿದ್ದು, ಪರಿಸರ ಸಂರಕ್ಷಣೆ ಮೂಲಕ ವಾತಾವರಣದಲ್ಲಿ ಸಮತೋಲನ ಕಾಯ್ದುಕೊಳ್ಳಬೇಕಿದೆ. ಈ ನಿಟ್ಟಿನಲ್ಲಿ ಮರಗಳನ್ನು ಉಳಿಸಿ–ಬೆಳೆಸುವುದು ಅವಶ್ಯವಾಗಿದೆ ಎಂದರು.

ಮೂರು ಹಂತದಲ್ಲಿ ಗಣತಿ: ಪಾಲಿಕೆ ವ್ಯಾಪ್ತಿಯ ಎಲ್ಲಾ ರಸ್ತೆ ಬದಿಯಲ್ಲಿ ಮರಗಳ ಸಮೀಕ್ಷೆಯನ್ನು ಮೂರು ಹಂತಗಳಲ್ಲಿ ನಡೆಸಲಾಗುವುದು. ಮೊದಲ ಹಂತದಲ್ಲಿ ಸುಮಾರು 70 ಮಂದಿ ಸ್ವಯಂ ಸೇವಕರು ಮತ್ತು ವಿದ್ಯಾರ್ಥಿಗಳು ಭಾಗವಹಿಸಿ ಮರಗಳ ಪರಿಶೀಲನೆ ನಡೆಸುತ್ತಿದ್ದಾರೆ. ಪಾಲಿಕೆಯ 65 ವಾರ್ಡ್‌ಗಳಲ್ಲಿ ಅಂದಾಜು 1.5 ಲಕ್ಷ ಮರಗಳಿದ್ದು, ಈಗಾಗಲೇ 50 ಸಾವಿರ ಮರಗಳ ಸಮೀಕ್ಷೆ ನಡೆಸಲಾಗಿದೆ ಎಂದು ಮಾಹಿತಿ ನೀಡಿದ್ದಾರೆ.

2ನೇ ಹಂತದಲ್ಲಿ ಸಂಸ್ಥೆಗಳು, ಉದ್ಯಾನವನಗಳು ಮತ್ತು ಇತರೆ ಸ್ಥಳಗಳಲ್ಲಿ ಮರಗಳ ಸಮೀಕ್ಷೆ ನಡೆಯಲಿದ್ದು, ಪ್ರತಿಯೊಂದು ಮರವನ್ನು ಜಿಯೋ–ಟ್ಯಾಗ್ (ಬೌಗೋಳಿಕ ಗುರುತು)ಮಾಡಲಾಗುವುದು. ಹಾಗೆಯೇ ಮರಗಳ ಬೆಳವಣಿಗೆ, ಮರದಲ್ಲಿ ನೆಲೆಸಿರುವ ಜೀವಿಗಳ ಬಗ್ಗೆಯೂ ದಾಖಲು ಮಾಡಲಾಗುವುದು. ಮರಗಳಿಗೆ ತಗುಲಿರುವ ರೋಗಗಳು, ಕಾಂಕ್ರೀಟೀಕರಣದಿಂದಾಗುತ್ತಿರುವ ತೊಂದರೆ, ಬೇರಿಗೆ ಹಾನಿಯಾಗುತ್ತಿರುವುದು ಗುರ್ತಿಸಿ ಮೌಲ್ಯಮಾಪನ ಮಾಡಲಾಗುವುದು ಎಂದು ತಿಳಿಸಿದರು.

ಆಮ್ಲಜನಕ ಗುಣಮಟ್ಟ ನಿರ್ವಹಣೆ: 3ನೇ ಹಂತದಲ್ಲಿ ಮೈಸೂರಿನಲ್ಲಿ ಇಂಗಾಲದ ಡೈಆಕ್ಸೈಡ್ ಪ್ರಮಾಣವನ್ನು ಅಂದಾಜಿಸಿ, ಆಮ್ಲಜನಕ ಹೆಚ್ಚಿಸುವ ನಿಟ್ಟಿನಲ್ಲಿ ಕ್ರಮ ವಹಿಸಲಾಗುವುದು. ಇಂಗಾಲದ ಡೈ ಆಕ್ಸೈಡ್ ಅನ್ನು ಹೆಚ್ಚಾಗಿ ಹೀರಿಕೊಳ್ಳುವ ಪ್ರಭೇದದ ಗಿಡಗಳನ್ನು ನೆಡುವ ಉದ್ದೇಶವನ್ನು ಹೊಂದಲಾಗಿದೆ. ಮುಖ್ಯವಾಗಿ ಸಮೀಕ್ಷೆ ವೇಳೆ ಮರಗಳ ಫೋಟೊ ಸಹಿತ ಸಂಪೂರ್ಣ ಮಾಹಿತಿಯನ್ನು ಸಂಗ್ರಹಿಸಿ ಅಪ್‌ಲೋಡ್ ಸಿಎಫ್‌ಎಲ್ ತಾಂತ್ರಿಕ ಸಹಕಾರ ನೀಡುತ್ತದೆ ಎಂದರು.

ಯದುವೀರ್ ಒಡೆಯರ್ ಭಾಗಿ: ಮರಗಳ ಸಮೀಕ್ಷಾ ಕಾರ್ಯಕ್ಕೆ ಸ್ವತಃ ಪರಿಸರ ಪ್ರೇಮಿಯಾಗಿರುವ ಸಂಸದರಾದ ಯದುವೀರ್ ಒಡೆಯರ್ ಅವರು ಭಾಗವಹಿಸಲಿದ್ದಾರೆ. ಮುಂದಿನ ದಿನಗಳಲ್ಲಿ ಒಟ್ಟಾಗಿ ಮರಗಳ ಸಮೀಕ್ಷೆ ಮಾಡುತ್ತೇವೆ. ಮಾರ್ಚ್ ತಿಂಗಳೊಳಗೆ ಸಮೀಕ್ಷೆ ಮುಕ್ತಾಯಗೊಳಿಸಿ, ಮರಗಳ ರಕ್ಷಣೆ ಸಂಬಂಧಿ ಸಲಹೆಗಳನ್ನು ಪಾಲಿಕೆಗೆ ನೀಡಲಾಗುವುದು. ಹಾಗೆಯೇ ಮೈಸೂರು ಪರಿಸರ ಸಂರಕ್ಷಣೆ ನಮ್ಮೆಲ್ಲರ ಜವಾಬ್ದಾರಿಯೂ ಆಗಿದೆ ಎಂದು ಹರ್ಷ ವ್ಯಕ್ತಪಡಿಸಿದರು.

ಸಮೀಕ್ಷೆ ವಿಧಾನ...

- ಪ್ರತಿಯೊಂದು ಮರವನ್ನು ಜಿಯೋ–ಟ್ಯಾಗ್ ಮಾಡಿ, ಮರದ ಬೆಳವಣಿಗೆ ಮತ್ತು ಜೀವರಾಶಿ ವಿವರಗಳೊಂದಿಗೆ ಸ್ಥಳ ಆಧಾರಿತ ಮ್ಯಾಪಿಂಗ್‌ನೊಂದಿಗೆ ದಾಖಲಿಸುವುದು.
- ಮರಗಳಿಗೆ ತಗುಲಿರುವ ರೋಗಗಳು, ಕಾಂಕ್ರೀಟೀಕರಣ ಮತ್ತು ಬೇರಿಗೆ ಹಾನಿಯಂತಹ ತೊಂದರೆಗಳನ್ನು ಗುರುತಿಸಿ ಮರದ ಆರೋಗ್ಯವನ್ನು ಮೌಲ್ಯಮಾಪನ ಮಾಡಿ, ನಂತರ ಸೂಕ್ತ ಸಂರಕ್ಷಣಾ ಕ್ರಮಗಳನ್ನು ತೆಗೆದುಕೊಳ್ಳುವುದು.
- ಮರಗಳ ಪ್ರಭೇದಗಳು, ಎತ್ತರ, ಕಾಂಡದ ವ್ಯಾಸ ಮತ್ತು ಹರಡುವಿಕೆ ಸೇರಿದಂತೆ ವಿವರಗಳನ್ನು ವೈಜ್ಞಾನಿಕ ದಾಖಲಾತಿಗಾಗಿ ದಾಖಲಿಸುವುದು.
- ಜೀವವೈವಿಧ್ಯ ಮೌಲ್ಯಮಾಪನ: ಮೈಸೂರಿನಲ್ಲಿ ಮರದ ವೈವಿಧ್ಯತೆಯನ್ನು ಶಾನನ್‌ನ ಸೂಚ್ಯಂಕ ಬಳಸಿಕೊಂಡು ದಾಖಲಿಸಲಾಗುತ್ತದೆ (ಪ್ರಭೇದಗಳ ಸಮೃದ್ಧಿ ಮತ್ತು ಅವುಗಳ ವಿತರಣೆ ಬಗ್ಗೆ ತಿಳಿಸುವ ಜೀವವೈವಿಧ್ಯದ ಅಳತೆ ಸೂಚ್ಯಂಕ)
- ಕಾರ್ಬನ್ ನಿರ್ವಹಣೆ: ನಗರ ಮಟ್ಟದಲ್ಲಿ ಇಂಗಾಲ ಡೈ ಆಕ್ಸೈಡ್ ಅಂದಾಜಿಸಿ, ಸೂಕ್ತ ಸಲಹೆ ನೀಡುವುದು.

ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳಿಗೆ ಪರೀಕ್ಷಾ ಪೂರ್ವಭಾವಿ ತಯಾರಿ ಕಾರ್ಯಾಗಾರ



ಮೈಸೂರಿನ ಹೂಟಗಳ್ಳಿ ಸರ್ಕಾರಿ ಪ್ರೌಢಶಾಲೆಯ ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳಿಗೆ ಪರೀಕ್ಷಾ ಪೂರ್ವಭಾವಿ ತಯಾರಿ ಕಾರ್ಯಾಗಾರ ನಡೆಯಿತು.

ಮೈಸೂರು, ಫೆ.5(ಎಂಕೆ)–ಮೈಸೂರಿನ ಹೂಟಗಳ್ಳಿ ಸರ್ಕಾರಿ ಪ್ರೌಢಶಾಲೆಯ ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳಿಗೆ ದಾವಣಗೆರೆಯ ಕಲಾಕುಂಚ ಸಾಂಸ್ಕೃತಿಕ ಸಂಸ್ಥೆಯ ಮೈಸೂರು ಶಾಖೆ ಸಹಯೋಗದೊಂದಿಗೆ ಪರೀಕ್ಷಾ ಪೂರ್ವಭಾವಿ ತಯಾರಿ ಕಾರ್ಯಾಗಾರ ಹಮ್ಮಿಕೊಳ್ಳಲಾಗಿತ್ತು.

ಕಾರ್ಯಾಗಾರ ಉದ್ಘಾಟಿಸಿದ ಕರ್ನಾಟಕ ಸುಗಮ ಸಂಗೀತ ಪರಿಷತ್ ಜಿಲ್ಲಾಧ್ಯಕ್ಷ ನಾಗರಾಜ ವಿ.ಬೈರಿ, ಅಧ್ಯಯನದ ಜೊತೆಗೆ ಆತ್ಮವಿಶ್ವಾಸ ಇದ್ದಲ್ಲಿ ಪರೀಕ್ಷೆ ಎದುರಿಸುವುದು ಸುಲಭ. ಯಾವುದೇ ಆತಂಕವಿಲ್ಲದೇ ಪರೀಕ್ಷೆ ಬರೆಯಬೇಕು ಎಂದರು.

ಜಿಲ್ಲಾ ಕಸಾಪ ಅಧ್ಯಕ್ಷ ಮಡ್ಡೀಕೆರೆ ಗೋಪಾಲ್ ಮಾತನಾಡಿ, ವಿದ್ಯಾರ್ಥಿಗಳಿಗೆ ಏಕಾಗ್ರತೆ ಮುಖ್ಯ. ಅದಿದ್ದಲ್ಲಿ ಯಾವುದೇ ಕಠಿಣ ಪರೀಕ್ಷೆಯನ್ನು ಬರೆಯಬಹುದು. ಗೂಗಲ್ ಸಿಇಒ ಸುಂದರ್ ಪಿಚೈ ಅವರಂತೆ ಕಷ್ಟಪಟ್ಟು ಯೋಜನಾ ಬದ್ಧವಾಗಿ ಓದಿ ಮುಂದೆ ಬರಬೇಕು ಎಂದರು.

ಮೈಸೂರು ತಾಲೂಕು ಬಿಇಒ ಎಂ.ಪ್ರಕಾಶ್, ಹಿರಿಯ ಪತ್ರಕರ್ತ ಅಂಶಿ ಪ್ರಸನ್ನಕುಮಾರ್, ಸಂಸ್ಥೆಯ ಸಂಸ್ಥಾಪಕ ಸಾಲಿಗ್ರಾಮ ಗಣೇಶ್‌ಶೆಣೈ, ಪ್ರಧಾನ ಕಾರ್ಯದರ್ಶಿ ಉಮೇಶ್, ಜ್ಯೋತಿ ಗಣೇಶ್ ಶೆಣೈ, ವಂದನಾ ಶೆಣೈ, ಶಿಲ್ಪಾ ಉಮೇಶ್, ಶಿಕ್ಷಕ ನ.ಗಂಗಾಧರಪ್ಪ, ಮುಖ್ಯ ಶಿಕ್ಷಕಿ ಎಂ.ವಿ. ಸಂಗೀತಾ, ಶಿಕ್ಷಕ ರಂಗಸ್ವಾಮಿ ಇದ್ದರು.



11ನೇ ವರ್ಷದ ಸವಿನೆನಪು

ನೀವು ನಮ್ಮನ್ನಗಲಿ ಇಂದಿಗೆ 11 ವರ್ಷ ಕಳೆದರೂ ಸದಾ ನಿಮ್ಮ ನೆನಪಿನಲ್ಲಿರುವ ಕುಟುಂಬವರ್ಗದವರು ಹಾಗೂ ಬಂಧುಮಿತ್ರರು

ಶ್ರೀ ಚಾಮುಂಡೇಗೌಡ
(ತಮ್ಮಯ್ಯಣ್ಣರವರು)
(ರೈಲ್ವೆ ಇಲಾಖೆ)
ದಿನಾಂಕ 6.2.2015



ಪ್ಲಾಸ್ಟಿಕ್ ಬಳಕೆ ನಿಷೇಧಿಸಿ
ಪರಿಸರವನ್ನು ಕಾಪಾಡಿ

ಉಪ ನಿರ್ದೇಶಕರರವರ ಕಛೇರಿ,
ಶ್ರೀ ಚಾಮರಾಜೇಂದ್ರ ಮೃಗಾಲಯ, ಮೈಸೂರು.
ಸಂಖ್ಯೆ: ಎಂವೈಜೆಡ್/ಟೆಂಡರ್/2025–26 ದಿ.04.02.2026

ಟೆಂಡರ್ ಪ್ರಕಟಣೆ

(ಇ ಪ್ರಕ್ಯೂರ್‌ಮೆಂಟ್ ಪದ್ಧತಿಯಲ್ಲಿ ಮಾತ್ರ)

ಈ ಕಛೇರಿ ಟೆಂಡರ್ ಪ್ರಕಟಣೆಯ ಕಾಮಗಾರಿಗಳನ್ನು 1) ಕೆ.ಡಬ್ಲ್ಯೂ–1ರ Indent No:142/25- 26 Dt.04.02.2026 ಅನ್ವಯ ಐಟಂವಾರು ಟೆಂಡರ್ ಆಹ್ವಾನಿಸಲಾಗಿದ್ದು, ಟೆಂಡರ್ ಸಲ್ಲಿಸುವ ದಿನಾಂಕವನ್ನು ಹಾಗೂ ಇತರೆ ವಿವರಗಳನ್ನುಇ–ಪೋರ್ಟಲ್ (https://kppp.karnataka.gov.in) ನಲ್ಲಿ ಪಡೆಯಬಹುದು.

DIPR/DDMYS/1608/KSMCA/911/2025-26 ಸಹಿ/– ಉಪನಿರ್ದೇಶಕರು

ಹಸಿರು ನಮ್ಮ ಉಸಿರು

IN THE HIGH COURT OF KARNATAKA AT BENGALURU
Notice to the Respondent No.2
Vide order dated: 19.01.2026
R.F.A.No.2024/2022

Sri. Chikkaiah Appellant
(By Sriyuths: P.D. Surana adv. for appellant) V/s
Sri. Chikkaraju & Another Respondents

To:
Respondent:
02. Smt. V. Jayamma W/O Channaveeregowda R/at Rammanahalli Village, Kasaba Hobli. Mysore Taluk. Mysore-570019.

Appeal From the Judgment & decree passed on 16.08.2022 in O.S Number 487/2014 on the file of the I Addl. Senior Civil Judge & CJM. Mysuru.

Notice is hereby given to you to appear in this court either in person or through Counsel duly instructed or through some one authorized by law, to act for you in the above appeal on 18.03.2026 in case you intend to contest the appeal. If you fail to appear, the same will be dealt with, heard and decided in your absence.

Issued under my hand and the seal of this court, this the 19TH DAY OF JANUARY 2026,

By Order of the court
Sd/- Assistant Registrar.

Jayachamaraja Wadiyar Golf Club

Maharana Prathap Singhji Road, Nazarbad, Mysore – 570 010
Phone: 0821-2538457/2413387, 8217789599

Date: 20-01-2026

SPECIAL GENERAL BODY MEETING – NOTICE

Special General Body Meeting is scheduled to be held on Sunday 22 Feb 2026 at 10.00 a.m. Notices have been dispatched to Hon. Members by post. Those members who have not received the notice are kindly requested to treat this publication as invitation and requested to attend without fail.

Sd/- President
Sd/- Hon. Secretary

